ಸಂಪುಟ: 04 ಸಂಚಿಕೆ: 62 ಪುಟಗಳು: 08 ಗುರುವಾರ 16 ಮೇ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

**ಮುಂಜಾನೆ ಮಾತು**

ಸ್ವಲ್ಪ ಸಾಧನೆಯನ್ನು ಮಾಡಿದ ಮೇಲೆ ಫಲ ದೊರೆಯುವ ಲಕ್ಷಣಗಳು ಕಾಣುತ್ತಿಲ್ಲವೆಂದು ಎದೆಗೆಡಬೇಡಿ. ಸಮಾಧಾನದಿಂದ ಸಾಧನೆಯನ್ನು ಸಕಾಲದಲ್ಲಿ ಫಲಗಳು ಖಚಿತವಾಗಿ ದೊರೆಯುತ್ತವೆ.


# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ


## ಕುಮಾರಸ್ವಾಮಿ ತಿಮಿಂಗಿಲ ಯಾರೆಂದು ಹೇಳಿದ್ರೆ, ಮುಗೀತು

• ಉದಯವಾಹಿನಿ, ಬೆಂಗಳೂರು

ಹಾಸನ ಪೆನ್ ಡ್ರೈವ್ ಪ್ರಕರಣದಲ್ಲಿ ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ತಿಮಿಂಗಿಲ ಯಾರೆಂದು ಹೇಳಿದ್ರೇ, ಪ್ರಕರವೇ ಮುಗಿಯುತ್ತದೆ ಎಂಬುದಾಗಿ ಗೃಹ ಸಚಿವ ಡಾ.ಜಿ ಪರಮೇಶ್ವರ್ ಹೇಳಿದ್ದಾರೆ. ನಗರದಲ್ಲಿ ರೇವಣ್ಣ ಪ್ರಕರಣ ರಾಜಕೀಯ ಪ್ರೇರಿತ, ಇದರ ಹಿಂದೆ ದೊಡ್ಡ ತಿಮಿಂಗಿಲ ಇದೆ ಅನ್ನೋ ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದಂತ ಅವರು, ಕುಮಾರಸ್ವಾಮಿ ಆ ತಿಮಿಂಗಿಲ ಯಾರು ಅಂತ ಹೇಳಿದ್ರೆ ಒಳ್ಳೇದು. ಅವರು ಪ್ರತಿ ದಿನ ಒಂದೊಂದು ಹೇಳಿಕೆ ಕೊಡೋದು ಬಿಟ್ಟು, ದಾಖಲೆ ಕೊಟ್ಟು ತನಿಖೆ ಮಾಡಲಿಲ್ಲ ಅಂತ ಹೇಳಲಿ ಎಂದರು.

## ಸಿಎಂ ಕುರ್ಚಿಗಾಗಿ ವ್ಯೂಹ ರಚಿಸುವ ಬಂಡೆಯೊಂದು ಸದ್ದು

• ಉದಯವಾಹಿನಿ, ಬೆಂಗಳೂರು

ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ ಈ ಹಿಂದೆ ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಕುರಿತು ಹಲವಾರು ನಾಯಕರು ಹೇಳಿಕೆಗಳನ್ನು ನೀಡಿದರು ಇದೀಗ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಟಾಂಗ್ ನೀಡಿದ್ದು,ಮುಖ್ಯಮಂತ್ರಿ ಅಧಿಕಾರ ಹಂಚಿಕೆಯ ಕಾಲ ಸನ್ನಿಹಿತವಾಗುವುದರೊಳಗೇ ಪರಿಸ್ಥಿತಿ ಯಾವ ರೀತಿ ಬಿಗಡಾಯಿಸುತ್ತದೆ ಎನ್ನುವುದನ್ನು ಕಾಂಗ್ರೆಸ್ ನಲ್ಲಿ ವ್ಯೂಹ ರಚಿಸುವ ಬಂಡೆಯೊಂದು ಈಗಾಗಲೇ ಸದ್ದು ಮಾಡುತ್ತಿದೆ ಎಂದಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ ಬಿ ವೈ ವಿಜಯೇಂದ್ರ ಅವರು ಮಾನ್ಯ ಸಿದ್ದರಾಮಯ್ಯ ಅವರೇ, ಭಾರತೀಯ ಜನತಾ ಪಾರ್ಟಿ ತತ್ವ, ಸಿದ್ಧಾಂತ ಆಧರಿಸಿದ ಶಿಸ್ತಿನ ಪಕ್ಷ. ಕಳೆಯಿಲ್ಲದೆ ಬೆಳೆದು ನಿಂತಿರುವ ಸಮೃದ್ಧ ತೋಟ, ನಿಮ್ಮ ಕಾಂಗ್ರೆಸ್ ನಲ್ಲಿರುವ ಪಾರ್ಥೇನಿಯಂ ಗಿಡಗಳು ನಮ್ಮಲ್ಲಿಲ್ಲ, ಅಧಿಕಾರಕ್ಕಾಗಿ ಹಪಾಹಪಿಸುವ ಕಳ್ಳಿ ಗಿಡಗಳಾವುವೂ ನಮ್ಮ ಪಕ್ಷದಲ್ಲಿ ತಲೆಯೆತ್ತಲು ಸಾಧ್ಯವಿಲ್ಲ. ತಲೆ ಎತ್ತಲು ಹೋದರೆ ಅದಕ್ಕೆ ಮದ್ದು ನೀಡುವಷ್ಟು ನಮ್ಮ ವರಿಷ್ಠ ಮಂಡಳಿಯು ಸಶಕ್ತವಾಗಿದೆ.

## ದಕ್ಷಿಣ ಶಿಕ್ಷಕರ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಟ್ಟ ಬಿಜೆಪಿ

• ಉದಯವಾಹಿನಿ, ಬೆಂಗಳೂರು

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡಿದ್ದ ಬಿಜೆಪಿ, ವಿಧಾನ ಪರಿಷತ್ ಚುನಾವಣೆಯಲ್ಲೂ ಮೈತ್ರಿ ಮುಂದುವರಿಸಿದ್ದು, ಆರು ಕ್ಷೇತ್ರಗಳ ಪೈಕಿ ನಾಲ್ಕರಲ್ಲಿ ಬಿಜೆಪಿ ಹಾಗೂ ಎರಡು ಕ್ಷೇತ್ರಗಳಲ್ಲಿ ಜೆಡಿಎಸ್ ಸ್ಪರ್ಧಿಸಲಿವೆ. ಈ ಮೊದಲು 5 ಕ್ಷೇತ್ರಗಳಿಗೆ ತನ್ನ ಅಭ್ಯರ್ಥಿಗಳನ್ನು ಘೋಷಿಸಿದ ಬಿಜೆಪಿ ಜೆಡಿಎಸ್‌ಗೆ ಒಂದು ಕ್ಷೇತ್ರ ಬಿಟ್ಟು ಕೊಟ್ಟಿತ್ತು. ಆದರೆ ಜೆಡಿಎಸ್ ಎರಡು ಕ್ಷೇತ್ರಗಳನ್ನು ಕೇಳಿದ್ದು ಇದಕ್ಕೆ ಹೈಕಮಾಂಡ್ ಕೂಡ ಒಪ್ಪಿಗೆ ಸೂಚಿಸಿದ್ದು, ಇದೀಗ ತನ್ನ ಅಭ್ಯರ್ಥಿ ನಿಂಗರಾಜು ಅವರ ಹೆಸರನ್ನು ಹಿಂಪಡೆದುಕೊಂಡಿದೆ. ದಕ್ಷಿಣ ಶಿಕ್ಷಕರ ಕ್ಷೇತ್ರದಲ್ಲಿ ಜೆಡಿಎಸ್ ನ ವಿವೇಕಾನಂದ ಸ್ಪರ್ಧಿಸಲಿದ್ದಾರೆ ಎಂದು ಹೇಳಲಾಗಿದ್ದು, ಇನ್ನು ಹಾಲಿ ವಿಧಾನ ಪರಿಷತ್ ಸದಸ್ಯ ಜೆಡಿಎಸ್ ನ ಭೋಜೇಗೌಡ ಮತ್ತೊಮ್ಮೆ ಕಣಕ್ಕಿಳಿಯಲಿದ್ದಾರೆ.

## ಚುನಾವಣೆ ಬಳಿಕ ಅಲ್ಲೋಲ ಕಲ್ಲೋಲ ಗ್ಯಾರಂಟಿ: ಬಿಜೆಪಿ!

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಲೋಕಸಭಾ ಚುನಾವಣೆ ಎರಡು ಹಂತಗಳಲ್ಲಿ ನಡೆದಿದ್ದು, ಚುನಾವಣೆ ಬಳಿಕ ಸಚಿವರುಗಳಾದ ಡಾ. ಜಿ ಪರಮೇಶ್ವರ್ ಹಾಗೂ ಸತೀಶ್ ಜಾರಕಿಹೊಳಿ ಗೌಪ್ಯ ಸಭೆ ನಡೆಸಿದ್ದಾರೆ. ಹೀಗಾಗಿ ಇತ್ತೀಚೆಗೆ ಮಹಾರಾಷ್ಟ್ರ ಸಿಎಂ ಏಕನಾಥ ಶಿಂದೆ, ಲೋಕಸಭಾ ಚುನಾವಣೆ ಬಳಿಕ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಪತನ ಗೊಳ್ಳಲಿದೆ ಎಂದು ಹೇಳಿರುವುದು ಮತ್ತೆ ಮುನ್ನಲೆಗೆ ಬಂದಿದೆ. ಹೀಗಾಗಿ ಈ ಕುರಿತಂತೆ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿರುವ ರಾಜ್ಯ ಬಿಜೆಪಿ, ಕಾಂಗ್ರೆಸ್ ಪಕ್ಷದ ಹಿರಿಯ ದಲಿತ ನಾಯಕರಾದ ಸಚಿವ ಡಾ. ಜಿ. ಪರಮೇಶ್ವರ್ ಹಾಗೂ ಸತೀಶ್ ಜಾರಕಿಹೋಳಿ ಗೌಪ್ಯ ಸಭೆ ನಡೆಸಿದ್ದಾರೆ. ಲೋಕಸಭೆ ಚುನಾವಣೆ ಫಲಿತಾಂಶದ ನಂತರ ಆಗಬಹುದಾದ ತಲೆದಂಡದ ಮುನ್ಸೂಚನೆ ಅರಿತೇ ಸಭೆ ನಡೆಸಿದ್ದಾರೆ. ಚುನಾವಣೆಯಲ್ಲಿನ ಹಿನ್ನಡೆಯನ್ನು ಸಿದ್ದರಾಮಯ್ಯ ಅವರ ತಲೆಗೆ ಕಟ್ಟಿ ಅವರನ್ನು ಮೂಲೆಗೆ ತಳ್ಳುವುದಕ್ಕೆ ಸಿದ್ಧತೆ ನಡೆದಿದೆಯಾ ಕಳೆದ ವರ್ಷದಿಂದ ಅನುದಾನ ನೀಡದಿರುವುದರಿಂದ ಕಾಂಗ್ರೆಸ್ ನಾಯಕತ್ವದ ವಿರುದ್ಧದ ಅಸಮಾಧಾನ ಹಾಗೂ ಕೆಟ್ಟ ಫಲಿತಾಂಶದ ಮುನ್ಸೂಚನೆಯಿಂದ ಒಂದುಗೂಡಿದ ಹಲವು ಶಾಸಕರ ಒಗ್ಗಟ್ಟಿನ ಧ್ವನಿಯ ಪ್ರತಿರೂಪವೇ ಪ್ರತ್ಯೇಕ ಸಭೆ. ಲೋಕಸಭೆ ಚುನಾವಣೆ ನಂತರ ಅಲ್ಲೋಲ ಕಲ್ಲೋಲ ಗ್ಯಾರಂಟಿ ಎಂದು ಹೇಳಿದೆ.

**ನೇಹಾ ನೆನಪಿಸಿದ ಮತ್ತೊಂದು ಮರ್ಡರ್**

ಕೂಡಿಕೊಂಡು ಕಳ್ಳತನ ಮಾಡಿದ ಗೆಳೆಯರಿಬ್ಬರು ಬೇರೆ ಬೇರೆ ಮನಸ್ಥಿತಿಯಲ್ಲಿ ಬೇರೆ ಬೇರೆ ಪ್ರದೇಶದಲ್ಲಿ ತಲಾ ಒಬ್ಬೊಬ್ಬರನ್ನ ಹತ್ಯೆ ಮಾಡಿರುವ ಬೀಭತ್ಸ ಪ್ರಕರಣಗಳೆರಡು ಛೋಟಾ ಮುಂಬೈ ಎಂದು ಕರೆಸಿಕೊಳ್ಳುವ ಹುಬ್ಬಳ್ಳಿಯಲ್ಲಿ ನಡೆದಿದೆ. ಪೊಲೀಸರು ಆರೋಪಿಗಳ ಮನಸ್ಥಿತಿಯ ಹಿಂದಿನ ಸತ್ಯವನ್ನ ಅರಿಯಬೇಕಾಗಿದೆ. ಅವಳಿನಗರದಲ್ಲಿ ಹೆಚ್ಚುತ್ತಿರುವ ನಸೆಯ ಪದಾರ್ಥಗಳ ಬಗ್ಗೆ ಕಠಿಣವಾದ ಕ್ರಮವನ್ನ ಜರುಗಿಸಬೇಕಾಗಿದೆ. ಆಗ ಮಾತ್ರ ಅಪರಾಧ ಪ್ರಕರಣಗಳು ಕಡಿಮೆಯಾಗಬಹುದು.

**ಪಾಗಲ್ ಪ್ರೇಮಿಯಿಂದ ಯುವತಿಯ ಹತ್ಯೆ**

# ಹುಬ್ಬಳ್ಳಿಯಲ್ಲಿ ಹತ್ಯಾಕಾಂಡ

## ಸರ್ಕಾರಕ್ಕೆ ಕರ್ಮಕಾಂಡ

• ಉದಯವಾಹಿನಿ, ಹುಬ್ಬಳ್ಳಿ

ಹುಬ್ಬಳ್ಳಿಯಲ್ಲಿ ಚಾಕುವಿನಿಂದ ಇರಿದು ಮತ್ತೊಬ್ಬ ಯುವತಿಯನ್ನು ಕೊಲೆ ಮಾಡಲಾಗಿದೆ. ಇದು ಕೂಡ ಪಾಗಲ್ ಭಗ್ನಪ್ರೇಮಿಯ ಕೃತ್ಯವಾಗಿದೆ. ನೇಹಾ ಹಿರೇಮಠ ಕೊಲೆ ಪ್ರಕರಣ ನೆನಪಿನಿಂದ ಮಾಸುವ ಮುನ್ನವೇ ಈ ಕೊಲೆಯೂ ಘಟಿಸಿದೆ. ಕೊಲೆಗೆ ಕೆಲ ದಿನಗಳ ಮುನ್ನ ಆರೋಪಿ, ಯುವತಿಗೆ ''ನೇಹಾ ಹಿರೇಮಠ ಥರ ಮಾಡ್ತೀನಿ'' ಎಂದು ಬೆದರಿಸಿದ್ದ ಎಂದು ಗೊತ್ತಾಗಿದೆ.

ಕೊಲೆ ಮಾಡಿದ ಆರೋಪಿ ಗಿರೀಶ್ ಸಾವಂತ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ. ಅಂಜಲಿ ಅಂಬಿಗೇರ (20) ಕೊಲೆಯಾಗಿರುವ ಯುವತಿ. ತನ್ನ ಪ್ರೀತಿಯನ್ನು ನಿರಾಕರಿಸಿದ್ದಕ್ಕೆ ಕ್ರುದ್ಧನಾದ ಗಿರೀಶ್ ಈ ಕೃತ್ಯ ಎಸಗಿದ್ದಾನೆ ಎಂದು ಗೊತ್ತಾಗಿದೆ. ಬೆಳಗಿನ ಜಾವ 5.30ಕ್ಕೆ ಅಂಜಲಿ ಅವರು ವೀರಾಪೂರ ಓಣಿಯಲ್ಲಿರುವ ತಮ್ಮ ಮನೆಯಲ್ಲಿ ಮಲಗಿದ್ದಾಗ ದುಷ್ಕರ್ಮಿ ಮನೆಗೇ ನುಗ್ಗಿ ಚಾಕುವಿನಿಂದ ಇರಿದಿದ್ದಾನೆ. ಮನೆಯವರು ಪ್ರತಿಭಟಿಸಿದರೂ ಅವರ ಎದುರೇ ಇರಿದಿದ್ದಾನೆ. ಈ ಸೈಕೋ ಪ್ರೇಮಿ, ಈ ಹಿಂದೆ ಮೈಸೂರಿಗೆ ಬಾ ಎಂದು ಅಂಜಲಿಗೆ ಧಮಕಿ ಹಾಕಿದ್ದ. ''ನನ್ನ ಜೊತೆ ಬರದೆ ಹೋದರೆ ನಿರಂಜನ ಹಿರೇಮಠ ಮಗಳಿಗೆ ಹೇಗೆ ಆಗಿದೆ ಹಾಗೆ ಮಾಡ್ತೀನಿ'' ಎಂದು ಧಮಕಿ ಹಾಕಿದ್ದ. ಗಿರೀಶ ಬೆದರಿಕೆ ಹಾಕಿರುವುದನ್ನು ಅಂಜಲಿಯ ಅಜ್ಜಿ ಗಂಗಮ್ಮ ಅವರು ಪೊಲೀಸರ ಗಮನಕ್ಕೂ ತಂದಿದ್ದರು. ಆದರೆ ಪೊಲೀಸರು ಕ್ರಮ ಕೈಗೊಂಡಿರಲಿಲ್ಲ. ಕೊಲೆಪಾತಕಿ ಗಿರೀಶ ಈ ಹಿಂದೆ ಹಲವು ಕಳ್ಳತನ ಪ್ರಕರಣಗಳಲ್ಲಿಯೂ ಭಾಗಿಯಾಗಿದ್ದಾನೆ ಎಂದು ತಿಳಿದುಬಂದಿದೆ. ಬೆಂಡಿಗೇರಿ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ.

ಹುಬ್ಬಳ್ಳಿಯ ಯುವತಿ ನೇಹಾ ಹಿರೇಮಠ ಅವರನ್ನು ಪಾಗಲ್ ಪ್ರೇಮಿ ಫಯಾಜ್ ಕಾಲೇಜ್ ಕ್ಯಾಂಪಸ್‌ನಲ್ಲಿಯೇ ಕಳೆದ ತಿಂಗಳು ಕೊಚ್ಚಿ ಕೊಲೆ ಮಾಡಿದ್ದ. ಇದು ಲವ್ ಜಿಹಾದ್ ಪ್ರಕರಣ ಎಂದು ರಾಜಾದ್ಯಂತ ತೀವ್ರ ಪ್ರತಿಭಟನೆ, ರಾಜಕೀಯ ಕೆಸರೆರಚಾಟಗಳಿಗೆ ಕಾರಣವಾಗಿತ್ತು. ಕೊಲೆ ಮಾಡಿದ ಯುವಕ ಆಕೆಯನ್ನು ನೇಹಾ ಕೊಲೆಯಾದ ಮಾದರಿಯಲ್ಲಿಯೇ ಸಾಯಿಸುವೆ ಎಂದು ಎಚ್ಚರಿಸಿದ್ದ ಎಂಬ ಅಂಶ ಬೆಳಕಿಗೆ ಬಂದಿದೆ. ಹುಬ್ಬಳ್ಳಿ ನಗರದ ವೀರಾಪುರ ಓಣಿ ಗುಡಿಓಣಿ ನಿವಾಸಿ ಅಂಜಲಿ ಅಂಬಿಗೇರ (20) ಎಂಬಾಕೆಯೇ ಸಾವನ್ನಪ್ಪಿದ ಯುವತಿ. ಈಕೆಗೆ ಅದೇ ಓರಿಯಾದ ವಿಶ್ವ ಅಲಿಯಾಸ್ ಗಿರೀಶ್ ಸಾವಂತ (21) ಎಂಬ ಪಾಗಲ್ ಪ್ರೇಮಿ ಚಾಕುವಿನಿಂದ ಚುಚ್ಚಿ ಕೊಲೆಮಾಡಿದ್ದಾನೆ ಎಂದು ತಿಳಿದುಬಂದಿದೆ.

**1** ನೇಹಾ ಹಿರೇಮಠ ಹತ್ಯೆ ಮಾಸುವ ಮುನ್ನವೇ ಹುಬ್ಬಳ್ಳಿಯಲ್ಲಿ ಪ್ರೀತಿ ನಿರಾಕರಿಸಿದಕ್ಕೆ ಯುವತಿಯೊಬ್ಬಳ ಕೊಲೆ.


**2** ನೇಹಾ ಕೊಲೆಯಾದ ಮಾದರಿಯಲ್ಲಿಯೇ ಸಾಯಿಸುವೆ ಎಂದು ಎಚ್ಚರಿಸಿದ್ದ ಯುವಕ.

**3** ಯುವತಿ ನಿವಾಸಕ್ಕೆ ತೆರಳಿ ಏಕಾಏಕಿ ಹೊಟ್ಟೆಗೆ ಚಾಕು ಇರಿದಿದ್ದಾನೆ; ಸದ್ಯ ಆರೋಪಿ ತಲೆಮರೆಸಿಕೊಂಡಿದ್ದಾನೆ.



**ಮೈಸೂರು ಪ್ರವಾಸಕ್ಕೆ ಕರೆದಿದ್ದ**

ಕೊಲೆ ಮಾಡಿದ ಯುವಕ ಮೃತ ಯುವತಿಯನ್ನು ಮೈಸೂರು ಪ್ರವಾಸಕ್ಕೆ ಬಾ ಎಂದು ಕಾಡುತ್ತಿದ್ದನು. ಒಂದು ವೇಳೆ ನೀನು ನನ್ನ ಜೊತೆ ಬರದೆ ಹೋದರೆ ನಿರಂಜನ ಹಿರೇಮಠ ಮಗಳು ನೇಹಾಗೆ ಆದ ಹಾಗೆಯೇ ನಿನಗೂ ಮಾಡುತ್ತೇನೆ ಎಂದು ಧಮ್ಕಿ ಹಾಕಿದ್ದನು ಎಂದುಕಳ್ಳತನ ಕೇಸ್‌ಗಳಲ್ಲಿ ಆರೋಪಿ: ಕೃತ್ಯವೆಸಗಿದ ಗಿರೀಶ್ ಸಾವಂತ ವಿರುದ್ಧ ಹಲವು ಕಳ್ಳತನ ಪ್ರಕರಣಗಳಲ್ಲಿ ಶಾಮೀಲಾದ, ಜತೆಗೆ ಬೈಕ್ ಕಳ್ಳತನದಲ್ಲಿಯೂ ಆರೋಪಿ ಎಂದು ತಿಳಿದುಬಂದಿದೆ.



"ಯುವತಿ ಪ್ರೀತಿ ನಿರಾಕರಿಸಿದಳು ಎಂಬ ಕಾರಣಕ್ಕೆ ಯುವಕನೊಬ್ಬ ಆಕೆಯನ್ನು ಚಾಕುವಿನಿಂದ ಇರಿದು ಕೊಲೆಗೈದಿದ್ದಾನೆ. ಸರ್ಕಾರದ ಸಡಿಲ ನಿಲುವುಗಳೇ ಇದಕ್ಕೆಲ್ಲ ಕಾರಣ. ನೇಹಾ ಪ್ರಕರಣದಲ್ಲಿ ಸರ್ಕಾರ ತೋರಿದ ನಿರ್ಲಕ್ಷ್ಯ, ಹುಬ್ಬಳ್ಳಿಯಲ್ಲಿ ಪದೇಪದೆ ಇಂತಹ ಪ್ರಕರಣ ಘಟಿಸುತ್ತಿದ್ದು, ರಾಜ್ಯ ಸರ್ಕಾರ ಕೂಡಲೆ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು

-ಪ್ರಹ್ಲಾದ ಜೋಶಿ ಸಚಿವ





"ನನ್ನ ಮಗಳ ಹತ್ಯೆಯಾಗಿ ಕೇವಲ 15 ದಿನಗಳ ನಂತರ ಅದೇ ಮಾದರಿಯಲ್ಲಿ ಮತ್ತೊಬ್ಬ ಯುವತಿಯ ಕೊಲೆ ನಡೆದರೆ ಅದು ಪೊಲೀಸ್ ವೈಫಲ್ಯವಲ್ಲದೆ ಮತ್ತೇನು? ಗೃಹ ಇಲಾಖೆ ಸಂಪೂರ್ಣವಾಗಿ ನಿಷ್ಕ್ರಿಯಗೊಂಡಿದೆ. ನನ್ನ ಮಗಳ ಬರ್ಬರವಾಗಿ ಕೊಲೆಯಾದಾಗ ಗೃಹ ಸಚಿವರು ಸೌಜನ್ಯಾಕ್ಕಾದರೂ ನಂಗೊಂದು ಫೋನ್ ಮಾಡಲಿಲ್ಲ. ನಗರದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ, ಡ್ರಗ್ಸ್ ಧಂದೆ ಎಗ್ಗಿಲ್ಲದೆ ನಡೆಯುತ್ತಿರುವಂತೆಯೇ ಬೇರೆಲ್ಲ ಕಳ್ಳ ವ್ಯವಹಾರಗಳನ್ನು ತಡೆಯುವವರು ಯಾರೂ ಇಲ್ಲ. ನೇಹಾ ಕೊಲೆ ನಡೆದಾಗಲೇ ಹುಬ್ಬಳ್ಳಿ-ಧಾರವಾಡ ಪೊಲೀಸ್ ಕಮೀಶನರ್‌ರನ್ನು ಟ್ರಾನ್ಸ್ ಫರ್ ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದರೂ ಪ್ರಯೋಜನವಾಗಲಿಲ್ಲ ನೇಹಾ ಹಂತಕನ್ನು ಎನ್ ಕೌಂಟರ್ ನಲ್ಲಿ ಗತಿ ಕಾಣಿಸಿದ್ದರೆ ಅಂಜಲಿಯ ಕೊಲೆ ನಡೆಯುತ್ತಿರಲಿಲ್ಲ.

-ನಿರಂಜನ್ ಹಿರೇಮಠ ನೇಹಾ ತಂದೆ

**ಯುವತಿ ಮನೆಗೆ ನುಗ್ಗಿ ಹೊಟ್ಟೆಗೆ ಚಾಕು**

ವಿಶ್ವ ಎಂಬಾತ ಕಳೆದ ಹಲವಾರು ದಿನಗಳಿಂದ ಅಂಜಲಿಗೆ ಪ್ರೀತಿಸು ಎಂದು ಪೀಡಿಸುತ್ತಿದ್ದನಂತೆ, ಅಂಜಲಿ ಪ್ರೀತಿ ನಿರಾಕರಿಸಿದಕ್ಕೆ ಬುಧವಾರ ಬೆಳಂಬೆಳಗ್ಗೆ ಗುಡಿಓಣಿಯಲ್ಲಿನ ಅಂಜಲಿ ನಿವಾಸಕ್ಕೆ ತೆರಳಿ ಮನೆಯ ಬಾಗಿಲು ಬಡಿದು ಏಕಾಏಕಿ ಅಂಜಲಿ ಹೊಟ್ಟೆಗೆ ಚಾಕು ಇರಿದಿದ್ದಾನೆ. ಸಮಾಧಾನವಾಗದೇ ಮನೆ ತುಂಬೆಲ್ಲಾ ಎಳೆದಾಡಿ ಚಾಕುವಿನಿಂದ ಚುಚ್ಚಿದ್ದಾನೆ. ಬಳಿಕ ಪರಾರಿಯಾಗಿದ್ದಾನೆ.

**ಏನಿದು ಘಟನೆ**

ಹುಬ್ಬಳ್ಳಿಯಲ್ಲಿ ನೇಹಾ ಹಿರೇಮಠ ಕೊಲೆ ಪ್ರಕರಣ ಮಾಸುವ ಮುನ್ನವೇ ಮತ್ತೊಂದು ಘಟನೆ ನಡೆದಿದೆ. ಬುಧವಾರ ನಸುಕಿನ ಜಾವ ನಿದ್ದೆಯಲ್ಲಿದ್ದ ಯುವತಿಯನ್ನು ವ್ಯಕ್ತಿಯೊಬ್ಬ ಚೂರಿಯಿಂದ ಇರಿದು ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಈ ಘಟನೆ ಹುಬ್ಬಳ್ಳಿಯ ಬೆಂಡಿಗೇರಿ ಪೊಲೀಸ್ ಠಾಣೆ ವ್ಯಾಪ್ತಿಯ ವೀರಾಪುರ ಓಣಿಯಲ್ಲಿ ನಡೆದಿದೆ. ಮೃತ ಯುವತಿಯನ್ನು ಅಂಜಲಿ ಅಂಬಿಗೇರ ಎಂದು ಗುರುತಿಸಲಾಗಿದ್ದು, ವಿಶ್ವ ಯಾನೆ ಗಿರೀಶ್ ಎಂಬಾತ ಯುವತಿಯನ್ನು ಹತ್ಯೆ ಮಾಡಿದ್ದಾರೆ. ಸದ್ಯ ಆರೋಪಿ ತಲೆಮರೆಸಿಕೊಂಡಿದ್ದಾನೆ. ಆರೋಪಿ ಗಿರೀಶ್ ಅಂಜಲಿಯನ್ನು ಪ್ರೀತಿಸುತ್ತಿದ್ದ. ಆದರೆ ಆಕೆ ಗಿರೀಶ್ ಪ್ರೀತಿಯನ್ನು ನಿರಾಕರಿಸಿದ್ದಳು. ಇದರಿಂದ ಕ್ರೋಧಗೊಂಡ ಆತ ನೇಹಾ ಪಾಟೀಲ್ ಮಾದರಿಯಲ್ಲಿ ನಿನ್ನನ್ನೂ ಹತ್ಯೆ ಮಾಡುತ್ತೇನೆ ಎಂದು ಬೆದರಿಕೆ ಹಾಕಿದ್ದ. ಅದರಂತೆ ಬುಧವಾರ ಬೆಳಗ್ಗೆ 5.30ಕ್ಕೆ ಮನೆಗೆ ನುಗ್ಗಿ ಚಾಕುವಿನಿಂದ ಇರಿದಿದ್ದಾನೆ.

## ಸಿಎಂಗೆ 24 ಪುಟಗಳ ಸುದೀರ್ಘ ಪತ್ರ ಬರೆದ ಸಾಹಿತಿಗಳು!

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಪ್ರಕರಣ ಸೇರಿ ಹಲವು ವಿಚಾರಗಳನ್ನು ಪ್ರಸ್ತಾಪಿಸಿ ಸಾಹಿತಿಗಳು ಸಿಎಂ ಸಿದ್ದರಾಮಯ್ಯ ಅವರಿಗೆ ಬಹಿ ರಂಗ ಪತ್ರ ಬರೆದಿದ್ದಾರೆ. 24 ಪುಟಗಳ ಪತ್ರ ಇದಾಗಿದ್ದು, ಪ್ರಜ್ಞಾವಂತ ನಾಗರಿಕರ ಪತ್ರ ಎಂಬ ಒಕ್ಕಣೆಯೊಂದಿಗೆ ಪತ್ರ ಬರೆದಿರುವ ಹಿರಿಯ ಲೇಖಕರಾದ ಡಾ.ವಿಜಯಾ, ಸಾಹಿತಿಗಳಾದ ಡಾ. ಜಿ. ರಾಮಕೃಷ್ಣ, ವಸುಂಧರಾ ಭೂಪತಿ, ಮೀನಾಕ್ಷಿ ಬಾಳಿ, ಕೆ, ನೀಲಾ, ಕೆ.ಎಸ್ ವಿಮಲಾ, ಕುಂ ವೀರಭದ್ರಪ್ಪ, ಮುಜಫರ್ ಅಸ್ಸಾದಿ ಸೇರಿದಂತೆ ಒಟ್ಟು 107 ಸಾಹಿತಿಗಳು ಅಸಮಾಧಾನ ವ್ಯಕ್ತಪಡಿಸಿದ್ದು, ಕೆಲವು ಬೇಡಿಕೆಗಳನ್ನೂ ಸರ್ಕಾರದ ಮುಂದಿಟ್ಟಿದ್ದಾರೆ. ಸಂತ್ರಸ್ತರ ಫೋಟೊ, ವಿಡಿಯೊ ದಾಖಲಿಸಿ ಇಟ್ಟುಕೊಂಡಿರುವುದು, ಬ್ಲ್ಯಾಕ್ ಮೇಲೆ ಮಾಡುವುದು ಈ ವಿಚಾರ ಗಮನಿಸಿದರೆ ಇದು ಹಲವು ವರ್ಷಗಳಿಂದ ನಡೆದುಕೊಂಡು ಬಂದಿದೆ ಎಂದು ತಿಳಿಯುತ್ತದೆ. ರಾಜಕೀಯ ನಾಯಕರು ತಮ್ಮ ಹಿತಾಸಕ್ತಿಗೆ, ಚುನಾವಣೆ ಲಾಭಕ್ಕಾಗಿ ಬಳಸುತ್ತಿರುವುದು ಆಘಾತಕಾರಿಯಾಗಿದೆ. ಪ್ರಜಲ್ ರೇವಣ್ಣ ಅವರ ತಾತ, ತಂದೆ, ತಾಯಿ, ಚಿಕ್ಕಪ್ಪ, ಚಿಕ್ಕಮ್ಮ, ಅಣ್ಣ, ತಮ್ಮ ಎಲ್ಲಾರೂ ಪ್ರಜಾಪ್ರಭುತ್ವದ ಎಲ್ಲಾ ಹುದ್ದೆಗಳನ್ನು, ಸವಲತ್ತುಗಳನ್ನು ಪಡೆದುಕೊಂಡಿದ್ದಾರೆ. ಪ್ರಜ್ವಲ್ ರೇವಣ್ಣ ಮತ್ತು ಅವರ ಕುಟುಂಬವು ಪ್ರಜಾಪ್ರಭುತ್ವದ ಮುಸುಕಿನೊಳಗೆ ಪ್ರಜಾಪ್ರತಿನಿಧಿಗಳೆಂಬ ಧಿರಿಸು ಧರಿಸಿಕೊಂಡಿದ್ದಾರೆ. ಪ್ರಕರಣ ಹೊರ ಬಂದ ತಕ್ಷಣ ಚುನಾವಣಾ ಸ್ಪರ್ಧೆಗೆ ಅವಕಾಶ ನೀಡಬಾರದಾಗಿತ್ತು. ಹಗರಣ ಬಯಲಾಗಿ ಐದು ದಿನಗಳು ಆರೋಪಿಯನ್ನು ಸ್ವತಂತ್ರವಾಗಿ ಬಿಡಲಾಗಿದೆ. ಆತನ ಮೇಲೆ ಕಣ್ಗಾವಲನ್ನು ಹಾಕಿಲ್ಲ. ಸರ್ಕಾರದ ಮೇಲೆ ವಿಶ್ವಾಸವಿಟ್ಟು ಮಹಿಳೆಯರು ಸುರಕ್ಷಿತವಾಗಿರಲು ಸಾಧ್ಯವೇ ಎಂಬ ಪ್ರಶ್ನೆ ಮೂಡಿದೆ ಇಂತಹ ಪ್ರಕರಣ ಯುವ ಜನರು, ಕಾಮುಕರು, ಮಕ್ಕಳ ಮೇಲೆ ಪ್ರಭಾವ ಬೀರಬಹುದು ಎಂದು ಆತಂಕ ವ್ಯಕ್ತಪಡಿಸಿದ್ದಾರೆ.



**ಪ್ರಜ್ವಲ್ ರೇವಣ್ಣ ಎಲ್ಲಿದ್ದಾನೆ ಎಂದು ಎಸ್‌ಐಟಿಗೆ ಗೊತ್ತಿದೆ**

ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿದೇಶದಲ್ಲಿ ತಲೆ ಮರೆಸಿಕೊಂಡಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಎಲ್ಲಿ ಇದ್ದಾನೆ ಎಂದು ಎಸ್‌ಐಟಿಗೆ ಗೊತ್ತಿದೆ ಎಂದು ಬೆಂಗಳೂರಿನಲ್ಲಿ ಗೃಹ ಇಲಾಖೆಯ ಸಚಿವ ಡಾ. ಜಿ ಪರಮೇಶ್ವರ್ ತಿಳಿಸಿದರು. ಪ್ರಜ್ವಲ್ ಎಲ್ಲಿದ್ದಾನೆ ಎಂಬುದು ಎಸ್‌ಐಟಿಗೆ ಗೊತ್ತಿದೆ ಎಂದು ಬೆಂಗಳೂರಿನಲ್ಲಿ ಗೃಹ ಇಲಾಖೆ ಸಚಿವ ಜಿ ಪರಮೇಶ್ವರ್ ತಿಳಿಸಿದರು.ಎಸ್‌ಐಟಿ ತನಿಖೆಯ ವೇಳೆ ನಾವು ಯಾವುದನ್ನು ಹೇಳಲು ಆಗುವುದಿಲ್ಲ ಎಂದು ಅವರು ತಿಳಿಸಿದರು.

## ಚುನಾವಣೆ ಮುಗಿದ 1 ತಿಂಗಳ ಬಳಿಕ ಮಹಾರಾಷ್ಟ್ರ ಸರ್ಕಾರ ಬೀಳಲಿದೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಲೋಕಸಭೆ ಚುನಾವಣೆಯ ಬಳಿ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂದು ಮಹಾರಾಷ್ಟ್ರದ ಸಿಎಂ ಏಕನಾಥ ಶಿಂಧೆ ಮಹಾರಾಷ್ಟ್ರದ ಸತಾರಾ ಜಿಲ್ಲೆಯಲ್ಲಿ ನಡೆದ ಕಾರ್ಯಕ್ರಮ ಒಂದರಲ್ಲಿ ತಿಳಿಸಿದ್ದರು. ಇವರ ಹೇಳಿಕೆಗೆ ಸಚಿವ ಎಮ್ ಬಿ ಪಾಟೀಲ್ ತೆಲುಗು ನೀಡಿದ್ದು ಚುನಾವಣೆಯ ಬಳಿಕ ಒಂದೇ ತಿಂಗಳಲ್ಲಿ ಮಹಾರಾಷ್ಟ್ರ ಸರ್ಕಾರ ಬೀಳಲಿದೆ ಎಂದು ಭವಿಷ್ಯ ನುಡಿದಿದ್ದಾರೆ. ಮಹಾರಾಷ್ಟ್ರದಲ್ಲಿ ಏಕನಾಥ ಶಿಂಧೆ ಮಾಜಿ ಆಗುತ್ತಾರೆ ಎಂದು ಬೆಂಗಳೂರಿನಲ್ಲಿ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಹೇಳಿಕೆ ನೀಡಿದರು. ಮಹಾರಾಷ್ಟ್ರದಲ್ಲಿ 30 ರಿಂದ 40 ಶಾಸಕರು ನಮ್ಮ ಕಡೆ ಬರುತ್ತಾರೆ ಎಂದು ಸ್ಫೋಟಕವಾದ ಮಾಹಿತಿ ತಿಳಿಸಿದರು.

ಎಲ್ಲಾರೂ ಮಾಜಿ ಸಿಎಂ ಉದ್ಧವ್ ಠಾಕ್ರೆ ಬಳಿ ಹೋಗುತ್ತಾರೆ. ಕಡೆಯು ಹೋಗುತ್ತಾರೆ.ಚುನಾವಣೆ ಮುಗಿದ ತಿಂಗಳ ಬಳಿಕ ಸರ್ಕಾರ ಬೀಳಲಿದೆ. ಅಜಿತ್ ಪವಾರ್ ಶಾಸಕರನ್ನ ಕೆಟ್ಟದಾಗಿ ನಡೆಸಿಕೊಂಡಿದ್ದಾರೆ.ವಾಪಸ್ ಶಿವಸೇನೆ ನಾಯಕರು ಉದ್ಧವ್ ಠಾಕ್ರೆ ಬಳಿ ಹೋಗುತ್ತಾರೆ ಎಂದು ಬೆಂಗಳೂರಿನಲ್ಲಿ ಕೈಗಾರಿಕಾ ಸಚಿವ ಎಂಬಿ ಪಾಟೀಲ್ ತಿಳಿಸಿದರು.



# ಪೆನ್‌ಡ್ರೈವ್ ಹಂಚಿದವರೇ ಕಾಂಗ್ರೆಸ್‌ವರು ಎರಡು ಮಾತಿಲ್ಲ: ಆರ್.ಅಶೋಕ್ ಆರೋಪ

● ಇದೆಲ್ಲ ಪ್ಲಾನ್ ಮಾಡಿ ಕಾಂಗ್ರೆಸ್ ಈ ರೀತಿ ಮಾಡುತ್ತಿದೆ ● ಈಗ ತಮ್ಮ ಮೇಲಿನ ಆಪಾದನೆ ಬಿಜೆಪಿಗೆ ಕಡೆ ತಿರುಗಿಸುತ್ತಿದ್ದಾರೆ


• ಉದಯವಾಹಿನಿ, ಬೆಂಗಳೂರು

ಹಾಸನದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಪಕ್ಷ ನಾಯಕ ಆರ್ ಅಶೋಕ್ ಈ ಕುರಿತಂತೆ ಮಾತನಾಡಿದ್ದು ಈ ಒಂದು ಪ್ರಕರಣದಲ್ಲಿ ಪೆನ್ ಡ್ರೈವ್ ಹಂಚಿದವರೇ ಕಾಂಗ್ರೆಸ್ನವರು ಎರಡು ಮಾತಿಲ್ಲ ಎಂದು ಗಂಭೀರವಾಗಿ ಆರೋಪಿಸಿದರು. ಪೆನ್ ಡ್ರೈವ್ ಹಂಚಿದವರೇ ಕಾಂಗ್ರೆಸ್ನವರು ಎರಡು ಮಾತಿಲ್ಲ.ಇದೆಲ್ಲ ಪ್ಲಾನ್ ಮಾಡಿ ಕಾಂಗ್ರೆಸ್ ಈ ರೀತಿ ಮಾಡುತ್ತಿದೆ. ಈಗ ತಮ್ಮ ಮೇಲಿನ ಆಪಾದನೆ ಬಿಜೆಪಿಗೆ ಕಡೆ ತಿರುಗಿಸುತ್ತಿದ್ದಾರೆ ಎಂದು ಬೆಂಗಳೂರಿನಲ್ಲಿ ವಿಪಕ್ಷ ನಾಯಕ ಆಶೋಕ್ ವಾಗ್ದಾಳಿ ನಡೆಸಿದರು.

ಎಸ್‌ಐಟಿ ಮೂಲಕ ನಮ್ಮ ಕಡೆ ತನಿಖೆಯನ್ನು ತಿರುಗಿಸಿದ್ದಾರೆ. ಎಸ್ ಐ ಟಿ ಅಧಿಕಾರಿಗಳು ಪಕ್ಷಪಾತ ಧೋರಣೆ ತೋರಿಸುತ್ತಿದ್ದಾರೆ. ನಿಷ್ಪಕ್ಷಪಾತವಾಗಿ ತನಿಖೆ ಆಗಬೇಕಾದರೆ ಸಿಬಿಐಗೆ ಪ್ರಕರಣವನ್ನು ವಹಿಸಲಿ ಪ್ರಜ್ವಲ್ ಪ್ರಕರಣದ ತನಿಖೆ ಸಿಬಿಐ ಗೆ ವಹಿಸಲಿ. ಪ್ರಜ್ವಲ್ ಇದುವರೆಗೂ ವಾಪಾಸ್ಸಾಗಿಲ್ಲ. ಎಸ್‌ಐಟಿಯವರು ಬಂಧಿಸಿ ಕರೆತಂದಿಲ್ಲ.ಹಾಸನ ಕಾಂಗ್ರೆಸ್ ಕಾರ್ಯಕರ್ತರ ಬಳಿ ಪೆನ್ ಡ್ರೈವ್ ಇದೆ. ಕಾಂಗ್ರೆಸ್ ಕಾರ್ಯಕರ್ತರ ಮೊಬೈಲ್ ಚೆಕ್ ಮಾಡಿದ್ದಾರ ಯಾಕೆ ಕಾಂಗ್ರೆಸ್ ಕಾರ್ಯಕರ್ತರ ವಿಚಾರಣೆ ನಡೆಸಿಲ್ಲ ಹಾಸನದಲ್ಲಿ ಎಸ್‌ಐಟಿ ದಾಳಿ ಮಾಡಿದ ಉದ್ದೇಶ ಡೈವರ್ಟ್ ಮಾಡುವುದು ಪ್ರಕರಣವನ್ನು ಬೇರೆ ಕಡೆ ಡೈವರ್ಟ್ ಮಾಡುವ ಪ್ರಯತ್ನ ನಡೆದಿದೆ ಎಂದು ಕಿಡಿ ಕಾರಿದರು.

**ತಿಮಿಂಗಲ ಮೇಲೆ ಬರಲೇಬೇಕಲ್ವಾ?**

ಎಚ್ ಡಿ ದೇವೇಗೌಡರ ಕುಟುಂಬಕ್ಕೆ ಹೀಗೆ ಆಗಬಾರದಿತ್ತು ಎಂದು ಡಿಕೆ ಶಿವಕುಮಾರ್ ಹೇಳಿಕೆಗೆ ಇದೀಗ ಆರ್ ಅಶೋಕ ಟಾಂಗ್ ನೀಡಿದ್ದು ಪ್ರಾಮಾಣಿಕತೆಯಿಂದ ಹೇಳಿಲ್ಲ ಕಿಂಡಲ್ ಮಾಡಲು ಹೇಳಿದ್ದಾರೆ.. ರೇವಣ್ಣ ಜೈಲಿಗೆ ಹೋದಾಗ ಹೆಚ್ಚು ಖುಷಿ ಪಟ್ಟಿದ್ದು ಕಾಂಗ್ರೆಸ್ಸಿಗರೇ. ತಿಮಿಂಗಲ ಸಮುದ್ರದಲ್ಲಿ ಇದ್ದರೂ ಮೇಲೆ ಬರಲೇಬೇಕಲ್ವಾ? ಆಮ್ಲಜನಕಕ್ಕಾಗಿ ಒಂದು ಸಲವಾದರೂ ಮೇಲೆ ಬರಲೇಬೇಕು ಆಗ ತಿಮಿಂಗಲ ಕಾಂಗ್ರೆಸ್ ಅಥವಾ ಜೆಡಿಎಸ್ ಅಂತ ಗೊತ್ತಾಗುತ್ತದೆ ಎಂದು ತಿಳಿಸಿದರು.



**ಕಾಂಗ್ರೆಸ್ ಗಂಟುಮೂಟೆ ಕಟ್ಟೋದೊಂದೇ ಬಾಕಿ**

ಈಗಾಗಲೇ ದೇಶದಲ್ಲಿ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಮತದಾನ ಪ್ರಕ್ರಿಯೆ ಬಹುತೇಕ ಮುಗಿದಿದೆ ನಾಲ್ಕರಂದು ಫಲಿತಾಂಶ ಹೊರಬೀಳಲಿದೆ. ನರೇಂದ್ರ ಮೋದಿ ಅವರು ಮತ್ತೆ ಪ್ರಧಾನಿ ಆದರೆ ಕಾಂಗ್ರೆಸ್ ಗಂಟು ಮೂಟೆ ಕಟ್ಟುವುದು ಒಂದೇ ಬಾಕಿ ಎಂದು ಬೆಂಗಳೂರಿನಲ್ಲಿ ವಿಪಕ್ಷ ನಾಯಕ ತಿಳಿಸಿದರು. ಸರ್ಕಾರ ಬೀಳಿಸಲು ಕಾಂಗ್ರೆಸ್ ನವರೇ ಸಾಕು. ಬೇರೆಯವರು ಬೇಡ 17 ಜನ ಹೋದಾಗ ಇವರ್ಯಾಕೆ ಮುಟ್ಟಿ ನೋಡಿಕೊಳ್ಳಲಿಲ್ಲ? ಕೈ ಶಾಸಕರೇ ಯಾಕಾದರೂ ಗೆಲ್ಲಿಸಿದ್ದೀವಿ ಅಂತ ಬೇಸರದಲ್ಲಿದ್ದಾರೆ.ಮುಖ್ಯಮಂತ್ರಿ ಸಿದ್ದರಾಮಯ್ಯ ಹಗಲುಗನಸು ಕಾಣುತ್ತಿದ್ದಾರೆ. ಮೋದಿ ಮತ್ತೆ ಪ್ರಧಾನಿ ಆದಮೇಲೆ ಕಾಂಗ್ರೆಸ್ ಗಂಟು ಮೂಟೆ ಕಟ್ಟೋದು ಒಂದೇ ಬಾಕಿ ಎಂದು ವಿಪಕ್ಷ ನಾಯಕ ಆರ್ ಅಶೋಕ್ ವಾಗ್ದಾಳಿ ನಡೆಸಿದರು. ಕಾಂಗ್ರೆಸ್ಸಿಗರಿಗೆ ಇರಿ ಮುರಿಸು ಆಗಿ ಹೀಗೆ ಮಾಡಿದ್ದಾರೆ. ಒಕ್ಕಲಿಗ ಸಮುದಾಯ ತಿರುಗಿ ಬೀಳುತ್ತೆ ಎಂದು ಅವರಿಗೆ ಭಯ ಶುರುವಾಗಿದೆ ಚಾಲಕನಿಗೆ ಜಾಮೀನು ನಿರಾಕರಿಸಿದರು ಏಕೆ ಬಂಧಿಸಿಲ್ಲ ಅವರಿಗೆ ಯಾರ್‍ಯಾರು ಬೇಕು, ಯಾರ್‍ಯಾರ ಮೇಲೆ ಆರೋಪ ಹರಿಸಬೇಕು ಯಾರನ್ನ ವರ್ಗಾವಣೆ ಮಾಡಬೇಕು ಅದಕ್ಕೆ ಎಸ್‌ಐಟಿಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ರಾಜ್ಯ ರಾಜಕಾರಣದಲ್ಲಿ ಆರೋಪ ಮತ್ತು ಪ್ರತ್ಯಾರೋಪ ಜೋರಾಗಿ ನಡೆಯುತ್ತಿದ್ದು, ಪ್ರಕರಣದ ಹಿಂದೆ ದೊಡ್ಡ ತಿಮಿಂಗಲ ಇದೆ ಕುಮಾರಸ್ವಾಮಿ ತಿಳಿಸಿದರು. ಅದಕ್ಕೆ ಡಿಕೆ ಶಿವಕುಮಾರ್ ಹಿಡಿದು ಬಡೆದುಕೊಂಡು ತಿನ್ನಲಿ ಎಂದು ಉತ್ತರಿಸಿದರು .ಇದಕ್ಕೆ ಎಂದು ಪಕ್ಷ ನಾಯಕ ಆರ್ ಅ ಶೋಕ್ ಪ್ರತಿಕ್ರಿಯೆ ನೀಡಿದ್ದು , ತಿಮಿಂಗಲ ಇದೆ ಅಂತ ಎಚ್ ಡಿ ಕುಮಾರಸ್ವಾಮಿ ಹೇಳಿದ್ದಾರೆ. ತಿಮಿಂಗಲ ಬಡಿದು ತಿಂದುಕೊಳ್ಳಿ ಅಂತ ಡಿಕೆ ಶಿವಕುಮಾರ್ ಹೇಳಿದ್ದಾರೆ. ಬಡಿದು ತಿನ್ನೋದನ್ನು ಹೆಚ್ ಡಿ ದೇವೇಗೌಡ ಕುಟುಂಬ ತೀರ್ಮಾನಿಸುತ್ತದೆ. ದೇವೇಗೌಡರಿಗೆ ಈ ವಯಸ್ಸಿನಲ್ಲಿ ನೋವು ಕೊಡಬೇಕಿತ್ತಾ ಈ ರೀತಿ ಒಕ್ಕಲಿಗ ಸಮುದಾಯದವರು ಮಾತನಾಡುತ್ತಿದ್ದಾರೆ. ಎಸ್‌ಐಟಿ ತನ್ನ ಪವಿತ್ರತೆಯನ್ನು ಕಳೆದುಕೊಂಡಿದೆ ಎಂದರು. ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅಶೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಇದು ಕಾಂಗ್ರೆಸ್‌ನವರ ಮಾಸ್ಟರ್ ಪ್ಲಾನ್ ಯಾಕೆ ಕಾಂಗ್ರೆಸ್ ಕಾರ್ಯಕರ್ತರ ಮೊಬೈಲ್ಗಳಲ್ಲಿ ವಿಡಿಯೋ ಇಲ್ವಾ ಕಾಂಗ್ರೆಸ್ನ ಎಷ್ಟು ಜನರನ್ನು ಬಂಧಿಸಿದ್ದಾರೆ ಸುರ್ಜೆವಾಲ ಮಟ್ಟದಲ್ಲಿ ಪ್ರಕರಣದ ಮಾನಿಟರ್ ಆಗುತ್ತಿದೆ ಎಂದರು.

**ಈ ದಿನದ ದರ** ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,325/Gram(24ct) ₹6,715/Gram(22ct) | ಬೆಳ್ಳಿ: ₹86.50/Gram

## ಹರಿನಾಮ ಸಂಕೀರ್ತನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಜಯನಗರದ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಮೇ 16, ಗುರುವಾರ ಸಂಜೆ 7-30ಕ್ಕೆ ಶ್ರೀಮತಿ ಶೃತಿ ಸಗರ ಗುಲ್ಬರ್ಗ ಇವರಿಂದ ಹರಿನಾಮ ಸಂಕೀರ್ತನೆ ಏರ್ಪಡಿಸಿದ್ದು, ಇವರ ಗಾಯನಕ್ಕೆ ಶ್ರೀ ನರಸಿಂಹ ಕುಲಕರ್ಣಿ ಹಾರ್ಮೋನಿಯಂ ವಾದನದಲ್ಲಿ ಹಾಗೂ ಶ್ರೀ ವಿಜಯೇಂದ್ರ ಸಗರ, ಶ್ರೀ ರವಿಶಂಕರ್ ಇವರುಗಳು ತಬಲಾ ವಾದನದಲ್ಲಿ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ.

## ಕಾಲೇಜು ಕಟ್ಟಡದಿಂದ ಹಾರಿ ಎಂಜಿನಿಯರಿಂಗ್ ವಿದ್ಯಾರ್ಥಿ ಆತ್ಮಹತ್ಯೆ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಕಾಲೇಜು ಕಟ್ಟಡದಲ್ಲಿ ಹಾರಿ ಎಂಜಿನಿಯರಿಂಗ್ ವಿದ್ಯಾರ್ಥಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ನಡೆದಿದೆ.ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿಯ ಪಿಇಎಸ್ ಕಾಲೇಜಿನಲ್ಲಿ ಕಂಪ್ಯೂಟರ್ ಸೈನ್ಸ್ ವ್ಯಾಸಂಗ ಮಾಡುತ್ತಿದ್ದ ರಾಹುಲ್ (21) ಕಾಲೇಜು ಕಟ್ಟಡದ ಐದನೇ ಮಹಡಿಯಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಆಂಧ್ರಪ್ರದೇಶದ ಕರ್ನೂಲ್ ಮೂಲದ ರಾಹುಲ್ ಆತ್ಮಹತ್ಯೆ ಮಾಡಿಕೊಂಡಿದ್ದ ವಿದ್ಯಾರ್ಥಿಯಾಗಿದ್ದು, ಕೆಲ ವರ್ಷಗಳಿಂದ ಬಳ್ಳಾರಿಯಲ್ಲಿ ಕುಟುಂಬ ವಾಸವಾಗಿತ್ತು. ನಿನ್ನೆ ಪರೀಕ್ಷೆಗೆ ತಡವಾಗಿ ಬಂದಿದ್ದ ವೇಳೆ ಕಾಲೇಜಿನಲ್ಲಿ ನಿಂದಿಸಿರುವ ಶಂಕೆ ವ್ಯಕ್ತವಾಗಿದ್ದು, ಈ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

## ಸಂಸದ ಪ್ರಜ್ವಲ್ ರೇವಣ್ಣ ಭಾರತಕ್ಕೆ ಬರುವ ವಿಮಾನ ಟಿಕೆಟ್ ಮತ್ತೆ ಕ್ಯಾನ್ಸಲ್!

• ಉದಯವಾಹಿನಿ, ಬೆಂಗಳೂರು



ಅತ್ಯಾಚಾರ ಪ್ರಕರಣದ ಆರೋಪಿ ಹಾಸನ ಸಂಸದ ಪ್ರಜ್ವಲ್ ರೇವಣ್ಣ ವಿದೇಶದಲ್ಲಿ ತಲೆಮರೆಸಿಕೊಂಡಿದ್ದು, ಬೆಂಗಳೂರಿಗೆ ಬರುವ ವಿಮಾನ ಟಿಕೆಟ್ ಕ್ಯಾನ್ಸಲ್ ಮಾಡಿದ್ದಾರೆ ಎನ್ನಲಾಗಿದೆ. ಮೇ 15ರಂದು ಜರ್ಮನಿಯ ಮ್ಯೂನಿಚ್‌ನಿಂದ ಬೆಂಗಳೂರಿಗೆ ವಾಪಾಸ್ ಆಗಲು ಮುಂಗಡವಾಗಿ ಕಾಯ್ದಿರಿಸಿದ್ದ ಲುಫ್ತಾನ್ಸಾ ವಿಮಾನಯಾನ ಸಂಸ್ಥೆಯ ವಿಮಾನ ಟಿಕೆಟ್ ಕ್ಯಾನ್ಸಲ್ ಮಾಡಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.

ಹೀಗಾಗಿ ಪ್ರಜ್ವಲ್ ರೇವಣ್ಣ ರಾಜ್ಯಕ್ಕೆ ಆಗಮಿಸಲ್ಲ ಎಂದು ಹೇಳಲಾಗುತ್ತಿದೆ. ಸಂತ್ರಸ್ತೆಯ ಅಪಹರಣ ಪ್ರಕರಣದಲ್ಲಿ ತಂದೆ ಮಾಜಿ ಸಚಿವ ಎಚ್.ಡಿ. ರೇವಣ್ಣ ಜಾಮೀನು ಪಡೆದು ಜೈಲಿನಿಂದ ಬಿಡುಗಡೆಯಾಗಿದ್ದಾರೆ. ಹೀಗಾಗಿ ಪ್ರಜ್ವಲ್ ಭಾರತಕ್ಕೆ ವಾಪಾಸ್ ಆಗುವುದು ಸದ್ಯಕ್ಕೆ ಅನುಮಾನ ಎನ್ನಲಾಗುತ್ತಿದೆ. ಜೂ.4ರ ಫಲಿತಾಂಶದ ಬಳಿಕ ರಾಜ್ಯಕ್ಕೆ ಬರುವ ಸಾಧ್ಯತೆ ಇದೆ ಎಂದು ಎನ್ನಲಾಗಿದೆ.

## ಸಾಲ ತೀರಿಸಲು ಮನೆ ಮಾಲಕಿಯನ್ನೇ ಹತ್ಯೆ ಮಾಡಿದ ಸುಂದರಿ!

• ಉದಯವಾಹಿನಿ, ಬೆಂಗಳೂರು

ಸಾಲ ತೀರಿಸಲು ಮನೆ ಮಾಲಕಿಯನ್ನೇ ಹತ್ಯೆ ಮಾಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಹತ್ಯೆಯಾದ ಮಹಿಳೆಯನ್ನು ದಿವ್ಯಾ ಅಂತ ಗುರುತಿಸಲಾಗಿದೆ. ಕೊಲೆ


ಉದಯವಾಹಿನಿ ಚಿತ್ರ

ಆರೋಪಿಯನ್ನು ಮೋನಿಕಾ (24) ಅಂತ ಗುರುತಿಸಲಾಗಿದ್ದು, ಸದ್ಯ ಈಕೆ ಈಗ ಪೊಲೀಸರ ಅತಿಥಿಯಾಗಿದ್ದಾಳೆ. ಮೋನಿಕಾ ಶೋಕಿಗಾಗಿ ವಿಪರೀತ ಕೈಸಾಲ ಮಾಡಿಕೊಂಡಿದ್ದಳು ಎನ್ನಲಾಗಿದೆ. ಈ ನಡುವೆ ದಿವ್ಯಾ ಮನೆಯಲ್ಲಿದ್ದ ವೇಳೆಯಲ್ಲಿ ವೇಳೆ ಹಿಂಬದಿಯಿಂದ ಬಂದು ಕುತ್ತಿಗೆ ಹಿಸುಕಿ ಮೋನಿಕಾ ಕೊಲೆ ಮಾಡಿದ್ದಳು. ಕೊಲೆ ಮಾಡಿ ಕುತ್ತಿಗೆಯಲ್ಲಿದ್ದ 36 ಗ್ರಾಂ ಚಿನ್ನದ ಸರ ಕಸಿದುಕೊಂಡುತ್ತಿದ್ದಳು. ಸದ್ಯ ಪ್ರಕರಣ ದಾಖಲಿಸಿ ಮೋನಿಕಳನ್ನು ಕೆಂಗೇರಿ ಪೊಲೀಸರು ಬಂಧಿಸಿದ್ದಾರೆ.

## 7 ದಿನಗಳಲ್ಲಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಬಿಡಬ್ಲ್ಯೂಎಸ್‌ಎಸ್‌ಬಿ ಸೂಚನೆ


• ಉದಯವಾಹಿನಿ, ಬೆಂಗಳೂರು

ಸಾರ್ವಜನಿಕರಲ್ಲಿ ನೀರಿನ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸಲು ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಸರ್ಕಾರಿ ಶಾಲೆಗಳು, ಕಾಲೇಜುಗಳು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಸರ್ಕಾರಿ ಕಟ್ಟಡಗಳಲ್ಲಿ ಮಳೆ ನೀರು ಕೊಯ್ಲು ವ್ಯವಸ್ಥೆ (ಆರ್‌ಡಬ್ಲ್ಯೂಎಚ್) ಮತ್ತು ಇಂಗುಗುಂಡಿಗಳ ನಿರ್ಮಾಣಕ್ಕೆ ಮುಂದಾಗಿರುವ ಬೆಂಗಳೂರು ಜಲಮಂಡಳಿಯು, ಈ ಕುರಿತು ಒಂದು ವಾರದೊಳಗೆ ಕ್ರಿಯಾ ಯೋಜನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದೆ. ಬೆಂಗಳೂರಿನಲ್ಲಿ ಸಮರ್ಪಕ ನೀರಿನನಿರ್ವಹಣೆ ಕುರಿತು ಸಭೆ ಮಾಡಿದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯೂಎಸ್‌ಎಸ್‌ಬಿ) ಅಧ್ಯಕ್ಷ ರಾಮ್ ಪ್ರಸಾತ್ ಮನೋಹರ್ ಅವರು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ, ಸರಕಾರಿ ಶಾಲೆಗಳು, ಕಾಲೇಜುಗಳು, ಬಿಬಿಎಂಪಿ ಅಧೀನದ ಶೈಕ್ಷಣಿಕ ಸಂಸ್ಥೆಗಳು ಆಸ್ಪತ್ರೆಗಳು, ಪಾರ್ಕ್‌ಗಳು, ಸರಕಾರಿ ಕಟ್ಟಡಗಳಲ್ಲಿರುವ ಅಂಗನವಾಡಿಗಳು ಸೇರಿದಂತೆ ಸರಕಾರಿ ಕಟ್ಟಡಗಳಲ್ಲಿ ಜಲಮಂಡಳಿಯ ವತಿಯಿಂದ ಮಳೆ ನೀರು ಕೊಯ್ಲು ವ್ಯವಸ್ಥೆ ಹಾಗೂ ಇಂಗುಗುಂಡಿಗಳನ್ನು ಅಳವಡಿಸಲಾಗುವುದು. ಒಂದು ವಾರದಲ್ಲಿ ಕ್ರಿಯಾ ಯೋಜನೆ ಸಲ್ಲಿಸುವಂತೆ ಅಧೀನ ಅಧಿಕಾರಿಗಳಿಗೆ ತಿಳಿಸಿದರು.

## ಎಲೆಕ್ಟ್ರಿಕ್ ಸ್ಕೂಟರ್‌ನಲ್ಲಿ ಮಂಟಪಕ್ಕೆ ಬಂದ ವರ; ವಿಡಿಯೋ ವೈರಲ್!

• ಉದಯವಾಹಿನಿ, ಬೆಂಗಳೂರು

ಟ್ರೆಂಡ್ ಬದಲಾಗಿದೆ..ಇತ್ತೀಚಿನ ದಿನಗಳಲ್ಲಿ ಅನೇಕರು ಹೊಸ ರೀತಿಯಲ್ಲಿ ಮದುವೆ ಸಮಾರಂಭಗಳನ್ನು ಮಾಡಲು ಇಷ್ಟಪಡುತ್ತಾರೆ. ಎಲ್ಲರಿಗಿಂತಲೂ ಭಿನ್ನವಾಗಿ, ವಿನೂತನವಾಗಿ ವಿವಾಹವಾಗಲು ಪ್ರಯತ್ನಿಸುತ್ತಿದ್ದಾರೆ. ಇತ್ತೀಚೆಗೆ ಬೆಂಗಳೂರಿನಲ್ಲಿ ವರನೊಬ್ಬ ಎಲೆಕ್ಟ್ರಿಕ್ ಬೈಕ್‌ನಲ್ಲಿ ಮಂಟಪಕ್ಕೆ ಬಂದು ಎಲೆಕ್ಟ್ರಿಕ್ ವಾಹನದ (ಇವಿ) ಪಕ್ಕದಲ್ಲಿ ನೃತ್ಯ ಮಾಡುತ್ತಿರುವುದು ಕಂಡುಬಂದಿದೆ. ಅಥರ್


ಉದಯವಾಹಿನಿ ಚಿತ್ರ

ಎನರ್ಜಿ ಒಂದು ಭಾರತೀಯ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ತಯಾರಕರಾಗಿದ್ದು, ಬೆಂಗಳೂರಿನಲ್ಲಿ ಪ್ರಧಾನ ಕಛೇರಿಯನ್ನು ಹೊಂದಿದೆ. ಇಲ್ಲಿ ಕೆಲಸ ಮಾಡುತ್ತಿರುವ ಇಂಡಸ್ಟ್ರಿಯಲ್ ಡಿಸೈನರ್ ದರ್ಶನ್ ಪಟೇಲ್ ಕಳೆದ ವಾರ ವಿವಾಹವಾದರು. ಈ ಕುರಿತು ಪ್ರತಿಕ್ರಿಯಿಸಿರುವ ಪೀಕ್ ಬೆಂಗಳೂರು ಎಂಬ ಸ್ಟಾರ್ಟಪ್ ಕಂಪನಿಯು ತನ್ನ ಎಕ್ಸ್ ಪ್ಲಾಟ್‌ಫಾಮ್‌ನಲ್ಲಿ 'ಮದುವೆಗಳಲ್ಲಿ ಕುದುರೆಗಳ ಬದಲಿಗೆ ಅಥರ್ ರಿಜ್ಟಾ ಎಲೆಕ್ಟ್ರಿಕ್ ಸ್ಕೂಟರ್ ಅನ್ನು ಬಳಸಲಾಗುತ್ತಿದೆ' ಎಂದು ಪೋಸ್ಟ್ ಮಾಡಿದೆ. ಈ ವೈರಲ್ ಫೋಟೋದಲ್ಲಿರುವ ಇಗಿ ಹೊಸದಾಗಿ ಬಿಡುಗಡೆಯಾದ ಂಜಣುಜಡಿ ಖದಣಚಿ ಇಗಿ ಬೈಕ್ ಆಗಿದೆ. ಈ ಫೋಟೋ ವೈರಲ್ ಆಗುತ್ತಿದ್ದಂತೆ ವರ ಕೂಡ ಪ್ರತಿಕ್ರಿಯಿಸಿದ್ದಾರೆ. ರಿಜ್ತಾ ನನ್ನ ಮದುವೆ ಬಾರಾತ್‌ಗೆ ಬಂದಿದ್ದಾಳೆ' ಎಂದು ಪೋಸ್ಟ್ ಮಾಡಿದ್ದಾರೆ.

# ರಾಜ್ಯದಲ್ಲಿ ಅಸಮರ್ಥ ಸಂಪುಟ, ಅಭಿವೃದ್ಧಿ ಶೂನ್ಯ ಸರಕಾರ

**■ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ, ಶಾಸಕ ವಿ. ಸುನೀಲ್ ಕುಮಾರ್ ವಾಗ್ದಾಳಿ, ಜನತೆ ಕಳೆದ 1ವರ್ಷದಲ್ಲಿ ನೋಡಿದ್ದಾರೆ**


• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಪಕ್ಷದ ರಾಜ್ಯ ಸರಕಾರದ ಒಂದು ವರ್ಷದ ಅವಧಿಯನ್ನು ಅಸಮರ್ಥ ಸಂಪುಟ, ಅಭಿವೃದ್ಧಿಶೂನ್ಯ ಸರಕಾರ ಎಂದು ವಿಶ್ಲೇಷಿಸಬಹುದು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ, ಶಾಸಕ ವಿ. ಸುನೀಲ್ ಕುಮಾರ್ ಅವರು ತಿಳಿಸಿದರು.

ಬಿಜೆಪಿ ಚುನಾವಣಾ ಮಾಧ್ಯಮ ಕೇಂದ್ರ, ಹೋಟೆಲ್ ಜಿ.ಎಂ. ರಿಜಾಯ್ಸ್‌ನಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧಾನಸಭಾ ಚುನಾವಣೆ ಮುಗಿದು ಸರಕಾರ ರಚನೆಯಾಗಿ ಒಂದು ವರ್ಷ ಮುಗಿಯುತ್ತಿದೆ. ಗೊತ್ತುಗುರಿ ಇಲ್ಲದ ಆಡಳಿತವನ್ನು ಕರ್ನಾಟಕದ ಜನತೆ ಕಳೆದ ಒಂದು ವರ್ಷದಲ್ಲಿ ನೋಡಿದ್ದಾರೆ. ಅಭಿವೃದ್ಧಿ ಶೂನ್ಯ ಸರಕಾರ ಇದು ಎಂದು ಟೀಕಿಸಿದರು.ಈ ಒಂದು ವರ್ಷದ ಅವಧಿಯಲ್ಲಿ ಯಾವ ಯೋಜನೆಗೆ ಅನುದಾನ ಕೊಟ್ಟಿದ್ದಾರೆ ಎಂಬ ಮಾಹಿತಿಯನ್ನು ಸರಕಾರ ಬಿಡುಗಡೆ ಮಾಡಬೇಕು. ಸ್ಥಳೀಯ ವಿಧಾನಸಭಾ ಕ್ಷೇತ್ರ ಮಟ್ಟದಲ್ಲಿ ಯಾವ ಯೋಜನೆಗಳಿಗೆ, ಎಷ್ಟು ಅಭಿವೃದ್ಧಿ ಚಟುವಟಿಕೆಗಳಿಗೆ ಅನುದಾನ ಕೊಟ್ಟಿದ್ದಾರೆ ಎಂದು ಸರಕಾರ ಬಹಿರಂಗಪಡಿಸಿದರೆ ಸಾಕು ಎಂದು ವ್ಯಂಗ್ಯವಾಗಿ ನುಡಿದರು.

**ವಿ.ಸುನೀಲ್ ಕುಮಾರ್ ವಾಗ್ದಾಳಿ**

ಇಂಥ ಅಭಿವೃದ್ಧಿಶೂನ್ಯ ಆಡಳಿತ, ಸರಕಾರವನ್ನು ಕರ್ನಾಟಕದ ಜನತೆ ಯಾವತ್ತೂ ನೋಡಿರಲಿಲ್ಲ. ವಿಧಾನಸಭಾ ಕ್ಷೇತ್ರಗಳು, ಇಲಾಖೆಗಳಿಗೆ ಒಂದು ರೂಪಾಯಿ ಅನುದಾನವನ್ನೂ ಕೊಡದೆ ಒಂದು ವರ್ಷ ಕಾಲವನ್ನು ಈ ಸರಕಾರ ಕಳೆದಿದೆ. ನಾವೆಲ್ಲ ಶಾಸಕರು ಒಂದು ವರ್ಷದಿಂದ ಒಂದು ಗುದ್ದಲಿ ಪೂಜೆ ಮಾಡಲಾಗಿಲ್ಲ. ಒಂದು ಅನುದಾನ ಬಂದಿದೆ ಎಂದು ಜನರ ಹತ್ತಿರ ಹೋಗಲೂ ಆಗಿಲ್ಲ ಎಂದು ವಿವರಿಸಿದರು. ಈ ಸರಕಾರ ಬಂದ ಬಳಿಕ ಕರ್ನಾಟಕದ ಒಬ್ಬನೇ ಒಬ್ಬ ರೈತನಿಗೆ ಹೊಸ ಪಂಪ್‌ಸೆಟ್ ಸಂಪರ್ಕ ಸಿಗಲಿಲ್ಲ. ರೈತರು ಹಣ ಕಟ್ಟಿದರೂ ಹೊಸ ಸಂಪರ್ಕ ಸಿಕ್ಕಿಲ್ಲ 24 ಗಂಟೆ ವಿದ್ಯುತ್ ನಿರಂತರ ಬಿಡಿ; ಗ್ರಾಮೀಣ ಪ್ರದೇಶದಲ್ಲಿ 10-12 ಗಂಟೆ ವಿದ್ಯುತ್ ಕೊಡಲಾಗದ ಅಸಮರ್ಥ ಇಂಧನ ಸಚಿವರು ನಮ್ಮ ನಡುವೆ ಇದ್ದಾರೆ ಎಂದು ಟೀಕಿಸಿದರು. ಶಿಕ್ಷಣದ ವ್ಯವಸ್ಥೆ ಸಂಪೂರ್ಣವಾಗಿ ಕುಸಿದು ಬಿದ್ದಿದೆ. ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಗ್ರೇಸ್ ಮಾರ್ಕ್ ಕೊಟ್ಟಿದ್ದನ್ನು ಗಮನಿಸಿದರೆ ಶಿಕ್ಷಣ ಇಲಾಖೆ ಎಷ್ಟು ಅಸಮರ್ಥ ಎಂಬುದನ್ನು ನಾವು



> ಕಾನೂನು, ಸುವ್ಯವಸ್ಥೆ ನಿಭಾಯಿಸುವುದರಲ್ಲಿ ಗೃಹ ಸಚಿವರು ಸಂಪೂರ್ಣವಾಗಿ ವಿಫಲವಾಗಿದ್ದಾರೆ. ಬರ ಪರಿಹಾರದಲ್ಲಿ ಕಂದಾಯ ಸಚಿವರು ಎಷ್ಟು ದೊಡ್ಡ ಪ್ರಮಾಣದಲ್ಲಿ ವೈಫಲ್ಯ ಕಂಡಿದ್ದಾರೆಂದರೆ ಮಂತ್ರಿಮಂಡಲದ ಒಬ್ಬ ಸದಸ್ಯರೂ ಬರ ಪರಿಹಾರದ ಸ್ಥಳಕ್ಕೆ ಭೇಟಿ ಕೊಟ್ಟಿಲ್ಲ ಎಂದು ಅವರು ಆಕ್ಷೇಪಿಸಿದರು. ಹಣ ಬಿಡುಗಡೆ ಮಾಡಿಲ್ಲ. ಕಂದಾಯ ಸಚಿವರಿಂದ ಗ್ರಾಮೀಣಾಭಿವೃದ್ಧಿ ಸಚಿವರವರೆಗೆ ಎಲ್ಲಾ ಸಂಪುಟವು ಬರ ಪರಿಹಾರದ ನಿರ್ವಹಣೆಯಲ್ಲಿ ಅಸಮರ್ಥವಾಗಿದೆ ಎಂದು ಟೀಕಿಸಿದರು.

ನೋಡುತ್ತಿದ್ದೇವೆ. ಅಂಗನವಾಡಿಯವರಿಗೆ ಗೌರವಧನ ಹೆಚ್ಚಿಸಿಲ್ಲ; ಅಂಗನವಾಡಿಗಳ ಮೊಟ್ಟೆ ವಿತರಣೆಯಲ್ಲಿ ವ್ಯತ್ಯಾಸ ವಾಗಿದೆ. ಅಲ್ಲೂ ಕೂಡ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಅಸಮರ್ಥರಾಗಿದ್ದಾರೆ ಎಂದು ದೂರಿದರು. ಬ್ರ್ಯಾಂಡ್ ಬೆಂಗಳೂರು ಇವತ್ತು ದಿಕ್ಕೆಟ್ಟ ಬೆಂಗಳೂರಾಗಿದೆ. ಬೆಂಗಳೂರಿಗೆ ಯಾವ ರೀತಿಯ ಯೋಜನೆ ರೂಪಿಸುವುದರಲ್ಲಿ

> ಜನರು ಕೂಡ ಈ ಸರಕಾರದಿಂದ ಅನುದಾನ ಬರುವುದಿಲ್ಲ ಎಂಬಷ್ಟರ ಮಟ್ಟಿಗೆ ಪಶ್ಚಾತ್ತಾಪ ಪಡುತ್ತಿದ್ದಾರೆ. ಮುಖ್ಯಮಂತ್ರಿಗಳು ಮತ್ತು ಸಂಪುಟವನ್ನು ಗಮನಿಸಿದರೆ ಇಡೀ ಸಂಪುಟವೇ ಅಸಮರ್ಥವಾಗಿದೆ. ಸಚಿವರ ಮೇಲೆ ಹಿಡಿತವಿಲ್ಲದೆ ಮುಖ್ಯಮಂತ್ರಿಗಳು ಅಸಮರ್ಥವಾಗಿದ್ದಾರೆ. ಯೋಜನೆ ರೂಪಿಸುವುದರಲ್ಲಿ ಮುಖ್ಯಮಂತ್ರಿಗಳು ಅಸಮರ್ಥವಾಗಿದ್ದಾರೆ. ಸರಕಾರಿ ನೌಕರರಿಗೆ ಸಂಬಳ ಸಿಗುತ್ತಿಲ್ಲ ಅನ್ನುವಷ್ಟರ ಮಟ್ಟಿಗೆ ಅಸಮರ್ಥ ಮುಖ್ಯಮಂತ್ರಿಯ ಆಡಳಿತವನ್ನು ಕರ್ನಾಟಕದಲ್ಲಿ ನೋಡುತ್ತಿದ್ದೇವೆ ಎಂದು ತಿಳಿಸಿದರು.
>
> - ವಿ. ಸುನೀಲ್ ಕುಮಾರ್

ನಗರಾಭಿವೃದ್ಧಿ ಸಚಿವರು ಅಸಮರ್ಥರಾಗಿದ್ದಾರೆ. ಇದೊಂದು ಅಸಮರ್ಥ ಸಂಪುಟ; ಅಭಿವೃದ್ಧಿ ಶೂನ್ಯ ಸರಕಾರ ಎಂದು ಆರೋಪಿಸಿದರು. ವಿಧಾನಸೌಧದ ಆಡಳಿತ ಯಾರದೋ ಮನೆಯ ಕಿಚನ್‌ನಲ್ಲಿ ನಡೆಯುವಂತೆ ಭಾಸವಾಗುತ್ತಿದೆ. ಒಂದು ವರ್ಷದ ಈ ಸರಕಾರದ ಅವ್ಯವಸ್ಥೆ ದಿನದಿಂದ ದಿನಕ್ಕೆ ಬಯಲಾಗುತ್ತಿದೆ. ಈ ಅಸಮರ್ಥ ಸರಕಾರದ ವಿರುದ್ಧ ಬಿಜೆಪಿ ಜನಾಂದೋಲನ ನಡೆಸಲಿದೆ ಎಂದು ಪ್ರಕಟಿಸಿದರು.

## ಜ್ಯೋತಿ ಯಾತ್ರೆ ಬೆಂಗಳೂರಿನಿಂದ ಪೆರಂಬದೂರ್‌ವರೆಗೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ**

ರಾಜೀವ್ ಗಾಂಧಿ ಜ್ಯೋತಿ ಯಾತ್ರಾ ಸಮಿತಿ ವತಿಯಿಂದ 33ನೇ ವರ್ಷದ ರಾಜೀವ್ ಗಾಂಧಿ ಜ್ಯೋತಿ ಯಾತ್ರೆಯನ್ನು ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿರವರು, ಕೆಪಿಸಿಸಿ ಕಾರ್ಮಿಕ ವಿಭಾಗದ ಉಪಾಧ್ಯಕ್ಷರು,ರಾಜೀವ್ ಗಾಂಧಿ ಜ್ಯೋತಿ ಯಾತ್ರಾ ಸಮಿತಿ ಅಧ್ಯಕ್ಷರಾದ ಆರ್. ದೊರೈರವರು ಮಾಜಿ ಪ್ರಧಾನಿ ರಾಜೀವ್ ಗಾಂಧಿರವರ ಬಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ರಾಜೀವ್ ಗಾಂಧಿ ಜ್ಯೋತಿಗೆ ಚಾಲನೆ ನೀಡಿದರು.

ಕೆಪಿಸಿಸಿ ಕಾರ್ಮಿಕ ವಿಭಾಗದ ಅಧ್ಯಕ್ಷರಾದ ಪುಟ್ಟಸ್ವಾಮಿಗೌಡರು, ಇಂಟಕ್ ಅಧ್ಯಕ್ಷರಾದ ಲಕ್ಷ್ಮಿವೆಂಕಟೇಶ್, ಬೈಯಪ್ಪನಹಳ್ಳಿ ರಮೇಶ್ ಮತ್ತು ರಾಜೀವ್ ಗಾಂಧಿ ಜ್ಯೋತಿ ಯಾತ್ರಾ ಸಮಿತಿ ಉಪಾಧ್ಯಕ್ಷರಾದ ಟಿ.ಎಂ.ಪ್ರಸಾದ್, ಕಾರ್ಯಾಧ್ಯಕ್ಷರಾದ ಪಿ. ಶ್ರೀನಿವಾಸಪ್ಪ, ಕಾರ್ಯದರ್ಶಿ ಐಯ್ಯರ್, ಸಂಯೋಜಕರಾದ ವಿಕ್ಕಿ, ಉಪಾಧ್ಯಕ್ಷರಾದ ಮಾಣಿಕ್ಯರೆಡ್ಡಿ ಮತ್ತು ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಪಾಲ್ಗೊಂಡಿದ್ದರು.

ರಾಜೀವ್ ಗಾಂಧಿ ಜ್ಯೋತಿ ಯಾತ್ರೆಗೆ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು ಸ್ವಾಗತ ಕೋರಿ, ಶುಭಾ ಕೋರಿದರು. ಸಚಿವರುಗಳಾದ ಎಂ.ಬಿ.ಪಾಟೀಲ್, ಮಧು ಬಂಗಾರಪ್ಪ ಮತ್ತು ಶಾಸಕರಾದ ಕೋನರೆಡ್ಡಿರವರು ಉಪಸ್ಥಿತರಿದ್ದರು.

ಅಲ್ಲಿಂದ ಬೀಳ್ಕೊಡುಗೆ ನಂತರ ಶೇಪಾದ್ರಿಪುರಂ ಬಳಿ ರಾಜೀವ್ ಗಾಂಧಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಜ್ಯೋತಿ ಯಾತ್ರೆ ಸಾಗಿತು. ಇಂದಿನಿಂದ ಬೆಂಗಳೂರಿನಿಂದ ಆರಂಭವಾದ ರಾಜೀವ್ ಗಾಂಧಿ ಜ್ಯೋತಿ ಯಾತ್ರೆ ರಾಜ್ಯದ ವಿವಿಧ ಜಿಲ್ಲೆಗಳಿಗೆ ಸಾಗಿ ಕೇರಳ, ಪಾಂಡಿಚೇರಿ ಮತ್ತು ತಮಿಳುನಾಡಿವಿನ ಪೆರಂಬದೂರ್ ಗೆ 21ನೇ ತಾರೀಖು ತಲುಪಲಿದೆ. ರಾಜೀವ್ ಗಾಂಧಿರವರು ಹುತಾತ್ಮರಾಗಿ 33ವರ್ಷದ ತುಂಬಿದೆ. ರಾಜೀವ್ ಗಾಂಧಿರವರ ಆದರ್ಶ ಜೀವನ ಮಾರ್ಗದರ್ಶನದಲ್ಲಿ ಇಂದಿನ ಯುವ ಸಮುದಾಯ ಸಾಗಬೇಕು. ಶಾಂತಿ, ಸೌರ್ಹದತೆ, ಐಕ್ಯತೆ, ಸಮಗ್ರತೆಗಾಗಿ ಮತ್ತು ಉಗ್ರರ ನಿಗ್ರಹವಾಗಬೇಕು ಮತ್ತು ದೇಶದಲ್ಲಿ ಶಾಂತಿ ನೆಲಸಬೇಕು ಎಂದು ರಾಜೀವ್ ಗಾಂಧಿ ಜ್ಯೋತಿ ಯಾತ್ರೆ ಸಾವಿರಾರು ಕಿಲೋ ಮೀಟರ್ ಸಾಗಲಿದೆ.

## ಚಿಕ್ಕಪೇಟೆಯಲ್ಲಿ ವ್ಯಾಪಾರ ವಹಿವಾಟಿನಲ್ಲಿ ಭಾರಿ ಕುಸಿತ!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಬಿಬಿಎಂಪಿ ವೈಟ್ ಟಾಪಿಂಗ್ ಕಾಮಗಾರಿ**

ರಾಜ್ಯ ರಾಜಧಾನಿ ಬೆಂಗಳೂರಿನ ಅತಿದೊಡ್ಡ ಸಗಟು ಮಾರುಕಟ್ಟೆಗಳಲ್ಲಿ ಒಂದಾದ ಚಿಕ್ಕಪೇಟೆಯಲ್ಲಿ ಬಿಬಿಎಂಪಿ ವೈಟ್ ಟಾಪಿಂಗ್ ಕಾಮಗಾರಿ ನಡೆಸುತ್ತಿದ್ದು, ಇದರಿಂದ ವ್ಯಾಪಾರ ವಹಿವಾಟಿನಲ್ಲಿ ಭಾರೀ ಕುಸಿತವಾಗಿದೆ ಎಂದು ತಿಳಿದುಬಂದಿದೆ.

ರಸ್ತೆಯ ಒಂದು ಬದಿಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ಕಳೆದ ಒಂದು ತಿಂಗಳಿನಿಂದ ವಾಹನ ಸವಾರರು ಸಂಚಾರಕ್ಕೆ ಪರದಾಡುವಂತಾಗಿದೆ ಅಲ್ಲದೆ, ಚಿಕ್ಕಪೇಟೆಗೆ ಭೇಟಿ ನೀಡುವವರು ಕನಿಷ್ಠ ಮುಂದಿನ 100 ದಿನಗಳ ಕಾಲ ಅವ್ಯವಸ್ಥೆಯನ್ನು ಎದುರಿಸಲು ಸಿದ್ಧರಾಗಿರಬೇಕಾಗಿದೆ. ಕಾಮಗಾರಿ ಮತ್ತು ಅವ್ಯವಸ್ಥೆಯಿಂದಾಗಿ ವ್ಯಾಪಾರದಲ್ಲಿ ಭಾರೀ ಕುಸಿತವಾಗಿದ್ದು, ಇದರಿಂದ ವ್ಯಾಪಾರಸ್ಥರೂ ಕೂಡ ಸಂಕಷ್ಟ ಎದುರಿಸುವಂತಾಗಿದೆ.

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರ ಗಾಂಧಿನಗರ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಈ ಮಾರುಕಟ್ಟೆಯು ನೂರಾರು ಬಟ್ಟೆ ಅಂಗಡಿಗಳು, ಹೋಟೆಲ್, ಸಾಮಾನುಗಳ ಅಂಗಡಿಗಳು, ಎಲೆಕ್ಟ್ರಾನಿಕ್ಸ್ ಮಳಿಗೆಗಳು ಹಾಗೂ ಹಲವಾರು ಸಣ್ಣ ತಿನಿಸುಗಳಿಗೆ ನೆಲೆಯಾಗಿದೆ. ಪ್ರತಿನಿತ್ಯ ಸಾವಿರಾರು ಜನರು ಈ ಪ್ರದೇಶಕ್ಕೆ ಭೇಟಿ ನೀಡುತ್ತಾರೆ. ಆದರೀಗ, ಜನರು ಈ ರಸ್ತೆಯಲ್ಲಿ ನಡೆದುಕೊಂಡಲು ಹೋಗಲು ಸಹ ಹೆಣಗಾಡುವಂತಾಗಿದೆ. ಬಿವಿಕೆ ಅಯ್ಯಂಗಾರ್ ರಸ್ತೆಯಲ್ಲಿರುವ ಅಂಗಡಿ ಮತ್ತು ರೆಸ್ಟೋರೆಂಟ್ ಮಾಲೀಕರು ತಮ್ಮ ಆದಾಯವು ಶೇ.20-30 ರಷ್ಟು ಕಡಿಮೆಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

## ಹಿರಿಯ ವಕೀಲರನ್ನು ಭೇಟಿಯಾದ ಹೆಚ್.ಡಿ ರೇವಣ್ಣ, ಅರ್ಧಗಂಟೆ ಚರ್ಚೆ

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರನ್ನು ಎಸ್‌ಐಟಿ ಅಧಿಕಾರಿಗಳು ಮಹಿಳೆ ಅಪರಹಣ ಪ್ರಕರಣದಲ್ಲಿ ಬಂಧಿಸಿದ್ದರು. ಆ ಬಳಿಕ ಜೈಲಿಗೂ ಕಳುಹಿಸಲಾಗಿತ್ತು. ನಿನ್ನೆ ಜಾಮೀನು ಸಿಕ್ಕ ಬೆನ್ನಲ್ಲೇ ಜೈಲಿನಿಂದ ಬಿಡುಗಡೆಯಾಗಿದ್ದರು. ಈಗ ಅವರು ಹಿರಿಯ ವಕೀಲರನ್ನು ಭೇಟಿಯಾಗಿ, ಕಾನೂನು ಹೋರಾಟದ ಬಗ್ಗೆ ಚರ್ಚೆ ನಡೆಸುತ್ತಿದ್ದಾರೆ.

ಮಹಿಳೆ ಅಪಹರಣ ಕೇಸಲ್ಲಿ ಜಾಮೀನಿನ ಬಳಿಕ ನಿನ್ನೆ ಜೆಡಿಎಸ್ ಶಾಸಕ ಹೆಚ್.ಡಿ ರೇವಣ್ಣ ಪರಪ್ಪನ ಅಗ್ರಹಾರ ಜೈಲಿನಿಂದ ಬಿಡುಗಡೆಯಾಗಿದ್ದರು. ಆ ನಂತ್ರ ಬೆಂಗಳೂರಿನ ವಿವಿಧ ದೇವಸ್ಥಾನಗಳಿಗೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದ್ದರು. ಇಂದು ಕೂಡ ಟೆಂಪಲ್ ರನ್ ಅನ್ನು ಮಾಜಿ ಸಚಿವ ಹೆಚ್.ಡಿ ರೇವಣ್ಣ ಮುಂದುವರೆಸಿದ್ದಾರೆ.



ಈ ನಡುವೆ ಬೆಂಗಳೂರಿನ ಬನಶಂಕರಿಯಲ್ಲಿರುವಂತ ಹಿರಿಯ ವಕೀಲರೊಬ್ಬರ ನಿವಾಸಕ್ಕೆ ಭೇಟಿ ನೀಡಿದಂತ ಹೆಚ್.ಡಿ ರೇವಣ್ಣ ಅವರು, ಅವರೊಂದಿಗೆ ಅರ್ಧಗಂಟೆಗಳ ಕಾಲ ಚರ್ಚೆ ನಡೆಸಿದರು ಎನ್ನಲಾಗಿದೆ. ಮಹಿಳೆ ಅಪಹರಣ ಪ್ರಕರಣದಲ್ಲಿ ಮುಂದಿನ ಕಾನೂನು ಹೋರಾಟ ಹೇಗೆ ಮಾಡಬೇಕು.

ಈ ಪ್ರಕರಣದಲ್ಲಿ ಮುಂದಿನ ನಡೆ ಹೇಗೆ ಎನ್ನುವ ಬಗ್ಗೆಯೂ ಚರ್ಚೆ ನಡೆಸಿದರು ಎನ್ನಲಾಗುತ್ತಿದೆ.

ಸುಮಾರು ಅರ್ಧ ಗಂಟೆಯವರೆಗೆ ಬನಶಂಕರಿಯ ಹಿರಿಯ ವಕೀಲರ ನಿವಾಸದಲ್ಲಿ ಚರ್ಚೆ ನಡೆಸಿದಂತ ಹೆಚ್.ಡಿ ರೇವಣ್ಣ ಅಲ್ಲಿಂದ ಮತ್ತೆ ದೇವಸ್ಥಾನಗಳಿಗೆ ಭೇಟಿಯನ್ನು ಮಾಡೋದಕ್ಕಾಗಿ ತೆರಳಿದರು.

## ನಗರದಲ್ಲಿ ಪ್ರತಿಷ್ಠಿತ ಶಾಲೆಗಳಿಗೆ ಬಾಂಬ್ ಬೆದರಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ


ದೇಶಾದ್ಯಂತ ಶಾಲೆಗಳಿಗೆ ಬಾಂಬ್ ಇಡಲಾಗಿದೆ ಎಂಬ ಹುಸಿ ಕರೆಗಳು ಬರುತ್ತಿದ್ದು, ಆತಂಕದ ವಾತಾವರಣ ಸೃಷ್ಟಿಯಾಗುತ್ತಿರುವುದು ಇತ್ತೀಚೆಗೆ ಸಾಮಾನ್ಯವಾಗಿದೆ. ನಕಲಿ ಬೆದರಿಕೆ ಕರೆ ಎಂದು ತಿಳಿದಿದ್ದರೂ ಉದಾಸೀನ ಮಾಡುವಂತಿಲ್ಲ. ನಗರದಲ್ಲಿ ಮಂಗಳವಾರ ಕನಿಷ್ಟ 8 ಖಾಸಗಿ ಶಾಲೆಗಳಿಗೆ ಬಾಂಬ್ ಬೆದರಿಕೆ ಇ-ಮೇಲ್ ಗಳು ಬಂದು, ಆತಂಕದ ವಾತಾವರಣ ಸೃಷ್ಟಿಯಾಗಿತ್ತು.

ಶಾಲೆಗಳು ಬೆದರಿಕೆ ಇ-ಮೇಲ್ ಬಗ್ಗೆ ಮಾಹಿತಿ ನೀಡುತ್ತಿದ್ದಂತೆಯೇ ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಹಾಗೂ ಬಾಂಬ್ ನಿಷ್ಕ್ರಿಯ ದಳಗಳು ತೀವ್ರ ಪರಿಶೀಲನೆ ನಡೆಸಿತು. ಆದರೆ, ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗಿರಲಿಲ್ಲ. ನಂತರ ಇದು ಹುಸಿ ಬಾಂಬ ಬೆದರಿಕ ಎಂಬುದು ತಿಳಿದುಬಂದಿತ್ತು ಎಂದು ಅಧಿಕಾರಿಗಳು ಹೇಳಿದ್ದಾರೆ. ಬೆಂಗಳೂರು ಸ್ಕಾಟಿಷ್ ಶಾಲೆ, ಭವನ್ ಬೆಂಗಳೂರು ಪ್ರೆಸ್ ಸ್ಕೂಲ್, ಚಿತ್ರಕೂಟ ಶಾಲೆ, ದೀಕ್ಷಾ ಹೈಸ್ಕೂಲ್, ಎಡಿಫೈ ಸ್ಕೂಲ್, ಗಂಗೋತ್ರಿ ಇಂಟರ್‌ನ್ಯಾಶನಲ್ ಪಬ್ಲಿಕ್ ಸ್ಕೂಲ್, ಗಿರಿಧನ್ವ ಶಾಲೆ ಮತ್ತು ಜೈನ್ ಹೆರಿಟೇಜ್ ಶಾಲೆಗಳಿಗೆ ಬೆದರಿಕೆ ಇ-ಮೇಲ್ ಗಳು ಬಂದಿದ್ದವು ಎನ್ನಲಾಗಿದೆ. ಶಾಲಾ ಆವರಣದಲ್ಲಿ ಬಾಂಬ್ ಇಡಲಾಗಿದೆ. ಅದು ಇನ್ನು ಕೆಲವೇ ಗಂಟೆಗಳಲ್ಲಿ ಸ್ಫೋಟಗೊಳ್ಳಲಿದೆ. ಕೋರ್ಟ್ ಎಂಬ ಗುಂಪು ಈ ಹತ್ಯಾಕಾಂಡದ ಹಿಂದೆ ಇದೆ ಎಂದು ಶಾಲೆಗಳಿಗೆ ಬೆದರಿಕೆ ಇ-ಮೇಲ್ ಬಂದಿರುವುದಾಗಿ ತಿಳಿದುಬಂದಿದೆ.

> ಈ ಹಿಂದೆಯೂ ಬೆಂಗಳೂರಿನ ಶಾಲೆಗಳಿಗೆ ಇದೇ ರೀತಿಯ ಬೆದರಿಕೆ ಇ-ಮೇಲ್ ಗಳು ಬಂದಿದ್ದವು. ಒಂದೇ ಬಾರಿ 20-30 ಶಾಲೆಗಳಿಗೆ ಏಕ ಕಾಲಕ್ಕೆ ಬಾಂಬ್ ಇಡಲಾಗಿದೆ ಎಂಬ ಸಂದೇಶ ಇಡೀ ನಗರದಲ್ಲಿ ಭಯದ ವಾತಾವರಣ ಸೃಷ್ಟಿ ಮಾಡಿತ್ತು.

## ರಾಜ್ಯದಲ್ಲಿ 2,800ಕ್ಕೂ ಹೆಚ್ಚು ಕೇಸ್‌ಗಳು ಪತ್ತೆ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಮಳೆ ಬೆನ್ನಲ್ಲೇ ಹೆಚ್ಚಿದ ಡೆಂಗ್ಯೂ ಭೀತಿ**

ಬಿಸಿಲ ಝಳದಿಂದ ಕಂಗೆಟ್ಟಿದ್ದ ರಾಜ್ಯಕ್ಕೆ ವರುಣರಾಯನ ಆಗಮನವಾಗಿದ್ದು, ಇದರ ಬೆನ್ನಲ್ಲೇ ಇದೀಗ ಡೆಂಗ್ಯೂ ಭೀತಿ ಶುರುವಾಗಿದೆ. ರಾಜ್ಯದಲ್ಲಿ ಮೇ.13ರವರೆಗೆ ಒಟ್ಟು 2,877 ಪ್ರಕರಣಗಳು ವರದಿಯಾಗಿವೆ.ಕಳೆದ ವರ್ಷ ಇದೇ ಅವಧಿಯಲ್ಲಿ 1,725 ಪ್ರಕರಣಗಳು ವರದಿಯಾಗಿದ್ದವು.

ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಪ್ರಸಕ್ತ ಸಾಲಿನಲ್ಲಿ ಪ್ರಕರಣಗಳ ಸಂಖ್ಯೆ ಹೆಚ್ಚಾಗಿದೆ ಎಂದು ಆರೋಗ್ಯ ಇಲಾಖೆಯ ಅಂಕಿ ಅಂಶಗಳು ತಿಳಿಸಿವೆ. ಡೆಂಗ್ಯೂ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮುಂಗಾರು ಆರಂಭಕ್ಕೂ ಮುನ್ನವೇ ನಿಯಂತ್ರಣ ಕ್ರಮಗಳ ತೀವ್ರಗೊಳಿಸಲು ಆರೋಗ್ಯ ಇಲಾಖೆ ಮುಂದಾಗಿದೆ. ಇದಕ್ಕಾಗಿ ಇಲಾಖೆಯು ಎನ್‌ಎಚ್‌ಎಂನ ಮಿಷನ್ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಜಿಲ್ಲಾ ಆರೋಗ್ಯ ಅಧಿಕಾರಿಗಳು (ಡಿಎಚ್‌ಒ) ಮತ್ತು ರೋಗ ನಿಯಂತ್ರಣ ಅಧಿಕಾರಿಗಳೊಂದಿಗೆ ಸಭೆಗಳು ನಡೆಸುವುದರ ಜೊತೆಗೆ ಹಲವಾರು ಕ್ರಮಗಳನ್ನು ಕೈಗೊಳ್ಳುತ್ತಿದೆ. ಇದಲ್ಲದೆ, ಆರೋಗ್ಯ ಸಿಬ್ಬಂದಿ ಆಶಾ ಕಾರ್ಯಕರ್ತೆಯರು ಪ್ರತಿನಿತ್ಯ ಮನೆ-ಮನೆಗೆ ಭೇಟಿ ನೀಡುವುದು, ಜಿಲ್ಲಾ ಆಸ್ಪತ್ರೆಗಳಲ್ಲಿ ದೃಢಪಟ್ಟ ಡೆಂಗ್ಯೂ ಪ್ರಕರಣಗಳ ಮೇಲ್ವಿಚಾರಣೆ, ನೀರಿನ ಕೊರತೆ ಇರುವ ಪ್ರದೇಶಗಳಲ್ಲಿ ಜಾಗೃತಿ ಅಭಿಯಾನಗಳು ಪರೀಕ್ಷಾ ಕಿಟ್‌ಗಳು ಚಿಕಿತ್ಸಾ ಔಷಧಿಗಳ ಲಭ್ಯತೆಯನ್ನು ಪರಿಶೀಲನೆ ನಡೆಸಲಾಗುತ್ತಿದೆ. ಡೆಂಗ್ಯೂ ಎಂಬು ದು ವಿಶೇಷವಾಗಿ ಈಡಿಸ್ ಈಜಿಪ್ಟಿ ಎಂಬ ಸೊಳ್ಳೆಯಿಂದ ಹರಡುವ ವೈರಲ್ ಸೋಂಕು.

ಇದು ಪ್ರಪಂಚದಾದ್ಯಂತ ಉಷ್ಣವಲಯದ ಉಪ ಉಷ್ಣವಲಯದ ಪ್ರದೇಶಗಳಲ್ಲಿ ಹೆಚ್ಚಾಗಿ ಕಾಣಿಸಿಕೊಂಡಿದೆ. ಮಲೇರಿಯಾದಂತೆ ಸೊಳ್ಳೆಗಳಿಂದ ಹರಡುವ ಮತ್ತು ಮನುಷ್ಯನ ಆರೋಗ್ಯ ಅತ್ಯಂತ ಮಾರಕವಾಗಿರುವುದು ಡೆಂಗ್ಯೂ ಜ್ವರ. ಡೆಂಗ್ಯೂ ಜ್ವರವು ಸಾಮಾನ್ಯವಾಗಿ ಜ್ವರದ ಲಕ್ಷಣಗಳನ್ನು ತೋರಿಸುತ್ತದೆ,

> ಮೈ ಬಿಸಿ ಹೆಚ್ಚಾಗುವುದು, ತೀವ್ರ ತಲೆನೋವು, ಕೀಲು ಮತ್ತು ಸ್ನಾಯು ನೋವು, ದದ್ದು ಮತ್ತು ಸೌಮ್ಯ ರಕ್ತಸ್ರಾವ. ಕೆಲವು ಸಂದರ್ಭಗಳಲ್ಲಿ ಇದು ಡೆಂಗ್ಯೂ ಹೆಮರಾಜಿಕ್ ಜ್ವರ ಎಂಬ ತೀವ್ರವಾದ ರೂಪಕ್ಕೆ ತಿರುಗಿ ಜೀವಕ್ಕೆ ಅಪಾಯಕಾರಿಯಾಗಬಹುದು. ಡೆಂಗ್ಯೂಗೆ ಯಾವುದೇ ನಿರ್ದಿಷ್ಟ ಚಿಕಿತ್ಸೆ ಇಲ್ಲ, ಆದರೆ ರೋಗಲಕ್ಷಣಗಳ ಬೆಂಬಲ ಮತ್ತು ನಿರ್ವಹಣೆ ಮುಖ್ಯವಾಗಿದೆ.

# ಕ್ಯಾನ್ಸರ್ ರೋಗಿಗೆ ಯಶಸ್ವಿಯಾಗಿ ಸೈಟೋರೆಡಕ್ಟಿವ್ ಸರ್ಜರಿ

**■ ಕ್ಯಾನ್ಸರ್ ಒಳಪದರವನ್ನು ರೂಪಿಸುವ ಜೀವಕೋಶಗಳಿಂದ ಬೆಳೆಯುತ್ತದೆ ■ ದೇಹದ ತೂಕ ಕಳೆದುಕೊಳ್ಳಲು ಪ್ರಾರಂಭ**

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಸಿಜಿ ಕ್ಯಾನ್ಸರ್ ಸೆಂಟರ್ ಹಿರಿಯ ಸರ್ಜಿಕಲ್**

ಬೆಂಗಳೂರಿನ ಡಬಲ್ ರೋಡ್ನಲ್ಲಿ ಇರುವ ಎಚ್‌ಸಿಜಿ ಕ್ಯಾನ್ಸರ್ ಸೆಂಟರ್ ಇತ್ತೀಚೆಗೆ ಮ್ಯೂಸಿನಸ್‌ನಿಂದ ಬಳಲುತ್ತಿರುವ 40 ವರ್ಷದ ವ್ಯಕ್ತಿಗೆ ಹೈಪರ್‌ಥರ್ಮಿಕ್ ಇಂಟ್ರಾ ಪೆರಿಟೋನಿಯಲ್ ಕಿಮೋಥೆರಪಿ (ಎಚ್‌ಐಪಿಇಸಿ) ವಿಧಾನದೊಂದಿಗೆ ವಿಶಿಷ್ಟವಾದ ಸೈಟೋರೆಡಕ್ಟಿವ್ ಶಸ್ತ್ರಚಿಕಿತ್ಸೆ ನಡೆಸಿದ್ದಾರೆ. ಈ ರೀತಿಯ ಕ್ಯಾನ್ಸರ್ ಒಳಪದರವನ್ನು ರೂಪಿಸುವ ಜೀವಕೋಶಗಳಿಂದ ಬೆಳೆಯುತ್ತದೆ.

ಸೈಟೋರೆಡಕ್ಟಿವ್ ಶಸ್ತ್ರಚಿಕಿತ್ಸೆಯು ಹೊಟ್ಟೆಯಲ್ಲಿನ ಅಂಗಗಳಲ್ಲಿ ಬೆಳೆಯುವ ಕ್ಯಾನ್ಸರ್ ಕೋಶಗಳನ್ನು ತೆಗೆದುಹಾಕುವ ವಿಧಾನವಾಗಿದೆ, ಎಚ್‌ಐಪಿಇಸಿ ಸಾಮಾನ್ಯವಾಗಿ ಉದರದ ಕ್ಯಾನ್ಸರ್‌ಗಳಿಗೆ ಚಿಕಿತ್ಸೆ ನೀಡಲು ಬಳಸುವ ಒಂದು ವಿಧಾನವಾಗಿದೆ, ಅದು ಮೂಲ ಅಂಗವನ್ನು ಮೀರಿ ಹರಡಿ, ಪೆರಿಟೋನಿಯಲ್ ಮೇಲ್ಮೈ ಹೊಟ್ಟೆಯನ್ನು ಆವರಿಸುತ್ತದೆ. ಎರಡೂ ಕಾರ್ಯವಿಧಾನಗಳ ಸಂಯೋಜನೆಯನ್ನು ಬೆಂಗಳೂರಿನ ಡಬಲ್ ರೋಡ್ನಲ್ಲಿ ಇರುವ ಎಚ್‌ಸಿಜಿ ಕ್ಯಾನ್ಸರ್ ಸೆಂಟರ್ ಹಿರಿಯ ಸರ್ಜಿಕಲ್ ಆಂಕೋಲಾಜಿಸ್ಟ್ ಡಾ. ಪಂಪನಗೌಡ ಎಸ್.ಕೆ.ಎಂ. ಅವರು ಅದ್ಭುತವಾಗಿ ಬಳಸಿಕೊಂಡಿದ್ದಾರೆ.

ನಗರದಲ್ಲಿ 40 ವರ್ಷದ ಪೊಲೀಸ್ ಇಲಾಖೆ ಉದ್ಯೋಗಿ ತೇಜಸ್ ಎಸ್ (ಹೆಸರು ಬದಲಾಯಿಸಲಾಗಿದೆ) ಕಳೆದ ಎರಡು ತಿಂಗಳಿನಿಂದ ಹೊಟ್ಟೆ ನೋವಿನಿಂದ ಬಳಲುತ್ತಿದ್ದರು. ಅವರು ತಿಂದ ಕೂಡಲೇ ಹೊಟ್ಟೆ ತುಂಬಿದಂತಾಯಿತು ಅಥವಾ ಉಬ್ಬಿದ ಅನುಭವವಾಗುತ್ತಿತ್ತು, ಕೆಲವೊಮ್ಮೆ ವಾಕರಿಕೆ, ವಾಂತಿ ಸಹ ಆಗುತ್ತಿತ್ತು. ಅಷ್ಟೇ ಅಲ್ಲದೆ, ದೇಹದ ತೂಕ ಕಳೆದುಕೊಳ್ಳಲು ಪ್ರಾರಂಭಿಸಿದರು, ಇದರಿಂದ ಅವರ ಸಹೋದ್ಯೋಗಿಗಳ ನೆರವಿನಿಂದ ವೈದ್ಯಕೀಯ ಸಹಾಯ ಪಡೆಯಲು ಮುಂದಾದರು. ದೈಹಿಕ ಪರೀಕ್ಷೆಯ ನಂತರ, ಹೊಟ್ಟೆ ನೋವು ಕ್ಷಯರೋಗದಿಂದ ಉಂಟಾಗಿದೆ ಎಂದು ಶಂಕಿಸಿ, ಕ್ಷಯರೋಗ ಸಂಬಂಧಿತ ಚಿಕಿತ್ಸೆಗೆ ಒಳಗಾದರು. ಇದಷ್ಟೇ ಅಲ್ಲದೆ, ಅಪೆಂಡೆಕ್ಟಮಿ ಇರುವ ಬಗ್ಗೆಯೂ ಪರೀಕ್ಷಿಸಿ, ಚಿಕಿತ್ಸೆ ನೀಡಲಾಯಿತು. ಶಸ್ತ್ರಚಿಕಿತ್ಸೆಯ ನಂತರವೂ ರೋಗಲಕ್ಷಣಗಳು ಮುಂದುವರಿದಾಗ, ಅವರ ಹಿಸ್ಟೋಪಾಥಾಲಜಿ ವರದಿಯು ಅವರು ಅಪೆಂಡಿಕ್ಸ್‌ನ ಮ್ಯೂಸಿನಸ್ ಅಡೆನೊಕಾರ್ಸಿನೋಮದಿಂದ ಬಳಲುತ್ತಿದ್ದಾರೆ ಎಂದು ಬಹಿರಂಗಪಡಿಸಿತು. ನಂತರ ಅವರು ಬೆಂಗಳೂರಿನ ಡಬಲ್ ರೋಡ್‌ನಲ್ಲಿರುವ ಎಚ್‌ಸಿಜಿ ಕ್ಯಾನ್ಸರ್ ಸೆಂಟರ್‌ನಲ್ಲಿ ತಜ್ಞರ ಚಿಕಿತ್ಸೆಯನ್ನು ಪಡೆಯಲು ಅವರ ಕುಟುಂಬವು ಅವರಿಗೆ ಸಲಹೆ ನೀಡಿದರು. ಡಬಲ್ ರೋಡ್‌ನಲ್ಲಿರುವ ಎಚ್‌ಸಿಜಿ ಕ್ಯಾನ್ಸರ್ ಸೆಂಟರ್‌ನಲ್ಲಿ, ಡಾ. ಪಂಪನಗೌಡ ಅವರು ರೋಗಿಯ ವರದಿ ಅಧ್ಯಯನ ಮಾಡಿದಾಗ, ಅಪೆಂಡಿಕ್ಸ್ ತೆಗೆದರೂ ಗೆಡ್ಡೆಯ ಕೋಶಗಳು ತೇಜಸ್‌ನ ಪೆರಿಟೋನಿಯಲ್ ಕುಹರದೊಳಗೆ ಹರಡಿರುವುದು ಕಂಡುಬಂದಿತು. ಹೀಗಾಗಿ ಅವರಿಗೆ ಸೈಟೋರೆಡಕ್ಟಿವ್ ಶಸ್ತ್ರಚಿಕಿತ್ಸೆಯನ್ನು ಮಾಡಲು ನಿರ್ಧರಿಸಿದರು. ಎಚ್‌ಐಪಿಇಸಿ (ಹೈಪರ್ಥರ್ಮಿಕ್ ಇಂಟ್ರಾಪೆರಿಟೋನಿಯಲ್ ಕಿಮೊಥೆರಪಿ) ವಿಧಾನ ಇದಾಗಿದೆ. ಬೆಂಗಳೂರು ಡಬಲ್‌ರೋಡ್‌ನ ಎಚ್‌ಸಿಜಿ ಕ್ಯಾನ್ಸರ್ ಸೆಂಟರ್‌ನ ಹಿರಿಯ ಸಲಹೆಗಾರ ಸರ್ಜಿಕಲ್ ಆಂಕೊಲಾಜಿಸ್ಟ್ ಡಾ.ಪಂಪನಗೌಡ ಎಸ್‌ಕೆಎಂ ಅವರು ತಜ್ಞ ಚಿಕಿತ್ಸೆಯನ್ನು ವಿವರಿಸುತ್ತಾ, ಆಸ್ಪತ್ರೆಗೆ ಆಗಮಿಸಿದಾಗ ರೋಗಿಯು ಹೊಟ್ಟೆಯ ದ್ರವ್ಯರಾಶಿಯನ್ನು ಹೊಂದಿದ್ದು, ಹೊಟ್ಟೆಯ ಹಿಗ್ಗುವಿಕೆಯನ್ನು ಹೊಂದಿದ್ದರು. ರೋಗಿಯು ಸ್ಯೂಡೋಮೈಕ್ಸೋಮಾ ಪೆರಿಟೋನಿ ರೋಗನಿರ್ಣಯವನ್ನು ಮರುದೃಢೀಕರಿಸಲು ಕಿಬ್ಬೊಟ್ಟೆಯ ದ್ರವ್ಯರಾಶಿಯ ಬಯಾಪ್ಸಿಯನ್ನು ಹೊಂದಿದ್ದರು.

> ರೋಗಿಯು ಶಸ್ತ್ರಚಿಕಿತ್ಸೆಗೆ ಉತ್ತಮವಾಗಿ ಪ್ರತಿಕ್ರಿಯಿಸಿದರು, ಯಾವುದೇ ದೊಡ್ಡ ತೊಡಕುಗಳಿಲ್ಲದೆ ಸರಾಗವಾಗಿ ಚೇತರಿಸಿಕೊಂಡರು. ದೊಡ್ಡ ಶಸ್ತ್ರಚಿಕಿತ್ಸೆಯ 11 ನೇ ದಿನದಂದು ಅವರನ್ನು ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಯಿತು ಎಂದು ಹೇಳಿದರು.

> ಇದನ್ನು ಹಂತ ಹಂತದ ಪರೀಕ್ಷೆ ಮಾಡಲಾಯಿತು. ಇಮೇಜಿಂಗ್ ವರದಿಯು ಪೆರಿಟೋನಿಯಲ್ ಮೇಲ್ಮೈ ಮತ್ತು ಓಮೆಂಟಮ್ ಅನ್ನು ಒಳಗೊಳ್ಳಲು ಹೊಟ್ಟೆಯ ಇತರ ಭಾಗಕ್ಕೆ ಕ್ಯಾನ್ಸರ್ ಹರಡಿದೆ ಎಂದು ತಿಳಿದು ಬಂದಿತು. ನಂತರ ನಮ್ಮ ವೈದ್ಯರ ತಂಡವು ಸೈಟೊರೆಡಕ್ಟಿವ್ ಸರ್ಜರಿ ನಂತರ ಊಋಕಇಅ ಪರಿಣಾಮಕಾರಿ ಚಿಕಿತ್ಸೆ ನಡೆಸಿದರು. ಜೊತೆಗೆ, ಕೀಮೋಥೆರಪಿಗೂ ಒಳಗಾದರು. ನಂತರ ರೋಗಿಯ ಸ್ಥಿತಿ ಉತ್ತಮವಾಯಿತು. ಎಪಿಡ್ಯೂರಲ್ ಅರಿವಳಿಕೆಯೊಂದಿಗೆ ಸಾಮಾನ್ಯ ಶಸ್ತ್ರಚಿಕಿತ್ಸೆಗೆ ಒಳಗಾಯಿತು.

# ಬಿಳಿಗಿರಿರಂಗನ ಬೆಟ್ಟದ ಕುಂಬೇಶ್ವರನಿಗೆ ರೊಟ್ಟಿಯೇ ನೈವೇದ್ಯ

## • ಬೆಳೆ ಬೆಳೆದು ಫಸಲು ಮನೆ ಸೇರಿದ ಬಳಿಕ ಎಲ್ಲರೂ ದೇವರಿಗೆ ಹರಕೆಯನ್ನು ಅರ್ಪಿಸಿ ರೊಟ್ಟಿ ತಯಾರಿಸಿ ಸವಿಯುತ್ತಾರೆ

• ಉದಯವಾಹಿನಿ ಚಾಮರಾಜನಗರ

ಕೃಷಿಯೆ ಜೀವಾಳವಾಗಿರುವ ಜಿಲ್ಲೆಯಲ್ಲಿ ಯಾವುದೇ ಬೆಳೆಯಾಗಲಿ ಅದು ಬೆಳೆದು ಕೈಸೇರಿದಾಗ ರೈತರು ಖುಷಿಯಲ್ಲಿ ತೇಲುವುದು ಮಾಮೂಲಿಯಾಗಿದೆ. ಇವತ್ತಿನ ಪರಿಸ್ಥಿತಿಯಲ್ಲಿ ಕೃಷಿ ಮಾಡುವುದು ಸುಲಭವಾಗಿ ಉಳಿದಿಲ್ಲ. ಅದರಲ್ಲೂ ಮಳೆಯನ್ನು ನಂಬಿ ಕೃಷಿ ಮಾಡುವ ರೈತರ ಬದುಕು ಮೂರಾಬಟ್ಟೆಯಾಗಿದೆ.

**ಪ್ರಕೃತಿ ವನದೇವತೆಯನ್ನು ಪೂಜಿಸುವ ಸಂಪ್ರದಾಯ**

ಆದರೂ ತಾವು ಕಷ್ಟಪಟ್ಟು ಬೆಳೆದ ಬೆಳೆ ಮನೆ ಯನ್ನು ತುಂಬಿದಾಗ ಎಲ್ಲಿಲ್ಲದ ಸಂಭ್ರಮ ಮನೆ ಮಾಡುತ್ತದೆ. ಇಂತಹ ಸಂದರ್ಭದಲ್ಲಿ ಎಲ್ಲರೂ ಜತೆ ಸೇರಿ ಸಂಭ್ರಮಿಸಿದರೆ ಹೇಗಿರುತ್ತದೆ ಅದಕ್ಕೆ ಸಾಕ್ಷಿಯೇ ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲ್ಲೂಕಿನ ಬಿಳಿಗಿರಿರಂಗನ ಬೆಟ್ಟದ ವ್ಯಾಪ್ತಿಯಲ್ಲಿ ನಡೆಯುವ ರೊಟ್ಟಿ ಹಬ್ಬವಾಗಿದೆ.

ಒಂದು ಕಾಲದಲ್ಲಿ ಪ್ರಕೃತಿಯೊಂದಿಗೆ ಬೆರೆತು ಬದುಕುತ್ತಿದ್ದ ಸೋಲಿಗರು ತಮ್ಮ ಆಹಾರದ ಸಮಸ್ಯೆ ನೀಗಿಸಿಕೊಳ್ಳಲು ಸುತ್ತಮುತ್ತ ಬೆಳೆಗಳನ್ನು ಬೆಳೆಯುತ್ತಿದ್ದರು. ಆ ಬೆಳೆಯನ್ನು ವನ್ಯ ಪ್ರಾಣಿಗಳಿಂದ ರಕ್ಷಿಸಿಕೊಂಡು ಫಸಲು ಪಡೆಯುವುದು ಅಷ್ಟು ಸುಲಭವಾಗಿರಲಿಲ್ಲ. ಈ ವೇಳೆ ವನದೇವತೆಯನ್ನು ಪೂಜಿಸಿಕೊಂಡು ಯಾವುದೇ ತೊಂದರೆಯಾಗದಂತೆ ಬೆಳೆಯನ್ನು ರಕ್ಷಿಸುವಂತೆ ಬೇಡಿಕೊಳ್ಳುತ್ತಿದ್ದರು. ಬೆಳೆ ಬೆಳೆದು ಫಸಲು ಮನೆ ಸೇರಿದ ಬಳಿಕ ಎಲ್ಲರೂ ದೇವರಿಗೆ ಹರಕೆ ಯನ್ನು ಅರ್ಪಿಸುವ ಸಲುವಾಗಿ ಧಾನ್ಯದಿಂದ ರೊಟ್ಟಿ ತಯಾರಿಸಿ ಬಡಿಸಿ, ಬಳಿಕ ತಾವೆಲ್ಲರೂ ಅದನ್ನು ಸವಿದು ಹಿಂತಿರುಗುತ್ತಿದ್ದರು. ಇದುವೇ ರೊಟ್ಟಿ ಹಬ್ಬವಾಗಿದೆ.

ಹಾಗೆನೋಡಿದರೆ ಕೃಷಿಯನ್ನೇ ಬದುಕಾಗಿಸಿಕೊಂಡ ಎಲ್ಲ ಕಡೆಯಲ್ಲಿಯೂ ಪ್ರಕೃತಿಯನ್ನು, ವನದೇವತೆಯನ್ನು ಪೂಜಿಸುವ ಸಂಪ್ರದಾಯವಿದೆ. ಅದು ಒಂದೊಂದು ಊರಿಗೆ ಭಿನ್ನವಾಗಿದೆಯಷ್ಟೆ. ಪ್ರಕೃತಿಯೇ ಎಲ್ಲವೂ ಆಗಿರುವುದರಿಂದ ಅದನ್ನು ಹೊರತುಪಡಿಸಿ ನಾವು ಯಾರೂ ಕೂಡ ನೆಮ್ಮದಿಯಾಗಿ ಬದುಕಲು ಸಾಧ್ಯವಿಲ್ಲ. ಕಾಲಕ್ಕೆ ತಕ್ಕಂತೆ ಮಳೆ, ಬಿಸಿಲು,


☛ ಉದಯವಾಹಿನಿ ಚಿತ್ರ

ಚಳಿ ಇಲ್ಲದೆ ಹೋದರೆ ಇದರಲ್ಲಿ ಯಾವುದೇ ಒಂದು ವ್ಯತ್ಯಯವಾದರೂ ಪರಿಸರದ ಮೇಲೆ ಪರಿಣಾಮ ಬೀರುವುದರೊಂದಿಗೆ ಮನುಷ್ಯನಿಗೆ ಬದುಕುವುದೇ ಕಷ್ಟವಾಗುತ್ತದೆ.

ಹಿಂದಿನ ಕಾಲದಲ್ಲಿ ಎಲ್ಲಿ ನೀರಿನಾಶ್ರಯವಿದೆಯೋ ಅಲ್ಲಿ ಕೃಷಿ ಮಾಡುತ್ತಿದ್ದರು. ಹೆಚ್ಚಿನವರು ಅರಣ್ಯದ ಒಡನಾಟದಲ್ಲಿಯೇ ಜೀವನ ಸಾಗಿಸುತ್ತಿದ್ದರು. ಕಾಡಿನ ಉತ್ಪನ್ನಗಳೇ ಜೀವನಾಧಾರವಾಗಿತ್ತು. ಅದರಲ್ಲೂ ಸೋಲಿಗರು ಕಾಡಿನ ನಡುವೆ ಬದುಕು ಕಟ್ಟಿಕೊಂಡಿದ್ದರು. ಸುತ್ತಮುತ್ತಲಿನ ಪ್ರದೇಶದಲ್ಲಿ ಆಹಾರ ಧಾನ್ಯಗಳನ್ನು ಬೆಳೆಯುತ್ತಿದ್ದರು. ಅದರಲ್ಲೂ ರಾಗಿಯನ್ನು ಹೆಚ್ಚಾಗಿ ಬೆಳೆಯುತ್ತಿದ್ದರು. ಈ ರಾಗಿಯನ್ನು ಬೆಳೆದು ಫಸಲು ಪಡೆಯುವುದು ಸುಲಭವಾಗಿರಲಿಲ್ಲ. ಹೀಗಾಗಿ ಜನ ಜಾನುವಾರು ಮತ್ತು ಬೆಳೆಗಳನ್ನು ಕಾಡುಪ್ರಾಣಿಗಳಿಂದ ಕಾಪಾಡುವಂತೆ ದೇವರಲ್ಲಿ ಹರಕೆ ಹೊತ್ತುಕೊಳ್ಳುತ್ತಿದ್ದರು. ಇನ್ನು ರಾಗಿ ಬೆಳೆಯುವ ಸೋಲಿಗರು ಅದನ್ನು ಕಟಾವು ಮಾಡಿ ಬಳಿಕ ಮೊದಲಿಗೆ ಪ್ರತಿ ಕುಟುಂಬದವರು ಹರಕೆಯಾಗಿ ಒಂದು ಕೆಜಿಯಷ್ಟು ರಾಗಿಯನ್ನು ತೆಗೆದಿಡುತ್ತಾರೆ. ಬಳಿಕ ಅದನ್ನು ಸ್ವಚ್ಛಗೊಳಿಸಿ ಬೀಸುಕಲ್ಲಿನಿಂದ ಬೀಸಿ ಪುಡಿ(ಹಿಟ್ಟು) ತಯಾರಿಸುತ್ತಾರೆ.

**ಕಟ್ಟುನಿಟ್ಟಿನ ಸಂಪ್ರದಾಯ ಪಾಲನೆ**

ಹೀಗೆ ಕಟ್ಟುನಿಟ್ಟಿನ ಸಂಪ್ರದಾಯ ಪಾಲನೆ ಮಾಡುವ ಅವರು ಕುಂಬೇಶ್ವರ ದೇವಸ್ಥಾನಕ್ಕೆ ಆಗಮಿಸಿ, ದೇಗುಲದ ಮುಂಭಾಗ ಹಿಟ್ಟನ್ನು ಚೆನ್ನಾಗಿ ಕಲೆಸಿ ಮುತ್ತುಗದ ಎಲೆಯಲ್ಲಿ ರೊಟ್ಟಿಯನ್ನು ತಟ್ಟುತ್ತಾರೆ. ಬಳಿಕ ಅದನ್ನು ಮೊದಲೇ ಹರಡಿದ್ದ ಕೆಂಡದ ರಾಶಿಯಲ್ಲಿಟ್ಟು ಚೆನ್ನಾಗಿ ಬೇಯಿಸಿ ರಾಶಿ ಹಾಕುತ್ತಾರೆ. ಆ ನಂತರ ದೇವರಿಗೆ ನೈವೇದ್ಯವಾಗಿ ರೊಟ್ಟಿಯನ್ನು ಅರ್ಪಿಸುತ್ತಾರೆ. ಜತೆಗೆ ಕುಂಬೇಶ್ವರನಿಗೆ ಪೂಜೆ ಸಲ್ಲಿಸಿ ಮುಂಬರುವ ದಿನಗಳಲ್ಲಿ ಉತ್ತಮ ಮಳೆ, ಬೆಳೆಯಾಗಲಿ, ಹಾಡಿಯಲ್ಲಿ ರೋಗರುಜಿನಗಳು ದೂರಾಗಲಿ ಎಂದು ಪ್ರಾರ್ಥಿಸಿ ಪ್ರಸಾದ ಪಡೆದ ಬಳಿಕ ಸಾಮೂಹಿಕ ರೊಟ್ಟಿ ಬೋಜನ ನಡೆಯುತ್ತದೆ.

ಇಂತಹದೊಂದು ಆಚರಣೆ ರೊಟ್ಟಿಹಬ್ಬವಾಗಿ ಈಗಲೂ ಮುಂದುವರಿದುಕೊಂಡು ಬಂದಿದ್ದು ಬಿಳಿಗಿರಿರಂಗನಬೆಟ್ಟದ ಮುತ್ತುಗದಗದ್ದೆ ಪೋಡಿನ ಸೋಲಿಗ ಜನಾಂಗದವರು ವರ್ಷಕ್ಕೊಮ್ಮೆ ಆಚರಣೆ ನಡೆಸುತ್ತಾರೆ. ಅಂದು ಹತ್ತಿರದಲ್ಲಿರುವ ತೊಂಡೆಹಣ್ಣು ಪೋಡಿಗೆ ತೆರಳಿ ಕುಂಬೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ತಾವು ಬೆಳೆದ ರಾಗಿಯಿಂದ ತಯಾರಿಸಿದ ರೊಟ್ಟಿಯನ್ನು ನೈವೇದ್ಯಕ್ಕೆ ಇಟ್ಟು ಪೂಜೆ ಸಲ್ಲಿಸಿ ದೇವರಲ್ಲಿ ಸ್ವೀಕರಿಸುವಂತೆಯೂ ಹಾಗೆಯೇ ಮಳೆ, ಬೆಳೆಯಾಗಿ ನಾಡು ಸುಭೀಕ್ಷೆ ಕಾಣುವಂತಾಗಲಿ ಎಂದು ಬೇಡಿಕೊಳ್ಳುತ್ತಾರೆ.

## ಶಾಲೆಗೆ ಹುಸಿ ಬಾಂಬ್ ಬೆದರಿಕೆ


☛ ಉದಯವಾಹಿನಿ ಚಿತ್ರ

• ಉದಯವಾಹಿನಿ ಹಾರೋಹಳ್ಳಿ

ತಾಲ್ಲೂಕಿನ ಕಗ್ಗಲೀಪುರ ಪೊಲೀಸ್ ಠಾಣೆ ವ್ಯಾಪ್ತಿಯ ಸೋಮನಹಳ್ಳಿ ಬಳಿಯ ಎಡಿಫೈ ಶಾಲೆಗೆ ಸೋಮವಾರ ತಡರಾತ್ರಿ ಬಾಂಬ್ ಬೆದರಿಕೆಯ ಇ- ಮೇಲ್ ಬಂದಿದೆ. ಬೆಳಗ್ಗೆ ಇ-ಮೇಲ್ ನೋಡಿದ ಶಾಲೆಯ ಸಿಬ್ಬಂದಿ ಈ ವಿಷಯವನ್ನು ಆಡಳಿತ ಮಂಡಳಿ ಗಮನಕ್ಕೆ ತಂದಿದೆ. ಶಾಲೆಯ ಆಡಳಿತ ಮಂಡಳಿ ಕಗ್ಗಲೀಪುರ ಪೊಲೀಸ್ ಠಾಣೆಗೆ ದೂರು ನೀಡಿದೆ.

ತಕ್ಷಣ ಬಾಂಬ್ ನಿಷ್ಕ್ರಿಯ ದಳ ಮತ್ತು ರಾಮನಗರ ಎಎಸ್‌ಪಿ ಸುರೇಶ್ ನೇತೃತ್ವದ ತಂಡ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು. ಆದರೆ, ಸ್ಥಳದಲ್ಲಿ ಏನೂ ದೊರೆಯಲಿಲ್ಲ. ಇದೊಂದು ಹುಸಿ ಬಾಂಬ್ ಬೆದರಿಕೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಎಲ್ಲಿಂದ ಮೇಲ್ ಮಾಡಲಾಗಿದೆ? ಯಾರು ಮೇಲ್ ಕಳಿಸಿದ್ದಾರೆ? ಮುಂತಾದ ಆಯಾಮಗಳಲ್ಲಿ ತನಿಖೆ ಕೈಗೊಳ್ಳಲಾಗಿದೆ' ಎಂದು ಪೊಲೀಸರು ತಿಳಿಸಿದ್ದಾರೆ.

## ಚರಂಡಿಗಳ ಮೇಲೆ ರಾರಾಜಿಸುತ್ತಿವೆ ಅನಧಿಕೃತ ಪೆಟ್ಟಿಗೆ ಅಂಗಡಿಗಳು

• ಉದಯವಾಹಿನಿ ಶಿಡ್ಲಘಟ್ಟ

ಚರಂಡಿ ಹಾಗೂ ಪಾದಚಾರಿ ಮಾರ್ಗದ ರಸ್ತೆಯ ಮೇಲೆ ಅಂಗಡಿ ಮಳಿಗೆಗಳನ್ನು ನಿರ್ಮಾಣ ಮಾಡಿದ್ದು, ವಾಹನ ಮತ್ತು ಜನರ ಸಂಚಾರಕ್ಕೆ ಅಡಚಣೆಯಾಗಿದೆ ಎಂದು ಸ್ಥಳೀಯರು ದೂರಿದ್ದಾರೆ.

ತಾಲ್ಲೂಕಿನ ದಿಬ್ಬೂರಹಳ್ಳಿ ಗ್ರಾಮದ ಸರ್ಕಲ್‌ನ ನಾಲ್ಕೂ ಮಾರ್ಗಗಳಲ್ಲಿ ಪುಟ್ ಪಾತ್ ಹಾಗೂ ಚರಂಡಿಯ ಮೇಲೆ ಅನಧೀಕೃತವಾಗಿ ಪೆಟ್ಟಿಗೆ ಅಂಗಡಿಗಳನ್ನು ತೆರೆದಿರುವುದಾಗಿ ಕಂಡುಬಂದಿದೆ. ಎಸ್ ಎಂ ವಿ ಕಾನ್ವೆಂಟ್ ಬಳಿಯಿಂದ ಸರ್ಕಲ್ ವರೆಗೂ ಇದ್ದ ಚರಂಡಿ ಇದೀಗ ಸರ್ಕಲ್ ಬಳಿ ಚರಂಡಿ ಹಾಗೂ ಪಾದಾಚಾರಿ ಮಾರ್ಗವನ್ನು ಮುಚ್ಚಿ ಪೆಟ್ಟಿಗೆ ಅಂಗಡಿಗಳನ್ನು ತೆರೆದಿದ್ದಾರೆ. ಮಳೆಗಾಲದಲ್ಲಿ ಅರ್ಧಕ್ಕೆ ಮುಚ್ಚಿರುವ ಚರಂಡಿಯ ನೀರು ಸಾರ್ವಜನಿಕರು ಓಡಾಡುವ ರಸ್ತೆಯ ಮೇಲೆ ಹರಿದು ಮನೆಗಳಿಗೆ ನುಗ್ಗುತ್ತವೆ. ಇದರಿಂದ ಸಾರ್ವಜನಿಕರಿಗೆ ಕಿರಿಕಿರಿ ಉಂಟಾಗುತ್ತಿದೆ, ಅಲ್ಲದೆ ಅಪಘಾತಗಳಿಗೆ ಎಡೆಮಾಡಿಕೊಟ್ಟಿದೆ ಎಂದರು.

ದಿಬ್ಬೂರಹಳ್ಳಿ ವೃತ್ತದಲ್ಲಿ ಶಿಡ್ಲಘಟ್ಟ ಮುಖ್ಯ ರಸ್ತೆ, ತಲಕಾಯಲಬೆಟ್ಟ ಮುಖ್ಯ ರಸ್ತೆ, ಚಿಂತಾಮಣಿ ಮುಖ್ಯ ರಸ್ತೆ, ಬಾಗೇಪಲ್ಲಿ ಮುಖ್ಯ ರಸ್ತೆಯ ಪಕ್ಕದ ಚರಂಡಿಗಳ ಮೇಲೆ ಅನಧಿಕೃತವಾಗಿ ಪೆಟ್ಟಿಗೆ ಅಂಗಡಿಗಳ ಕೆಳ ಭಾಗದಲ್ಲಿ ಚರಂಡಿ ಮುಚ್ಚಿರುವುದರಿಂದ ಮಳೆಯ ನೀರು ರಸ್ತೆಯ ಮೇಲೆ ಹರಿದು ಸಾರ್ವಜನಿಕರಿಗೆ, ವಾಹನಗಳಿಗೆ ಓಡಾಡಲೂ ತೊಂದರೆಯಾಗುತ್ತಿದೆ. ಬಲಾಢ್ಯರು ಸರ್ಕಾರಿ ಜಮೀನಿನ ಮೇಲೆ ಖಾಸಗಿ ಪೆಟ್ಟಿಗೆ ಅಂಗಡಿಗಳನ್ನು ನಿರ್ಮಿಸಿ ಬಾಡಿಗೆಗೆ ನೀಡಿರುತ್ತಾರೆ. ಅಂಗಡಿಗಳನ್ನು ತೆರವುಗೊಳಿಸಲು ಅಧಿಕಾರಿಗಳು ಇಲ್ಲಿಯವರೆಗೂ ಕ್ರಮ ಕೈಗೊಂಡಿಲ್ಲ ಎಂದು ಸಾರ್ವಜನಿಕರು ದೂರಿದರು.

ಚರಂಡಿಗಳು ಮುಚ್ಚಿರುವುದರಿಂದ ಮಳೆಯಿಂದ ಬಂದ ನೀರು ರಸ್ತೆಯಮೇಲೆ ಹರಿದು ಸಾರ್ವಜನಿಕರು ಓಡಾಡಲು ತುಂಬಾ ತೊಂದರೆಯಾಗುತ್ತಿದೆ. ದಿಬ್ಬೂರಹಳ್ಳಿ ವೃತ್ತದ ನಾಲ್ಕೂ ಕಡೆಯಲ್ಲೂ ಚರಂಡಿಗಳನ್ನು ಮುಚ್ಚಿ ಅದರ ಮೇಲೆ ಖಾಸಗಿ ಪೆಟ್ಟಿಗೆ ಅಂಗಡಿಗಳನ್ನು ನಿರ್ಮಾಣ ಮಾಡಿಕೊಂಡಿರುವುದರಿಂದ ಚರಂಡಿಯ ನೀರು ರಸ್ತೆಯ ಮೇಲೆ ಹರಿಯುತ್ತವೆ. ಪೆಟ್ಟಿಗೆ ಅಂಗಡಿಗಳನ್ನು ತೆರವುಗೊಳಿಸಿ ಚರಂಡಿಗಳ ಸ್ವಚ್ಛತೆಗೆ ಮುಂದಾಗಬೇಕು.
**– ನರಸಿಂಹಪ್ಪ, ಸ್ಥಳೀಯರು**


☛ ಉದಯವಾಹಿನಿ ಚಿತ್ರ

ದಿಬ್ಬೂರಹಳ್ಳಿ ಗ್ರಾಮದಲ್ಲಿ ಚರಂಡಿಗಳ ಮೇಲೆ ಪೆಟ್ಟಿಗೆ ಅಂಗಡಿಗಳು ನಿರ್ಮಿಸಿರುವುದು ನಮ್ಮ ಗಮನಕ್ಕೆ ಬಂದಿದೆ. ಮುಂದಿನ ವಾರದಲ್ಲಿ ನಾನು ಮತ್ತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಭೇಟಿನೀಡಿ ಸ್ಥಳ ಪರಿಶೀಲಿಸಿ ಪೆಟ್ಟಿಗೆ ಅಂಗಡಿಗಳನ್ನು ತೆರವುಗೊಳಿಸುವಂತೆ ನೋಟಿಸ್ ನೀಡುತ್ತೇವೆ. ತೆರವುಗೊಳಿಸಲು ನೊಟೀಸ್ ನೀಡಿ,ಆದಷ್ಟು ಬೇಗ ಕ್ರಮ ಜರುಗಿಸುತ್ತೇವೆ. **– ಶ್ರೀನಿವಾಸ್, ಸಹಾಯಕ ಕಾರ್ಯಪಾಲಕ ಎಂಜಿನಿಯರ್**

ದಿಬ್ಬೂರಹಳ್ಳಿ ಸರ್ಕಲ್‌ನ ಸುತ್ತಲೂ ಚರಂಡಿಗಳು ಸ್ವಚ್ಛತೆ ಮಾಡುವುದು ನಮ್ಮ ಜವಾಬ್ದಾರಿ, ಆದರೆ ಚರಂಡಿಗಳು ಮುಚ್ಚಿ ಅವುಗಳ ಮೇಲೆಯೇ ಅನಧಿಕೃತವಾಗಿ ಪೆಟ್ಟಿಗೆ ಅಂಗಡಿಗಳನ್ನು ತೆರದಿರುವುದರಿಂದ ಸ್ವಚ್ಛತೆ ಮಾಡಲು ಆಗಿರುವುದಿಲ್ಲ. ನಾವು ಅಂಗಡಿಗಳನ್ನು ತೆರವುಗೊಳಿಸಲು ಕೇಳಿದರೆ ಈ ಸ್ಥಳ ನಿಮಗೆ ಬರುವುದಿಲ್ಲ ಲೋಕೋಪಯೋಗಿ ಇಲಾಖೆಗೆ ಸಂಬಂದಿಸಿದೆ ಎನ್ನುತ್ತಾರೆ. ನಾವು ಈಗಾಗಲೇ ಲೋಕೋಪಯೋಗಿ ಇಲಾಖೆಗೆ ಮೌಖಿವಾಗಿ ತಿಳಿಸಿರುತ್ತೇವೆ.
**– ರಮೇಶ್, ಅಭಿವೃದ್ಧಿ ಅಧಿಕಾರಿ ದಿಬ್ಬೂರಹಳ್ಳಿ ಗ್ರಾ.ಪಂ**

## ಕಾರ್ಮಿಕರು ದುಷ್ಚಟಗಳಿಗೆ ಬಲಿಯಾಗಬಾರದು

• ಉದಯವಾಹಿನಿ ಬಾಗೇಪಲ್ಲಿ

ಕಾರ್ಮಿಕರು ದಿನಪೂರ್ತಿ ಕಷ್ಟಪಟ್ಟು ದುಡಿದ ಹಣದಿಂದ ಕಾರ್ಮಿಕರು ದುಶ್ಚಟಗಳಿಗೆ ಶ್ರಮವನ್ನ ಬಲಿ ಮಾಡಬೇಡಿ ಎಂದು ಹಿರಿಯ ವಕೀಲ ಹಾಗೂ ಕಾನೂನು ಸಲಹೆಗಾರ ಎಜಿ ಸುಧಾಕರ್ ಅವರು ಸಲಹೆ ನೀಡಿದರು.

ಪಟ್ಟಣದ ವೆಂಕಟೇಶ್ವರ ಚಿತ್ರಮಂದಿರ ಪಕ್ಕದಲ್ಲಿ ಇರುವ ದ್ವಾರಕಾ ಫಕ್ಷನ್ ಹಾಲ್‌ನಲ್ಲಿ ಭಾಗ್ಯನಗರ ಕಟ್ಟಡ ಕಾರ್ಮಿಕರ ಒಕ್ಕೂಟದ ಉದ್ಘಾಟನಾ ಹಾಗೂ ಮೇ ದಿನಾಚರಣೆ ಕಾರ್ಯಕ್ರಮವನ್ನು ಮಂಗಳವಾರ ಆಯೋಜನೆ ಮಾಡಲಾಗಿತ್ತು. ಈ ಕಾರ್ಯಕ್ರಮದ ಉದ್ಘಾಟನೆ ಮಾಡಿ ಮಾತನಾಡಿದ ಸಂಘದ ಕಾನೂನು ಸಲಹೆಗಾರ ಹಾಗೂ ಹಿರಿಯ ವಕೀಲ ಎಜಿ ಸುಧಾಕರ್, ದೇಶವನ್ನು ಕಟ್ಟುವಲ್ಲಿ ಕಾರ್ಮಿಕರ ಪಾತ್ರ ಬಹು ಮುಖ್ಯವಾದದ್ದು, ಕಾರ್ಮಿಕರಿಲ್ಲದ ದೇಶ ಅಭಿವೃದ್ಧಿ ಸಾಧ್ಯವಾಗುವುದಿಲ್ಲ. ಕಾರ್ಮಿಕ ಕಷ್ಟಪಟ್ಟು ದಿನಪೂರ್ತಿ ದುಡಿದಿದ್ದನ್ನು ಮದ್ಯ ವ್ಯಸನದಿಂದ, ಗುಟ್ಕಾದಂತಹ ಮಾದಕ ಪದಾರ್ಥಗಳಿಗೆ ದಾಸನಾಗಿ


☛ ಉದಯವಾಹಿನಿ ಚಿತ್ರ

ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಬೇಸರ ತರುತ್ತಿದೆ. ಹಾಗಾಗಿ ಯಾವುದೇ ಕಾರ್ಮಿಕನು ದುಶ್ಚಟಗಳಿಗೆ ಬಲಿಯಾಗಬಾರದು. ದುಷ್ಚಗಳಿಂದ ಯಾವುದೇ ರೀತಿ ಪ್ರಯೋಜನವಾಗುವುದಿಲ್ಲ, ಬದಲಾಗಿ ಆರೋಗ್ಯಕ್ಕೆ ಹಾನಿಕಾರವೇ ಜಾಸ್ತಿ . ಹಾಗಾಗಿ ಶ್ರಮಿಸಿದ ದುಡ್ಡನ್ನು ಮಕ್ಕಳ ಶೈಕ್ಷಣಿಕ, ಕುಟುಂಬದ ನಿರ್ವಹಣೆ ಸೇರಿದಂತೆ ಹಲವು ಒಳ್ಳೆಯ ಕೆಲಸಗಳಿಗೆ ಬಳಕೆ ಮಾಡಬೇಕು ಎಂದು ಸಲಹೆ ನೀಡಿದರು.

ಭಾಗ್ಯನಗರ ಕಟ್ಟಡ ಕಾರ್ಮಿಕ ಒಕ್ಕೂಟದ ಅಧ್ಯಕ್ಷ ಶಿವಕುಮಾರ್,ಉಪಾಧ್ಯಕ್ಷ ಚಿನ್ನಪ್ಪಯ್ಯ, ಗೌರವಾಧ್ಯಕ್ಷ ಸಿ.ಎಸ್ ವೆಂಕಟೇಶ್, ಕಾರ್ಯದರ್ಶಿ ನಯಾಜ್, ಜಂಟಿ ಕಾರ್ಯದರ್ಶಿ ವಿಶ್ವನಾಥ್,ಸದಸ್ಯರಾದ ಬಷೀರ್, ಚಲಪತಿ,ಮೂರ್ತಿ,ಮಂಜು,ಮಹಬೂಬ್ ಬಾಷಾ,ಮೋಹನ ಸೇರಿದಂತೆ ಹಲಾವರು ಮಂದಿ ಉಪಸ್ಥಿತರಿದ್ದರು.

**ನೋಂದಣಿ ಮಾಡಿಸಿ**

ಈ ವೇಳೆ ಬಾಗೇಪಲ್ಲಿ ವೃತ್ತದ ಕಾರ್ಮಿಕ ನಿರೀಕ್ಷಕ ಸತ್ತೀಶ್ ಮಾತನಾಡಿ, ಕಟ್ಟಡ ಕಾರ್ಮಿಕರು ಸರ್ಕಾರದ ಸೌಲಭ್ಯಗಳನ್ನು ಪಡೆಯಲು ತಪ್ಪದೆ ನೋಂದಣಿ ಮಾಡಿಸಿ ಕಾರ್ಮಿಕ ಕಾರ್ಡನ್ನು ಪಡೆಯಬೇಕು. ಸರಕಾರದಿಂದ ಕಾರ್ಮಿಕರ ಕುಟುಂಬಗಳಿಗೆ ವೈದ್ಯಕೀಯ, ಶೈಕ್ಷಣಿಕ,ವಿವಾಹ ಮಾಡಿಕೊಳ್ಳಲು ಸೇರಿದಂತೆ ಹಲವಾರು ಸೇವೆಗಳನ್ನು ಪಡೆಯಲು ಸಹಾಯ ಮಾಡುತ್ತದೆ. ಬಾಗೇಪಲ್ಲಿ ವೃತ್ತದ ವ್ಯಾಪ್ತಿಯಲ್ಲಿ ಸುಮಾರು 9 ಸಾವಿರದಷ್ಟು ಕಾರ್ಮಿಕರು ನೋಂದಣಿ ಮಾಡಿಕೊಂಡಿದ್ದಾರೆ. ಯಾವುದೇ ರೀತಿಯಲ್ಲಿ ನಕಲಿ ಕಾರ್ಡ್ ಗಳನ್ನು ಮಾಡಿಸಲು ಅವಕಾಶವಿಲ್ಲ. ಒಂದು ವೇಳೆ ಆ ರೀತಿ ನಕಲಿ ಕಾರ್ಮಿಕ ಕಾರ್ಡ್ ಗಳು ಪತ್ತೆಯಾದರೆ ಕೂಡಲೇ ರದ್ದು ಪಡಿಸಲಾಗುತ್ತದೆ ಎಂದರು.

## ಬೆಂಗಳೂರು ಬಳಿಕ ಕೋಲಾರದಲ್ಲೇ ಅಧಿಕ

• ಉದಯವಾಹಿನಿ ಕೋಲಾರ

ಏಪ್ರಿಲ್ ತಿಂಗಳಲ್ಲಿ ಒಂದೂ ಹನಿ ಮಳೆ ಕಾಣದ ಕೋಲಾರ ಜಿಲ್ಲೆಯಲ್ಲಿ ಮೇ ತಿಂಗಳಲ್ಲಿ ಈವರೆಗೆ ದಾಖಲೆಯ ಮಳೆಯಾಗಿದೆ. ಈ ತಿಂಗಳು ಈವರೆಗೆ 6.7 ಸೆ.ಮೀ (67 ಮಿ.ಮೀ) ಮಳೆಯಾಗಿದ್ದು, ಶೇ 176ರಷ್ಟು ಹೆಚ್ಚಳವಾಗಿದೆ. ಈ ಅವಧಿಯಲ್ಲಿ ಜಿಲ್ಲೆಯ ವಾಡಿಕೆ ಮಳೆ 2.4 ಸೆ.ಮೀ (24 ಮಿ.ಮೀ.).

ರಾಜ್ಯದಲ್ಲಿ ಈ ಅವಧಿಯಲ್ಲಿ ಬೆಂಗಳೂರು ನಗರ (7.7 ಸೆ.ಮೀ) ಬಳಿಕ ಕೋಲಾರ ಜಿಲ್ಲೆಯಲ್ಲಿ ಅತ್ಯಧಿಕ ಮಳೆಯಾಗಿದ್ದು, ಬಿಸಿಲ ಧಗೆಗೆ ಕಂಗೆಟ್ಟಿದ್ದ ರೈತರ ಮೊಗದಲ್ಲಿ ಮಂದಹಾಸ ಮೂಡಿಸಿದೆ.

ಈ ವರ್ಷ ಜನವರಿಯಿಂದ ಮೇ 13ರವರೆಗೆ ಜಿಲ್ಲೆಯಲ್ಲಿ ಒಟ್ಟು 7.1 ಸೆ.ಮೀ (71 ಮಿ.ಮೀ) ಮಳೆಯಾಗಿದೆ. ಈ ಅವಧಿಯ ವಾಡಿಕೆ ಮಳೆ ಶೇ 6.9 ಸೆ.ಮೀ (69 ಮಿ.ಮೀ.) ಎಂದು ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮೂಲಗಳು ತಿಳಿಸಿವೆ.

ಕಳೆದ ಒಂದು ವಾರದಿಂದ ಜಿಲ್ಲೆಯಲ್ಲಿ ಮಳೆ ಆಗುತ್ತಲೇ ಇದೆ. ಮುಳಬಾಗಿಲು ತಾಲ್ಲೂಕಿನ ಹನುಮನಹಳ್ಳಿಯಲ್ಲಿ 13 ಸೆ.ಮೀ ಮಳೆಯಾಗಿತ್ತು.


☛ ಉದಯವಾಹಿನಿ ಚಿತ್ರ

ಒಣಗುತ್ತಿದ್ದ ಕೆರೆ ಕಟ್ಟೆಗಳಿಗೆ ಇದರಿಂದ ಮತ್ತೆ ಜೀವಕಳೆ ಬಂದಿದೆ. ಬಿರು ಬಿಸಲಿನಿಂದ ಹೈರಾಣಾಗಿದ್ದ ಜನರಿಗೂ ಮಳೆ ತಂಪೆರೆದಿದೆ. ಪ್ರಾಣಿ, ಪಕ್ಷಿಗಳಿಗೆ ನೀರಿನ ಕೊರತೆ ನೀಗಿಸಿದೆ. ಕೆಲವು ಭಾಗದಲ್ಲಿ ಮಳೆಯಾಶ್ರಿತ ಬೆಳೆ ಬೆಳೆಯಲು ರೈತರು ಭೂಮಿಯನ್ನು ಹದ ಮಾಡುವಲ್ಲಿ ನಿರತರಾಗಿದ್ದಾರೆ. ಇನ್ನು ಕೆಲವರು ಮುಂಗಾರು ಹಂಗಾಮಿಗೆ ಜಮೀನು ಸಿದ್ಧಪಡಿಸಿಕೊಳ್ಳುತ್ತಿದ್ದಾರೆ. ಶ್ರೀನಿವಾಸಪುರದಲ್ಲಿ ರೈತರು ಸಂಪ್ರದಾಯದಂತೆ ಹೊನ್ನೇರು ಕಟ್ಟಿ ಜಮೀನು ಹಾಗೂ ಎತ್ತುಗಳಿಗೆ ಪೂಜೆ ಸಲ್ಲಿಸಿದ್ದಾರೆ.

## ರೈತ ಸಂಘದ ವತಿಯಿಂದ ತಹಶೀಲ್ದಾರರಿಗೆ ಅಭಿನಂದನೆ

• ಉದಯವಾಹಿನಿ ಬಾಗೇಪಲ್ಲಿ

ತಾಲೂಕಿನ ಕಸಬಾ ಹೋಬಳಿ ಯಲ್ಲಂಪಲ್ಲಿ ಗ್ರಾಮದ ಸರ್ವೇ ನಂ.144 ರಲ್ಲಿ 9 ಎಕರೆ 13 ಗುಂಟೆ ಸರಕಾರಿ ಜಮೀನ ಮೂಲಕ ಹತ್ತಾರು ರೈತ ಕುಟುಂಬಗಳು ರಸ್ತೆ ಮಾರ್ಗವನ್ನು ಮಾಡಿಕೊಂಡಿದ್ದರು. ಆದರೆ ಖಾಸಗಿ ವ್ಯಕ್ತಿಯೊಬ್ಬ ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡು ರೈತರ ಜಮೀನುಗಳಿಗೆ ಇದ್ದ ರಸ್ತೆ ಮಾರ್ಗಕ್ಕೆ ಮಣ್ಣಿನ ರಾಶಿ ಸುರಿದು ಅಡ್ಡಿಪಡಿಸಿದ್ದರು.

**ರೈತರ ಸಮಸ್ಯೆ ಪರಿಹಾರ,**

ಈ ಬಗ್ಗೆ ಇತ್ತೀಚೆಗೆ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಪದಾಧಿಕಾರಿಗಳು ಸಂತ್ರಸ್ತ ರೈತರೊಂದಿಗೆ ತಹಶೀಲ್ದಾರರಿಗೆ ಮನವಿ ಸಲ್ಲಿಸಿದ್ದರು. ರೈತರ ಮನವಿಗೆ ಸ್ಪಂದಿಸಿದ ತಹಶೀಲ್ದಾರ್ ಪ್ರಾಶಾಂತ್ ಕೆ ಪಾಟೀಲರು ಕಂದಾಯ ಇಲಾಖೆ ಅಧಿಕಾರಿಗಳಿಗೆ


☛ ಉದಯವಾಹಿನಿ ಚಿತ್ರ

ನಿರ್ದೇಶನ ನೀಡಿ 24 ಗಂಟೆಯೊಳಗೆ ಪರಿಹಾರ ಮಾಡಿಕೊಟ್ಟಿರುತ್ತಾರೆ. ಇದರಿಂದಾಗಿ ರೈತ ಸಂಘದ ಪದಾಧಿಕಾರಿಗಳು ಹತ್ತು ವರ್ಷಗಳಿಗೂ ಹೆಚ್ಚು ಕಾಲದ ಸಮಸ್ಯೆಗೆ ಪರಿಹರಿಸಿದ್ದಕ್ಕಾಗಿ ತಹಶೀಲ್ದಾರ್ ಪ್ರಶಾಂತ್ ಕೆ ಪಾಟೀಲರಿಗೆ ಕೃತಜ್ಞತೆ ಸಲ್ಲಿಸಿ,ಸನ್ಮಾನ ಮಾಡಿ ಅಭಿನಂದನೆ ಸಲ್ಲಿಸಿದರು. ಈ ಸಂಧರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ತಾಲ್ಲೂಕು ಅಧ್ಯಕ್ಷ ಗೋವಿಂದರೆಡ್ಡಿ ,ರೈತ ಆನಂದ್ ಮತ್ತಿತರರು ಉಪಸ್ಥಿತರಿದ್ದರು.

## ಪೂರ್ವ ಮುಂಗಾರು: ಭೂಮಿ ಹದಗೊಳಿಸುವ ಕಾರ್ಯ ಚುರುಕು

• ಉದಯವಾಹಿನಿ ಹಳಿಯಾಳ

ತಾಲ್ಲೂಕಿನಾದ್ಯಂತ ಕಳೆದ ಕೆಲ ದಿನಗಳಿಂದ ಸಾಯಂಕಾಲ ನಿರಂತರ ಪೂರ್ವ ಮುಂಗಾರು ಮಳೆ ಬಿದ್ದ ಪರಿಣಾಮ ರೈತರಿಗೆ ಬಿತ್ತನೆಗಾಗಿ ಜಮೀನು ಹದ ಮಾಡಲು ಅನುಕೂಲವಾಗಿದೆ. ಗ್ರಾಮೀಣ ಭಾಗದ ಹಲವೆಡೆ ರೈತರು ಗದ್ದೆಗಳಲ್ಲಿ ಜಮೀನು ಹದ ಮಾಡುವ ಸಿದ್ಧತೆಯಲ್ಲಿ ತೊಡಗಿಕೊಂಡಿದ್ದು ಕಾಣುತ್ತಿದೆ.

ತಾಲ್ಲೂಕಿನಲ್ಲಿ ಒಟ್ಟು 21 ಸಾವಿರ ಹೆಕ್ಟೇರ್ ಕೃಷಿ ಜಮೀನಿದ್ದು, ಇವುಗಳಲ್ಲಿ 5,400 ಹೆಕ್ಟೇರ್ ಜಮೀನಿನಲ್ಲಿ ಭತ್ತ, 3,100 ಹೆಕ್ಟೇರ್ ಜಮೀನಿನಲ್ಲಿ ಗೋವಿನ ಜೋಳ, 12,200 ಹೆಕ್ಟೇರ್ ಜಮೀನಿನಲ್ಲಿ ಕಬ್ಬು, 300 ಹೆಕ್ಟೇರ್ ಜಮೀನಿನಲ್ಲಿ ಹತ್ತಿ ಬೆಳೆಸಲಾಗುತ್ತದೆ. ಕೃಷಿ ಇಲಾಖೆಯಿಂದ ಅಧಿಕೃತವಾಗಿ ರಸಗೊಬ್ಬರ ಮಾರಾಟಕ್ಕೆ ಪರವಾನಗಿ ಪಡೆದುಕೊಂಡವರು ರಸಗೊಬ್ಬರವನ್ನು ಮಾರಾಟಕ್ಕೆ ದಾಸ್ತಾನು ಇಡುತ್ತಿದ್ದಾರೆ. ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳಾದ ಮುರ್ಕವಾಡ, ಸಾಂಬ್ರಾಣಿ, ಹಳಿಯಾಳ ಮತ್ತು ದಾಂಡೇಲಿಯಲ್ಲಿ ರಿಯಾಯಿತಿ ದರದಲ್ಲಿ ಭತ ಹಾಗೂ ಮೆಕ್ಕೆಜೋಳ ಬೀಜಗಳನ್ನು ವಿತರಿಸಲಾಗುವುದು. ಹತ್ತಿ ಬೀಜಗಳನ್ನು ರೈತರು ಮಾರುಕಟ್ಟೆಯಲ್ಲಿ ಪಡೆದುಕೊಳ್ಳಬೇಕು. ಈಗಾಗಲೇ ಬಿದ್ದ ಮಳೆಯಿಂದ ರೈತರು ಜಮೀನನ್ನು ಹದಗೊಳಿಸಿ ಒಣ ಬಿತ್ತನೆ ಮಾಡಲು ಅನುಕೂಲಕರವಾಗಿದೆ' ಎಂದು ಸಹಾಯಕ ಕೃಷಿ ನಿರ್ದೇಶಕ ಪಿ.ಐ. ಮಾನೆ ತಿಳಿಸಿದರು. ಕಬ್ಬನ್ನು ಅಲ್ಲಲ್ಲಿ ಬೆಳೆಸಲಾಗಿದ್ದು ಪ್ರಸಕ್ತ ಸಾಲಿನಲ್ಲಿ ತೀವ್ರ ತರ ಬಿಸಿಲಿನ ಪರಿಣಾಮವಾಗಿ ಈಗಾಗಲೇ ಬೆಳೆದ ಕಬ್ಬಿಗೆ ನೀರಿನ ಕೊರತೆ ಉಂಟಾಗಿ ಬೆಳೆ ಕುಂಠಿತವಾಗಿದೆ. ರೈತರು ಕಬ್ಬಿನಲ್ಲಿಯ ಕಳೆ, ಕಸ ತೆಗೆದು ರಸಗೊಬ್ಬರ ಕೊಟ್ಟು ಕಬ್ಬಿನ ಬೆಳೆ ಸುಧಾರಿಸಲು ಸಾಧ್ಯವಾಗುತ್ತದೆ' ಎಂದರು.

ಎಂಟು ಎಕರೆಗಳಷ್ಟು ಜಮೀನು ಹೊಂದಿದ್ದು ಪ್ರತಿ ವರ್ಷ ಭತ್ತ, ಹತ್ತಿ, ಗೋವಿನ ಜೋಳವನ್ನು ಬೆಳೆಯುತ್ತೇನೆ. ನಾಲ್ಕು ದಿನಗಳಿಂದ ಬಿದ್ದ ಮಳೆಯ ಪರಿಣಾಮವಾಗಿ ಜಮೀನನ್ನು ಬಿತ್ತನೆಗೆ ಹದಗೊಳಿಸುತ್ತಿದ್ದೇನೆ' ಎಂದು ಜಮೀನಿನಲ್ಲಿ ರಂಟೆ ಹೊಡೆಯುತ್ತ ಕೃಷಿ ಕಾಯಕದಲ್ಲಿ ತೊಡಗಿದ್ದ ಕರ್ಲಕಟ್ಟಾ ಗ್ರಾಮದ ಕೃಷ್ಣಾ ಚಂದ್ರು ಗೌಡ ಸಂತಸದಿಂದ ಪ್ರತಿಕ್ರಿಯಿಸಿದರು.

# 201 ಕೆರೆಗಳ ಮೇಲೆ ಭೂ ಮಾಫಿಯಾ ಕಣ್ಣು

## ಕೆರೆಗಳ ಜಮೀನು ಭೂ ಮಾಫಿಯಾಗೆ ಬಲಿಯಾಗಿ ಕೆರೆಗಳಿಗೆ ಭದ್ರತೆಯೂ ಇಲ್ಲದೆ, ನುಂಗುಬಾಕರಿಗೆ ಸರಕಾರದ ಭಯವೂ ಇಲ್ಲವಾಗಿದೆ

• ಉದಯವಾಹಿನಿ ಕೊರಟಗೆರೆ

ಬಯಲುಸೀಮೆ ಪ್ರದೇಶವಾದ ಕೊರಟಗೆರೆ ಕ್ಷೇತ್ರಕ್ಕೆ ನೀರಾವರಿ ಯೋಜನೆಗಳೇ ಇನ್ನೂ ಗಗನ ಕುಸುಮ. ಎತ್ತಿನಹೊಳೆ ಮತ್ತು ಹೇಮಾವತಿ ಯೋಜನೆಯ ಕಾಮಗಾರಿಗಳೇ ಮುಗಿಯಲು ಇನ್ನೂ ವರ್ಷಗಳೇ ಬೇಕಾಗಬಹುದು. 206 ಕೆರೆಗಳಿಗೆ ಪುನಶ್ಚೇತನ ಮತ್ತು ಅಭಿವೃದ್ಧಿ ಇಲ್ಲದೇ ಸಾವಿರಾರು ಎಕರೆ ಕೆರೆಗಳ ಜಮೀನು ಭೂ ಮಾಫಿಯಾಗೆ ಬಲಿಯಾಗಿ ಕೆರೆಗಳಿಗೆ ಭದ್ರತೆಯೂ ಇಲ್ಲದೆ, ನುಂಗುಬಾಕರಿಗೆ ಸರಕಾರದ ಭಯವೂ ಇಲ್ಲವಾಗಿದೆ.

ಕೊರಟಗೆರೆ ತಾಲ್ಲೂಕಿನ ಸಣ್ಣನೀರಾವರಿಯ ಇಲಾಖೆ, ಕಂದಾಯ ಇಲಾಖೆ ಮತ್ತು 25ಗ್ರಾಪಂ ಸೇರಿ ಒಟ್ಟು 208 ಕೆರೆಗಳಿವೆ. ತೀತಾ ಜಲಾಶಯ, ಮಾವತ್ತೂರು ಕೆರೆ ಮತ್ತು ಜೆಟ್ಟಿಅಗ್ರಹಾರ ಕೆರೆಗಳು ಬಿಟ್ಟರೇ ಉಳಿದ 203 ಕೆರೆಗಳಲ್ಲಿ ನೀರಿಲ್ಲದೇ ಸಂಪೂರ್ಣ ಖಾಲಿಯಾಗಿ ಅಂತರ್ಜಲ ಮಟ್ಟವು ಪಾತಾಳಕ್ಕೆ ಕುಸಿದು ರೈತಾಪಿವರ್ಗ ತಮ್ಮ ಅಡಿಕೆ ಮತ್ತು ತೆಂಗು ಉಳಿಸಿಕೊಳ್ಳಲು ಹರಸಾಹಸ ಪಡುತ್ತಿರುವ ಘಟನೆ ನಡೆದಿದೆ. ಪುರಾತನ ಕಾಲದಲ್ಲಿ ನಮ್ಮ ಹಿರಿಯರು ಕಟ್ಟಿರುವ ಕೆರೆಕಟ್ಟೆಗಳ ಏರಿ, ತೂಬು ಸಂಪೂರ್ಣ ಶಿಥಿಲವಾಗಿ ಬಿರುಕುಬಿಟ್ಟಿವೆ. ಕೆರೆಗಳ ತುಂಬೆಲ್ಲ ಜಾಲಿಗಿಡ ಮತ್ತು ಬೇಲಿಗಳು ಬೆಳೆದು ಕೆರೆಯೇ ಮಾಯವಾಗಿವೆ. ಕೆರೆಗಳ ಎಡ ಬಲ ನಾಲೆಗಳು ಒತ್ತುವರಿಯಾಗಿ ಕಾಲುವೆಗಳೇ ಕಾಣೆಯಾಗಿವೆ.

ಬರಗಾಲದಿಂದ ಅಂತರ್ಜಲ ಮಟ್ಟ ಕುಸಿತ ಕಂಡಿದೆ. ಕೆರೆಗಳ ಒತ್ತುವರಿ ತೆರವಿಗೆ ಕ್ರಮ ಆಗಿವೆ. ಮೇವು ಮತ್ತು ನೀರಿಗೆ ವಿಶೇಷ ಆಧ್ಯತೆ ನೀಡಲಾಗಿದೆ. ಕೆರೆಗಳ ಅಭಿವೃದ್ಧಿ ಅಮೃತ್ ಮತ್ತು ನರೇಗಾ ಯೋಜನೆ ಸಹಕಾರಿ. ಸರಕಾರದ ಪರವಾನಗಿ ಪಡೆಯದೇ ಮಣ್ಣು ತೆಗೆದರೆ ಕ್ರಮ ಆಗುತ್ತದೆ. ಕೊರಟಗೆರೆಯಲ್ಲಿ ಈಗಾಗಲೇ 10 ಕೆರೆಗಳ ಅಳತೆ ಮಾಡಿ ಒತ್ತುವರಿ ತೆರವು ಮಾಡಲಾಗಿದೆ. **–ಮಂಜುನಾಥ.ಕೆ. ಕೊರಟಗೆರೆ ತಹಶೀಲ್ದಾರ್**


☛ ಉದಯವಾಹಿನಿ ಚಿತ್ರ

ಸಣ್ಣ ನೀರಾವರಿ ಇಲಾಖೆಯ 45 ಕೆರೆಗಳು 2300 ಹೆಕ್ಟೇರ್ ವಿಸ್ತೀರ್ಣ ಹೊಂದಿದೆ ಮತ್ತು ಕಂದಾಯ ಇಲಾಖೆಯ 79 ಕೆರೆಗಳ 1250ಹೇಕ್ಟರ್ ಭೂ ವಿಸ್ತೀರ್ಣವಿದೆ. ಕಂದಾಯ ಮತ್ತು ಸಣ್ಣ ನೀರಾವರಿ ಇಲಾಖೆಯ 124ಕೆರೆಗಳ ಅಭಿವೃದ್ದಿಗೆ ಸರಕಾರ ಮತ್ತು ಇಲಾಖೆಗಳ ಬಳಿ ಅನುದಾನವೇ ಇಲ್ಲದಾದೆ. 5 ಲಕ್ಷರಿಂದ 10 ಲಕ್ಷ ಅನುಧಾನ ಕೆರೆಏರಿ, ತೂಬು, ಕಾಲುವೆ, ಜಂಗಲ್ ಕ್ಲೀನ್ ಮತ್ತು ಹೂಳು ತೆಗೆಯಲು ಆಗುವುದಿಲ್ಲ. ಕೆರೆಗಳ ಪುನಶ್ಚೇತನ ಮತ್ತು ಅಭಿವೃದ್ದಿಗೆ ಕನಿಷ್ಠ 40 ರಿಂದ 50 ಲಕ್ಷ ಅನುದಾನ ಬೇಕಿದೆ. 40ಹೇಕ್ಟರ್ ವಿಸ್ತೀರ್ಣಕ್ಕಿಂತ ಕಡಿಮೆ ಇರುವ 24ಗ್ರಾಪಂಯ 82ಕೆರೆಗಳು ಸಹ ಅಭಿವೃದ್ಧಿ ಇಲ್ಲದೇ ದುಸ್ಥಿತಿಗೆ ತಲುಪಿವೆ. ನರೇಗಾ ಯೋಜನೆಯಡಿ ಕೆರೆಯ ಅಭಿವೃದ್ದಿಗೆ ಅನುಧಾನ ಲಭ್ಯವಿದ್ರು ಸಹ ತಾಪಂ ಇಓ, ಗ್ರಾಪಂ ಪಿಡಿಓ ಬಳಸಿಕೊಳ್ಳುವಲ್ಲಿ ವಿಫಲ. ಗ್ರಾಪಂ ಅಧ್ಯಕ್ಷರು ಮತ್ತು ಸದಸ್ಯರೇ ತಮ್ಮ ಅನುಕೂಲಕ್ಕೆ ತಕ್ಕಂತೆ ಮಣ್ಣಿನ ಕೆಲಸ ಮಾಡಿಸಿಕೊಂಡು ಹಣ ಬಿಡುಗಡೆ ಮಾಡಿಸಿಕೊಳ್ತಾರೇ. ಜಿಪಂ ಸಿಇಓ ನೇತೃತ್ವ ವಹಿಸಿ ಪ್ರತಿವರ್ಷ 5ಕೆರೆಗಳಿಗೆ ಅನುಧಾನ ಮೀಸಲಿಟ್ಟು ಕಾಮಗಾರಿ ನಡೆಸಿದರೇ ಅಭಿವೃದ್ದಿ ತಾನಾಗಿಯೇ ಆಗಲಿದೆ.

**39ಕೆರೆಗಳ ಪುನಶ್ಚೇತನ ಅಗತ್ಯ**

26ಸಾವಿರ ಕೋಟಿ ಮೌಲ್ಯದ ಎತ್ತಿನಹೊಳೆ ಯೋಜನೆಯು ಬಯಲುಸೀಮೆ ರೈತರಿಗೆ ವರದಾನವು ಹೌದು. ಎತ್ತಿನಹೊಳೆ ಯೋಜನೆಯ ಕಾಮಗಾರಿ ಮುಗಿಯುವ ಮುನ್ನವೇ 39ಕೆರೆಗಳ ಪುನಶ್ಚೇತನ ಮತ್ತು ಅಭಿವೃದ್ಧಿ ಅಗತ್ಯ. ಕೆರೆಯಲ್ಲಿನ ಏರಿ, ತೂಬು, ಕಾಲುವೆ, ಜಂಗಲ್ ಸ್ವಚ್ಛ ಮಾಡದೇ ನೀರು ಬಿಟ್ಟರೂ ಪ್ರಯೋಜನ ಇಲ್ಲ. ಎತ್ತಿನಹೊಳೆ ಯೋಜನಾ ಅಧಿಕಾರಿವರ್ಗ ಕೊರಟಗೆರೆಯಲ್ಲಿ ಗುರುತಿಸಿರುವ 39ಕೆರೆಗಳ ಅಭಿವೃದ್ದಿಗೆ ಪ್ರಥಮ ಆಧ್ಯತೆ ನೀಡಬೇಕಿದೆ.

ಎಸ್ಟೇಟ್ ಮಾಲೀಕರ ಹಾವಳಿಯಿಂದ ಕೆರೆ ಕಟ್ಟೆಗಳ ಭೂಮಿ ಅರ್ಧದಷ್ಟು ಮಾಯ ಆಗಿವೆ. ಕೆರೆಗಳ ಅಭಿವೃದ್ದಿಗೆ ರಾಜ್ಯ ಮತ್ತು ಕೇಂದ್ರ ಸರಕಾರದ ವಿಶೇಷ ಅನುಧಾನ ಅತ್ಯಗತ್ಯ. ಎತ್ತಿನಹೊಳೆ ಯೋಜನೆಯ ನೀರು ಹರಿಯುವ ಮುನ್ನವೇ ಕೆರೆಗಳ ಪುನಶ್ಚೇತನ ಅತ್ಯಾವಶ್ಯಕ. ಜಿಪಂ ಸಿಇಓ ಕೆರೆಗಳ ಅಭಿವೃದ್ದಿಗೆ ನರೇಗಾ ಯೋಜನೆಯಡಿ ವಿಶೇಷವಾದ ಯೋಜನೆ ರೂಪಿಸುವ ಅವಶ್ಯಕತೆ ಇದೆ. **–ಸಿದ್ದರಾಜು, ಕೊರಟಗೆರೆ ರೈತಸಂಘದ ಅಧ್ಯಕ್ಷ**



## ಮಿನಿ ನ್ಯೂಸ್

### ಭಾರಿ ಮಳೆ: ಹೆದ್ದಾರಿ ಜಲಾವೃತ

• ಉದಯವಾಹಿನಿ ಶ್ರೀರಂಗಪಟ್ಟಣ

ಪಟ್ಟಣ ಮತ್ತು ಆಸುಪಾಸಿನಲ್ಲಿ ಮುಂಜಾನೆ ಧಾರಾಕಾರ ಮಳೆ ಸುರಿಯಿತು. ಮುಂಜಾನೆ 3 ಗಂಟೆಯಿಂದ 5.30ರವರೆಗೆ ನಿರಂತರವಾಗಿ ಮಳೆ ಸುರಿದ ಪರಿಣಾಮ ಪಟ್ಟಣದ ಚೆಕ್‌ಪೋಸ್ಟ್ ಬಳಿ ರಾಜ್ಯ ಹೆದ್ದಾರಿ ಜಲಾವೃತವಾಯಿತು. ಹೆದ್ದಾರಿ ಅಕ್ಷರಶಃ ಕೆರೆಯಂತಾಗಿದ್ದು, ಮಂಡಿಯುದ್ದ ನೀರು ನಿಂತಿತ್ತು.


☛ ಉದಯವಾಹಿನಿ ಚಿತ್ರ

ನೀರಿನಲ್ಲೇ ವಾಹನಗಳು ಸಂಚರಿಸಿದವು. ದ್ವಿಚಕ್ರ ವಾಹನಗಳ ಸವಾರರು ಪಕ್ಕದ ರಸ್ತೆಯಲ್ಲಿ ಸಂಚರಿಸಿದವು. ಹೆದ್ದಾರಿಗೆ ಹೊಂದಿಕೊಂಡಿರುವ ಬಾಬು ಜಗಜೀವನರಾಂ ಭವನದ ಬಳಿಯ ಎಂ.ಕೆ. ರೂಮ್ಸ್ ಹೆಸರಿನ ರೆಸಾರ್ಟ್ ಒಳಗೆ ಎರಡು ಅಡಿಗಳಷ್ಟು ನೀರು ನಿಂತಿತ್ತು.

ನೀರು ಹರಿದು ಹೋಗುವ ಕೊಳವೆ ಕಟ್ಟಿಕೊಂಡಿದ್ದರಿಂದ ಹೆದ್ದಾರಿಯಲ್ಲಿ ನೀರು ನಿಂತಿತ್ತು. ನೀರನ್ನು ಖಾಲಿ ಮಾಡಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಎಂ. ರಾಜಣ್ಣ ತಿಳಿಸಿದರು.

ತಾಲ್ಲೂಕಿನಾದ್ಯಂತ ಉತ್ತಮ ಮಳೆಯಾಗಿದ್ದು, ಹಳ್ಳ ಕೊಳ್ಳಗಳಲ್ಲಿ ನೀರು ಹರಿದಿದೆ. ಹಳ್ಳಗಳು ಮತ್ತು ಕೃಷಿ ಭೂಮಿಯಿಂದ ಕಾವೇರಿ ನದಿಗೆ ನೀರು ಹರಿದು ಬಂದಿದ್ದು, ನದಿಯ ನೀರು ಕೆಂಬಣ್ಣಕ್ಕೆ ತಿರುಗಿತ್ತು. ಪಟ್ಟಣದ ಬೂದಿಗುಂಡಿ ಬಡಾವಣೆಯಲ್ಲಿ ತಗ್ಗು ಪ್ರದೇಶದ ಕೆಲವು ಮನೆಗಳಿಗೆ ನೀರು ನುಗ್ಗಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ.

### ಕಾಡಾನೆಗಳನ್ನು ಸೆರೆ ಹಿಡಿದು ರೇಡಿಯೋ ಕಾಲರ್ ಅಳವಡಿಸುವ ಕಾರ್ಯಾಚರಣೆ

• ಉದಯವಾಹಿನಿ ಮಡಿಕೇರಿ

ವಿರಾಜಪೇಟೆ ವಿಭಾಗದ ತಿತಿಮತಿ ವಲಯದ ವ್ಯಾಪ್ತಿಗೆ ಒಳಪಡುವ ಬಾಡಗ ಬಾಣಂಗಾಲ ಗ್ರಾಮದ ಎಲಿಕಲ್ ಎಸ್ಟೇಟ್‌ಗೆ (ಬಿಬಿಟಿಸಿ) ಒಳಪಡುವ ಬಾಡಗ ಬಾಣಂಗಾಲ ಕಾಫಿ ಎಸ್ಟೇಟ್ ಹಾಗೂ ಸುತ್ತಮುತ್ತಲಿನ ತೋಟಗಳಲ್ಲಿ ಇರುವ 3 ಕಾಡಾನೆಗಳನ್ನು ಸೆರೆ ಹಿಡಿದು ರೇಡಿಯೋ ಕಾಲರ್ ಅಳವಡಿಸುವ ಕಾರ್ಯಾಚರಣೆ ಮೇ, 14 ರಿಂದ ಪ್ರಾರಂಭವಾಗುತ್ತಿರುವುದರಿಂದ ಬಾಡಗ ಬಾಣಂಗಾಲ, ಕೊಡಗು ಶ್ರೀರಂಗಪಟ್ಟಣ, ಮೇಕೂರು ಹೊಸ್ಕೇರಿ, ಮಾಲ್ದಾರೆ, ಚೆನ್ನಯ್ಯನಕೋಟೆ, ಕರಡಿಗೋಡು, ಪುಲಿಯೇರಿ, ಹೊಸೂರು ಮತ್ತು ಇಂಜಿಲಗೆರೆ ಗ್ರಾಮಗಳ ಸಾರ್ವಜನಿಕರು, ತೋಟದ ಮಾಲಿಕರು, ಕಾರ್ಮಿಕರು ಹಾಗೂ ಶಾಲಾ ಮಕ್ಕಳು ಜಾಗರೂಕತೆಯಿಂದ ಇರಬೇಕಾಗಿ ಹಾಗೂ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಕಾರ್ಯಾಚರಣೆ ಪೂರ್ಣಗೊಳಿಸಲು ಸಹಕಾರ ನೀಡುವಂತೆ ಕೋರಿದೆ.

ವಲಯ ಅರಣ್ಯಾಧಿಕಾರಿ ತಿತಿಮತಿ ವಲಯ ದೂ.ಸಂ. 7483920018, ಉಪ ವಲಯ ಅರಣ್ಯಾಧಿಕಾರಿ, ಚೆನ್ನಂಗಿ ಉಪ ವಲಯ 9901242528 ನ್ನು ಸಂಪರ್ಕಿಸಬಹುದು ಎಂದು ವಿರಾಜಪೇಟೆ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಅವರು ತಿಳಿಸಿದ್ದಾರೆ.

### ನಟಿ ಸನ್ನಿ ಲಿಯೋನ್‌ಗೆ ಬರ್ತಡೇ ಸಂಭ್ರಮ: ಭರ್ಜರಿ ಸೆಲೆಬ್ರೇಷನ್

• ಉದಯವಾಹಿನಿ ಮಂಡ್ಯ



☛ ಉದಯವಾಹಿನಿ ಚಿತ್ರ

ಪಡ್ಡೆ ಹೈಕಳ ಹಾಟ್ ಫೇವರೇಟ್ ಸನ್ನಿಲಿಯೋನ್ ಯಾರಿಗೆ ತಾನೆ ಗೊತ್ತಿಲ್ಲ ಹೇಳಿ. ಅದೆಷ್ಟೋ ಜನ ಆಕೆಯನ್ನ ಹಾಡಿ ಹೊಗಳಿದರೆ, ಮತ್ತೊಂದಷ್ಟು ಜನ ಆಕೆ ನೀಲಿ ಚಿತ್ರದ ತಾರೆ ಅಂತ ಮೂಗು ಮುರಿತಾರೆ. ಆದರೆ ಇಲ್ಲೊಂದು ಗ್ರಾಮದ ಯುವಕರಿಗೆ ಸನ್ನಿ ಅಂದರೆ ಪಂಚ ಪ್ರಾಣ ಹೀಗಾಗಿ ನೆಚ್ಚಿನ ನಟಿಯ ಜನ್ಮದಿನವನ್ನು ಅತ್ಯಂತ ಸಂಭ್ರಮ ಸಡಗರದಿಂದ ಆಚರಿಸಿದ್ದಾರೆ.

ಹೌದು, ಖ್ಯಾತ ನಟಿ ಸನ್ನಿಲಿಯೋನ್ ಎಂದರೆ ಮಂಡ್ಯ ಜಿಲ್ಲೆಯ ಕಾರ್ಕಳ್ಳಿ ಗ್ರಾಮದ ಯುವಕರಿಗೆ ತುಂಬಾ ಅಚ್ಚುಮೆಚ್ಚು. ಹೀಗಾಗಿ ಆಕೆಯ ಜನ್ಮದಿನವನ್ನು ಗ್ರಾಮದ ಸನ್ನಿ ಬಾಯ್ಸ್ ಯುವಕರು ಅತ್ಯಂತ ಸಂಭ್ರಮದಿಂದ ಆಚರಿಸಿದ್ದಾರೆ. ಗ್ರಾಮದ ಯುವಕರೆಲ್ಲರು ಒಟ್ಟಾಗಿ ಸೇರಿ ಸನ್ನಿಲಿಯೋನ್ ರ ಬೃಹತ್ ಕಟೌಟ್ ನಿರ್ಮಿಸಿ ಅದರ ಮುಂಭಾಗ ಕೇಕ್ ಕತ್ತರಿಸಿದ್ದಾರೆ. ಈ ವೇಳೆ ಸನ್ನಿಗೆ ಹುಟ್ಟುಹಬ್ಬದ ಶುಭಕೋರಿ ಯುವಕರೆಲ್ಲರು ಪರಸ್ಪರ ಕೇಕ್ ತಿನ್ನಿಸಿ ಸಂಭ್ರಮಿಸಿದ್ರು.

ಸನ್ನಿಲಿಯೋನ್ ನಟನೆ ಜತೆಗೆ ನೂರಾರು ಅನಾಥ ಮಕ್ಕಳನ್ನು ಸಾಕುತ್ತಿದ್ದಾರೆ. ಅವರ ಸಮಾಜಮುಖಿ ಕೆಲಸ ಕಂಡು ನಾವು ಅಭಿಮಾನಿ ಆಗಿದ್ದೇವೆ. ನೀಲಿ ಚಿತ್ರದ ತಾರೆ ಅಂತ ಜನ ಅವರನ್ನು ನೋಡಿ ಮೂಗು ಮುರಿತಾರೆ. ಆದರೆ ಅವರಲ್ಲಿರುವ ಒಳ್ಳೆಯ ಗುಣ ಹಾಗೂ ಸಹಾಯ ಮನೋಭಾವವೇ ನಮ್ಮನ್ನು ಅವರ ಅಭಿಮಾನಿಯನ್ನಾಗಿಸಿದೆ ಎಂದು ಗ್ರಾಮದ ಸನ್ನಿ ಬಾಯ್ಸ್ ಯುವಕರು ತಿಳಿಸಿದ್ದಾರೆ.

### ದಕ್ಷಿಣ ಶಿಕ್ಷಕರ ಕ್ಷೇತ್ರ: ಬಿಜೆಪಿ-ಜೆಡಿಎಸ್ ದೋಸ್ತಿಯಲ್ಲಿ ಬಿರುಕು

• ಉದಯವಾಹಿನಿ ಮೈಸೂರು



ಮೈಸೂರು, ಮಂಡ್ಯ, ಚಾಮರಾಜನಗರ ಹಾಗೂ ಹಾಸನ ಜಿಲ್ಲೆಗಳ ವ್ಯಾಪ್ತಿ ಒಳಗೊಂಡಿರುವ 'ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ವಿಧಾನಪರಿಷತ್‌ಗೆ ಜೂನ್ 3ರಂದು ನಡೆಯಲಿರುವ ಚುನಾವಣೆಗೆ 'ಒಮ್ಮತದ ಅಭ್ಯರ್ಥಿ ಆಯ್ಕೆ ಸಂಬಂಧ ಬಿಜೆಪಿ-ಜೆಡಿಎಸ್ ಮೈತ್ರಿಯಲ್ಲಿ ಬಿರುಕು ಕಾಣಿಸಿಕೊಂಡಿದೆ.

ಲೋಕಸಭೆ ಚುನಾವಣೆಯಲ್ಲಿ ಇದ್ದಂತೆ ಈ ಚುನಾವಣೆಯಲ್ಲೂ ಮೈತ್ರಿ ಮುಂದುವರಿಯಲಿದೆ, ಸೀಟುಗಳ ಹಂಚಿಕೆ ಮಾಡಿಕೊಳ್ಳಲಾಗುತ್ತದೆ' ಎಂದು ಎರಡೂ ಪಕ್ಷಗಳ ಮುಖಂಡರು ಹೇಳಿದ್ದರು. ಅದರಂತೆ, ಕ್ಷೇತ್ರವನ್ನು ಜೆಡಿಎಸ್ ಬಿಜೆಪಿಗೆ ಬಿಟ್ಟು ಕೊಟ್ಟಿತ್ತು. ಹೀಗಾಗಿ, ಮೈಸೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಮಾಜಿ ಸದಸ್ಯ ಈ.ಸಿ. ನಿಂಗರಾಜ್ ಗೌಡ ಅವರಿಗೆ ಬಿಜೆಪಿ ಟಿಕೆಟ್ ಘೋಷಿಸಿತ್ತು. ಈ ನಡುವೆ, 'ಕ್ಷೇತ್ರವನ್ನು ನಮಗೆ ಬಿಟ್ಟು ಕೊಡಲಾಗಿದೆ' ಎಂದು ಜೆಡಿಎಸ್ ಮುಖಂಡರು ಹೇಳಿಕೆ ನೀಡುತ್ತಿದ್ದಾರೆ. ಇದು ಗೊಂದಲ ಮೂಡಿಸಿದ್ದು, ಈ ಬೆಳವಣಿಗೆಯು ಅಚ್ಚರಿಗೂ ಕಾರಣವಾಗಿದೆ.

**ಬಿಜೆಪಿಯವರಿಂದ ಬಾರದ ಹೇಳಿಕೆ:** ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟು ಕೊಟ್ಟಿರುವ ಬಗ್ಗೆಯಾಗಲೀ, ತಮ್ಮ ಪಕ್ಷದ ಅಭ್ಯರ್ಥಿ ಬದಲಾವಣೆ ಬಗ್ಗೆಯಾಗಲೀ ಬಿಜೆಪಿ ವರಿಷ್ಠರು ಅಧಿಕೃತ ಹೇಳಿಕೆ ಕೊಟ್ಟಿಲ್ಲ. ಅಲ್ಲದೇ, ಜೆಡಿಎಸ್‌ನವರ ಹೇಳಿಕೆಯನ್ನು ತಿರಸ್ಕರಿಸಿಯೂ ಇಲ್ಲ, ಕ್ಷೇತ್ರ ಹಂಚಿಕೆಯ ವಿಷಯದಲ್ಲಿ ಹಾಗೂ ಚುನಾವಣೆಯ ಹೊಸ್ತಿಲಲ್ಲಿ ನಡೆಯುತ್ತಿರುವ ಬೆಳವಣಿಗೆಯು ಕುತೂಹಲದ ಘಟ್ಟ ತಲುಪಿದೆ. ಇದು, ಕಾಂಗ್ರೆಸ್ ಪಾಳಯದಲ್ಲಿ ನಗೆಪಾಟಲಿಗೆ ಒಳಗಾಗುವಂತೆಯೂ ಆಗಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

ಅಂತರಾಳದಿಂದ..
EDITORIAL

# ರಾಜ್ಯ ಪ್ರಾಥಮಿಕ- ಪ್ರೌಢಶಾಲಾ ಶಿಕ್ಷಣದ ಪರಿಸ್ಥಿತಿ ಸರಿಹೋಗುವುದೆಂದು?


ಉದಯವಾಹಿನಿ ಚಿತ್ರ

ಶಾಲೆಗಳನ್ನು ಪ್ರಯೋಗಶಾಲೆಗಳಂತೆ ನೋಡುವ ಮನಸ್ಥಿತಿ ಪ್ರತಿಯೊಂದು ಸರಕಾರದ್ದಾಗಿದೆ. ಇದಕ್ಕೆ ಇತ್ತೀಚೆಗೆ ಪದವಿ ಶಿಕ್ಷಣದಲ್ಲಿ ಮಾಡುತ್ತಿರುವ ಬದಲಾವಣೆಯೇ ದೃಷ್ಟಾಂತ. ನಾಲ್ಕು ವರ್ಷಗಳ ಪದವಿಯನ್ನು ಮತ್ತೆ ಮೂರು ವರ್ಷಕ್ಕೆ ಇಳಿಸಿರುವ ಈ ಕ್ರಮದಿಂದಾಗಿ, ರಾಜ್ಯ ಶಿಕ್ಷಣ ವ್ಯವಸ್ಥೆಯು ರಾಷ್ಟ್ರೀಯ ಶಿಕ್ಷಣ ನೀತಿಯಿಂದ ಪ್ರತ್ಯೇಕತೆ ಕಾಪಾಡಿಕೊಂಡು, ಎನ್‌ಇಪಿಯಿಂದ ದೊರೆಯಬಹುದಾದ ಲಾಭಗಳಿಂದ ವಂಚಿತವಾಗಲಿದೆ.

ಸರ್ಕಾರಿ ಶಾಲಾ ಶಿಕ್ಷಣದ ಬಗ್ಗೆ ಹೆತ್ತವರು ಯಾವ ಅಭಿಪ್ರಾಯ ಹೊಂದಿದ್ದಾರೆ ಎಂಬುದನ್ನು ಸಂಕಲಿಸಿದರೆ ದಾರುಣ ಚಿತ್ರ ಸಿಗಬಹುದು; ಸರ್ಕಾರಿ ಶಾಲೆಯಲ್ಲಿ ಕಲಿಯುತ್ತಿರುವ ಮಕ್ಕಳ ಹೆತ್ತವರು ಕೆಳಮಧ್ಯಮ ವರ್ಗದ, ಕೆಳವರ್ಗದವರಾದುದರಿಂದ ಅವರಿಗೆ ಬೇರೆ ದಾರಿಯಿಲ್ಲ. ಖಾಸಗಿ ಶಾಲೆಗಳಿಗೆ ಮಕ್ಕಳನ್ನು ಕಳಿಸುತ್ತಿರುವವರು, ಅಲ್ಲಿಗೆ ಕಳಿಸುತ್ತಿರುವುದೇಕೆ ಎಂದು ಕೇಳಿದರೆ ಸರ್ಕಾರಿ ಶಿಕ್ಷಣದ ಕಳಪೆ ಗುಣಮಟ್ಟದತ್ತ ಬೆಟ್ಟು ಮಾಡುತ್ತಾರೆ. ಆದರೆ ಇದೂ ಪೂರ್ತಿ ಸತ್ಯವಲ್ಲ. ಯಾಕೆಂದರೆ ಹಲವಾರು ಅನುದಾನಿತ, ಅನುದಾನರಹಿತ ಶಾಲೆಗಳಲ್ಲಿ ಶೂನ್ಯ ಫಲಿತಾಂಶ ಬಂದಿದೆ. ಇದು ಒಟ್ಟಾರೆಯಾಗಿ ರಾಜ್ಯ ಶೈಕ್ಷಣಿಕ ಪಠ್ಯದ ಸಮಸ್ಯೆಗಳತ್ತ ಬೆಟ್ಟು ಮಾಡುತ್ತದೆ. ಒಟ್ಟಾರೆಯಾಗಿ ಪಠ್ಯದ ಸಮಸ್ಯೆ ಹಾಗೂ ಕಲಿಕೆಯ ಸಮಸ್ಯೆಗಳು ಒಗ್ಗೂಡಿ ಇಂದಿನ ಈ ಸ್ಥಿತಿಗೆ ತಂದಿವೆ.

**ಈ ವರ್ಷದ ಎಸ್‌ಎಸ್‌ಎಲ್‌ಸಿ ಫಲಿತಾಂಶ ಬಂದ ಬಳಿಕ, ಊಹಿಸಿದಂತೆಯೇ ಆಗಿದೆ. ಕರ್ನಾಟಕದಲ್ಲಿ ಶಾಲಾ ಶಿಕ್ಷಣದ ಗುಣಮಟ್ಟದ ಬಗ್ಗೆ ಚರ್ಚೆ ಎದ್ದಿದೆ. ಶಿಕ್ಷಣ ಇಲಾಖೆಯ ಅಧಿಕಾರಿಗಳ ಬೇಜವಾಬ್ದಾರಿಯಿಂದ ಪ್ರಸ್ತುತ ಪ್ರಾಥಮಿಕ ಹಾಗೂ ಪ್ರೌಢ ಹಂತದಲ್ಲಿ ಕಲಿಕೆಯ ಗುಣಮಟ್ಟ ಕುಸಿದಿದೆಎಂದು ಖಾಸಗಿ ಶಾಲಾ ಒಕ್ಕೂಟ (ಕ್ಯಾಮ್ಸ್) ಅಸಮಾಧಾನ ಹೊರಹಾಕಿದೆ.**

ಸರ್ಕಾರ ಶಾಲಾ ಶಿಕ್ಷಣದ ಗುಣಮಟ್ಟ ಹೆಚ್ಚಿಸುವಲ್ಲಿ ಸರ್ಕಾರ ಯಾವುದೇ ಪರಿಣಾಮಕಾರಿ ರೂಪುರೇಷೆಗಳನ್ನು ರೂಪಿಸುತ್ತಿಲ್ಲ.

ಬದಲಿಗೆ ಶಿಕ್ಷಣ ಇಲಾಖೆ ದಿನಕ್ಕೊಂದು ನಿಯಮಗಳನ್ನು ಮಾಡುತ್ತಿದೆ. ಆದರೆ ತಾವೇ ನಡೆಸುವ ಸರ್ಕಾರಿ ಶಾಲೆಗಳಲ್ಲಿ ಅನುಷ್ಠಾನ ಮಾಡದೇ, ಕೇವಲ ಖಾಸಗಿ ಅನುದಾನರಹಿತ ಶಿಕ್ಷಣ ಸಂಸ್ಥೆಗಳಿಗೆ ಮಾತ್ರ ನಿಯಮ ಎಂಬಂತೆ ವರ್ತಿಸುತ್ತಿದೆ ಎಂದು ಶಾಲಾ ಒಕ್ಕೂಟ ಆಕ್ರೋಶ ಹೊರಹಾಕಿದೆ. ಇದೂ ನಿಜ. ಶಾಲೆಗಳನ್ನು ಪ್ರಯೋಗಶಾಲೆಗಳಂತೆ ನೋಡುವ ಮನಸ್ಥಿತಿ ಪ್ರತಿಯೊಂದು ಸರಕಾರದ್ದಾಗಿದೆ. ಇದಕ್ಕೆ ಇತ್ತೀಚೆಗೆ ಪದವಿ ಶಿಕ್ಷಣದಲ್ಲಿ ಮಾಡುತ್ತಿರುವ ಬದಲಾವಣೆಯೇ ದೃಷ್ಟಾಂತ. ನಾಲ್ಕು ವರ್ಷಗಳ ಪದವಿಯನ್ನು ಮತ್ತೆ ಮೂರು ವರ್ಷಕ್ಕೆ ಇಳಿಸಿರುವ ಈ ಕ್ರಮದಿಂದಾಗಿ, ರಾಜ್ಯ ಶಿಕ್ಷಣ ವ್ಯವಸ್ಥೆಯು ರಾಷ್ಟ್ರೀಯ ಶಿಕ್ಷಣ ನೀತಿಯಿಂದ ಪ್ರತ್ಯೇಕತೆ ಕಾಪಾಡಿಕೊಂಡು, ಎನ್‌ಇಪಿಯಿಂದ ದೊರೆಯಬಹುದಾದ ಲಾಭಗಳಿಂದ ವಂಚಿತವಾಗಲಿದೆ. ರಾಜ್ಯದಲ್ಲಿ ಪ್ರಾಥಮಿಕ ಹಂತದಲ್ಲೆ ಶಿಕ್ಷಣದ ಗುಣಮಟ್ಟ ಕಾಪಾಡದೇ ಇರುವುದರಿಂದಲೇ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಕುಸಿತ ಉಂಟಾಗಿದೆ. 2024ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ನಿರಾಶದಾಯವಾಗಿದೆ. ಸಿಸಿಟಿವಿ ಹಾಕಿದ್ದಕ್ಕೆ ಫಲಿತಾಂಶ ಕಡಿಮೆ ಬಂದಿದೆ ಎಂದು ಶಾಲಾ ಶಿಕ್ಷಣ ಇಲಾಖೆಯೇ ಒಪ್ಪಿಕೊಂಡಿದೆ. ಅಧಿಕಾರಿಗಳ ಬಳಿ ಚರ್ಚೆ ಮಾಡಿದಾಗ, ಮಕ್ಕಳು ತುಂಬಾ ಒತ್ತಡಕ್ಕೆ ಒಳಗಾಗುತ್ತಿದ್ದಾರೆ. ಹೀಗಾಗಿ ಅವರನ್ನು ಪಾಸ್ ಮಾಡಬೇಕು ಎನ್ನುತ್ತಾರೆ. ಹೀಗಾಗಿ ಗ್ರೇಸ್ ಅಂಕ ಕೊಡಲಾಗಿದೆ. ಹತ್ತು ವರ್ಷಗಳಿಂದ ಶಾಲೆಯಲ್ಲಿ ಕಲಿತರೂ 10ನೇ ತರಗತಿಗೆ ಬಂದಾಗ ಕನಿಷ್ಠ 25 ಅಂಕ ಗಳಿಸಲೂ ಆಗದ ಮಕ್ಕಳ ಸಂಖ್ಯೆ ಹೆಚ್ಚು ಇದೆ ಎಂದರೆ ಏನರ್ಥ ಇದು ಶಿಕ್ಷಣವೇ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ಬದಲು ಮಕ್ಕಳ ಹಿತದೃಷ್ಟಿಯ ಹೆಸರಲ್ಲಿ ಗ್ರೇಸ್ ಅಂಕದ ಪ್ರಮಾಣ ಹೆಚ್ಚಿಸುತ್ತಿರುವುದು ಸರಿಯಲ್ಲ. ಇದು ಕ್ರಿಕೆಟ್‌ನಲ್ಲಿ ಬೌಂಡರಿಗೆ ಬಾಲ್ ಹೋಗುತ್ತಿಲ್ಲ ಎಂದು ಬೌಂಡರಿ ವ್ಯಾಪ್ತಿಯನ್ನೇ ಕುಗ್ಗಿಸಿದಂತೆ ಇದರಿಂದ ಆಟಗಾರರ ಪ್ರತಿಭೆಯೇನೂ ಹೆಚ್ಚುವುದಿಲ್ಲ!

ಪ್ರತಿ ಸಲ ಸರ್ಕಾರ ಬಂದಾಗಲೂ ರಾಜಕೀಯ ಸಿದ್ಧಾಂತದ ಹಿನ್ನೆಲೆಯಲ್ಲಿ ಪಠ್ಯಕ್ರಮ ಪರಿಷ್ಕರಣೆ ಆಗುತ್ತಿದೆ. ಕಳೆದ ಹತ್ತಾರು ವರ್ಷಗಳಿಂದ ಇದೇ ರೀತಿ ನಡೆದುಕೊಂಡು ಬರುತ್ತಿದೆ. ಶಿಕ್ಷಣ ಇಲಾಖೆಯಿಂದ ಗುಣಮಟ್ಟದ ಪಠ್ಯ ಪುಸ್ತಕ ರಚನೆ ಆಗದೇ ಇದ್ದಲ್ಲಿ ಇದರ ಅಡ್ಡಪರಿಣಾಮವನ್ನು ಮುಂದೆ ಅನುಭವಿಸಬೇಕಾಗುತ್ತದೆ. ಮಕ್ಕಳಿಗೆ ಬೇಕಾದಂತಹ ಸಂಯೋಜಿತ ಪಠ್ಯ ರಚನೆಯಾಗದೆ ಇದ್ದರೆ, ಪೋಷಕರು ಅನಿವಾರ್ಯವಾಗಿ ಕಡೆ ಹೋಗಬೇಕಾಗುತ್ತದೆ. ರಾಜ್ಯದ ವಿದ್ಯಾರ್ಥಿಗಳು ನೆರೆಹೊರೆ ರಾಜ್ಯಗಳ ಪಠ್ಯಕ್ಕೆ ಹಾಗೂ ರಾಷ್ಟ್ರಮಟ್ಟದ ಶಿಕ್ಷಣಕ್ಕೆ ಸ್ಪರ್ಧಾತ್ಮಕವಾಗಿ ಸಿದ್ಧ ಮಾಡುವುದು ಸರ್ಕಾರದ ಆದ್ಯ ಜವಾಬ್ದಾರಿ. ಆದರೆ ಈ ವಿಚಾರದಲ್ಲಿ ಸದಾ ರಾಜಕೀಯ. ವಿದ್ಯಾರ್ಥಿಗಳ ಹಿತದೃಷ್ಟಿಗಿಂತ ತಮ್ಮ ಸಿದ್ಧಾಂತಗಳನ್ನು ಹೇರುವುದೇ ಪಕ್ಷಗಳ ಆದ್ಯತೆಯಾಗಿದೆ. ಶಿಕ್ಷಣ ತಜ್ಞರನ್ನು ಮುಂದಿಟ್ಟುಕೊಂಡು ಪಠ್ಯಕ್ರಮ ರಚಿಸುವುದಕ್ಕಿಂತಲೂ ರಾಜಕೀಯ ಚಿಂತನೆಯ ತಜ್ಞರನ್ನು ಸಮಿತಿಯಲ್ಲಿ ನೇಮಿಸಿಕೊಂಡು ಪಠ್ಯ ರಚಿಸಲಾಗುತ್ತಿದೆ. ಇದು ಮಕ್ಕಳ ಬಾಳಿನಲ್ಲಿ ಆಡುವ ಚೆಲ್ಲಾಟ. ಇದು ನಿಲ್ಲಬೇಕು. ಇಲ್ಲವಾದರೆ ಈ ಫಲಿತಾಂಶ ಕುಸಿತ ಹಾಗೂ ಅವಮಾನ ಮುಂದುವರಿಯಲಿದೆ.

# ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮರಾ ಕಡ್ಡಾಯ ಅಳವಡಿಕೆಗೆ ಆದೇಶ

• ಉದಯವಾಹಿನಿ, ಬೆಂಗಳೂರು

2024ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2ಕ್ಕೆ ಪರೀಕ್ಷಾ ಕೇಂದ್ರಗಳನ್ನು ರಚಿಸಿ ಪ್ರಸ್ತಾವನೆಯನ್ನು ಮಂಡಲಿಗೆ ಸಲ್ಲಿಸುವಂತೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಆದೇಶ ಹೊರಡಿಸಿದೆ.

2024ರ ಪರೀಕ್ಷೆ-2ಕ್ಕೆ ಪರೀಕ್ಷಾ ಕೇಂದ್ರಗಳನ್ನು ರಚಿಸುವುದು ಅತ್ಯಂತ ಪ್ರಮುಖ ಕಾರ್ಯವಾಗಿದೆ.

ಪರೀಕ್ಷಾ ಕೇಂದ್ರ ರಚನೆಯ ನಂತರವೇ ಪ್ರವೇಶಪತ್ರ, ಕೇಂದ್ರ ನಾಮಯಾದಿ, ಶಾಲಾವಾರು ನಾಮಯಾದಿ, ಹಾಜರಾತಿ ಸಹಿತ ಅಂಕಪಟ್ಟಿ (ಎ.ಎಂ.ಎಲ್), ಪ್ರಶ್ನೆಪತ್ರಿಕೆ ಬೇಡಿಕೆ, ಪರೀಕ್ಷಾ ಕೇಂದ್ರದ ಸಾದಿಲ್ವಾರು ಹಂಚಿಕೆಯ ಪ್ರಕ್ರಿಯೆ ಕೈಗೊಳ್ಳಬೇಕಾಗಿದೆ.

ಆಯಾ ಭೌಗೋಳಿಕ ಪ್ರದೇಶದಲ್ಲಿನ ನಗರ/ಗ್ರಾಮೀಣ ಪ್ರದೇಶದ ಶಾಲೆಗಳ ಮೂಲಭೂತ ಸೌಕರ್ಯಗಳನ್ನು ಪರಿಗಣಿಸಿ ಕ್ಲಸ್ಟರ್‌ಸಹಿತ ಕ್ಲಸ್ಟರಹಿತ ಪರೀಕ್ಷಾ ಕೇಂದ್ರಗಳನ್ನು ರಚಿಸುವುದು. ಪರೀಕ್ಷಾ ಕೇಂದ್ರಗಳನ್ನು ರಚಿಸುವ ಪೂರ್ವದಲ್ಲಿ ಪರೀಕ್ಷಾ ಕೇಂದ್ರದ ರಚನೆಗೆ ಸಂಬಂಧಿಸಿದಂತೆ ಜಿಲ್ಲಾ ಉಪನಿರ್ದೇಶಕರು ತಮ್ಮ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಪರೀಕ್ಷಾ ಕೇಂದ್ರಗಳನ್ನು ರಚಿಸಿದ ಪ್ರಸ್ತಾವನೆಯನ್ನು ಪಡೆದು ಕೆಳಕಂಡ ನಿಯಮಗಳನ್ನು ಪಾಲಿಸಿರುವ ಬಗ್ಗೆ ಖುದ್ದಾಗಿ ಪರಿಶೀಲಿಸಿ ಪ್ರಸ್ತಾವನೆಯನ್ನು ಮಂಡಲಿಗೆ ಸಲ್ಲಿಸಲು ಹಾಗೂ ಸಾಫ್ಟ್ ಕಾಪಿಯನ್ನು ಇ-ಮೇಲ್ ಮೂಲಕ ದಿನಾಂಕ:17-05-2024ರೊಳಗೆ ಮಂಡಲಿಗೆ ಸಲ್ಲಿಸಲು ತಿಳಿಸಿದೆ. ಈ ಮೇಲಿನ ಎಲ್ಲಾ ಅಂಶಗಳನ್ನು ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೂಕ್ಷ್ಮವಾಗಿ ಗಮನಿಸಿ, ಪರೀಕ್ಷಾ ಕೇಂದ್ರಗಳನ್ನು ರಚಿಸಿ, ಪ್ರಸ್ತಾವನೆಯನ್ನು ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ತಯಾರಿಸಿ ಜಿಲ್ಲಾ ಉಪನಿರ್ದೇಶಕರಿಗೆ ನೀಡುವಂತೆ ಸೂಚನೆ ನೀಡಲಾಗಿದೆ.


ಉದಯವಾಹಿನಿ ಚಿತ್ರ

**ಶಾಲೆಗಳ ಮೂಲಭೂತ ಸೌಕರ್ಯ**

- 2024ರ ಎಸ್.ಎಸ್.ಎಲ್.ಸಿ. ಪರೀಕ್ಷೆ-2ಕ್ಕೆ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಹಾಗೂ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಅನುಕೂಲವಾಗುವಂತೆ ಪರೀಕ್ಷಾ ಕೇಂದ್ರಗಳನ್ನು ರಚಿಸುವುದು.
- ಎಸ್.ಎಸ್.ಎಲ್.ಸಿ ಪರೀಕ್ಷೆ-2ಕ್ಕೆ ಸಾಧ್ಯವಾದಷ್ಟು ತಾಲ್ಲೂಕು ಕೇಂದ್ರಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ರಚಿಸುವುದು ಕಡ್ಡಾಯ.
- ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಲ್ಲಿಸಿರುವ ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳು ಇರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು ಕಡ್ಡಾಯ. ಪರೀಕ್ಷಾ ಕೇಂದ್ರಗಳಲ್ಲಿ ಅಗತ್ಯ ಸಂಖ್ಯೆಯ ಕೊಠಡಿಗಳ ಆಸನದ ವ್ಯವಸ್ಥೆಗಾಗಿ ಪೀಠೋಪಕರಣಗಳು, ಶಾಲೆಯ ಸುತ್ತಾ ಕಾಂಪೌಂಡ್, ಶೌಚಾಲಯ, ಕುಡಿಯುವ ನೀರು, ಸಿಸಿಟಿವಿ ಕ್ಯಾಮರಾ ಅಳವಡಿಸಿರುವಿಕೆ, ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಸಾರಿಗೆ ವ್ಯವಸ್ಥೆ, ಪರೀಕ್ಷಾ ಕೇಂದ್ರಕ್ಕೆ ನಿಗದಿತ ಸಮಯದಲ್ಲಿ ಸುರಕ್ಷಿತವಾಗಿ ಪ್ರಶ್ನೆಪತ್ರಿಕೆಗಳನ್ನು ವಿತರಿಸಲು ರಸ್ತೆ ಮಾರ್ಗ, ಮುಂತಾದ ಎಲ್ಲಾ ಸೌಲಭ್ಯಗಳು ಇರುವ ಬಗ್ಗೆ ಪರಿಶೀಲಿಸುವುದು ಅತ್ಯವಶ್ಯಕವಾಗಿದೆ.
- ಪರೀಕ್ಷಾ ಕೇಂದ್ರದ ಪ್ರತಿ ಕೊಠಡಿಗೆ 24 ವಿದ್ಯಾರ್ಥಿಗಳಂತೆ ಆಸನ ವ್ಯವಸ್ಥೆ ಮಾಡಿ ಪರೀಕ್ಷಾ ಕೇಂದ್ರ ರಚಿಸುವುದು.
- ಶಾಲಾ/ಕಾಲೇಜಿನಲ್ಲಿರುವ ಮೂಲಭೂತ ಸೌಕರ್ಯ ಹಾಗೂ ಕೊಠಡಿ ಸಂಖ್ಯೆಗಳನ್ನು ಆಧರಿಸಿ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಕನಿಷ್ಠ 250 ಅಭ್ಯರ್ಥಿಗಳು ಗರಿಷ್ಠ 750 ಅಭ್ಯರ್ಥಿಗಳವರೆಗೂ ಆಸನದ ವ್ಯವಸ್ಥೆ ಇರುವ ಸಾಮರ್ಥ್ಯವನ್ನು ಪರಿಗಣಿಸಿ ಬರುವ ಶಾಲೆಗಳ ಕ್ಲಸ್ಟರ್‌ಸಹಿತ ಪರೀಕ್ಷಾ ಕೇಂದ್ರಗಳನ್ನಾಗಿ ರಚಿಸುವುದು.
- ಎಸ್.ಎಸ್.ಎಲ್.ಸಿ ಪರೀಕ್ಷೆ-2ಕ್ಕೂ ವೆಬ್ ಕ್ಯಾಸ್ಟಿಂಗ್ ಇರುವುದರಿಂದ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರ ಕಡ್ಡಾಯವಾಗಿ ಅಳವಡಿಸುವ ಕುರಿತು ಅಗತ್ಯ ಕ್ರಮವಹಿಸುವುದು.
- ಸಿಸಿಟಿವಿ ಕ್ಯಾಮೆರಗಳು ಪರೀಕ್ಷಾ ದಿನಗಳಲ್ಲಿ 24 ಗಂಟೆಯಲ್ಲೂ ಕೆಲಸ ನಿರ್ವಹಿಸುವಂತಿರಬೇಕು.
- ಪ್ರತಿ ಪರೀಕ್ಷಾ ಕೇಂದ್ರಕ್ಕೆ ಸೇರ್ಪಡೆ ಮಾಡಿರುವ ಶಾಲೆಯ ಶಾಲಾ ಸಂಕೇತ, ಶಾಲೆಯ ಹೆಸರು ಮತ್ತು ಸಂಪೂರ್ಣ ಅಂಚೆ ವಿಳಾಸವನ್ನು ಸ್ಪಷ್ಟವಾಗಿ ನಮೂದಿಸುವುದು ಕಡ್ಡಾಯ.
- ಪರೀಕ್ಷಾ ಅವ್ಯವಹಾರವನ್ನು ತಡೆಗಟ್ಟುವ ನಿಟ್ಟಿನಲ್ಲಿ, ಬಹುಮಹಡಿ ಕಟ್ಟಡವಿರುವ ಪರೀಕ್ಷಾ ಕೇಂದ್ರಗಳಲ್ಲಿ ಸಾಧ್ಯವಾದಷ್ಟು ಪರೀಕ್ಷೆಗೆ ನೆಲಮಹಡಿಯಲ್ಲಿ ಆಸನ ವ್ಯವಸ್ಥೆ ಮಾಡದೇ ಮೊದಲನೇ ಮಹಡಿಯಿಂದ ವಿದ್ಯಾರ್ಥಿಗಳಿಗೆ ಆಸನ ವ್ಯವಸ್ಥೆ ಮಾಡುವುದು. ಪರೀಕ್ಷಾ ಕೇಂದ್ರದಲ್ಲಿ ವಿಕಲಚೇತನ ವಿದ್ಯಾರ್ಥಿಗಳಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ಮಾತ್ರ ನೆಲಮಹಡಿಯಲ್ಲಿ ಆಸನ ವ್ಯವಸ್ಥೆ ಮಾಡುವುದು.
- ಈಗಾಗಲೇ ನಿಮ್ಮ ಜಿಲ್ಲೆಯಲ್ಲಿ ಅತಿಸೂಕ್ಷ್ಮ, ಸೂಕ್ಷ್ಮ ಹಾಗೂ ಸಾಮಾನ್ಯ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಅವ್ಯವಹಾರ ಪ್ರಕರಣಗಳಿದ್ದಲ್ಲಿ, ಅಂತಹ ಕೇಂದ್ರಗಳನ್ನು ರದ್ದುಪಡಿಸುವುದು.
- ಪರೀಕ್ಷಾ ಕೇಂದ್ರಗಳ ರಚನೆಯ ಸಂಪೂರ್ಣ ಜವಾಬ್ದಾರಿಯನ್ನು ಜಿಲ್ಲಾ ಉಪನಿರ್ದೇಶಕರು(ಆಡಳಿತ), ಜಿಲ್ಲಾ ನೋಡಲ್ ಅಧಿಕಾರಿಗಳು ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ವಹಿಸಲಾಗಿದ್ದು, ಯಾವುದೇ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾ ಅಕ್ರಮಗಳು ನಡೆದಲ್ಲಿ, ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರನ್ನೇ ಸಂಪೂರ್ಣ ಹೊಣೆಗಾರರನ್ನಾಗಿ ಮಾಡಲಾಗುವುದು.

# ಎಲ್ಲರೂ ಬೇಡುವರು ಸಮಯ ಬರಲು


ಸಾಮಾಜಿಕ ಕಳಕಳಿ
ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ವಿಶೇಷ

ತಿನ್ನಲು ಅನ್ನವು ಬೇಕು ಹಸಿವನ್ನು ತಡೆಯದಿರು
ಬೇಡಿ ತಿಂದರೆ ಅದು ತಪ್ಪಲ್ಲ ಕೇಳುತಿರು
ಎಲ್ಲರೂ ಬೇಡುವರು ಸಮಯ ಬರಲು
ದೇವಾನುದೇವತೆ ಕೂಡ ಸಮಯದಲಿ ಬೇಡಿಹರು....
ಮನುಜ ಜೀವವು ಅಷ್ಟೇ, ಅಂದುಕೊಂಡದು ಆಗದು
ಎಲ್ಲೆಡೆಯು ದ್ವೇಷ,ಅಸೂಯೆ ತುಂಬಿರಲು
ಕೆಂಡಾಮಂಡಲದ ಹಾಗೆ ನೀ ನಡೆಯದಿರು
ಹೂವಂತೆ ಮೃದುವಾದ ಸ್ವಭಾವ ಹೊಂದುತಿರು.....
ಕಡಲ ತೀರದಿ ನಿಂತು ಯೋಚನೆ ಮಾಡದಿರು
ಬಂದದ್ದು ಬರಲಿ ಜೀವನವು ಇದು ತಿಳಿಯುತಿರು
ಅಂಕೆ -ಸಂಖ್ಯೆಯ ನೀನು ಹೊಂದುತಲಿ ಹೋಗುತಿರು
ಬೇಡದರ ಚಿಂತೆಯನು ಅಲ್ಲಿಯೇ ಬಿಟ್ಟು ಬಿಡು.......
ಜನರಿಂದ ಜೀವನವೋ ಗುಂಪಿನಲ್ಲಿ ಕೂಡಿಹುದು
ಅದರಲ್ಲಿ ಹೊಂದಿಕೊಳ್ಳಲು ನೀನು ಹೋಗುತಿರು
ತನ್ನ ಬುದ್ಧಿಯನು ತಾನು ಕೈಯಲ್ಲಿ ಹಿಡಿಯುತಿರು
ಆನಂದದಾ ಸಮಯ ನೀ ಎಂದು ಬಯಸುತಿರು.....
ಬಯಲಾಗಿ ದುಷ್ಟ ಜನರ ಬುದ್ಧಿ ತಿಳಿಯುತಿರು
ಕಂಡರೂ ಕಾಣದ ರೀತಿ ನೀ ಹೋಗುತಿರು
ಕೇಳಿಯು ಕೇಳದವನಂತೆ ನಿಂತು ಬಿಡು
ತನ್ನ ರಹಸ್ಯದ ಬದುಕ ಎಂದಿಗೂ ಹೇಳದಿರು......
ಬದುಕೆಂಬ ಬಂಡಿಯನು ಸರಿಯಾಗಿ ಓಡಿಸುತಿರು
ಕೈಲಾದ ಸಹಾಯ ನೀ ಬಡವರಿಗೆ ಮಾಡುತಿರು
ದೇವ ಮೆಚ್ಚುವ ಹಾಗೆ ನಡೆದರೆ ಸಾಕಲ್ಲ
ಯಾರ ಮೆಚ್ಚುಗೆಯು ನಿನಗೆ ಬೇಕಿಲ್ಲ.....
ಜೀವನ ನಶ್ವರವು ಬದುಕು ನಾಲ್ಕು ದಿನವೂ
ಬಾಳು ಬದುಕಿನಲಿ ನಗುವೊಂದು ಕಾಣುತಿರು
ಅಂತರಂಗದ ಶುದ್ಧಿ ಬದುಕಿಗೆ ಬೇಕೆಂದು
ಸನ್ಮಾರ್ಗದ ಕಾರ್ಯ ನೀನೆಂದು ಮಾಡುತಿರು.....
ನೀನೆಂದು ಸ್ಪರ್ಧೆಯನು ಎಲ್ಲಿಯೂ ಮಾಡದಿರು
ಮಾಡುವವರಿಂದ ನೀ ದೂರ ಉಳಿದುಬಿಡು
ನಮಗ್ಯಾರು ಸಾಟಿ ಇಲ್ಲ ಎಂದು ನೀ ತಿಳಿದು
ಅದ್ಭುತದ ಸಾಧನೆಯ ಕಡೆ ನೀನು ಗಮನ ಕೊಡು........

# ಹಾವು ಕಂಡ್ರೆ ಕೊಲ್ಲಬೇಡಿ, ಸಹಾಯವಾಣಿಗೆ ಕರೆ ಮಾಡಿ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಮಳೆ ಜಾಸ್ತಿ ಆದಂತೆ, ಅವಾಂತರಗಳು ಹೆಚ್ಚಾಗುತ್ತಿವೆ. ಮಳೆ ನೀರಿನ ಜೊತೆಗೆ ಅಲ್ಲಲ್ಲಿ ಹಾವು ಕೂಡ ಕಾಣಿಸಿಕೊಳ್ಳುತ್ತಿವೆ. ಇಂತಹ ಹಾವುಗಳನ್ನು ಕೊಲ್ಲಬೇಡಿ. ಕಂಡ್ರೆ ಈ ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ ಅಂತ ಬಿಬಿಎಂಪಿ ಮನವಿ ಮಾಡಿದೆ.ಬಿಬಿಎಂಪಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿದ್ದು, ಹಾವುಗಳು ಕಾಣಿಸಿಕೊಂಡರೇ ಗಾಬರಿಗೊಳ್ಳಬೇಡಿ.ಬಡಿದು ಕೊಲ್ಲೋದು ಮಾಡಬೇಡಿ ಅಂತ ಮನವಿ ಮಾಡಿದೆ. ಮೇ ತಿಂಗಳು ಹಾವುಗಳ ಸಂತಾನೋತ್ಪತ್ತಿಯ ಕಾಲವಾಗಿದೆ. ಮಾಸಾಂತ್ಯವು ಉರಗಗಳ ಸಂತಾನೋತ್ಪತ್ತಿ ಸಮಯ. ಮುಖ್ಯವಾಗಿ ಸರ್ಪಗಳ ಮೊಟ್ಟೆಗಳು ಒಡೆದು ಮರಿಗಳು ಹೊರಬರುವ ಕಾಲವಾಗಿದೆ ಎಂದಿದೆ. ಹಾವುಗಳು ಕಂಡ್ರೆ ಕೊಲ್ಲದೇ ಬಿಬಿಎಂಪಿಯ ಸಹಾಯವಾಣಿ ಸಂಖ್ಯೆ 9902794711ಗೆ ಕರೆ ಮಾಡಿ, ಹಾವುಗಳ ರಕ್ಷಣೆಗೆ ನೆರವಾಗಿ ಅಂತ ಕೋರಿದೆ.

# ಫ್ಲ್ಯಾಟ್ ದರಗಳನ್ನು ಹೆಚ್ಚಿಸಲು ನಿರ್ಧರಿಸಿದೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು (ಬಿಡಿಎ) ತನ್ನ ಹೊಸ ಫ್ಲ್ಯಾಟ್‌ಗಳ ಆರಂಭಿಕ ಪ್ರಸ್ತಾವಿತ ದರಗಳನ್ನು ತನ್ನ ಮುಂದಿನ ಎರಡು ವಸತಿ ಯೋಜನೆಗಳಲ್ಲಿ 4% ರಿಂದ 29% ರಷ್ಟು ಹೆಚ್ಚಿಸುವ ಸಾಧ್ಯತೆಯಿದೆ. ಈ ಮೂಲಕ ನಗರದಲ್ಲಿ ಸರ್ಕಾರದಿಂದ ಫ್ಲ್ಯಾಟ್ ಖರೀದಿ ಯೋಜನೆಯಲ್ಲಿರುವ ಬೆಂಗಳೂರಿಗರಿಗೆ ಶಾಕ್ ನೀಡಿದೆ.

ಕಳೆದ ವರ್ಷ ಅಕ್ಟೋಬರ್ 1 ರಿಂದ ರಾಜ್ಯ ಸರ್ಕಾರವು ಮಾರ್ಗದರ್ಶಿ ಮೌಲ್ಯವನ್ನು ಪರಿಷ್ಕರಿಸಿದ ನಂತರ ತನ್ನ ಆರ್ಥಿಕ ಸ್ಥಿತಿಯನ್ನು ಹೆಚ್ಚಿಸುವ ಮತ್ತು ಅದರ ಆಸ್ತಿಗಳನ್ನು ಮಾರುಕಟ್ಟೆ ದರಗಳ ಸಮೀಪಕ್ಕೆ ತರುವ ಗುರಿಯನ್ನು ಹೊಂದಿದೆ. ಈಗಾಗಲೇ ಬಿಡಿಎ ಎರಡು ಫ್ಲ್ಯಾಟ್‌ಗಳನ್ನು ನಿರ್ಮಾಣ ಮಾಡುತ್ತಿದೆ. ಪಶ್ಚಿಮ ಬೆಂಗಳೂರಿನ ಕೊಮ್ಮಘಟ್ಟ (ಕೆಂಗೇರಿಯಲ್ಲಿ) ಮತ್ತು ಪೂರ್ವ ಬೆಂಗಳೂರಿನ ಕೋನದಾಸಪುರದಲ್ಲಿ (ವೈಟ್‌ಫೀಲ್ಡ್ ಬಳಿ) 1,500 ಫ್ಲ್ಯಾಟ್‌ಗಳಿಗೆ ದರ ಹೆಚ್ಚಿಸಲು ನಿರ್ಧರಿಸಲಾಗಿದೆ. ಜೂನ್ 4ರ ಲೋಕಸಭಾ ಚುನಾವಣೆ ಫಲಿತಾಂಶದ ಬಳಿಕ ಚುನಾವಣಾ ನೀತಿ ಸಂಹಿತೆ ತೆರವಾಗಲಿದ್ದು, ಬಳಿಕ ಈ ಬಗ್ಗೆ ಅಧಿಸೂಚನೆ ಹೊರಡಿಸಲಾಗುವುದು ಎಂದು 'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್' ವರದಿ ಮಾಡಿದೆ.

ನಮ್ಮ ಪ್ರಸ್ತಾವನೆಯನ್ನು ಪ್ರಾಧಿಕಾರದ ಮಂಡಳಿ ಅನುಮೋದಿಸಬೇಕಾಗಿದೆ. ಮಂಡಳಿಯು ತನ್ನ ಒಪ್ಪಿಗೆಯನ್ನು ನೀಡುತ್ತದೆ. ಈ ಫ್ಲ್ಯಾಟ್ ದರ ಹೆಚ್ಚಳವನ್ನು ಜಾರಿಗೊಳಿಸುವ ಪ್ರಾಥಮಿಕ ಉದ್ದೇಶವು ನಮ್ಮ ಗುತ್ತಿಗೆದಾರರ ಬಿಲ್‌ಗಳನ್ನು ಪಾವತಿಸುವುದಕ್ಕಾಗಿಯೇ ಹೊರತು ಬಿಡಿಎಗೆ ಯಾವುದೇ ಲಾಭ ಮಾಡಿಕೊಳ್ಳಲು ಅಲ್ಲ ಎಂದು ಹೇಳಿದ್ದಾರೆ. ಕೊಮ್ಮಘಟ್ಟದಲ್ಲಿರುವ ಬಿಡಿಎ ಫ್ಲ್ಯಾಟ್‌ಗಳು ಗಣನೀಯವಾಗಿ ಏರಿಕೆಯಾಗಲಿವೆ. ಮೆಟ್ರೋದ ನೇರಳೆ ಮಾರ್ಗವನ್ನು ಕೆಂಗೇರಿಗೆ ಮತ್ತು ನಂತರ ಚಲ್ಲಘಟ್ಟಕ್ಕೆ ವಿಸ್ತರಿಸುವುದರಿಂದ ನಗರದ ಈ ಭಾಗದಲ್ಲಿ ಆಸ್ತಿಗೆ ಬೇಡಿಕೆ ಹೆಚ್ಚಿದೆ.

ಇವುಗಳ ದರಗಳಿಗೆ ಹೋಲಿಸಿದರೆ, ಕೋನದಾಸಪುರದಲ್ಲಿ ಕಡಿಮೆ ಹೆಚ್ಚಳವಾಗಿದೆ. ಬಿಡಿಎಯ 632 ಫ್ಲ್ಯಾಟ್‌ಗಳಲ್ಲಿ ಮಾರಾಟವಾದ 300 ಫ್ಲ್ಯಾಟ್‌ಗಳಿಗೆ 4% ರಷ್ಟು ಸಣ್ಣ ಹೆಚ್ಚಳಕ್ಕೆ ಪ್ರಸ್ತಾಪಿಸಲಾಗಿದೆ. ಹಂತ I ರಲ್ಲಿ 3 ಬಿಎಚ್‌ಕೆ ರೂ. 65.7 ಲಕ್ಷವಾಗಲಿದೆ. ಈ ಹಿಂದೆ ಯೋಜಿತ ವೆಚ್ಚ ರೂ. 53 ಲಕ್ಷ ರೂಪಾಯಿಯಾಗಿತ್ತು. ಹಂತ II ರಲ್ಲಿ 2 ಬಿಎಚ್‌ಕೆಗೆ ರೂ. 54.3 ಲಕ್ಷವಾಗಲಿದೆ. ಈ ಮೊದಲು ಇದನ್ನು 42 ಲಕ್ಷಕ್ಕೆ ಅಂದಾಜಿಸಲಾಗಿತ್ತು. ಹಂತ III ರಲ್ಲಿ 2 ಬಿಎಚ್‌ಕೆ ರೂ. 49.15 ಲಕ್ಷವಿದೆ. ಈ ಮೊದಲು 42 ಲಕ್ಷವಿತ್ತು. ಬಿಡಿಎ ಪ್ರಸ್ತುತ 480 3BHK, , ಹಂತ II ರಲ್ಲಿ 360 2BHK ಮತ್ತು ಹಂತ III ರಲ್ಲಿ 336 2BHK ಫ್ಲ್ಯಾಟ್‌ಗಳನ್ನು ಹೊಂದಿದೆ.


ಉದಯವಾಹಿನಿ ಚಿತ್ರ

**ಬಿಡಿಎ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದಿಂದ 1,000 ಕೋಟಿ ರೂಪಾಯಿ ಸಾಲಕ್ಕೆ ಅರ್ಜಿ ಸಲ್ಲಿಸಿದೆ. ಆದರೆ ನಾವು ಇಲ್ಲಿಯವರೆಗೆ ಕೇವಲ 300 ಕೋಟಿ ರೂಪಾಯಿಗಳನ್ನು ತೆಗೆದುಕೊಂಡಿದ್ದೇವೆ. ಹೀಗಾಗಿ ಈ ಸಾಲವನ್ನು ಇಲ್ಲಿಗೆ ನಿಲ್ಲಿಸಲು ಬಯಸುತ್ತೇವೆ. ನಮ್ಮ ಬಹು ಯೋಜನೆಗಳಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆದಾರರಿಗೆ ಹಣ ಪಾವತಿಸಲು ನಾವು ಸಾಲ ಪಡೆದಿದ್ದೇವೆ. ಫ್ಲ್ಯಾಟ್‌ಗಳ ಮಾರಾಟದಲ್ಲಿ ವಿಧಿಸಲಾಗುವ ಹೆಚ್ಚಳವು ಬ್ಯಾಂಕ್ ಸಾಲವನ್ನು ಮರುಪಾವತಿಸಲು ಉದ್ದೇಶಿಸಲಾಗಿದೆ. ಹುನಿಗೆರೆ ವಿಲ್ಲಾ ಯೋಜನೆಯ ನಿಗದಿತ ದರದಲ್ಲಿ ಯಾವುದೇ ಹೆಚ್ಚಳವಿಲ್ಲ, ಅದರ ಬಗ್ಗೆ ಶೀಘ್ರದಲ್ಲೇ ಅಧಿಸೂಚನೆ ನೀಡಲಾಗುತ್ತದೆ ಎಂದು ಅಧಿಕಾರಿಗಳು ಹೇಳಿದ್ದಾರೆ.**



# ಮಹಾಭಾರತ
## ದ್ರೋಣಪರ್ವ

• ಹಿಂದಿನ ಸಂಚಿಕೆಯಿಂದ

ಅರ್ಜುನನು ಪುನಃ ರಣರಂಗಕ್ಕಿಳಿದನು. ಶಕುನಿಯ ತಮ್ಮಂದಿರು ಅವನೊಡನೆ ಹೋರಲು ಸಿದ್ಧರಾಗಿದ್ದರು; ಯುದ್ಧದಲ್ಲಿ ಅರ್ಜುನನಿಂದ ಹತರಾಗಿದ್ದರು.ಇದನ್ನು ನೋಡಿ ಶಕುನಿಯು ಮೇಲೇರಿ ಬಂದನು. ಅವನ ಸೈನ್ಯವನ್ನು ಒದ್ದೋಡಿಸಿಡ ಅರ್ಜುನನು ಶಕುನಿಯ ಮಾಯಾಯುದ್ಧವನ್ನು ಅಸ್ತ್ರಗಳಿಂದ ನಿವಾರಿಸಿಕೊಂಡು, ''ಎಲವೋ ದ್ರೋಹಿ, ಕೇಳು. ಈ ಗಾಂಡೀವಕ್ಕೆ ದಾಳವೆಸೆಯಲು ಬರುವುದಿಲ್ಲ; ಬದಲಿಗೆ ಅಗ್ನಿಮುಖದಂತಹ ಚೂಪಾದ ಬಾಣಗಳನ್ನು ಎಸೆಯಬಲ್ಲದು. ಸಾಧ್ಯವಾದರೆ ಅವುಗಳನ್ನೆದುರಿಸುಎನ್ನಲು ಶಕುನಿಯ ಸೋಲೊಪ್ಪಿಕೊಂಡು ಅಲ್ಲಿಂದ ಹೊರಟು ಹೋದನು. ಅಲ್ಲಿಂದ ಅವರೆಲ್ಲ ದ್ರೋಣನಿದ್ದೆಡೆಗೆ ತೆರಳಿದರು. ದ್ರೋಣನಿಗೆ ಎಲ್ಲಿ ಹೋದರೂ ಧೃಷ್ಟದ್ಯುಮ್ನನೇ ಸಿಕ್ಕುತ್ತಿದ್ದನು. ಅರ್ಜುನನಿದ್ದುದರಿಂದ ಯುಧಿಷ್ಠಿರನೂ ಮುಂಚೂಣಿಯಲ್ಲಿ ಕಾಣಿಸಿಕೊಂಡನು. ಧಾರ್ತರಾಷ್ಟ್ರರು ಅವನನ್ನು ಎದುರಿಸಿದರು. ಅಶ್ವತ್ಥಾಮನು ತಂದೆಯ ಸಹಾಯಕ್ಕೆ ಬಂದವನು, ಮಾಹಿಷ್ಮತೀ ನಗರದ ರಾಜಕುಮಾರನಾದ ನೀಲನನ್ನು ಸೆಣೆಸಿ ಕೊಂದುಹಾಕಿದನು. ಇದರಿಂದ ಕೋಪಗೊಂಡ ಪಾಂಡವರು ಅಶ್ವತ್ಥಾಮನನ್ನು ಎದುರಿಸಿದರಾದರೂ ಹೋರಾಟವು ತುಮುಲಯುದ್ಧವಾಗಿ ಪರಿವರ್ತಿತವಾಯಿತು. ಸ್ವಲ್ಪ ಹೊತ್ತು ಅರ್ಜುನ ರಾಧೇಯರು ಎದುರಾಗಿ ಅಸ್ತ್ರ-ಪ್ರತ್ಯಸ್ತ್ರಗಳಿಂದ ಹೋರಾಡಿದರು. ಅರ್ಜುನನು ಕೌರವರ ಕಡೆಯ ಶತ್ರುಂಜಯನೆಂಬ ವೀರನನ್ನು ಕೊಂದುಹಾಕಿದನು. ಸಂಕುಲಯುದ್ಧವು ಮುಂದುವರೆಯುತ್ತಿರುವಂತೆಯೇ ಸೂರ್ಯಾಸ್ತವಾದುದರಿಂದ ಎರಡು ಕಡೆಯವರೂ ಯುದ್ಧವನ್ನು ನಿಲ್ಲಿಸಿ ಪಾಳೆಯಗಳಿಗೆ ಹಿಂದಿರುಗಿದರು. ಹನ್ನೆರಡನೆಯ ದಿನದ ಯುದ್ಧದಲ್ಲಿ ಅರ್ಜುನನು ಸಂಶಪ್ತಕರನ್ನು ಸೋಲಿಸಿದನಲ್ಲದೆ ಭಗದತ್ತನನ್ನೂ ಅವನ ಆನೆಯನ್ನೂ ಕೊಂದದ್ದೇ ಮುಖ್ಯ ಘಟನೆ ಎನಿಸಿಕೊಡಿತು. ಕೌರವರ ಕಡೆ ತುಂಬ ನಷ್ಟವಾಗಿದ್ದುದರಿಂದ ಅವರು ನಿರಾಶರಾಗಿದ್ದರು. ದುರ್ಯೋಧನನು ಯಥಾಪ್ರಕಾರ ನಿರಾಶೆ ದುಃಖಗಳಿಂದ ದ್ರೋಣನ ಬಳಿಗೆ ಹೋಗಿ ಗೋಳಿಟ್ಟನು. ಭೀಷ್ಮನಿಗೆ ಇದು ಅಭ್ಯಾಸವಾಗಿತ್ತಾದರೂ ದ್ರೋಣನಿಗೆ ಹೊಸತು. ಎಷ್ಟು ಪ್ರಯತ್ನಿಸಿದರೂ ದುರ್ಯೋಧನನನ್ನು ತೃಪ್ತಿಗೊಳಿಸುವುದು ಅಸಾಧ್ಯವೆಂದು ಅವನಿಗೆ ತಿಳಿದಿರಲಿಲ್ಲ. ದುರ್ಯೋಧನನು, ''ಆಚಾರ್ಯ, ನೀನು ಶತ್ರುಗಳ ಮೇಲೆ ಸಹಾನುಭೂತಿಯಿಂದಿರುವುದು ಸಹಜವಾಗಿಯೇ ಇದೆ. ಅದರಿಂದಾಗಿಯೇ, ನಿನ್ನ ಮಾತಿನಂತೆ ನೀನು ಅರ್ಜುನನು ದೂರ ಹೋಗಿದ್ದರೂ ಯುಧಿಷ್ಠಿರನನ್ನು ಸೆರೆ ಹಿಡಿಯಲಿಲ್ಲ. ಬೇಕೆಂದೇ ಅವಕಾಶವನ್ನು ವ್ಯರ್ಥಗೊಳಿಸಿರುವೆ. ನಿನಗಾಗಿ ಸುಶರ್ಮನು ಸೇನೆಯನ್ನೂ ಸೋದರರನ್ನೂ ಕಳೆದುಕೊಂಡನಷ್ಟೇ. ನೀನು ಮಾತ್ರ ನಿನ್ನ ಪ್ರೀತಿಯ ಪಾಂಡವರೊಡನೆ ಮೃದುವಾಗಿಯೇ ನಡೆದುಕೊಳ್ಳುತ್ತಿರುವೆ. ನಿನ್ನ ಮಾತನ್ನು ನೀನು ಉಳಿಸಿಕೊಳ್ಳಲಿಲ್ಲ ಎನ್ನಲು, ದ್ರೋಣನಿಗೆ ತುಂಬ ಬೇಸರವಾಯಿತು.

ಮುಂದುವರಿಯುವುದು...

# ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ವಿವೇಕಾನಂದ.ಕೆ ಘೋಷಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ಜೆಡಿಎಸ್-ಬಿಜೆಪಿ ಅಭ್ಯರ್ಥಿಯನ್ನಾಗಿ ದಿನಾಂಕ 11-05-2024ರಂದು ಇ.ಸಿ ನಿಂಗರಾಜುಗೆ ಟಿಕೆಟ್ ಘೋಷಣೆ ಮಾಡಲಾಗಿತ್ತು. ಆದರೇ ಇದೀಗ ದಿಢೀರ್ ಅಭ್ಯರ್ಥಿ ಬದಲಾವಣೆ ಮಾಡಲಾಗಿದ್ದು, ವಿವೇಕಾನಂದ ಕೆ ಅವರಿಗೆ ಟಿಕೆಟ್ ಘೋಷಣೆ ಮಾಡಲಾಗಿದೆ.

ಈ ಕುರಿತಂತೆ ಜೆಡಿಎಸ್ ರಾಜ್ಯಾಧ್ಯಕ್ಷರಾದಂತ ಹೆಚ್.ಡಿ ಕುಮಾರಸ್ವಾಮಿ ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ. ಅದರಲ್ಲಿ ವಿವೇಕಾನಂದ ಕೆ ಇವರನ್ನು ದಿನಾಂಕ 03-06-2024ರಂದು ನಡೆಯಲಿರುವ ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರಕ್ಕೆ ಬಿಜೆಪಿ ಮತ್ತು ಜನತಾದಳ ಪಕ್ಷದ ಮೈತ್ರಿ ಅಭ್ಯರ್ಥಿಯೆಂದು ಪಕ್ಷದ ರಾಷ್ಟ್ರೀಯ ಅಧ್ಯಕ್ಷರು, ರಾಜ್ಯಸಭಾ ಸದಸ್ಯರು ಹಾಗೂ ಮಾಜಿ ಪ್ರಧಾನ ಮಂತ್ರಿಗಳಾದ ಹೆಚ್.ಡಿ ದೇವೇಗೌಡ ಅವರು ಘೋಷಿಸಿದ್ದಾರೆ ಎಂದಿದ್ದಾರೆ.

ಅಂದಹಾಗೇ ದಿನಾಂಕ 11-05-2024ರಂದು 6 ವಿಧಾನಪರಿಷತ್ ಚುನಾವಣಾ ಕ್ಷೇತ್ರಗಳಿಗೆ ಬಿಜೆಪಿಯಿಂದ ಟಿಕೆಟ್ ಘೋಷಣೆ ಮಾಡಲಾಗಿತ್ತು. ಮೂರು ಪದವೀಧರರ ಕ್ಷೇತ್ರಗಳು ಹಾಗೂ ಎರಡು ಶಿಕ್ಷಕರ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಲಾಗಿತ್ತು. ಆ ವೇಳೆಯಲ್ಲಿ ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ಅಭ್ಯರ್ಥಿಯನ್ನಾಗಿ ಇ.ಸಿ ನಿಂಗರಾಜುಗೆ ಟಿಕೆಟ್ ಘೋಷಣೆ ಮಾಡಲಾಗಿತ್ತು. ಈಗ ಅವರನ್ನು ಬದಲಾಯಿಸಿ, ವಿವೇಕಾನಂದ ಕೆ ಅವರಿಗೆ ಟಿಕೆಟ್ ನೀಡಲಾಗಿದೆ.

# ಅಟಲ್ ಸೇತುವೆ ದೇಶದ ಹೆಮ್ಮೆ, 10 ವರ್ಷದಲ್ಲಿ ಭಾರತ ವೇಗವಾಗಿ ಬೆಳೆಯುತ್ತಿದೆ: ನಟಿ ರಶ್ಮಿಕಾ

• ಉದಯವಾಹಿನಿ, ಬೆಂಗಳೂರು

ನ್ಯಾಷನಲ್ ಕ್ರಶ್ ಎಂದೆ ಪ್ರಸಿದ್ಧಿ ಪಡೆದ ಕರ್ನಾಟಕ ಮೂಲದ ಬಹುಭಾಷಾ ನಟಿ ರಶ್ಮಿಕಾ ಮಂದಣ್ಣ ಬಾಲಿವುಡ್‌ನಲ್ಲಿ 'ಅನಿಮಲ್' ಸಿನಿಮಾ ಸಕ್ಸಸ್ ಬಳಿಕ ಹಿಂದಿ ಸಿನಿಮಾಗಳಲ್ಲಿ ಬ್ಯೂಸಿಯಾಗುವತ್ತ ಗಮನಹರಿಸಿದ್ದಾರೆ.


ಹೀಗಾಗಿ ಅವರು ಆಗಾಗ ಮುಂಬೈಗೆ ಪ್ರಯಾಣಿಸುತ್ತಿರುತ್ತಾರೆ. ಇದೇ ಮಾರ್ಗದಲ್ಲಿರುವ ಬರುವ 'ಅಟಲ್ ಟನಲ್ ಸೇತುವೆ' ಬಗ್ಗೆ ಎಎನ್‌ಐ ಜೊತೆಗೆ ಮಾತನಾಡಿದ ರಶ್ಮಿಕಾ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

ಇದೇ ವರ್ಷ ಆರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿಯವರಿಂದ ಮುಂಬೈ ಮತ್ತು ನವಿಮುಂಬೈಗೆ ಸಂಪರ್ಕ ಸಾಧಿಸುವ ಅಟಲ್ ಟನಲ್ ಅನ್ನು ಉದ್ಘಾಟಿಸಿದ್ದರು. ಇದು ಸೇರಿದಂತೆ ಭಾರತ ಕಳೆದ ಹತ್ತು ವರ್ಷಗಳಲ್ಲಿ ಕಂಡು ಅಭಿವೃದ್ಧಿಯನ್ನು ಅವರು ಕೊಂಡಾಡಿದ್ದಾರೆ.

ಮುಂಬೈನಿಂದ- ನವಿ ಮುಂಬೈಗೆ ಪ್ರಯಾಣಕ್ಕೆ ಸುಮಾರು ಎರಡು ಗಂಟೆ ಪ್ರಯಾಣದ ಸಮಯ ಹಿಡಿಯುತ್ತಿತ್ತು. ಈ ಅಟಲ್ ಸೇತುವೆ ಆ ಪ್ರಯಾಣವನ್ನು ಕೇವಲ 20 ನಿಮಿಷಕ್ಕೆ ಇಳಿಸಿದೆ. ಇದು ಸಂತೋಷದ ಸಂಗತಿ. ಭಾರತ ಅಸಾಧ್ಯವಾದದ್ದನ್ನು ಸಾಧ್ಯ ಮಾಡಿ ತೋರಿಸುತ್ತಿದೆ. ಅಟಲ್ ಸೇತುವೆಯು ಗೋವಾದಿಂದ ಮುಂಬೈ, ಬೆಂಗಳೂರಿನಿಂದ ಮುಂಬೈಗೆ ಸಂಪರ್ಕ ಸೇತುವೆಯಾಗಿದೆ. ವಿವಿಧ ನಗರಗಳ ಸಂಪರ್ಕವನ್ನು ಇದು ಬಹಳಸಷ್ಟು ಸರಳ ಮಾಡಿದೆ. ಇದರೊಂದಿಗೆ ದೇಶದಲ್ಲಿ ಇನ್ನೂ ಅನೇಕ ಮೂಲಭೂತ ಸೌಕರ್ಯಗಳು ಅಭಿವೃದ್ಧಿಯಾಗುವುದನ್ನು ನೋಡಿದರೆ ಹೆಮ್ಮೆ ಅನ್ನಿಸುತ್ತದೆ ಎಂದು ರಶ್ಮಿಕಾ ಹೇಳಿದ್ದಾರೆ.

ಭಾರತದಿಂದ ಸಾಧ್ಯವಿಲ್ಲ ಎಂದು ಹೇಳಾಗುವುದಿಲ್ಲ. ವೇಗವಾಗಿ ಬೆಳೆಯುತ್ತಿರುವ ಭಾರತವು ಏಳೇ ವರ್ಷಗಳಲ್ಲಿ22 ಕಿಲೋ ಮೀಟರ್ ಉದ್ದದ 'ಅಟಲ್ ಸೇತು' ನಿರ್ಮಿಸಿ ಸಾಧಿಸಿ ತೋರಿಸಿದೆ.

**ಹೆದ್ದಾರಿ ಯೋಜನೆಗಳು, ಮೂಲಸೌಕರ್ಯ ಅಭಿವೃದ್ಧಿಯಲ್ಲಿ ನಾವು ಪ್ರಗತಿ ಸಾಧಿಸಿದ್ದೇವೆ. ಕಳೆದ ಹತ್ತು ವರ್ಷಗಳಲ್ಲಿ ದೇಶವು ವೇಗವಾಗಿ ಬೆಳೆಯುತ್ತಿದೆ. ಅನೇಕ ಸ್ಮಾರ್ಟ್ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿಯವರ ಸಾಧನೆಯಲ್ಲಿ ಅವರು ಶ್ಲಾಘಿಸಿದರು.**


ಉದಯವಾಹಿನಿ ಚಿತ್ರ

**ಭಾರತದ ಜನರು ಸರಿಯಾದ ದಿಕ್ಕಿನಲ್ಲಿ ಸಾಗುತ್ತಿದ್ದಾರೆ ಎಂದು ನನಗನಿಸುತ್ತದೆ. ಸದ್ಯ ದೇಶದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆ ನಡೆಯುತ್ತಿದೆ. ದೇಶದ ಯುವಕರು ಜವಾಬ್ದಾರಿಯುತವಾಗಿ ತಮ್ಮ ಮತದಾನದ ಹಕ್ಕನ್ನು ಚಲಾಯಿಸಬೇಕು ಎಂದು ಅವರು ಹೇಳಿದರು. ಅವರ ಈ ಹೇಳಿಕೆಗೆ ಸಾಮಾಜಿಕ ಜಾಲತಾಣದಲ್ಲಿ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿವೆ.**

# ಪ್ರಕೃತಿ ವಿಕೋಪ ತಡೆಗೆ ಅಗತ್ಯ ಕ್ರಮ ಕೈಗೊಳ್ಳಿ

## ನಗರ, ಗ್ರಾಮೀಣ ಭಾಗದಲ್ಲಿ ಮಳೆಯ ಕಾರಣದಿಂದ ಯಾವುದೇ ಸಮಸ್ಯೆ ಆದಲ್ಲಿ ಮೆಸ್ಕಾಂ ತ್ವರಿತವಾಗಿ ಕಾರ್ಯಪ್ರವೃತ್ತರಾಗಬೇಕು

• ಉದಯವಾಹಿನಿ, ಮಂಗಳೂರು

ಪ್ರಕೃತಿ ವಿಕೋಪದಿಂದ ಉಂಟಾಗುವ ಸಮಸ್ಯೆಗಳ ಕುರಿತಂತೆ ಅವಲೋಕನ ನಡೆಸಿ, ನಿಗಾವಹಿಸಿ ಅಗತ್ಯ ಮುಂಜಾಗ್ರತೆ ಕ್ರಮ ಕೈಗೊಳ್ಳುವಂತೆ ದ.ಕ. ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಎಂ.ಪಿ. ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಕುಡಿಯುವ ನೀರು, ವಿಪತ್ತು ನಿರ್ವಹಣೆ ಪ್ರಾಧಿಕಾರದ ಸಭೆಯಲ್ಲಿ ಅವರು ಮಾತನಾಡಿದರು.

ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಮಳೆಯ ಕಾರಣದಿಂದ ಯಾವುದೇ ಸಮಸ್ಯೆ ಆದಲ್ಲಿ ಮೆಸ್ಕಾಂ ತ್ವರಿತವಾಗಿ ಕಾರ್ಯ ಪ್ರವೃತ್ತರಾಗಬೇಕು. ವಿದ್ಯುತ್‌ಕಂಬ ಧರೆಗುರುಳಿ ಸಂಪರ್ಕ ಕಡಿತವಾದಲ್ಲಿ ಸಮಸ್ಯೆಗಳನ್ನು ಎದುರಿಸಲು ಮೆಸ್ಕಾಂ ಮುಂಜಾಗ್ರತಾ ಕ್ರಮವಾಗಿ ಸಿಬಂದಿ ನಿಯೋಜಿಸಬೇಕು. ವಿದ್ಯುತ್ ಸಮಸ್ಯೆ ಉಂಟಾದ 6 ಗಂಟೆ ಯಒಳಗೆ ಪರಿಹಾರ ಒದಗಿಸಬೇಕು. ಜನಸಾಮಾನ್ಯರಿಗೆ ಅನುಕೂಲ ವಾಗುವಂತೆ ಕಂಟ್ರೋಲ್ ರೂಂ ತೆರೆಯಬೇಕು ಎಂದು ಸೂಚಿಸಿದರು. ಈಗಾಗಲೇ ಜಿಲ್ಲೆಯ ಕೆಲವು ಕಡೆ ಟ್ಯಾಂಕರ್‌ಗಳ ಮೂಲಕ ನೀರನ್ನು ಸರಬರಾಜು ಮಾಡುತ್ತಿದ್ದು, ಅನಗತ್ಯ ಪೋಲು ಮಾಡುವವರಿಗೆ ದಂಡ ವಿಧಿಸಬೇಕು, ಟ್ಯಾಂಕರ್ ನೀರು ಹಾಗೂ ನೀರಿನ ಮೂಲಗಳು ಶುದ್ಧವಾಗಿರುವ ಬಗ್ಗೆ ಕಡ್ಡಾಯವಾಗಿ ಪರೀಕ್ಷೆ ಮಾಡಿಸಲು ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಿದರು.


ಉದಯವಾಹಿನಿ ಚಿತ್ರ

**ಉಭಯ ಜಿಲ್ಲಾಧಿಕಾರಿಗಳ ಸೂಚನೆ**

ಮಳೆ ಸಂದರ್ಭ ಡೆಂಗ್ಯೂ-ಮಲೇರಿಯಾ ಮೊದಲಾದ ಸಾಂಕ್ರಾಮಿಕ ಕಾಯಿಲೆಗಳು ಹರಡದಂತೆ ಆರೋಗ್ಯ ಇಲಾಖೆ ಕ್ರಮ ಕೈಗೊಳ್ಳುವುದರ ಜತೆಗೆ ಮಳೆಯಿಂದ ಹಾನಿ ಸಂಭವಿಸುವ ಪ್ರದೇಶದಲ್ಲಿ ಚಿಕಿತ್ಸೆಯನ್ನು ಒದಗಿಸಲು ಸಿದ್ಧರಾಗಿರುವಂತೆ ತಿಳಿಸಿ ದರು. ಅರಣ್ಯ ಇಲಾಖೆ ಮತ್ತು ಅಗ್ನಿಶಾಮಕ ದಳ ದವರು ಜಂಟಿಯಾಗಿ ವಿದ್ಯುತ್ ತಂತಿಗಳಿಗೆ ತಗಲುವ ಮರದ ರೆಂಬೆಗಳನ್ನು ಕತ್ತರಿಸಬೇಕು ಎಂದರು. ಎಲ್ಲಾ ಇಲಾಖೆಯ ಅಧಿಕಾರಿಗಳು ಸಮನ್ವಯ ದಿಂದ ಪರಿಹಾರಗಳ ಬಗ್ಗೆ ಚರ್ಚಿಸಬೇಕು.

> ಮಳೆಗಾಲದಲ್ಲಿ ಸಂಭವಿಸಬಹುದಾದ ನೆರೆ, ಸಿಡಿಲಾ ಘಾತ ಮೊದಲಾದ ಪ್ರಾಕೃತಿಕ ವಿಕೋಪಗಳಲ್ಲಿ ಜೀವಹಾನಿ ಹಾಗೂ ಆಸ್ತಿ-ಪಾಸ್ತಿ ಹಾನಿಯನ್ನು ತಪ್ಪಿಸಲು ಅಗತ್ಯವಿರುವ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು
> -ಡಾ. ಕೆ. ವಿದ್ಯಾಕುಮಾರಿ
> ಉಡುಪಿ ಜಿಲ್ಲಾಧಿಕಾರಿ

ಈ ನಿಟ್ಟಿನಲ್ಲಿ ವಾಟ್ಸ್ ಆ್ಯಪ್ ಗ್ರೂಪ್‌ಗಳನ್ನು ಸಿದ್ಧಪಡಿಸಬೇಕು. ದಿನದ 24 ಗಂಟೆಯೂ ಅವುಗಳನ್ನು ವೀಕ್ಷಿಸಲು ಸಿಬಂದಿಯನ್ನು ನಿಯೋಜಿಸ ಬೇಕು. ಮುಂಜಾಗ್ರತೆ ಕ್ರಮವಾಗಿ ರಾಜಕಾಲುವೆಗಳ ಹೂಳೆತ್ತಬೇಕು, ಕೊಟ್ಟಾರ, ಪಂಪ್‌ವೆಲ್‌ನಂತಹ ಪ್ರದೇಶಗಳಲ್ಲಿ ಈ ವರ್ಷವೂ ನೆರೆ ಸಂಭವಿಸದಂತೆ ಖುದ್ದು ಅಧಿಕಾರಿಗಳೇ ಭೇಟಿ ನೀಡಿಪರಿಶೀಲಿಸಬೇಕು ಎಂದು ಸೂಚಿಸಿದರು. ಜಿ.ಪಂ. ಸಿಇಒ ಡಾ. ಆನಂದ್ ಕೆ, ಎಸ್‌ಪಿ ಸಿ.ಬಿ. ರಿಷ್ಯಂತ್, ಮನಪಾ ಆಯುಕ್ತ ಆನಂದ್ ಸಿ.ಎಲ್., ಡಿಸಿಪಿ ಸಿದ್ಧಾರ್ಥ್ ಗೋಯಲ್, ಡಿಸಿಎಫ್ ಆಂಟೋನಿ ಮರಿಯಪ್ಪ, ಪುತ್ತೂರು ಉಪ ವಿಭಾಗಾಧಿ?ಕಾರಿ ಜುಬಿನ್ ಮಹೋಪಾತ್ರ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

### ಮಾಹಿತಿ ರವಾನಿಸುವ ಕೆಲಸ

ಅಧಿಕ ಮಳೆಯ ಸಂದರ್ಭ ಮೀನುಗಾರಿಕೆಗೆ ಹೋಗದಂತೆ ಮೀನುಗಾರರ ಸಭೆ ನಡೆಸಬೇಕು. ಮೀನುಗಾರಿಕೆ ಇಲಾಖೆ ಅಧಿಕಾರಿಗಳ ಮುಂದಾಳತ್ವದಲ್ಲಿ ಅಪಾಯಕ್ಕೆ ಸಿಲುಕಿದ ಮೀನುಗಾರರನ್ನು ರಕ್ಷಿಸಲು ತಂಡ ಸಿದ್ಧಪಡಿಸಬೇಕು. ಕೋಸ್ಟ್ ಗಾರ್ಡ್‌ನ ವತಿಯಿಂದ ಸಿಬಂದಿ ಒದಗಿಸಬೇಕು. ಮೀನುಗಾರರ ವಾಟ್ಸ್‌ಆ್ಯಪ್ ಗ್ರೂಪ್ ರಚಿಸಿ ಮಾಹಿತಿ ರವಾನಿಸುವ ಕೆಲಸವಾಗಬೇಕು ಮೀನುಗಾರಿಕಾ ಇಲಾಖೆಗೆ ಸೂಚಿಸಿದರು.

ಚಾರ್ಮಾಡಿ ಘಾಟಿ ಪ್ರದೇಶಗಳಲ್ಲಿ ಭೂಕುಸಿತ ಉಂಟಾಗುವ ಪ್ರದೇಶಗಳನ್ನು ರಾಷ್ಟ್ರೀಯ ಹೆದ್ದಾರಿಯವರು ಪಟ್ಟಿ ಮಾಡಬೇಕು. ಘಾಟಿ ಪ್ರದೇಶಗಳಲ್ಲಿ ರಸ್ತೆ ಸಂಚಾರಕ್ಕೆ ಅಡೆತಡೆ ಉಂಟಾದ ಬಗ್ಗೆ ಗೂಗಲ್‌ನ ಮುಖಾಂತರ ಮಾಹಿತಿ ಜನರಿಗೆ ತಲುಪುವ ವ್ಯವಸ್ಥೆ ಆಗಬೇಕು. ರಸ್ತೆ ಕುಸಿತ ಉಂಟಾದರೆ ಪರ್ಯಾಯ ರಸ್ತೆಗಳ ವ್ಯವಸ್ಥೆಯನ್ನು ಕಲ್ಪಿಸುವಂತೆ ತಿಳಿಸಿದರು.

ಅಣೆಕಟ್ಟುಗಳಲ್ಲಿ ಸಿಲುಕಿಕೊಂಡಿರುವ ಕಸ ಮರದ ತುಂಡುಗಳನ್ನು ತೆರವುಗೊಳಿಸಬೇಕು, ಸುತ್ತಲಿನ ಪ್ರದೇಶಗಳಲ್ಲಿ ಕೃತಕ ನೆರೆ ಉಂಟಾಗದಂತೆ ನೋಡಿಕೊಳ್ಳಬೇಕು. ವಿಪರೀತ ಗಾಳಿಯಿಂದ ಬಿದ್ದು ಜನರ ಜೀವಕ್ಕೆ ಹಾನಿ ಉಂಟು ಮಾಡುವ ಜಾಹಿರಾತು ಫಲ ಕಗಳನ್ನು ಕೂಡಲೆ ತೆರವುಗೊಳಿಸಬೇಕು ಎಂದರು.

---

## ಸುವರ್ಣ ನ್ಯೂಸ್ ನಿರೂಪಕ ಮೇಲೆ ಸೂಕ್ತ ಕ್ರಮ ಕೈಗೊಂಡು ಗಡಿಪಾರು ಮಾಡುವಂತೆ: ಅಬ್ದುಲ್ ಬಾಷೀದ್ ಆಗ್ರಹ

• ಉದಯವಾಹಿನಿ,ಚಿಂಚೋಳಿ

ಮೇ 5ರಂದ್ದು ಹಿಂದೂ ಮುಸ್ಲಿಂ ಜಾತಿಗಣತಿ ಮೇಲೆ ಸುದ್ದಿ ನಿರೂಪಣೆಯಲ್ಲಿ ಭಾರತ ಮತ್ತು ಪಾಕಿಸ್ತಾನದ ಪ್ರತ್ಯೇಕ ಧ್ವಜ ಬಳಸಿ ಮುಸ್ಲಿಂರಿಗೆ ಅವಮಾನವಾಗುವಂತೆ ಹಾಗೂ ಹಿಂದೂಗಳು ಪ್ರಚೋದನೆ ಆಗುವಂತೆ ಸುದ್ದಿ ಬಿತ್ತರಿಸಿ ಕೋಮುಗಲಭೆ ಸೃಷ್ಟಿಸುವ ಯತ್ನ ಮಾಡಿರುವ ಸುವರ್ಣ ನ್ಯೂಸ್ ಚಾನಲ್ ನಿರೂಪಕ ಅಜೀತ ಹನುಮಕ್ಕನವರ ಮೇಲೆ ಸೂಕ್ತ ಕ್ರಮಕೈಗೊಂಡು ಗಡಿಪಾಡು ಮಾಡುವಂತೆ ಪುರಸಭೆ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಅಬ್ದುಲ್ ಬಾಷೀದ್ ಆಗ್ರಹಿಸಿದರು.

ಪಟ್ಟಣದ ತಹಸೀಲ ಕಛೇರಿ ಎದುರು ತಾಲ್ಲೂಕಾ ಸರ್ವಧರ್ಮದ ಒಕ್ಕೂಟದಿಂದ ಮೇ.5ರಂದ್ದು ಸುವರ್ಣ ನ್ಯೂಸ್ ಚಾನಲ್ ಸುದ್ದಿ ಪ್ರಸಾರ ಮಾಡಿರುವ ನಿರೂಪಕ ಅಜೀತ ಹನುಮಕ್ಕನವರ ಮೇಲೆ ಸೂಕ್ತ ಕ್ರಮಕೈಗೊಳ್ಳುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿಪತ್ರ ಸಲ್ಲಿಸಿ ಮಾತನಾಡಿದ ಅವರು,ಭಾರತ ಪ್ರಜಾಪ್ರಭುತ್ವ ರಾಷ್ಟ್ರ ವಿಶ್ವದಲ್ಲಿ ಭಾರತಕ್ಕೆ ತನ್ನದೆಯಾದ ಇತಿಹಾಸವಿದ್ದು ಶಾಂತಿ ಸುವ್ಯವಸ್ಥೆಗೆ ಹೆಸರಾಗಿರುವಂತಹ ರಾಜ್ಯ ಕರ್ನಾಟಕ ರಾಜ್ಯವಾಗಿದೆ,ಯಾವುದೇ ಜಾತಿ ಮತ ಭೇಧ ಪಂತವಿಲ್ಲದೆ ಜನರು ನೆಮ್ಮದಿಯಿಂದ ಬದುಕು ನಡೆಸುತ್ತಿದ್ದಾರೆ ಎಂದರು.


ಉದಯವಾಹಿನಿ ಚಿತ್ರ

ಕೋಲಿ ಸಮಾಜದ ರಾಜ್ಯ ಕಾರ್ಯದರ್ಶಿ ಲಕ್ಷ್ಮಣ ಆವುಂಟಿ ಮಾತ ನಾಡಿದ ಅವರು, ಸಂವಿಧಾನದ ನಾಲ್ಕನೇ ಅಂಗ ವೆಂದೇ ಹೆಸರು ಪಡೆದಿರುವ ಮಾಧ್ಯಮರಂಗ, ಸಮಾಜದ ಅಂಕುಡೊಂಕುಗಳನ್ನು ತಿದ್ದಿ ಪ್ರಜಾಪ್ರತಿನಿಧಿಗಳಿಗೆ ಹಾಗೂ ಸರಕಾರಕ್ಕೆ ತಮ್ಮ ಸುದ್ದಿ ಸಂದೇಶ ಬಿತ್ತರಿಸುವ ಮೂಲಕ ನಿರ್ದೇಶನ ನೀಡುವ ಜವಾಬ್ದಾರಿ ಮಾಧ್ಯಮ ರಂಗದಾಗಿದೆ.

ಕೋಮು ಭಾವನೆ ಸೃಷ್ಟಿ ಮಾಡುತ್ತಾ,ಹಿಂದು ಮುಸ್ಲಾಂನರ ಧರ್ಮದ ಕುರಿತು ಪ್ರಚೋದನೆಯಾಗುವಂತಹ ಸುದ್ದಿ ಬಿತ್ತರಿಸಿದ ಕನ್ನಡ ಸುವರ್ಣ ನ್ಯೂಸ್ ಚಾನೇಲ್ ನಿಷೇಧಿಸಬೇಕು ಮತ್ತು ಅಜೀತ್ ಹನುಮಕ್ಕನವರ ಇಂತಹ ವ್ಯಕ್ತಿಯ ಮೇಲೆ ಕಾನೂನು ಪ್ರಕಾರ ಸೂಕ್ತ ಕ್ರಮವನ್ನು ತೆಗೆದುಕೊಂಡು ಕೂಡಲೇ ಈತನನ್ನು ಗಡಿಪಾರು ಮಾಡಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು.

> ಮೇ 5ರಂದು ರಾಜ್ಯದ ಕನ್ನಡ ಸುವರ್ಣ ನ್ಯೂಸ್ ನಿರೂಪಕ ಅಜೀತ್ ಹನುಮಕ್ಕನವರ್ ರವರು ದೇಶದಲ್ಲಿ ಮತಿಯವಾದಿ, ಕೋಮುವಾದಿ ಶಕ್ತಿಗಳಿಗೆ ಕುಮ್ಮಕ್ಕು ನೀಡುವಂತೆ ಸುದ್ದಿ ನಿರೂಪಣೆಯಲ್ಲಿ ಸುದ್ದಿ ಬಿತ್ತರಿಸಿವಾಗ ಹಿಂದುಗಳ ಜನಸಂಖ್ಯೆ ತಿಳಿಸಲು ತ್ರಿವರ್ಣ ಧ್ವಜ, ಮುಸ್ಲಿಂರ ಜನಸಂಖ್ಯೆ ತಿಳಿಸಲು ಪಾಕಿಸ್ತಾನದ ಧ್ವಜ ಬಳಕೆ ಮಾಡಿ ಸುದ್ದಿ ಬಿತ್ತರಿಸಿದ್ದು ಹೇಯ ಕೃತ್ಯವಾಗಿದೆ.

ಈ ಸಂದರ್ಭದಲ್ಲಿ ಆರ್.ಗಣಪತರಾವ, ನಾಗೇಶ ಗುಣಾಜೀ, ಮತೀನ ಸೌಧಾಗಾರ, ಬಂಜಾರ ಸಮಾಜ ಅಧ್ಯಕ್ಷ ರಾಮಶೆಟ್ಟಿ ಪವ್ಹಾರ, ಹಾಫೀಜ್ ಅಬ್ದುಲ್ ಹಮೀದ್, ಹಸೇನ್ ಹಾಶ್ಮಿ, ಮಹ್ಮದ್ ಹಾದಿಸಾಬ, ಖಲೀಲ್ ಪಟೇಲ, ಡಾ. ತುಕ್ಕಾರಾಮ ಪವ್ಹಾರ, ಗಂಗಾಧರ ಗಡ್ಡಿಮನಿ, ಶಬ್ಬೀರ ಅಹೇಮದ, ಅಹೇದ ಭಾಗಬಾನ, ಶೇಖ್ ಫರೀದ್, ಮಹ್ಮದ್ ಕಲೀಮ್, ಅಬ್ದುಲ್ ಕಲೀಂ, ಶಿವಾನಂದ ಮಾಲಿಪಾಟೀಲ, ಸುಭಾಶ್ಚಂದ್ರ ಎಂಪಳ್ಳಿ ಅನೇಕರಿದ್ದರು.

---

## ವಿದ್ಯಾರ್ಥಿ ನಿಲಯಕ್ಕೆ 25 ಕೋಟಿ ರೂ. ಬೇಕು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಂಗಳೂರು

ಅಕ್ಷರ ದೇಗುಲವಾಗಿರುವ ಮಂಗಳ ಗಂಗೋತ್ರಿಯ ವಿಶಾಲ ಕ್ಯಾಂಪಸ್‌ನಲ್ಲಿ ಪಾಳುಬಿದ್ದ ಕಟ್ಟಡದಂತೆ ಕಾಣುವ ಅಂತರರಾಷ್ಟ್ರೀಯ ವಿದ್ಯಾರ್ಥಿಗಳ ವಿದ್ಯಾರ್ಥಿ ನಿಲ ಯವು ಸದ್ಯದಲ್ಲಿ ಪೂರ್ಣಗೊಳ್ಳುವ ಲಕ್ಷಣಗಳು ಗೋಚ ರಿಸುತ್ತಿಲ್ಲ. ಆರ್ಥಿಕ ಮುಗ್ಗಟ್ಟಿನಿಂದ ಬಳಲುತ್ತಿರುವ ವಿ ಶ್ವವಿದ್ಯಾನಿಲಯಕ್ಕೆ ಹಣಕಾಸಿನ ಹೊಂದಾಣಿಕೆಯೇ ದೊಡ್ಡ ಸವಾಲಾಗಿದೆ. ವ್ಯಾಸಂಗ, ಸಂಶೋಧನೆಗೆ ಬರುವ ವಿದೇಶಿ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸುವ ಮಹತ್ವಾಕಾಂಕ್ಷೆಯೊಂದಿಗೆ 2016ರಲ್ಲಿ ಅಂತರರಾಷ್ಟ್ರೀಯ ವಿದ್ಯಾರ್ಥಿ ನಿಲಯ ನಿರ್ಮಾಣ ಯೋಜನೆಯನ್ನು ಮಂಗಳೂರು ವಿಶ್ವವಿದ್ಯಾಲಯವು ಕೈಗೆತ್ತಿಕೊಂಡಿತ್ತು.

ಎರಡು ಬ್ಲಾಕ್‌ಗಳ ನಿರ್ಮಾಣಕ್ಕೆ 32.42 ಕೋಟಿ ಜೊತೆಗೆ, ಹೆಚ್ಚುವರಿ ಕಾಮಗಾರಿಯಾಗಿ 16 ತರಗತಿ ಕೊಠಡಿಗಳ ನಿರ್ಮಾಣ, ಮಂಗಳ ಸಭಾಂಗಣ ನವೀಕರಣ, ವಿದ್ಯಾರ್ಥಿ ನಿಲಯಕ್ಕೆ ಪೀಠೋಪಕರಣ ಸೇರಿ ಅಂದಾಜು 48.45 ಕೋಟಿ ವೆಚ್ಚದ ಯೋಜನೆ ರೂಪಿಸಲಾಗಿತ್ತು. ಗುತ್ತಿಗೆದಾರರು ಹಾಕಿದ ಟೆಂಡರ್‌ನಲ್ಲಿ ಹೊಂದಾಣಿಕೆ ನಡೆಸಿ, ಶೇ 19.50ರಷ್ಟು ಅಧಿಕ ದರದಲ್ಲಿ (53.77 ಕೋಟಿ) ಟೆಂಡರ್ ನೀಡಲಾಗಿತ್ತು. ಕಾಮಗಾರಿಗೆ 18 ತಿಂಗಳುಗಳ ಕಾಲಾವಕಾಶ ನೀಡಲಾಗಿತ್ತು.

> ವಿಶ್ವವಿದ್ಯಾನಿಲಯದಲ್ಲಿ ಲಭ್ಯವಿರುವ ಅನುದಾನ ದಿಂದ ಹಾಸ್ಟೆಲ್ ನಿರ್ಮಿಸಲು ಯೋಜನೆ ರೂಪಿಸಿ ಕಾರ್ಯಾನುಷ್ಠಾನ ಮಾಡಲಾಗಿದೆ. 2016ರಲ್ಲಿ ಕಟ್ಟಡ ಕಾಮಗಾರಿ ಆರಂಭಿಸಿ, 2020ರಲ್ಲಿ ಇದಕ್ಕೆ ಸರ್ಕಾರದಿಂದ ಅನುಮತಿ ಪಡೆಯಲಾಗಿದೆ. ಅನುಮತಿ ಪಡೆಯುವ ವೇಳೆ ವಿವಿಯ ಆಂತರಿಕ ಸಂಪನ್ಮೂಲ ಬಳಕೆ ಮಾಡಿಕೊಂಡು ಕಟ್ಟಡ ನಿರ್ಮಿಸುವುದಾಗಿ ಸರ್ಕಾರಕ್ಕೆ ತಿಳಿಸಲಾಗಿತ್ತು. ಕಾಮಗಾರಿ ಪೂರ್ಣಗೊಳಿಸಲು ನಿವೃತ್ತ ಪ್ರಾಧ್ಯಾಪಕರ ಪಿಂಚಣಿಗೆ ಮೀಸಲಿದ್ದ ಹಣವನ್ನೂ ಬಳಕೆ ಮಾಡಲಾಗಿದೆ. ಆದರೂ, ಕಟ್ಟಡ ಪೂರ್ಣಗೊಳಿಸಲು ಸಾಧ್ಯವಾಗಿಲ್ಲ ಎಂದು ಹೆಸರು ಹೇಳಲಿಚ್ಛಿಸದ ಪ್ರಾಧ್ಯಾಪಕರೊಬ್ಬರು ತಿಳಿಸಿದರು.

ಆದರೆ, ಕಾಮಗಾರಿ ಪ್ರಾರಂಭವಾಗಿ ಎಂಟು ವರ್ಷಗಳಾದರೂ, ಇನ್ನೂ ಕಟ್ಟಡ ಅರೆಬರೆಯಾಗಿದ್ದು, ಬಳಕೆಗೆ ಬಾರದಂತಾಗಿದೆ. ಅನುಮೋದನೆಗೊಂಡ ಮೊತ್ತದ ಜೊತೆಗೆ ಹೆಚ್ಚುವರಿ ಕಾಮಗಾರಿ ಸೇರಿ ಒಟ್ಟು 63.22 ಕೋಟಿ ಅಂದಾಜು ವೆಚ್ಚದ ಯೋಜನೆ ಇದಾಗಿದೆ. ಇಡೀ ಕಟ್ಟಡ ಪೂರ್ಣಗೊಳ್ಳಲು ಇನ್ನೂ 25 ಕೋಟಿ ಅಗತ್ಯವಿದೆ ಎನ್ನುತ್ತವೆ ವಿವಿ ಮೂಲಗಳು.

---

## ಒಳಚರಂಡಿ ತ್ಯಾಜ್ಯ ಹರಿದು ಬಾವಿ ನೀರು ಕುಲುಷಿತ

• ಉದಯವಾಹಿನಿ, ಕಿನ್ನಿಗೋಳಿ

ಕಿನ್ನಿಗೋಳಿ ಪಟ್ಟಣ ಪಂಚಾಯತ್ ವ್ಯಾಪ್ತಿಯ ಬಿತ್ತುಲ್ ಪ್ರದೇಶದಲ್ಲಿ ಕಿನ್ನಿಗೋಳಿ ಪೇಟೆಯ ಒಳಚರಂಡಿ ನೀರು ತೆರೆದ ತೋಡಿನಲ್ಲಿ ಹರಿಯುವ ಕಾರಣ ಕಿನ್ನಿಗೋಳಿಯ ಬಿತ್ತುಲು ಪ್ರದೇಶದ ಹಲವು ಬಾವಿಯ ನೀರು ಹಾಳಾಗಿದ್ದು ಮಾತ್ರವಲ್ಲದೆ ಇಲ್ಲಿನ ಜನತೆಗೆ ರೋಗ ಭೀತಿ ಎದುರಾಗಿದೆ.

ಕಳೆದ 2016–2017ರಲ್ಲಿ ಕಿನ್ನಿಗೋಳಿ ಬಿತ್ತುಲ್ ಪ್ರದೇಶದಲ್ಲಿ ಎಸ್‌ಟಿಪಿ ಪ್ಲಾಂಟ್ ನಿರ್ಮಾಣ ವಾಗಿದ್ದು, ಕಿನ್ನಿಗೋಳಿಯ ಬಹು ಮಹಡಿ ಕಟ್ಟಡದ ತ್ಯಾಜ್ಯ ನೀರನ್ನು ಇದಕ್ಕೆ ಹಾಯಿಸಲಾಗಿ ಪ್ಲಾಂಟ್ ನಿಂದ ಹೊರ ಬಂದ ನೀರನ್ನು ಸ್ಥಳೀಯ ತೋಟಗಳಿಗೆ ಬಿಡಲಾಗುತ್ತಿತ್ತು. ಕಾಲ ಕ್ರಮೇಣ ನೀರು ಶುದ್ಧೀಕರಣಗೊಳ್ಳದೆ ನೇರವಾಗಿ ತೋಟಕ್ಕೆ ಹರಿದ ಕಾರಣ ಇಲ್ಲಿನ ವಾಸನೆಯುಕ್ತ ಪರಿಸರ ಮಾತ್ರವಲ್ಲದೆ, ತೆರೆದ ತೋಡಿನಲ್ಲಿ ಹರಿಯುವ ಕಾರಣ ಸ್ಥಳೀಯರ ಕುಡಿಯುವ ನೀರಿನ ಬಾವಿಗೆ ಇಂಗಿ ಅಲ್ಲಿಯ ನೀರು ಹಾಳಾಗಿದೆ. ಈ ಬಗ್ಗೆ ಸ್ಥಳೀಯರು ಕಿನ್ನಿಗೋಳಿ ಪಟ್ಟಣ ಪಂಚಾಯತ್ ಮತ್ತು ಶಾಸಕ ಉಮಾನಾಥ ಕೋಟ್ಯಾನ್ ಅವರಿಗೆ ದೂರು ನೀಡಿದ್ದರು.


ಉದಯವಾಹಿನಿ ಚಿತ್ರ

ಕಿನ್ನಿಗೋಳಿ ಬಹು ಮಹಡಿ ಕಟ್ಟಡಗಳಲ್ಲಿ ಎಸ್‌ಟಿಪಿ ಪ್ಲಾಂಟ್ ಇದ್ದರೂ ಕೆಲವೊಂದು ಸಲ ಶುದ್ಧೀಕರಿಸದೆ ನೇರವಾಗಿ ನೀರನ್ನು ಹೊರ ಬಿಡುತ್ತಾರೆ ಎಂಬುದು ಸ್ಥಳೀಯರ ಆರೋಪ. ಅಲ್ಲದೆ ಪಂಚಾಯತ್‌ನ ಎಸ್‌ಡಿಪಿ ಪ್ಲಾಂಟ್ ಕೂಡ ಕೆಟ್ಟು ಹೋಗಿದ್ದು, ಇದರಿಂದ ನೀರು ನೇರವಾಗಿ ಹೊರ ಬರುತ್ತದೆ ಎನ್ನಲಾಗುತ್ತಿದೆ. ಈ ಘಟಕದ ಪಂಪ್ ಕೆಟ್ಟು ಹೋಗಿದ್ದು, ಇತ್ತೀಚೆಗೆ ಹೊಸ ಪಂಪ್ ಅಳವಡಿಸಲಾಗಿದೆ. ಆದರೂ ಈ ಸಮಸ್ಯೆಯನ್ನು ಪರಿಹಾರ ಕಂಡಿಲ್ಲ.

---

## ಎನ್‌ಇಪಿ ರದ್ದುಗೊಳಿಸದಂತೆ ಆಗ್ರಹಿಸಿ ಎಬಿವಿಪಿ ಪ್ರತಿಭಟನೆ

• ಉದಯವಾಹಿನಿ, ಬೀದರ್

ರಾಷ್ಟ್ರೀಯ ಶಿಕ್ಷಣ ನೀತಿ-2020 ರದ್ದುಗೊಳಿಸದಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಕಾರ್ಯಕರ್ತರು ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ರ್‍ಯಾಲಿ ನಡೆಸಿದರು.

ಆನಂತರ ಮುಖ್ಯಮಂತ್ರಿಯವರ ಹೆಸರಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿಗೆ ಸಲ್ಲಿಸಿದರು.

ಬ್ರಿಟಿಷರು ಜಾರಿಗೆ ತಂದಿದ್ದ ಶಿಕ್ಷಣ ನೀತಿಯಿಂದ ಮುಕ್ತರಾಗಿ ಭಾರತೀಯ ಶಿಕ್ಷಣ ಪಡೆಯುವಂತಾಗಬೇಕು ಎಂಬ ಆಶಯದೊಂದಿಗೆ ಕೇಂದ್ರ ಸರ್ಕಾರವು ನೂತನ ಶಿಕ್ಷಣ ನೀತಿ ಜಾರಿಗೆ ತಂದಿದೆ. ಯಾವುದೇ ಕಾರಣಕ್ಕೆ ಇದನ್ನು ಹಿಂಪಡೆಯಬಾರದು. ಭಾರತೀಯ ಶಿಕ್ಷಣ ನೀತಿ ಜಾರಿಗೊಳಿಸಿದರೆ ಕೌಶಲಯುಕ್ತ, ಯುವಶಕ್ತಿ ನಿರ್ಮಾಣಕ್ಕೆ ಆಸ್ಪದ ಮಾಡಿಕೊಡುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬರೆದ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

ಎನ್‌ಇಪಿ ಅನುಷ್ಠಾನಗೊಳಿಸಿದ ಮೊದಲ ರಾಜ್ಯ ಕರ್ನಾಟಕ. ಚುನಾವಣಾ ಪ್ರಣಾಳಿಕೆಯಲ್ಲಿ ಎನ್‌ಇಪಿ ತೆಗೆಯುವುದಾಗಿ ಹೇಳಿದ ಕಾರಣಕ್ಕಾಗಿಯೇ ಹೊಸ ಶಿಕ್ಷಣ ನೀತಿಯನ್ನು ಬದಲಾಯಿಸಲು ರಾಜ್ಯ ಸರ್ಕಾರ ಹೊರಟಿದೆ. ಸರ್ಕಾರದ ಈ ನಡೆಯನ್ನು ಎಬಿವಿಪಿ ಖಂಡಿಸುತ್ತದೆ ಎಂದು ಹೇಳಿದ್ದಾರೆ.

### ಒಂದೇ ಬಗೆಯ ಶಿಕ್ಷಣ ಪದ್ಧತಿ

ಮುಂದಿನ 20ರಿಂದ 25 ವರ್ಷಗಳನ್ನು ಗಮನದಲ್ಲಿ ಇರಿಸಿಕೊಂಡು ಇಡೀ ದೇಶಕ್ಕೆ ಅನ್ವಯವಾಗುವಂತಹ ಒಂದೇ ಬಗೆಯ ಶಿಕ್ಷಣ ಪದ್ಧತಿಯನ್ನು ಜಾರಿಗೆ ತರಲಾಗಿದೆ. ರಾಜ್ಯ ಸರ್ಕಾರವು ರಾಷ್ಟ್ರೀಯತೆಯನ್ನು ತುಂಡರಿಸಿ, ಪ್ರತ್ಯೇಕತೆಯತ್ತ ಹೆಜ್ಜೆ ಇರಿಸುತ್ತಿರುವುದು ಸರಿಯಲ್ಲ. ರಾಜ್ಯದ ಬೆಳವಣಿಗೆಗೆ ಇದು ಹಿನ್ನಡೆಯಾಗಲಿದೆ. ಕೂಡಲೇ ರಾಜ್ಯ ಸರ್ಕಾರವು ಈ ನಿರ್ಧಾರದಿಂದ ಹಿಂದೆ ಸರಿಯಬೇಕು. ಇಲ್ಲವಾದರೆ ರಾಜ್ಯದಾದ್ಯಂತ ಹೋರಾಟ ಮಾಡಲಾಗುವುದು ಎಂದು ತಿಳಿಸಿದ್ದಾರೆ.

---

## ಭಕ್ತಿಪಥದಲ್ಲಿ ಮುನ್ನಡೆದಾಗ ವ್ಯಸನಮುಕ್ತಿ: ಹೆಗ್ಗಡೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಳ್ತಂಗಡಿ

ಯಾವುದೇ ಅಭ್ಯಾಸಗಳು ಆಕಸ್ಮಿಕವಾಗಿ, ಅನಾವಶ್ಯಕವಾಗಿ ಪ್ರಾರಂಭವಾಗುತ್ತದೆ. ಬದುಕು ಹಾಳು ಮಾಡಿಕೊಳ್ಳಬೇಕೆಂಬ ಭಾವನೆಯಿಂದ ಯಾರು ದುಶ್ಚಟಗಳನ್ನು ಮಾಡುವುದಿಲ್ಲ ಬದಲಿಗೆ ಸುಖ, ಸಂತೋಷ, ಧೈರ್ಯ, ಕೆಲಸ ಮುಂತಾದ ವಿಚಾರಗಳನ್ನು ಸಾಧಿಸಬಹುದೆಂಬ ಭ್ರಮೆಯಿಂದ ಚಟಕ್ಕೆ ಬಲಿ ಬೀಳುತ್ತಾರೆ.

ಆಧ್ಯಾತ್ಮದ ಒಲವು ಭಕ್ತಿ ಪಥದಲ್ಲಿ ಮುನ್ನಡೆದಾಗ ವ್ಯಸನಗಳು ಬಾಧಿಸುವುದಿಲ್ಲ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ.ವೀರೇಂದ್ರ ಹೆಗ್ಗಡೆಯವರು ಅಭಿಪ್ರಾಯಪಟ್ಟರು.

> ಧಾರ್ಮಿಕವಾಗಿ ಬದುಕುವವರು ಸ್ವಾಭಾವಿಕವಾಗಿ ಸಾತ್ವಿಕರಾಗುತ್ತಾರೆ. ಆಧ್ಯಾತ್ಮಿಕ ಚಿಂತನೆಗಳಿಂದ ಅತ್ಯುತ್ತಮ ವ್ಯಕ್ತಿತ್ವವನ್ನು ಸಾಧಿಸುತ್ತಾರೆ. ಆದುದರಿಂದ ಭಕ್ತಿ ಪಥದಲ್ಲಿ ಮುನ್ನಡೆದು ದುಶ್ಚಟಗಳನ್ನು ತ್ಯಜಿಸಿ ಸಂಸಾರದೊಂದಿಗೆ ಸಮಾಜದಲ್ಲಿ ನೆಮ್ಮದಿಯಿಂದ ಬಾಳಿ ಬದುಕಬಹುದು
> -ಡಾ. ಡಿ.ವೀರೇಂದ್ರ ಹೆಗ್ಗಡೆ
> ಶ್ರೀ ಕ್ಷೇತ್ರ, ಧರ್ಮಸ್ಥಳದ ಧರ್ಮಾಧಿಕಾರಿ

ಉಜಿರೆ ಲಾಲ ಗ್ರಾಮದಲ್ಲಿರುವ ಶ್ರೀ ಧರ್ಮಸ್ಥಳ ಮಂಜು ನಾಥೇಶ್ವರ ವ್ಯಸನಮುಕ್ತಿ ಮತ್ತು ಸಂಶೋಧನ ಕೇಂದ್ರದಲ್ಲಿ ನಡೆಯುತ್ತಿರುವ 223ನೇ ವಿಶೇಷ ಮದ್ಯವರ್ಜನ ಶಿಬಿರದಲ್ಲಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯನಿರ್ವಾಹಕ ನಿರ್ದೇಶಕರಾದ ಡಾ. ಎಲ್. ಎಚ್. ಮಂಜುನಾಥ್ ಮಾತನಾಡಿ, ಅಹಂಕಾರವೇ ವ್ಯಸನಕ್ಕೆ ಪ್ರಮುಖ ಕಾರಣ. ಈ ವ್ಯಸನವು ಕುಟುಂಬ, ತನ್ನೊಳಗಿನ ವಿಶ್ವಾಸ, ಭರವಸೆ, ಬದುಕಲು ನಿರ್ನಾಮ ಮಾಡುವುದರ ಜತೆಗೆ ನಮ್ಮ ಅಸ್ತಿತ್ವವನ್ನೇ ಇಲ್ಲದಾಗಿಸುತ್ತದೆ. ಇದನ್ನು ಅರ್ಥ ಮಾಡಿಕೊಂಡು ದೇವರಲ್ಲಿ ಅನುಸಂಧಾನ, ಕುಟುಂಬದಲ್ಲಿ ಒಡನಾಟ, ಮಕ್ಕಳಲ್ಲಿ ಪ್ರೀತಿ, ಗುರುಹಿರಿಯರಿಗೆ ಗೌರವ ಹೊಂದುತ್ತಾ ಬದಲಾಗಬೇಕೆಂದರು.

---

## ಚಿಮಣಿ ಮೇಲಿಂದ ಬಿದ್ದು ಕಾರ್ಮಿಕ ಸಾವು

• ಉದಯವಾಹಿನಿ, ವಿಜಯಪುರ

ಜಿಲ್ಲೆಯ ಕೂಡಗಿ ಬಳಿ ಇರುವ ರಾಷ್ಟ್ರೀಯ ಶಾಖೋತ್ಪನ್ನ ವಿದ್ಯುತ್ ಉತ್ಪಾದನಾ ಕೇಂದ್ರದಲ್ಲಿ ಕೆಲಸ ಮಾಡುತ್ತಿದ್ದ ಉತ್ತರ ಪ್ರದೇಶ ಮೂಲದ ಕಾರ್ಮಿಕ ಚಿಮಣಿ ಮೇಲಿಂದ ಬಿದ್ದು ಮೃತಪಟ್ಟಿರುವ ದುರಂತ ಘಟನೆ ಜರುಗಿದೆ.ಮೃತ ಕಾರ್ಮಿಕನನ್ನು ಉತ್ತರ ಪ್ರದೇಶದ ಗಾಜಿಪುರ ಮೂಲದ ಕಿಶನಕುಮಾರ ಭಾರದ್ವಾಜ್ (32) ಎಂದು ಗುರುತಿಸಲಾಗಿದೆ.ಇಂಡಿಯನ್ ಬ್ಯಾಗ್ ಪ್ರೈವೇಟ್ ಲಿಮಿಟೆಡ್ ಮೂಲಕ ಕಿಶನಕುಮಾರ ಕೊಲ್ಹಾರ ತಾಲ್ಲೂಕಿನ ಕೂಡಗಿ ಎನ್.ಟಿ.ಪಿ.ಸಿ. ಘಟಕದಲ್ಲಿ ಕಳೆದ ಮೂರು ವರ್ಷಗಳಿಂದ ಕೆಲಸ ಮಾಡುತ್ತಿದ್ದ.

ಮಂಗಳವಾರ ಸಂಜೆ ಕೆಲಸದಲ್ಲಿ ತೊಡಗಿದ್ದಾಗ 130 ಅಡಿ ಎತ್ತರದ ಚಿಮಣಿಗೆ ಕೇಬಲ್ ಅಳವಡಿಸುವ ಕಾರ್ಯದಲ್ಲಿ ನಿರತವಾಗಿದ್ದಾಗ ಆಯತಪ್ಪಿ ಕೆಳಗೆ ಬಿದ್ದು, ಮೃತಪಟ್ಟಿದ್ದಾನೆ.


ಉದಯವಾಹಿನಿ ಚಿತ್ರ

ಕಿಶನಕುಮಾರ ದುರಂತ ಘಟನೆ ಬಳಿಕ ಆಕ್ರೋಶಗೊಂಡ ಕಾರ್ಮಿಕರು, ಅಪಾಯಕಾರಿ ಕೆಲಸದಲ್ಲಿ ತೊಡಗುವ ಕಾರ್ಮಿಕರಿಗೆ ಸೂಕ್ತ ರಕ್ಷಣೆ ಇಲ್ಲ. ರಕ್ಷಣಾತ್ಮಕ ಪರಿಕರಗಳು ಇಲ್ಲದೇ ಕೆಲಸ ಮಾಡುವ ಕಾರ್ಮಿಕರು ಈ ರೀತಿ ದುರಂತ ಸಾವಿಗೆ ಈಡಾಗುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ ಕಾರ್ಮಿಕರು ಘಟಕದ ಎದುರು ಪ್ರತಿಭಟನೆ ನಡೆಸಿದರು. ಮೃತ ಕಿಶನಕುಮಾರ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು, ಘಟಕದಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕರ್ತವ್ಯ ನಿರ್ವಹಣೆ ಸಂದರ್ಭದಲ್ಲಿ ಸುಧಾರಿತ ರಕ್ಷಣಾತ್ಮಕ ಪರಿಕರಗಳನ್ನು ಒದಗಿಸಬೇಕು. ಮೃತ ಕಾರ್ಮಿಕನ ಕುಟುಂಬಕ್ಕೆ ತುರ್ತಾಗಿ ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು. ಎನ್.ಟಿ.ಪಿ.ಸಿ. ಕೂಡಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

---

# 18 ವರ್ಷ ಕಳೆದರೂ ಹೂಳೆತ್ತುವ ಕಾಮಗಾರಿ ನಡೆದಿಲ್ಲ

## ನೀರುಣಿಸುತ್ತಿದ್ದ ಸೊರ್ಕಳ ಕೆರೆ ಹೂಳು ತುಂಬಿಕೊಂಡು ಸೊರಗಿ ಹೋಗಿದ್ದು, ಕೆರೆಯ ಅಭಿವೃದ್ಧಿ ಕಾರ್ಯ ತುರ್ತಾಗಿ ನಡೆಯಬೇಕಿದೆ

• ಉದಯವಾಹಿನಿ, ಶಿರ್ವ

ಕಾಪು ವಿಧಾನಸಭಾ ಕ್ಷೇತ್ರದ ಕುತ್ಯಾರು, ಶಿರ್ವ, ಮುದರಂಗಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಿಗೆ ನೀರುಣಿಸುತ್ತಿದ್ದ ಸೊರ್ಕಳ ಕೆರೆ ಹೂಳು ತುಂಬಿಕೊಂಡು ಸೊರಗಿ ಹೋಗಿದ್ದು, ಕೆರೆಯ ಅಭಿ ವೃದ್ಧಿ ಕಾರ್ಯ ತುರ್ತಾಗಿ ನಡೆಯಬೇಕಿದೆ.

10 ಎಕರೆ ಪ್ರದೇಶದಲ್ಲಿರುವ ಸೊರ್ಕಳ ಕೆರೆಯ 7.55 ಎಕರೆ ಪ್ರದೇಶವು ಕುತ್ಯಾರು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಟ್ಟರೆ, ಉಳಿದ ಭಾಗ ಶಿರ್ವ ಹಾಗೂ ಮುದರಂಗಡಿ ಗ್ರಾಮ ಪಂಚಾಯಿತಿಯ ಪಿಲಾರು ಗ್ರಾಮದ ವ್ಯಾಪ್ತಿಗೆ ಸೇರಿದೆ. ಕೆರೆಯನ್ನು ಜಿಲ್ಲಾ ಪಂಚಾಯಿತಿಯ 11ನೇ ಹಣಕಾಸು ಯೋಜನೆ ಯಡಿ 2003-04ರಲ್ಲಿ ಮಂಜೂರಾದ ಹಣದಿಂದ 2005-06ರಲ್ಲಿ ಕುತ್ಯಾರು ಗ್ರಾಮ ಪಂಚಾಯಿತಿ ವತಿಯಿಂದ 3.6 ಲಕ್ಷ ವೆಚ್ಚದಲ್ಲಿ ಹೂಳೆತ್ತಲಾಗಿತ್ತು. ಅದಾಗಿ 18 ವರ್ಷ ಕಳೆದರೂ ಹೂಳೆತ್ತುವ ಕಾಮಗಾರಿ ನಡೆದಿಲ್ಲ.


ಉದಯವಾಹಿನಿ ಚಿತ್ರ

**ಸೊರ್ಕಳ ಕೆರೆಯ ಅಭಿವೃದ್ಧಿ ಯಾವಾಗ?**

ಇದರಿಂದ ಕೆರೆಯ ವಿಸ್ತೀರ್ಣವೂ ಕ್ಷೀಣಿಸುತ್ತಿದೆ. ಈ ಭಾಗದ ಕೃಷಿಕರು ಸೊರ್ಕಳ ಕೆರೆಯ ನೀರನ್ನೇ ನಂಬಿಕೊಂಡು ಭತ್ತ, ಅಡಿಕೆ, ತೆಂಗು ಕೃಷಿ ಕಾರ್ಯದಲ್ಲಿ ತೊಡಗಿಕೊಳ್ಳುತ್ತಿದ್ದರು. ಆದರೆ, ಕಾಲ ಕ್ರಮೇಣ ಕೆರೆಯ ಹೂಳೆತ್ತುವ ಕಾಮಗಾರಿ ನಡೆಯದೆ, ತೋಡುಗಳ ನಿರ್ವಹಣೆಯೂ ಇಲ್ಲದೆ ಕಸ ಕಡ್ಡಿ ತುಂಬಿಕೊಂಡಿದೆ.

> ಸಾವಿರಾರು ಎಕರೆ ಕೃಷಿಭೂಮಿಗೆ ವರದಾನ ಸೊರ್ಕಳ ಕೆರೆ ಮೂರು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವುದರಿಂದ ಇದರ ನಿರ್ವಹಣೆಯ ಬಗ್ಗೆ ಸಮಗ್ರ ಚಿಂತನೆಗಳು ನಡೆದಿಲ್ಲ. ಮುಂದಿನ ದಿನಗಳಲ್ಲಿ ನೀರಾವರಿ ಇಲಾಖೆಗಳ ಗಮನ ಸೆಳೆಯುವ ಪ್ರಯತ್ನ ಮಾಡಲಾಗುವುದು. ಈ ಕೆರೆ ಅಭಿವೃದ್ಧಿಯಾದಲ್ಲಿ ಸಾವಿರಾರು ಎಕರೆ ಕೃಷಿಭೂಮಿಗೆ ವರದಾನವಾಗಲಿದೆ
> -ಜನಾರ್ದನ ಆಚಾರ್ಯ, ಅಧ್ಯಕ್ಷ

ಪ್ರತಿ ವರ್ಷ ಕಾವೇರಿ ಸಂಕ್ರಮಣದಂದು ಗ್ರಾಮಸ್ಥರೆಲ್ಲ ಸೇರಿ ಕೆರೆಯಿಂದ ಹೊರ ಹೋಗುವ ನೀರಿಗೆ ಅಣೆಕಟ್ಟು ಕಟ್ಟುವ ಪದ್ಧತಿಯೂ ಹಲವು ವರ್ಷಗಳಿಂದ ಚಾಲ್ತಿಯಲ್ಲಿತ್ತು. ಆದರೆ, ಇತ್ತೀಚೆಗಿನ ದಿನಗಳಲ್ಲಿ ಈ ಪದ್ಧತಿ ನಿಂತು ಹೋಗಿ ಅಣೆಕಟ್ಟಿನ ನಿರ್ವಹಣೆಯಿಲ್ಲದೆ ಕೃಷಿಯೂ ಇಲ್ಲ. ಜೊತೆಗೆ ಕುಡಿಯುವ ನೀರಿಗೂ ತತ್ವಾರ ಬಂದೊದಗಿದೆ.ವಿಸ್ತಾರವಾಗಿ ಹರಡಿಕೊಂಡಿರುವ ಸೊರ್ಕಳ ಕೆರೆಯ ಹೂಳೆತ್ತುವ ಕಾಮಗಾರಿ ನಡೆದು ಸಮಗ್ರ ಅಭಿವೃದ್ಧಿ ಹೊಂದಿದಲ್ಲಿ, ಅಂತರ್ಜಲ ವೃದ್ಧಿಗೆ ಸಹಾಯವಾಗುತ್ತದೆ. ಅಲ್ಲದೆ ಪರಿಸರದ ಬಾವಿಗಳಲ್ಲಿಯೂ ನೀರಿನ ಒರತೆ ಹೆಚ್ಚಾಗುವ ಸಾಧ್ಯತೆಯಿದೆ.

> ಕೆರೆ ಅಭಿವೃದ್ಧಿ ಬಗ್ಗೆ ಚಿಂತನೆ ಕೆರೆ ಅಭಿವೃದ್ಧಿಯ ಕುರಿತು ಮೂರು ಗ್ರಾಮ ಪಂಚಾಯತಿ ಆಡಳಿತಗಳು ಜೊತೆಯಾಗಿ ಚರ್ಚಿಸಿ ಅಭಿವೃದ್ಧಿ ಬಗ್ಗೆ ಚಿಂತನೆ ನಡೆಸಲಾಗುವುದು
> -ರಜನಿ ರಾವ್, ಅಭಿವೃದ್ಧಿ ಅಧಿಕಾರಿ

ಒಂದು ಬದಿಯಲ್ಲಿ ಬಂಡೆಕಲ್ಲು ಜೊತೆಗೆ ಪ್ರಕೃತಿದತ್ತ ಸೌಂದರ್ಯದಿಂದ ಕಂಗೊಳಿಸುತ್ತಿರುವ 10 ಎಕರೆ ಪ್ರದೇಶದ ಈ ಕೆರೆಯನ್ನು ಹೂಳು ತೆಗೆದು ಅಭಿವೃದ್ಧಿ ಪಡಿಸಿದಲ್ಲಿ ಪ್ರವಾಸಿ ತಾಣವಾಗಿಯೂ ಮಾಡಬಹುದು. ಕೆರೆಯು ವರ್ಷವಿಡೀ ನೀರಿನಿಂದ ತುಂಬಿದ್ದು, ಸರಿಯಾದ ನಿರ್ವಹಣೆಯ ಜೊತೆ ಸುತ್ತಲು ವಾಕಿಂಗ್ ಟ್ರ್ಯಾಕ್, ಬೋಟಿಂಗ್, ವಿಶ್ರಾಂತಿಗಾಗಿ ಆಸನ ವ್ಯವಸ್ಥೆ ಕಲ್ಪಿಸಿದಲ್ಲಿ ನಿತ್ಯ ನೂರಾರು ಜನರು ಪ್ರಕೃತಿ ಸೌಂದರ್ಯ ಸವಿಯಲು ಬರುತ್ತಾರೆ.

ಆದ್ದರಿಂದ ಶಿರ್ವ, ಮುದರಂಗಡಿ, ಕುತ್ಯಾರಿನ ಗ್ರಾಮ ಪಂಚಾಯಿತಿಗಳು ಒಮ್ಮನಸ್ಸಿನಿಂದ ಒಗ್ಗಟ್ಟಾಗಿ ಕೆರೆಯ ಅಭಿವೃದ್ಧಿ ಕಾಮಗಾರಿ ಬಗ್ಗೆ ಚಿಂತನೆ ನಡೆಸಿ, ನೀರಾವರಿ ಇಲಾಖೆಗೆ ಮನವಿ ಮಾಡುವ ಮೂಲಕ ಸೊರ್ಕಳ ಕೆರೆಯ ಅಭಿವೃದ್ಧಿಗೆ ಮುಂದಾಗಬೇಕು ಎಂಬುದು ಸ್ಥಳೀಯರ ಆಗ್ರಹ.

---

## ಮಿನಿ ನ್ಯೂಸ್

### ನಿಂತಿದ್ದ ಲಾರಿಗೆ ಟಿಟಿ ಡಿಕ್ಕಿ ಓರ್ವ ಸಾವು, ಹಲವರಿಗೆ ಗಾಯ

• ಉದಯವಾಹಿನಿ, ಕಡೂರು

ಇಲ್ಲಿನ ರಾಷ್ಟ್ರೀಯ ಹೆದ್ದಾರಿಯ ಯುನಿವರ್ಸಿಟಿ ಸಮೀಪದ ಬ್ರಿಡ್ಜ್ ಬಳಿ ಬುಧವಾರ ಬೆಳಗ್ಗೆ ಡೀಸೆಲ್ ಖಾಲಿಯಾಗಿ ನಿಂತಿದ್ದ ಲಾರಿಗೆ ಟಿಟಿ ಡಿಕ್ಕಿ ಹೊಡೆದ ಪರಿಣಾಮ ಅದರಲ್ಲಿದ್ದ ವ್ಯಕ್ತಿಯೊಬ್ಬರು ದಾರುಣವಾಗಿ ಸಾವನ್ನಪ್ಪಿದ್ದು, 13 ಮಂದಿ ಗಾಯಗೊಂಡಿದ್ದಾರೆ. ಮೃತ ದುರ್ದೈವಿ ಮಂಜುನಾಥ (40) ಎನ್ನುವವರಾಗಿದ್ದು, ಹಾಸನ ತಾಲ್ಲೂಕಿನ ವಂಗೆರೆ ಗ್ರಾಮದ ನಿವಾಸಿ ಎಂದು ತಿಳಿದು ಬಂದಿದೆ. 3 ಮಂದಿಗೆ ಗಂಭೀರ ಗಾಯಗಳಾಗಿದ್ದು ಹಾಸನ ಮೆಡಿಕಲ್ ಕಾಲೇಜು ಆಸ್ಪತ್ರೆಗೆ ದಾಖಲಿಸಲಾಗಿದೆ. ಟಿಟಿಯಲ್ಲಿದ್ದ ರಂಗಪ್ಪ, ಅಶ್ವಿನಿ, ಲಕ್ಷ್ಮಿ, ಭೂಮಿಕ, ನಾಗರಾಜು, ರುಕ್ಮಿಣಿ, ಪ್ರೀತಮ್, ಸಾಗರ್, ದೊರೆಸ್ವಾಮಿ, ಸಂಜಯ್ ಅವರು ಗಾಯಗೊಂಡಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ. ಟಿಟಿ ಚಾಲಕ ಮಣಿಕುಮಾರ್ ಅವರಿಗೂ ಪೆಟ್ಟಾಗಿದ್ದು ಕಡೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಚೇತರಿಸಿಕೊಂಡಿದ್ದಾರೆ ಎಂದು ತಿಳಿದು ಬಂದಿದೆ. ಪೊಲೀಸರು ಸ್ಥಳಕ್ಕಾಗಮಿಸಿ ಪರಿಶೀಲನೆ ನಡೆಸಿ ಕ್ರಮ ಕೈಗೊಂಡಿದ್ದಾರೆ.

### ಬಸ್ - ಬೈಕ್ ಅಪಘಾತ; ಸವಾರ ಸ್ಥಳದಲ್ಲೇ ಸಾವು

• ಉದಯವಾಹಿನಿ, ಪುತ್ತೂರು

ಬಸ್, ಬೈಕ್ ನಡುವೆ ಅಪಘಾತ ಸಂಭವಿಸಿ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟ ಘಟನೆ ಪುತ್ತೂರು ಪುರುಷರಕಟ್ಟೆ ಎಂಬಲ್ಲಿ ಸಂಭವಿಸಿದೆ. ಬೈಕ್ ಸವಾರನನ್ನು ವಿಟ್ಲ ಕುಂಡಡ್ಕ ನಿವಾಸಿ ಮೋಕ್ಷಿತ್ (24)ಎಂದು ಗುರುತಿಸಲಾಗಿದೆ. ಪುತ್ತೂರು ಕಡೆಯಿಂದ ಪುರುಷರಕಟ್ಟೆ ಕಡೆಗೆ ಹೋಗುತ್ತಿದ್ದ ಬೈಕ್ ಬಸ್ ಗೆ ಡಿಕ್ಕಿ ಹೊಡೆದ ಪರಿಣಾಮ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಹೆಚ್ಚಿನ ಮಾಹಿತಿ ತಿಳಿದು ಬರಬೇಕಿದೆ.

### ಬಿರು ಬೇಸಿಗೆಯಲ್ಲೂ ಗೋಕಾಕ್ ಫಾಲ್ಸ್‌ನಲ್ಲಿ ಜಲವೈಭವ

• ಉದಯವಾಹಿನಿ, ಬೆಳಗಾವಿ

ಬಿರು ಬೇಸಿಗೆಯಲ್ಲೂ ಸುಪ್ರಸಿದ್ಧ ಗೋಕಾಕ್ ಫಾಲ್ಸ್‌ನಲ್ಲಿ ಜಲವೈಭವ ಸೃಷ್ಟಿಯಾಗಿದೆ. ಮಳೆಗಾಲದಲ್ಲಿ ಪ್ರವಾಸಿಗರನ್ನು ಸೂಜಿಗಲ್ಲಿನಂತೆ ಸೆಳೆಯುವ ಫಾಲ್ಸ್ ಈಗ ಬೇಸಿಗೆಯಲ್ಲೂ ಧುಮ್ಮಿಕ್ಕುತ್ತಿದೆ. ಘಟಪ್ರಭಾ ಜಲಾಶಯದಿಂದ ನೀರು ಬಿಡುಗಡೆ ಮಾಡಿದ ಪರಿಣಾಮ ಗೋಕಾಕ್ ಜಲಪಾತ ಧುಮ್ಮಿಕ್ಕಿ ಹರಿಯುತ್ತಿದೆ. ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಡ್ಯಾಂನಲ್ಲಿರುವ ಘಟಪ್ರಭಾ ಜಲಾಶಯದಿಂದ ನದಿಪಾತ್ರದ ಜನರಿಗೆ ಕುಡಿಯುವ ನೀರಿಗೆ ಅನುಕೂಲ ಕಲ್ಪಿಸಲು ನೀರು ಬಿಡುಗಡೆ ಮಾಡಲಾಗಿದೆ. ಕಳೆದ ಮೂರು ದಿನಗಳಿಂದ ಹಂತಹಂತವಾಗಿ ಒಂದೂವರೆ ಟಿಎಂಸಿ ನೀರು ಬಿಡುಗಡೆಯಾಗಿದೆ. ದೊಡ್ಡ ಪ್ರಮಾಣದಲ್ಲಿ ನಿತ್ಯ ನೀರು ಬಿಡುಗಡೆಯಾಗುತ್ತಿರುವ ಕಾರಣಕ್ಕೆ ಗೋಕಾಕ್ ಫಾಲ್ಸ್ ಜನರನ್ನು ಸೆಳೆಯುತ್ತಿದೆ. 180 ಅಡಿ ನೀರು ಧುಮ್ಮುಕ್ಕುವ ಈ ಜಲಪಾತ ನೋಡುವುದೇ ಪ್ರವಾಸಿಗರಿಗೆ ಹಬ್ಬವಾಗಿದೆ.

### ಗೆಲುವಿನ ಲೆಕ್ಕಾಚಾರ; ಟ್ರ್ಯಾಕ್ಟರ್ ಪಣಕ್ಕಿಟ್ಟ ರೈತರು

• ಉದಯವಾಹಿನಿ, ಶಿಕಾರಿಪುರ

ಲೋಕಸಭೆ ಚುನಾವಣೆಯ ಅಭ್ಯರ್ಥಿಗಳ ಸೋಲು- ಗೆಲುವಿನ ಲೆಕ್ಕಾಚಾರ ವಿಚಾರ ತಾಲ್ಲೂಕಿನಲ್ಲಿ ಬಹು ಚರ್ಚೆಗೆ ಒಳಗಾಗುತ್ತಿದ್ದು, ರೈತರು ಕಾಂಗ್ರೆಸ್, ಬಿಜೆಪಿ ಅಭ್ಯರ್ಥಿಗಳ ಗೆಲುವಿನ ಬಗ್ಗೆ ಟ್ರ್ಯಾಕ್ಟರ್ ಪಣಕಿಟ್ಟಿದ್ದಾರೆ. ಈ ಕುರಿತ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಕೆಲವು ದಿನಗಳ ಹಿಂದೆ ತಾಲ್ಲೂಕಿನ ಕಲ್ಮನೆ ಗ್ರಾಮದ ರೈತ ರವೀಂದ್ರ ಅವರು ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಚುನಾವಣೆಯಲ್ಲಿ ಗೆಲುವು ಸಾಧಿಸಲಿದ್ದಾರೆ ಎಂದು ಸವಾಲು ಹಾಕಿ ಟ್ರ್ಯಾಕ್ಟರ್ ಪಣಕಿಟ್ಟಿದ್ದರು. ಈಗ ಬಿಜೆಪಿ ಅಭ್ಯರ್ಥಿ ಬಿ.ವೈ.ರಾಘವೇಂದ್ರ ಅವರು ಚುನಾವಣೆಯಲ್ಲಿ ಗೆಲುವು ಸಾಧಿಸಲಿದ್ದಾರೆ ಎಂದು ಪಟ್ಟಣದ ಬಿಜೆಪಿ ಕಾರ್ಯಕರ್ತ, ರೈತ ಜಮೀನ್ದಾರ್ ಮಂಜುನಾಥ್ ಟ್ರ್ಯಾಕ್ಟರ್ ಪಣಕಿಟ್ಟು ಸವಾಲು ಹಾಕಿದ್ದಾರೆ. ಇಬ್ಬರು ತಮ್ಮ ಅಭ್ಯರ್ಥಿಗಳ ಪರ ಟ್ರ್ಯಾಕ್ಟರ್ ಪಣಕಿಟ್ಟು ಸವಾಲ್ ಹಾಕಿರುವ ಈ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

### ಅನೈರ್ಮಲ್ಯದ ತಾಣವಾದ ಬೆಳವಗಿ

• ಉದಯವಾಹಿನಿ, ಗುತ್ತಲ

ಇಲ್ಲಿಗೆ ಸಮೀಪದ ಬೆಳವಗಿ ಗ್ರಾಮದ ಬಹುತೇಕ ಕಡೆಗಳಲ್ಲಿ ಚರಂಡಿಯನ್ನು ಸ್ವಚ್ಛಗೊಳಿಸದ ಕಾರಣ ಚರಂಡಿಗಳು ಕಸದಿಂದ ತುಂಬಿ ತುಳುಕುತ್ತಿವೆ. ಕೆಲ ಕಡೆಗಳಲ್ಲಿ ಚರಂಡಿಯನ್ನು ಸ್ವಚ್ಛಗೊಳಿಸದರೂ ಕಸ ವಿಲೇವಾರಿ ಮಾಡದ ಕಾರಣ ದುರ್ವಾಸನೆ ಬೀರುತ್ತಿದೆ.ಗ್ರಾಮ ಪಂಚಾಯ್ತಿಯವರು ಬೀದಿದೀಪವನ್ನು ಸರಿಯಾಗಿ ನಿರ್ವಹಣೆ ಮಾಡದ ಕಾರಣ ಹಲವಾರು ವಿದ್ಯುತ್ ಕಂಬಗಳಲ್ಲಿ ದೀಪಗಳು ಬೆಳಗುತ್ತಿಲ್ಲ.ಕತ್ತಲಲ್ಲಿ ನಡೆದಾಡುವುದು ಅನಿವಾರ್ಯ ಎಂದು ಗ್ರಾಮಸ್ಥರು ಆರೋಪಿಸುತ್ತಾರೆ. ವಿವಿಧ ಕಡೆಗಳಲ್ಲಿ ಚರಂಡಿಗಳು ನಿರ್ಮಾಣವಾಗಬೇಕಿದೆ. ಸಿ.ಸಿ ರಸ್ತೆಗಳು ಸಂಪೂರ್ಣ ಹಾಳಾಗಿವೆ. ಕೂಡಲೆ ಗ್ರಾಮ ಪಂಚಾಯ್ತಿಯವರು ಹಾಳಾದ ಸಿ.ಸಿ ರಸ್ತೆ ಮತ್ತು ಚರಂಡಿಗಳನ್ನು ನಿರ್ಮಾಣ ಮಾಡಬೇಕು' ಎಂಬುದು ಗ್ರಾಮಸ್ಥರ ಆಗ್ರಹ. ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿಗಾಗಿ ಪರದಾಡಬೇಕಿದೆ.

### ಮತ್ತೆ ಮಳೆಯ ಸಿಂಚನ; ರೈತರಲ್ಲಿ ಮಂದಹಾಸ

• ಉದಯವಾಹಿನಿ, ಕೊಪ್ಪಳ

ಬರಗಾಲ, ಬಿರುಬಿಸಿಲು, ಬಿಸಿಗಾಳಿಗೆ ಬೇಸತ್ತು ಹೋಗಿದ್ದ ಜಿಲ್ಲೆಯ ಜನರಿಗೆ ಮೇಲಿಂದ ಮೇಲೆ ಸುರಿಯುತ್ತಿರುವ ಮಳೆ ಖುಷಿ ನೀಡಿದೆ. ಕೃಷಿ ಚಟುವಟಿಕೆಗೆ ಸಿದ್ಧರಾಗುತ್ತಿರುವ ರೈತರಲ್ಲಿಯೂ ಮಳೆಯ ಹನಿಗಳು ಮಂದಹಾಸ ಮೂಡಿಸಿವೆ. ಬುಧವಾರದ ಬೆಳಗಿನ ಜಾವದ ತನಕ ಕೊಪ್ಪಳ, ಕುಷ್ಟಗಿ ತಾಲ್ಲೂಕಿನ ಹನುಮಸಾಗರ, ಮುನಿರಾಬಾದ್, ಕುಕನೂರು, ಗಂಗಾವತಿ ಸೇರಿದಂತೆ ಜಿಲ್ಲೆಯ ಹಲವು ಕಡೆ ಉತ್ತಮವಾಗಿ ಮಳೆಯಾಗಿದೆ. ಹನುಮಸಾಗರದಲ್ಲಿ ಬೆಳಗಿನ ಜಾವ 4.30ರ ತನಕ ಮಳೆ ಬಂದಿದೆ. ಗಂಗಾವತಿಯೊಂದರಲ್ಲಿಯೇ 2.6 ಸೆಂ.ಮೀ. ಮಳೆಯಾಗಿದೆ. ಎರಡು ದಿನಗಳ ಹಿಂದೆಯೂ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿತ್ತು. ಮಳೆ ಬರಲು ಆರಂಭಿಸಿದ ಬಳಿಕ ಬಿಸಿಲಿನ ತಾಪವೂ ಕಡಿಮೆಯಾಗಿದ್ದು, ತಂಪನೆಯ ವಾತಾವರಣವಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಮಧ್ಯಾಹ್ನ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಯೋಗ ಮತ್ತು ಧ್ಯಾನ ನೀವು ಒಳ್ಳೆಯ ದೇಹರಚನೆ ಕಾಯ್ದುಕೊಳ್ಳಲು ಮತ್ತು ಮಾನಸಿಕವಾಗಿ ಸಧೃಢವಾಗಿರಲು ಸಹಾಯ ಮಾಡುತ್ತದೆ. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ.

**ವೃಷಭ** ಯೋಗ ಮತ್ತು ಧ್ಯಾನ ನೀವು ಒಳ್ಳೆಯ ದೇಹರಚನೆ ಕಾಯ್ದುಕೊಳ್ಳಲು ಮಾನಸಿಕವಾಗಿ ಸಧೃಢವಾಗಿರಲು ಸಹಾಯ ಮಾಡುತ್ತದೆ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ.

**ಮಿಥುನ** ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ.

**ಕರ್ಕಾಟಕ** ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ.

**ಸಿಂಹ** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

**ಕನ್ಯಾ** ಆತಂಕ, ಉದ್ವೇಗದ ಪ್ರತೀ ತುಣುಕೂ ದೇಹದ ಮೇಲೆ ಪ್ರತಿಕೂಲ ಪರಿಣಾಮ ಬೀರುವುದರಿಂದ ಇದನ್ನು ತಡೆಯಿರಿ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯನ್ನು ಹೊಂದಿರಬಹುದು.

**ತುಲಾ** ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ.

**ವೃಶ್ಚಿಕ** ನೀವು ಹಂಚಿಕೊಂಡ ಉತ್ತಮ ಸಮಯವನ್ನು ನೆನಪಿಸಲು ನಿಮ್ಮ ಸ್ನೇಹವನ್ನು ನೆನಪು ಮಾಡಿಕೊಳ್ಳುವ ಸಮಯ. ಕಚೇರಿಯಲ್ಲಿ ಇಂದು ನೀವು ಪರಿಸ್ಥಿತಿಯನ್ನು ಅರ್ಥಮಾಡಿಕೊಂಡು ವರ್ತಿಸಬೇಕು.

**ಧನಸ್ಸು** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು.

**ಮಕರ** ನಿಮ್ಮ ಹಠಮಾರಿ ಧೋರಣೆ ಕೇವಲ ಸಮಯ ವ್ಯರ್ಥವಾದದ್ದರಿಂದ ಆದನ್ನು ನಿಮ್ಮ ಸಂತೋಷದ ಜೀವನದ ಸಲುವಾಗಿ ತೊರೆದುಬಿಡಿ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ.

**ಕುಂಭ** ನಿಮ್ಮ ಭಾವನೆಗಳನ್ನು ನಿಯಂತ್ರಿಸಲು ನಿಮಗೆ ಕಷ್ಟವಾಗಬಹುದು – ನಿಮ್ಮ ಅಸಾಮಾನ್ಯ ವರ್ತನೆ ನಿಮ್ಮ ಸುತ್ತಲಿನ ಜನರನ್ನು ಗೊಂದಲದಲ್ಲಿ ಕೆಡವಬಹುದು ಮತ್ತು ನಿಮ್ಮನ್ನು ನಿರಾಸೆಗೊಳಿಸಬಹುದು.

**ಮೀನ** ನಿಮ್ಮ ನಿರಾಶಾದಾಯಕ ನಡವಳಿಕೆಯಿಂದಾಗಿ ನೀವು ಯಾವುದೇ ಪ್ರಗತಿಯನ್ನು ಹೊಂದಲು ಸಾಧ್ಯವಾಗುವುದಿಲ್ಲ. ಚಿಂತೆ ನಿಮ್ಮ ಚಿಂತನಾ ಶಕ್ತಿ ಯನ್ನು ಕುಂಠಿತಗೊಳಿಸಿದೆಯೆಂದು ಕಂಡುಕೊಳ್ಳಲು ಇದು ಸಕಾಲ.

# ಬಿಸಿಲಿನ ಬೇಗೆಗೆ ಸ್ವಿಮ್ಮಿಂಗ್ ಪೂಲ್‌ಗೆ ಲಗ್ಗೆ

**• ಕಳೆದ ಕೆಲ ವರ್ಷಗಳಿಗೆ ಹೋಲಿಸಿದರೆ ಈ ಬಾರಿ ಏಪ್ರಿಲ್ ತಿಂಗಳಲ್ಲಿ ಬಿಸಿಲು ರೌದ್ರಾವತಾರ ತಾಳಿದೆ**

• ಉದಯವಾಹಿನಿ ಗದಗ

ಸಾರ್ವಜನಿಕರು ಬಿಸಿಲಿನ ತಾಪದಿಂದ ಹೊರಬರಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಗದಗ-ಬೆಟಗೇರಿ ಅವಳಿ ನಗರದಲ್ಲಿ ನಿರ್ಮಾಣಗೊಂಡಿರುವ ನಾಲ್ಕು ಸ್ವಿಮ್ಮಿಂಗ್ ಪೂಲ್‌ಗಳಿಗೆ ಲಗ್ಗೆಯಿಟ್ಟಿದ್ದಾರೆ.

ಕಳೆದ ನಾಲ್ಕು ತಿಂಗಳ ಅವಧಿಯಲ್ಲಿ ಅಂದರೆ ಜನವರಿಯಿಂದ ಏಪ್ರಿಲ್ ಅಂತ್ಯದವರೆಗೆ 30 ಸಾವಿರಕ್ಕೂ ಅಧಿಕ ಜನರು ಸ್ವಿಮ್ಮಿಂಗ್ ಪೂಲ್ ಬಳಕೆ ಮಾಡಿಕೊಂಡಿದ್ದು, 14.62 ಲಕ್ಷ ರೂ ಕಲೆಕ್ಷನ್ ಆಗಿದೆ. ಕಳೆದ ಕೆಲ ವರ್ಷಗಳಿಗೆ ಹೋಲಿಸಿದರೆ ಈ ಬಾರಿ ಏಪ್ರಿಲ್ ತಿಂಗಳಲ್ಲಿ ಬಿಸಿಲು ರೌದ್ರಾವತಾರ ತಾಳಿದಂತಿತ್ತು. ಉಷ್ಣಾಂಶದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಏರಿಕೆಯಾಗಿತ್ತು. ಪ್ರಸಕ್ತ ವರ್ಷ ಏಪ್ರಿಲ್ 6ರಂದು 41 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ ದಾಖಲಾಗಿರುವುದು ಕಳೆದ 12 ವರ್ಷಗಳ ಇತಿಹಾಸದಲ್ಲಿ ದಾಖಲೆಯಾಗಿತ್ತು. ಉಷ್ಣಾಂಶದಲ್ಲಿ ಏರಿಕೆ, ಬಿಸಿಲಿನ ತಾಪ ಹಾಗೂ ಈಜು ಕಲಿಯುವ ಹುಮ್ಮಸ್ಸಿನಲ್ಲಿ ಅತ್ಯಧಿಕ ಸಂಖ್ಯೆಯ ಸ್ವಿಮ್ಮಿಂಗ್ ಪೂಲ್‌ಗೆ ಆಗಮಿಸಿ ಈಜುವ ಮೂಲಕ ತಣಿದಿದ್ದಾರೆ, ಸಂತಸ ಪಟ್ಟಿದ್ದಾರೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣ, ಕಳಸಾಪೂರ ರಸ್ತೆ ನಂದೀಶ್ವರ ಈಜುಕೊಳ, ರಾಜೀವಗಾಂಧಿ ನಗರದ ಸ್ವಾಮಿ ವಿವೇಕಾನಂದ ಈಜುಕೊಳ, ವಸಂತಸಿಂಗ್ ಜಮಾದಾರ ನಗರದಲ್ಲಿರುವ ಈಜುಕೊಳ ಸೇರಿ ಒಟ್ಟು ನಾಲ್ಕು ಈಜುಗೊಳದಲ್ಲಿ ಸಾರ್ವಜನಿಕರು ಬಿಸಿಲಿನ ಬೇಗೆಯಿಂದ ತಣಿಯಲು ಪ್ರಯತ್ನಿಸಿದ್ದಾರೆ. ಅವಳಿ ನಗರದಲ್ಲಿರುವ ನಾಲ್ಕೂ ಈಜುಕೊಳಗಳಲ್ಲಿ ಪ್ರತಿದಿನ ಬೆಳಗ್ಗೆ 6ರಿಂದ ಸಂಜೆ 6ರ ವರೆಗೆ ಸ್ವಿಮ್ಮಿಂಗ್ ಪೂಲ್ ತೆರೆದಿದ್ದು ತಲಾ 45 ನಿಮಿಷಗಳಿಗೆ 50 ರೂ. ವಂತಿಗೆ ಪಾವತಿಸಿ ಪ್ರತಿದಿನ ಸುಮಾರು 250ರಿಂದ 300 ಜನರು ಸ್ವಿಮ್ಮಿಂಗ್ ಪೂಲ್ ಬಳಕೆ ಮಾಡಿಕೊಂಡಿದ್ದಾರೆ. ಈಜು ಕಲಿಯುವವರು ತರಬೇತಿ ಸಹಿತ 21 ದಿನಗಳಿಗೆ 3 ಸಾವಿರ ರೂ., ಮಾಸಿಕ ಪಾಸ್ 1,000 ರೂ. ಶುಲ್ಕ ಪಾವತಿಸಿ ಈಜುಕೊಳಗಳನ್ನು ಸದ್ಬಳಕೆ ಮಾಡಿಕೊಂಡಿದ್ದಾರೆ. ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಜಿಲ್ಲಾ ಕ್ರೀಡಾಂಗಣದ ಈಜುಕೊಳದಲ್ಲಿ ಮಕ್ಕಳಿಗೆ ಮತ್ತು ವಯಸ್ಕರಿಗೆ ವಿಶೇಷ ಬೇಸಿಗೆ ಶಿಬಿರ ಆರಂಭಿಸಿತ್ತು. ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿನ ಈಜುಕೊಳದಲ್ಲಿ 3 ಸಿಬ್ಬಂದಿ, ಕಳಸಾಪೂರ ರಸ್ತೆಯ ನಂದೀಶ್ವರ ಈಜುಕೊಳ, ರಾಜೀವಗಾಂಧಿ ನಗರದ ಸ್ವಾಮಿ ವಿವೇಕಾನಂದ ಈಜುಕೊಳ ಹಾಗೂ ವಸಂತಸಿಂಗ್ ಜಮಾದಾರ ನಗರದಲ್ಲಿರುವ ಈಜುಕೊಳದಲ್ಲಿ ತಲಾ ಇಬ್ಬರಂತೆ ಒಟ್ಟು 9 ಸಿಬ್ಬಂದಿ ಈಜುಕೊಳದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಈ ವಿಶೇಷ ಶಿಬಿರದಲ್ಲಿ ಮನರಂಜನೆಗಾಗಿ ಮಾತ್ರ ಗಂಟೆ ಮತ್ತು ತಿಂಗಳ ಲೆಕ್ಕದಲ್ಲಿ ಶುಲ್ಕ ಪಾವತಿಸಿ ಈಜುಕೊಳಕ್ಕೆ ಆಗಮಿಸಿ ದೇಹ ತಣ್ಣಗೆ ಮಾಡಿಕೊಳ್ಳುತ್ತಿದ್ದಾರೆ. ಶಿಬಿರಾರ್ಥಿಗಳಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಕ್ರೀಡಾ ತರಬೇತುದಾರ ಮಾಹಿತಿ ನೀಡಿದರು.

**ಬೊಕ್ಕಸಕ್ಕೆ ಅತ್ಯಧಿಕ ಹಣ**

**ಮಾರ್ಚ್, ಏಪ್ರಿಲ್‌ನಲ್ಲೆ ಅತೀ ಹೆಚ್ಚು ಶುಲ್ಕ ಸಂದಾಯ: ಕಳೆದ ಮಾರ್ಚ್ ತಿಂಗಳಿನಲ್ಲಿ ನಾಲ್ಕು ಈಜುಕೊಳ ಮೂಲಕ ಸಾರ್ವಜನಿಕರಿಂದ 3,90,100 ರೂ. ಹಣ ಸಂದಾಯವಾದರೆ, ಏಪ್ರಿಲ್‌ನಲ್ಲಿ ದಾಖಲೆಯ 9,24,350 ರೂ. ಸಂದಾಯವಾಗುವ ಮೂಲಕ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಬೊಕ್ಕಸಕ್ಕೆ ಅತ್ಯಧಿಕ ಹಣ ಪಾವತಿಯಾಗಿರುವುದು ಇದೇ ಮೊದಲ ಬಾರಿಯಾಗಿದೆ.**


ಉದಯವಾಹಿನಿ ಚಿತ್ರ

**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀನದಲ್ಲಿ ನಾಲ್ಕು ಈಜುಕೊಳಗಳು ಕಾರ್ಯ ನಿರ್ವಹಿಸುತ್ತಿರುವುದು ಹೆಮ್ಮೆಯ ವಿಷಯ. ಈ ಭಾಗದ ವಿದ್ಯಾರ್ಥಿಗಳಿಗೆ, ಈಜುಪಟುಗಳಿಗೆ, ಸಾರ್ವಜನಿಕರಿಗೆ ಈಜುಕೊಳಗಳು ಸದ್ಬಳಕೆಯಾಗುತ್ತಿವೆ. ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಜಿಪಂ ಸಿಇಒ ಭರತ್ ಎಸ್. ಸಂಪೂರ್ಣ ಸಹಾಯ, ಸಹಕಾರ ನೀಡಿದ್ದರಿಂದಲೇ ಇಷ್ಟೆಲ್ಲ ಸಾಧ್ಯವಾಗಿದೆ. -ಡಾ. ಶರಣು ಗೋಗೇರಿ, ಸಹಾಯಕ ನಿರ್ದೇಶಕರು,**

**14.62 ಲಕ್ಷ ರೂ. ಕಲೆಕ್ಷನ್**

## 6 ತಿಂಗಳಲ್ಲಿ ಒಂದು ಬಾರಿ ಜಂತು ನಿವಾರಕ ಮಾತ್ರೆ ನಿಮ್ಮ ಮಕ್ಕಳಿಗೆ ನುಂಗಿಸಿ ಬೆಳವಣಿಗೆ ಕುಂಠಿತವಾಗದಂತೆ ನೋಡಿಕೊಳ್ಳಿ

• ಉದಯವಾಹಿನಿ ಚಿತ್ರದುರ್ಗ


ಉದಯವಾಹಿನಿ ಚಿತ್ರ

6 ತಿಂಗಳಲ್ಲಿ ಒಂದು ಬಾರಿ ಜಂತು ನಿವಾರಕ ಮಾತ್ರೆ ನಿಮ್ಮ ಮಕ್ಕಳಿಗೆ ನುಂಗಿಸಿ ಬೆಳವಣಿಗೆ ಕುಂಠಿತವಾಗದಂತೆ ನೋಡಿಕೊಳ್ಳಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಅಭಿಪ್ರಾಯ ಪಟ್ಟರು.

ಪ್ರಾಥಮಿಕ ಆರೋಗ್ಯ ಚಿಕ್ಕಗೊಂಡನಹಳ್ಳಿ ಚಿತ್ರದುರ್ಗ ತಾಲ್ಲೂಕು ನ ಗ್ರಾಮಕ್ಕೆ 2 ನೇ ಹಂತದ ಸಮೂದಾಯ ಆಧಾರಿತ ರಾಷ್ಟ್ರೀಯ ಜಂತು ಹುಳ ನಿವಾರಣಾ ಕಾರ್ಯಕ್ರಮದಲ್ಲಿ ಮನೆ ಮನೆ ಭೇಟಿ 1 ನೇ ಹಂತದಲ್ಲಿ ಜಂತು ನಿವಾರಕ ಮಾತ್ರೆ ನುಂಗದೇ ಉಳಿದ ಮಕ್ಕಳಿಗೆ ದಿನಾಂಕ 13-05-2024 ರಿಂದ 27-05-2024 ತನಕ ನಡೆಯುತ್ತಿರುವ ಸಮೂದಾಯ ಆಧಾರಿತ ರಾಷ್ಟ್ರೀಯ ಜಂತು ಹುಳ ನಿವಾರಣಾ ಕಾರ್ಯಕ್ರಮದ ಅನುಷ್ಠಾನ ಪರಿಶೀಲಿಸಿ ಅವರು ಮಾಹಿತಿ ಶಿಕ್ಷಣ ನೀಡಿದರು.

ನಿಮ್ಮ ಮಕ್ಕಳಿಗೆ 6 ತಿಂಗಳಿಗೊಮ್ಮೆ ಜಂತುಹುಳ ನಿವಾರಣಾ ಮಾತ್ರೆ ನುಂಗಿಸಬೇಕು ಜಂತುಹುಳು ಬಾದೆಯಿಂದ ಮಕ್ಕಳ ಬೆಳವಣಿಗೆ ಕುಂಠಿತವಾಗುತ್ತದೆ ,ಕಲಿಕೆಯಲ್ಲಿ ಹಿಂದೆ ಉಳಿಯುತ್ತಾರೆ ರಕ್ತಹೀನತೆ ಉಂಟಾಗಿ ರೋಗ ನಿರೋಧಕ ಶಕ್ತಿ ಕ್ಷೀಣಿಸುತ್ತದೆ ಮಣ್ಣಿನಲ್ಲಿ ಆಟವಾಡುವ ಮಕ್ಕಳಿಗೆ ಸರಿಯಾದ ಕ್ರಮದಲ್ಲಿ ಕೈತೊಳೆಯುವ ಅಭ್ಯಾಸ ಇಲ್ಲದಿದ್ದರೆ ಜಂತುಬಾದೆ ಪ್ರಾರಂಭವಗುತ್ತದೆ ಮಕ್ಕಳಿಗೆ ಮಣ್ಣಿನಲ್ಲಿ ಆಟವಾಡಿ ಬಂದನಂತರ, ಶೌಚಾಲಯ ಬಳಸಿದನಂತರ, ಊಟಕ್ಕೆ ಮೊದಲು ಮತ್ತು ಊಟದ ನಂತರ ಸಾಬೂನಿನಿಂದ ಕೈ ತೊಳೆಯುವ ಅಭ್ಯಾಸವನ್ನು ರೂಡಿ ಮಾಡಿ ನಿಮ್ಮ ಮಕ್ಕಳನ್ನು ಕಾಯಿಲೆಗಳಿಂದ ರಕ್ಷಿಸಿ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ವೈಯ್ಯಕ್ತಿಕ ಸ್ವಚ್ಚತೆ, ಕೈ ತೊಳೆಯುವ ವಿಧಾನದ ಬಗ್ಗೆ ತಿಳಿಸಿದರು ಮನೆ ಮನೆ ಬೇಟೆಯಲ್ಲಿ ಮೊದಲ ಹಂತದಲ್ಲಿ ಜಂತು ಮಾತ್ರೆ ನುಂಗದೇ ಇರುವ 28 ಮಕ್ಕಳಿಗೆ ಜಂತು ಮಾತ್ರೆ ನುಂಗಿಸಲಾಯಿತು ಹಿರಿಯ ಆರೋಗ್ಯ ಸುರಕ್ಷತಾಧಿಕಾರಿ ಸುಧಾ, ಆಶಾ ಕಾರ್ಯಕರ್ತೆ ಶಾರದ ಉಪಸ್ಥಿತರಿದ್ದರು.

## ಅಂಬೇಡ್ಕರ್ ಸಿದ್ಧಾಂತ ಪಾಲಿಸಿದಾಗ ಸಂಘಟನೆ ಸಾರ್ಥಕ

• ಉದಯವಾಹಿನಿ ಜೇವರ್ಗಿ


ಉದಯವಾಹಿನಿ ಚಿತ್ರ

ಇವತ್ತಿನ ದಿನಗಳಲ್ಲಿ ಹಲವಾರು ಸಂಘಟನೆಗಳು ಬೆಳೆದು ನಿಂತೀವಿ ಅದರ ಜೊತೆಯಲ್ಲಿ ಹಲವಾರು ದಲಿತ ಪರ ಸಂಘಟನೆಯು ಸಹ ರಚನೆ ಆಗಿವೆ ಬಹಳ ಸಂತೋಷ ಆದರೆ ಅವುಗಳ ಕಾರ್ಯ ಬಹಳ ಪ್ರಮುಖವಾಗಿರುತ್ತದೆ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ಸಾರಿದ ಶಿಕ್ಷಣ ಸಂಘಟನೆ ಹೋರಾಟ ಸಿದ್ಧಾಂತ ಪಾಲಿಸಬೇಕು ಮೊದಲು ಎಲ್ಲರೂ ಶಿಕ್ಷಣಕ್ಕೆ ಒತ್ತು ಕೊಡಬೇಕು ನಂತರ ಸಂಘಟನೆ ಮೂಲಕ ಹಲವಾರು ಸಮಾಜದ ವಿರುದ್ಧ ಆಗುವ ದೌರ್ಜನ್ಯ ವಿರುದ್ಧ ಧ್ವನಿ ಎತ್ತಬೇಕು ಅದಕ್ಕೆ ಕಾನೂನಿನ ನೆರವಿನಿಂದ ನ್ಯಾಯ ಒದಗಿಸಿದಾಗ ಅದು ಸಾರ್ಥಕ ನಿಮ್ಮ ಹೋರಾಟಕ್ಕೆ ಬೆಲೆ ಬರುತ್ತೆ ಎಂದು ತಾಲ್ಲೂಕಿನ ಮಂದೇವಾಲ ಗ್ರಾಮದಲ್ಲಿ ಭೀಮ್ ಆರ್ಮಿ ಕರ್ನಾಟಕ ಏಕತ ಮಿಷನ್ ಸಂಘಟನೆಯ ಗ್ರಾಮ ಘಟಕ ರಚನೆ ಕಾರ್ಯಕ್ರಮದಲ್ಲಿ ಎಂದು ಶರಣು ನೆರಡಗಿ ಮಾತನಾಡಿದರು.

ಸಂಘಟನೆ ಉತ್ತಮ ರೀತಿಯಲ್ಲಿ ನಡಿಸಿಕೊಂಡು ಹೋಗಬೇಕು ಸಂಘಟನೆಯ ತತ್ವ ಸಿದ್ಧಾಂತ ಪಾಲನೆ ಮಾಡಬೇಕು ಭೀಮ್ ಆರ್ಮಿ ಜೇವರ್ಗಿ ತಾಲ್ಲೂಕ ಅಧ್ಯಕ್ಷರಾದ ಸುನಿಲ್ ರಾಜಾಹುಲಿ ತಿಳಿಸಿದರು.

ಮಂದೇವಾಲ ಗ್ರಾಮ ಘಟಕದ ಪದಾಧಿಕಾರಿಗಳು ಮಲ್ಲಪ್ಪ ಸುಣ್ಣೂರು ಅಧ್ಯಕ್ಷರು, ರಾಹುಲ್ ಸಿಂಗೆ ಉಪಾಧ್ಯಕ್ಷರು, ಬಾಗೇಶ್ ನೇರಡಗಿ ಕಾರ್ಯದರ್ಶಿ, ಮುನ್ನ ಶೇಕ್ ಸಹಕಾರದರ್ಶಿ, ಖಜಾಂಚಿ ಸುನಿಲ್ ಲಂಗೋಟಿ,ವಿದ್ಯಾರ್ಥಿ ಘಟಕ ಅಧ್ಯಕ್ಷರು ಪ್ರವೀಣ್ ಸುಣ್ಣೂರ್, ಸದಸ್ಯರು. ಶ್ರೀಮಂತ್ ಜಡಗಿ. ಶ್ರೀಶೈಲ್ ಬುಟ್ನಾಳ. ನಾಗಪ್ಪ ಬುಟ್ನಾಳ, ಜೈ ಭೀಮ್ ನೆರಡಗಿ, ಹುಲಿಯಪ್ಪ ಲಂಗೋಟಿ, ಚೇತನ್ ಬುಟ್ನಾಳ್,ಅನಿಲ್ ಸಿಂಗೆ,ಈರಪ್ಪ ಬಡಿಗೇರ್, ಸದಸ್ಯರನ್ನು ನೇಮಕಾತಿ ಮಾಡಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕ್ ಪಂಚಾಯತ್ ಸದಸ್ಯರ ಸಾಗರ ಮಂದೇವಾಲ, ರಾಹುಲ ಪಂಚಶೀಲ, ಮಿಲ್ಲಿಂದ ಸಾಗರ್, ಗ್ರಾಮಸ್ಥರು ಯುವಕರು ಉಪಸ್ಥಿತರಿದ್ದರು.

**ಸಂಘಟನೆಯಲ್ಲಿ ನಾವು ಸಾಗುವ ದಾರಿಯಲ್ಲಿ ಹಲವಾರು ಅಡಚಣೆ ಬರುತ್ತವೆ ನಾವು ಬಹಳ ತಾಳ್ಮೆಯಿಂದ ಇರಬೇಕು ಯಾವುದೇ ಆತುರದ ನಿರ್ಧಾರ ನಮ್ಮ ಪ್ರಗತಿಗೆ ಕಂಠಕವಾಗುವ ಸಾಧ್ಯತೆ ಇರುತ್ತೆ ಎಚ್ಚರಿಕೆಯಿಂದ ಸಾಗಬೇಕು -ಶರಣು ನೆರಡಗಿ**

## ಸಮಸ್ಯೆಗಳನ್ನು ನಿಭಾಯಿಸಲು ಸಿದ್ಧತೆ ಆರಂಭಿಸಲು ಸೂಚನೆ

• ಉದಯವಾಹಿನಿ ಮಂಗಳೂರು


ಉದಯವಾಹಿನಿ ಚಿತ್ರ

ಮಳೆಗಾಲದಲ್ಲಿ ಪೂರ್ವಭಾವಿಯಾಗಿ ದಕ್ಷಿಣ ಕನ್ನಡ ಜಿಲ್ಲಾಡಳಿತವು ವಿವಿಧ ಮಳೆ ಸಂಬಂಧಿತ ಸಮಸ್ಯೆಗಳನ್ನು ಎದುರಿಸಲು ಸಿದ್ಧತೆಗಳನ್ನು ಆರಂಭಿಸಿದೆ. ನಡೆದ ಸಭೆಯಲ್ಲಿ, ಜಿಲ್ಲಾಧಿಕಾರಿ ಮುಲ್ಲೈ ಮುಹಿಲನ್ ಎಂಪಿ ಅವರು ಮುಂಗಾರು ಹಂಗಾಮಿನ ಸವಾಲುಗಳನ್ನು ಹೇಗೆ ನಿಭಾಯಿಸಬೇಕು ಎಂಬುದರ ಕುರಿತು ನಿರ್ದೇಶನಗಳೊಂದಿಗೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕುಡಿಯುವ ನೀರು ಮತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ (ಮೆಸ್ಕಾಂ) ಅಡಿಯಲ್ಲಿನ ವಿದ್ಯುತ್ ವ್ಯವಸ್ಥೆಯ ಅಸಮರ್ಪಕ ನಿರ್ವಹಣೆಯಿಂದ ಎದುರಿಸುತ್ತಿರುವ ಸಮಸ್ಯೆಗಳನ್ನು ಎತ್ತಿ ತೋರಿಸಿದರು. ಮಳೆ ಸಮಯದಲ್ಲಿ ವಿದ್ಯುತ್ ಸರಬರಾಜಿನ ವೈಫಲ್ಯ ಮಾತ್ರವಲ್ಲದೆ ಲೈವ್ ಕೇಬಲ್‌ಗಳು, ಸಂಪರ್ಕ ಕಡಿತ ಮತ್ತು ಧರೆಗುರುಳುವ ವಿದ್ಯುತ್ ಕಂಬಗಳು ಆತಂಕಕ್ಕೆ ಕಾರಣವಾಗಿವೆ. ಇದರಿಂದ ಪ್ರಾಣ ಮತ್ತು ಆಸ್ತಿಪಾಸ್ತಿಗೆ ಗಂಭೀರ ಹಾನಿಯಾಗುವುದರಿಂದ ಮೆಸ್ಕಾಂ ಮುಂಜಾಗ್ರತಾ ಕ್ರಮವಾಗಿ ತಪಾಸಣೆ ನಡೆಸಿ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಳೆಗಾಲದಲ್ಲಿ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಲು ಮತ್ತು ಜಿಲ್ಲೆಯಾದ್ಯಂತ ಹೆಚ್ಚಿನ ನಿಯಂತ್ರಣ ಕೊಠಡಿಗಳನ್ನು ತೆರೆಯಲು ಮೆಸ್ಕಾಂಗೆ ನಿರ್ದೇಶನ ನೀಡಿದರು. ನಗರ ಮತ್ತು ಗ್ರಾಮೀಣ ಪ್ರದೇಶಗಳಿಗೆ ಸಮಾನ ಪ್ರಾಮುಖ್ಯತೆ ನೀಡಬೇಕು.

ಮುಂಗಾರು ಪೂರ್ವದಲ್ಲಿ, ಈಗಿರುವ ನೀರಿನ ಲಭ್ಯತೆಯನ್ನು ವಿವೇಚನೆಯಿಂದ ನಿರ್ವಹಿಸಬೇಕು ಎಂದು ಹೇಳಿದರು.

**ಸ್ವಚ್ಚತೆಗೆ ಒತ್ತು**

**ಮಳೆಗಾಲಕ್ಕೂ ಮುನ್ನ ಡಂಪಿಂಗ್ ಯಾರ್ಡ್ ಹಾಗೂ ಕಸ ವಿಲೇವಾರಿ ಸ್ಥಳಗಳ ಸ್ವಚ್ಛತೆಗೆ ಒತ್ತು ನೀಡಲಾಯಿತು. ಮಳೆಗಾಲದಲ್ಲಿ ಡೆಂಗ್ಯೂ, ಮಲೇರಿಯಾದಂತಹ ಸಾಂಕ್ರಾಮಿಕ ರೋಗಗಳು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಆರೋಗ್ಯ ಇಲಾಖೆಗೆ ಸೂಚಿಸಲಾಯಿತು.**

## ಸರ್ಕಾರಿ ಜಾಗಕ್ಕೆ 2 ಸಮುದಾಯಗಳ ನಡುವೆ ಗಲಾಟೆ

• ಉದಯವಾಹಿನಿ ಚಿಕ್ಕಮಗಳೂರು


ಉದಯವಾಹಿನಿ ಚಿತ್ರ

**ಇಡೀ ಗ್ರಾಮವೇ ರಣರಂಗ**

ಸರ್ಕಾರಿ ಜಾಗದ ವಿಚಾರಕ್ಕೆ ಎರಡು ಸಮುದಾಯಗಳ ನಡುವೆ ಗಲಾಟೆ ನಡೆದಿದ್ದು ರಾತ್ರೋ ರಾತ್ರಿ, 50 ಮಂದಿಯ ಮೇಲೆ ದೂರು ದಾಖಲಾದ ಘಟನೆ ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲ್ಲೂಕಿನ ನಾಗೇನಹಳ್ಳಿ ಗ್ರಾಮದಲ್ಲಿ ನಡೆದಿದೆ. ಜಾಗದ ವಿಚಾರಕ್ಕೆ ಇಡೀ ಗ್ರಾಮವೇ ರಣರಂಗವಾದಂತಾಗಿದೆ.

ಸರ್ಕಾರಿ ಜಾಗದಲ್ಲಿ ದೇವಾಲಯ ಕಟ್ಟಲು ಲಂಬಾಣಿ ಜನಾಂಗದವರು ಜಾಗಕ್ಕೆ ತಂತಿ ಬೇಲಿ ಹಾಕಿದ್ದರು. ಇದನ್ನು ವಿರೋಧಿಸಿ ಸಮುದಾಯ ಭವನ ಕಟ್ಟಲು ಇನ್ನೊಂದು ಸಮುದಾಯ ಪಟ್ಟು ಹಿಡಿದಿತ್ತು. ಈ ಗಲಾಟೆ ನಡುವೆಯೇ ಗ್ರಾಮದ ಕೆಲವರು ತಂತಿ ಬೇಲಿ ಕಿತ್ತು ಬಿಸಾಕಿದ್ದರು. ಹೀಗೆ ಎರಡೂ ಸಮುದಾಯದವರ ನಡುವೆ ಗಲಾಟೆ ತಾರಕಕ್ಕೇರಿ ಪರಸ್ಪರ ಹೊಡೆದಾಡಿಕೊಂಡಿದ್ದಾರೆ.

ಘಟನೆಯಲ್ಲಿ ಹಲವರಿಗೆ ಗಾಯಗಳಾಗಿದ್ದು ಆಸ್ಪತ್ರೆಗೆ ದಾಖಲಾಗಿದ್ದಾರೆ. ಸರ್ಕಾರಿ ಜಾಗ ವಿವಾದ ರಾತ್ರಿಯಿಡೀ ವಿಕೋಪಕ್ಕೆ ತಿರುಗಿತ್ತು. ಇನ್ನು ಸ್ಥಳಕ್ಕೆ ಆಗಮಿಸಿದ ಪೊಲೀಸರು ಎರಡು ಗುಂಪುಗಳನ್ನು ಸಮಾಧಾನ ಪಡಿಸಲು ಯತ್ನಿಸಿದ್ರು. ಘಟನೆ ಸಂಬಂಧ 50 ಮಂದಿಯ ಮೇಲೆ ದೂರು ದಾಖಲಾಗಿದೆ. ಬೂದಿ ಮುಚ್ಚಿದ ಕೆಂಡದಂತಾದ ನಾಗೇನಹಳ್ಳಿ ಗ್ರಾಮದಲ್ಲಿ ಹೆಚ್ಚುವರಿ ಪೊಲೀಸರ ನಿಯೋಜನೆ ಮಾಡಲಾಗಿದೆ.

## ಮರ್ಮಾಂಗಕ್ಕೆ ಕರೆಂಟ್ ಶಾಕ್ ನೀಡಿದ ಪ್ರಕರಣ: ಶೀಘ್ರ ಇನ್ನುಳಿದ ಆರೋಪಿಗಳ ಬಂಧನ

• ಉದಯವಾಹಿನಿ ಕಲಬುರಗಿ


ಉದಯವಾಹಿನಿ ಚಿತ್ರ

ಸೆಕೆಂಡ್ ಹ್ಯಾಂಡ್ ಕಾರು ಮಾರಾಟ ಉದ್ಯೋಗ ಮಾಡಿಕೊಂಡಿದ್ದ ಮೂವರನ್ನು ವಿವಸ್ತ್ರಗೊಳಿಸಿ ಮರ್ಮಾಂಗಕ್ಕೆ ಶಾಕ್ ನೀಡಿದ ಅಮಾನವೀಯ ಪ್ರಕರಣಕ್ಕೆ ಸಂಬಂಧಿಸಿದಂತೆ ಇನ್ನೂಳಿದ ಆರೋಪಿಗಳನ್ನು ಶೀಘ್ರ ಬಂಧಿಸುವುದಾಗಿ ಕಲಬುರಗಿ ಮಹಾನಗರ ಪೊಲೀಸ್ ಆಯುಕ್ತ ಆರ್.ಚೇತನ ತಿಳಿದಿದ್ದಾರೆ. ಅಮಾನೀಯ ಪ್ರಕರಣ ಸಂಬಂಧಿಸಿದಂತೆ ಈಗಾಗಲೇ ಏಳು ಜನರನ್ನು ಬಂಧಿಸಲಾಗಿದೆ. ಇನ್ನೂಳಿದ ಆರೋಪಿಗಳ ಶೋಧ ಕಾರ್ಯ ನಡೆದಿದೆ. ಮಾಹಿತಿ ದೊರಕಿದ್ದು, ಉಳಿದವರನ್ನು ಸಹ ಬಂಧಿಸಲಾಗುವುದು ಕಚೇರಿಯಲ್ಲಿ ಕರೆಯಲಾದ ಸುದ್ದಿಗೋಷ್ಟಿಯಲ್ಲಿ ತಿಳಿಸಿದರು. ಶಸ್ತ್ರಾಸ್ತ್ರ ಕಾಯ್ದೆ ಅಡಿಯೂ ಪ್ರಕರಣ ದಾಖಲಿಸಲಾಗಿದೆ. ಭಯದ ಹಿನ್ನೆಲೆಯಲ್ಲಿ ಹಲ್ಲೆಗೊಳಗಾದ ಹಾಗೂ ದೂರು ನೀಡಿರುವವರಿಗೆ ಪೊಲೀಸ್ ರಕ್ಷಣೆ ನೀಡಲಾಗಿದೆ. ಸಾಧ್ಯವಾದರೆ ಗನ್ ಮ್ಯಾನ್ ಸಹ ನೀಡಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ಕೋಟನೂರ ಡಿಯಲ್ಲಿನ ಮನೆ ಮೇಲಿನ ದಾಳಿ ಹಾಗೂ ಹಲ್ಲೆ ಪ್ರಕರಣ ಸಿಐಡಿ ತನಿಖೆಗೆ ವಹಿಸಲಾಗಿದ್ದು, ಎಲ್ಲಮಾಹಿತಿ ಹಸ್ತಾಂತರಿಸಲಾಗಿದೆ ಎಂದು ಪೊಲೀಸ್ ಆಯುಕ್ತರು ತಿಳಿಸಿದರು.

## ಬೀದರ್‌ನಲ್ಲಿ ಬಸ್ ಸೀಟಿಗಾಗಿ ಪರಸ್ಪರ ಬಟ್ಟೆ ಎಳೆದಾಡಿದ ಮಹಿಳೆಯರು


• ಉದಯವಾಹಿನಿ ಬೀದರ್


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಕಾಂಗ್ರೇಸ್ ಅಧಿಕಾರಕ್ಕೆ ಬಂದ ಮೇಲೆ ಪ್ರಮುಖವಾದ 5 ಗ್ಯಾರಂಟಿ ಯೋಜನೆಗಳನ್ನ ಜಾರಿ ಮಾಡಿತ್ತು. ಅದರಲ್ಲಿ ಮಹಿಳೆಯರಿಗಾಗಿ ಸರ್ಕಾರಿ ಬಸ್ ಗಳಲ್ಲಿ ಉಚಿತ ಪ್ರಯಾಣಕ್ಕಾಗಿ ಶಕ್ತಿ ಯೋಜನೆ ಕೂಡ ಒಂದು. ಇದೀಗ ಬೀದರ್ ಅಲ್ಲಿ ಬಸ್ ಸೀಟಿಗಾಗಿ ಮಹಿಳೆಯರು ಕಿತ್ತಾಡಿಕೊಂಡಿರುವ ಘಟನೆ ನಡೆದಿದೆ. ಸೀಟಿಗಾಗಿ ಇಬ್ಬರು ಮಹಿಳೆಯರು ಕಿತ್ತಾಡಿಕೊಂಡಿದ್ದಾರೆ. ಬೀದರ್ ಇಂದ ಕಲಬು ರಗಿಗೆ ಆಗಮಿಸಲು ಉಚಿತ ಯೋಜನೆಯಡಿಯಲ್ಲಿ ಟಿಕೇಟ್ ಪಡೆದುಕೊಂಡಿದ್ದಾರೆ. ಈ ವೇಳೆ ಮಹಿಳೆಯೊಬ್ಬರು ಇದು ನನ್ನ ಜಾಗ ಬಿಡು ಎಂದಿದ್ದಾರೆ. ಅದಕ್ಕೆ ಇನ್ನೊಬ್ಬ ಮಹಿಳೆ ನಾನು ಸೀಟ್ ಬಿಡಲ್ಲ ಏನೂ ಮಾಡ್ತಿಯಾ ಎಂದು ಪರಸ್ಪರ ಇಬ್ಬರ ನಡುವೆ ವಾಗ್ವಾದ ನಡೆದಿದೆ. ನಂತರ ಇಬ್ಬರ ಗಲಾಟೆ ತಾರಕಕ್ಕೆ ಏರಿದೆ. ಗಲಾಟೆ ಜೋರಾಗುತ್ತಿದ್ದಂತೆ ಓರ್ವ ಮಹಿಳೆ ತನ್ನ ಚಪ್ಪಲಿ ತೆಗೆದು ಜಗಳ ಮಾಡುತ್ತಿದ್ದ ಮಹಿಳೆ ಹೊಡೆದಿದ್ದಾಳೆ. ಚಪ್ಪಲಿ ಹಲ್ಲೆ ಬಳಿಕ ಮೈಮೇಲೆ ಹಾಕಿದ ಬಟ್ಟೆ ಹಿಡಿದು ಮಹಿಳೆಯರು ಎಳೆದಾಡಿಕೊಂಡಿದ್ದಾರೆ. ಇದೀಗ ಈ ವಿಡಿಯೋ ಎಲ್ಲೆಡೆ ಹರಿದಾಡುತ್ತಿದೆ.

## ಬಿಜೆಪಿ ಬಂಡಾಯ ಅಭ್ಯರ್ಥಿಯಾಗಿ ಸಜ್ಜನ್

• ಉದಯವಾಹಿನಿ ಕಲಬುರಗಿ



ಈಶಾನ್ಯ ಕರ್ನಾಟಕ ಪದವೀಧರ ಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದ ಜಿ.ಪಂ ಮಾಜಿ ಉಪಾಧ್ಯಕ್ಷ, ಬಿಜೆಪಿ ಮುಖಂಡ ಸುರೇಶ ಸಜ್ಜನ್ ಟಿಕೆದ ಸಿಗದ ಹಿನ್ನೆಲೆಯಲ್ಲಿ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿಯಲು ಮುಂದಾಗಿದ್ದಾರೆ. ಬಿಜೆಪಿ ಟಿಕೆಟ್ ಮಾಜಿ ಎಂಎಲ್‌ಸಿ ಅಮರನಾಥ ಪಾಟೀಲ್ ಸಿಕ್ಕಿದ್ದಕ್ಕೆ ಅಸಮಾಧಾನಗೊಂಡಿರುವ ಸಜ್ಜನ್ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕೀಳಿಯಲು ನಿರ್ಧರಿಸಿದ್ದಾರೆ. ನಾಮಪತ್ರ ಸಲ್ಲಿಕೆ ಕೊನೆ ದಿನದಂದೇ ಅಮರನಾಥ ಪಾಟೀಲ್ ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸುತ್ತಿದ್ದು, ಇದೇ ಸಮಯಕ್ಕೆ ಸಜ್ಜನ ಸಹ ನಾಮಪತ್ರ ಸಲ್ಲಿಸುತ್ತಿದ್ದಾರೆ. ಟಿಕೆಟ್ ಸಿಗದಿದ್ದಕ್ಕೆ ಜಿ.ಪಂ ಮಾಜಿ ಉಪಾಧ್ಯಕ್ಷ, ಮುಖಂಡ ಸುರೇಶ ಸಜ್ಜನ್ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸಲು ನಿರ್ಧರಿಸಿದ್ದಾರೆ.

## ಯುವತಿಯನ್ನು ಮಲಗಿದ್ದಲ್ಲೇ ಬರ್ಬರವಾಗಿ ಹತ್ಯೆಗೈದ ಯುವಕ

• ಉದಯವಾಹಿನಿ ಹುಬ್ಬಳ್ಳಿ

ನೇಹಾ ಹಿರೇಮಠ ಕೊಲೆ ಪ್ರಕರಣ ಮಾಸುವ ಮುನ್ನವೇ ಹುಬ್ಬಳ್ಳಿಯಲ್ಲಿ ಮತ್ತೊಂದು ಘಟನೆ ನಡೆದಿದೆ. ಇಂದು ಬುಧವಾರ ನಸುಕಿನ ಜಾವ ನಿದ್ದೆಯಲ್ಲಿದ್ದ ಯುವತಿಯನ್ನು ವ್ಯಕ್ತಿಯೊಬ್ಬ ಚೂರಿಯಿಂದ ಇರಿದು ಬರ್ಬರವಾಗಿ ಹತ್ಯೆ ಮಾಡಿದ ಘಟನೆ ಹುಬ್ಬಳ್ಳಿಯ ಬೆಂಡಿಗೇರಿ ಪೊಲೀಸ್ ಠಾಣೆ ವ್ಯಾಪ್ತಿಯ ವೀರಾಪುರ ಓಣಿಯಲ್ಲಿ ನಡೆದಿದೆ.

ಮೃತ ಯುವತಿಯನ್ನು ಅಂಜಲಿ ಅಂಬಿಗೇರ ಎಂದು ಗುರುತಿಸಲಾಗಿದ್ದು, ವಿಶ್ವ ಅಲಿಯಾಸ್ ಗಿರೀಶ್ ಎಂಬಾತ ಯುವತಿಯನ್ನು ಹತ್ಯೆ ಮಾಡಿದ್ದು, ಸದ್ಯ ತಲೆಮರೆಸಿಕೊಂಡಿದ್ದಾನೆ.

ಗಿರೀಶ್ ಅಂಜಲಿಯನ್ನು ಮನಸಾರೆ ಪ್ರೀತಿಸುತ್ತಿದ್ದ. ಆದರೆ ಆಕೆ ಅವನ ಪ್ರೀತಿಯನ್ನು ನಿರಾಕರಿಸಿದ್ದಳು. ಇದರಿಂದ ಕ್ರೋಧಗೊಂಡ ಆತ ನೇಹಾ ಪಾಟೀಲ್ ಮಾದರಿಯಲ್ಲಿ ನಿನ್ನನ್ನೂ ಹತ್ಯೆ ಮಾಡುತ್ತೇನೆ ಎಂದು ಅಂಜಲಿ ಅಂಬಿಗೇರಗೆ ವಿಶ್ವ ಕೆಲ ದಿನಗಳ ಹಿಂದೆ ಬೆದರಿಕೆ ಹಾಕಿದ್ದ ಎನ್ನಲಾಗಿದೆ. ಅದರಂತೆ ಇಂದು ಬೆಳಗ್ಗೆ 5.30ಕ್ಕೆ ಮನೆಗೆ ನುಗ್ಗಿ ಚಾಕುವಿನಿಂದ ಇರಿದಿದ್ದಾನೆ. ಮನೆಯವರು ತಡೆಯಲು ಮುಂದಾದರೂ ಬಿಡದೆ ಹತ್ಯೆ ಮಾಡಿ ಪರಾರಿಯಾಗಿದ್ದಾನೆ.

ಈ ಹಿಂದೆ ಮೈಸೂರಿಗೆ ಬಾ ಎಂದು ಅಂಜಲಿಗೆ ವಿಶ್ವ ಧಮ್ಕಿ ಹಾಕಿದ್ದ. ಅಕಸ್ಮಾತ್ ನೀನು ನನ್ನ ಜೊತೆ ಬರದೆ ಹೋದರೆ ನಿರಂಜನ ಹಿರೇಮಠ ಮಗಳಿಗೆ ಆದ ಹಾಗೆಯೇ ನಿನಗೂ ಮಾಡುತ್ತೇನೆ ಎಂದು ಧಮ್ಕಿ ಹಾಕಿದ್ದ. ಈತನ ವಿರುದ್ಧ ಹಲವು ಕಳ್ಳತನ ಪ್ರಕರಣಗಳಲ್ಲಿ ಶಾಮೀಲಾದ ಆರೋಪವೂ ಇದೆ. ಬೈಕ್ ಕಳ್ಳತನದಲ್ಲಿಯೂ ಆರೋಪಿಯಾಗಿದ್ದಾನೆ.

**ಪೊಲೀಸರ ನಿರ್ಲಕ್ಷ್ಯ**

**ಆರೋಪಿ ವಿಶ್ವ ಅಂಜಲಿಗೆ ಧಮ್ಕಿ ಹಾಕಿರುವ ವಿಚಾರವಾಗಿ ಆಕೆಯ ಅಜ್ಜಿ ಗಂಗಮ್ಮ ಪೊಲೀಸರ ಗಮನಕ್ಕೆ ತಂದಿದ್ದರು. ಆದರೆ, ಅಜ್ಜಿಯ ಮಾತಿಗೆ ಹೆಚ್ಚು ಪ್ರಾಶಸ್ತ್ಯ ನೀಡದ ಪೊಲೀಸರು, ಇದೆಲ್ಲ ಮೂಢನಂಬಿಕೆ ಎಂದು ಹೇಳಿ ಕಳುಹಿಸಿದ್ದರು. ಇದೀಗ ಕೊಲೆಯೇ ನಡೆದಿದೆ.**


ಉದಯವಾಹಿನಿ ಚಿತ್ರ

# ತಾಯಿ ಎದೆ ಹಾಲು ಬ್ಯಾಂಕ್ ಶಿವಮೊಗ್ಗದಲ್ಲಿ ಆರಂಭ

**• ತಾಯಂದಿರು ತಮ್ಮ ಮಗುವಿಗೆ ಉಣಿಸಿ ಹೆಚ್ಚಾದ ಎದೆ ಹಾಲನ್ನು 'ಅಮೃತಧಾರೆ' ಸಂಗ್ರಹ ಕೇಂದ್ರಕ್ಕೆ ದಾನ ನೀಡಬಹುದು**

• ಉದಯವಾಹಿನಿ ಶಿವಮೊಗ್ಗ

ತಾಯಿ ಎದೆ ಹಾಲು ಸಂಗ್ರಹಣೆ ಮತ್ತು ವಿತರಣೆ ಕೇಂದ್ರ 'ಅಮೃತಧಾರೆ'ಯನ್ನು ಈಗ ಶಿವಮೊಗ್ಗದಲ್ಲಿ ಆರಂಭಿಸಲಾಗಿದೆ. ಕರ್ನಾಟಕ ಸರ್ಕಾರದ ಮೊದಲ ಈ ಮಾದರಿ ಬ್ಯಾಂಕ್ ಬೆಂಗಳೂರಿನ ವಾಣಿವಿಲಾಸ ಆಸ್ಪತ್ರೆಯಲ್ಲಿ ಪ್ರಾರಂಭವಾಗಿತ್ತು. ರಾಷ್ಟ್ರೀಯ ಆರೋಗ್ಯ ಮಿಷನ್ ಅಡಿ ಶಿವಮೊಗ್ಗದ ವೈದ್ಯಕೀಯ ವಿಜ್ಞಾನ ಸಂಸ್ಥೆಯ, ಮೆಗ್ಗಾನ್ ಬೋಧನಾ ಜಿಲ್ಲಾ ಆಸ್ಪತ್ರೆಯ ಮಕ್ಕಳ ವಿಭಾಗದಲ್ಲಿ ತಾಯಿ ಎದೆ ಹಾಲು ಸಂಗ್ರಹಣೆ ಮತ್ತು ವಿತರಣೆ ಕೇಂದ್ರ 'ಅಮೃತಧಾರೆ' ತೆರೆಯಲಾಗಿದೆ. ಈ ಬ್ಯಾಂಕ್ ಅನ್ನು ಸಿಮ್ಸ್ ನಿರ್ದೇಶಕ ಡಾ. ವಿ. ವಿರೂಪಾಕ್ಷ ಉದ್ಘಾಟಿಸಿದರು.

**ಅಮೃತಧಾರೆ ಸಂಗ್ರಹ ಕೇಂದ್ರ**

ಎಲ್ಲಾ ಆರೋಗ್ಯವಂತ ತಾಯಿಯಂದಿರು ತಮ್ಮ ಮಗುವಿಗೆ ಉಣಿಸಿ ಹೆಚ್ಚಾದ ಎದೆ ಹಾಲನ್ನು 'ಅಮೃತಧಾರೆ' ಸಂಗ್ರಹ ಕೇಂದ್ರಕ್ಕೆ ದಾನ ನೀಡಬಹುದಾಗಿದ್ದು, ಕೆಲವು ತಾಯಂದಿರಲ್ಲಿ ಹಾಲು ಉತ್ಪತ್ತಿಯಾಗದಿದ್ದರೆ, ತೀವ್ರ ನಿಗಾ ಘಟಕದ ಕೇಂದ್ರದಲ್ಲಿ ದಾಖಲಾದ ತಾಯಿಯ ಮಗುವಿಗೆ ಅಥವಾ ನವಜಾತ ಶಿಶು ಕೇಂದ್ರದಲ್ಲಿದ್ದ ಮಗುವಿಗೆ ಅಥವಾ ಹೆರಿಗೆ ಸಮಯದಲ್ಲಿ ತಾಯಿ ಮೃತರಾದ ಮಗುವಿಗೆ ಹಾಲನ್ನು ಈ ಬ್ಯಾಂಕ್ ಮೂಲಕ ಉಪಯೋಗ ಮಾಡಿಕೊಳ್ಳಲಾಗುತ್ತದೆ.

ಎದೆಹಾಲು ನೀಡುವುದರಿಂದ ನವಜಾತ ಶಿಶುವಿಗೆ ನೀಡುವ ಫಾರ್ಮುಲ ಫೀಡ್ ತಪ್ಪಿಸಬಹುದಾಗಿದೆ. ಇದರಿಂದ ಕರುಳಿನ ಬೇನೆ, ನಂಜು, ಕಣ್ಣಿನ ದೋಷ, ಮಕ್ಕಳಿಗೆ ಆಗುವ ಸಂದರ್ಭ ಹೆಚ್ಚಾಗದಂತೆ ತಡೆಯಬಹುದು. ನವಜಾತ ಶಿಶು ಆಸ್ಪತ್ರೆಯಲ್ಲಿ ಇರಬೇಕಾದ ಸಮಯ ಕಡಿಮೆಯಾಗುತ್ತದೆ. ಪೋಷಕರಿಗೆ ಖರ್ಚಿನ ಭಾರ ಕಡಿಮೆಯಾಗುತ್ತದೆ. ಎದೆಹಾಲು ನೀಡುವುದರಿಂದ ಮಗುವಿಗೆ ಪೋಷಕಾಂಶಗಳು, ಮೆದುಳು ಚುರುಕು ಮತ್ತು ನೆನಪಿನ ಶಕ್ತಿ ಹೆಚ್ಚಾಗುತ್ತದೆ.

**ತಾಯಿಯ ಹಾಲು ಅಮೃತ:** ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿಯಲ್ಲಿ, ನವಜಾತ ಶಿಶುಗಳ ಮರಣ ಪ್ರಮಾಣವನ್ನು ಕಡಿಮೆ ಮಾಡಲು ಹಲವಾರು ಯೋಜನೆಗಳನ್ನು ಪ್ರಾರಂಭಿಸಲಾಗಿದೆ. ಇವುಗಳಲ್ಲಿ ತಾಯಿ ಎದೆ ಹಾಲು ಸಂಗ್ರಹಣೆ ಮತ್ತು ವಿತರಣೆ ಕೇಂದ್ರ 'ಅಮೃತಧಾರೆ' ಸಹ ಒಂದು.

ತಾಯಿಯ ಹಾಲು ಮಗುವಿಗೆ ಅಮೃತವಾಗಿದೆ. ಇದು ನವಜಾತ ಶಿಶುವಿನ ಎಲ್ಲಾ ಅಗತ್ಯಗಳನ್ನು ಅತ್ಯುತ್ತಮ ಪೋಷಣೆ ಮತ್ತು ರಕ್ಷಣಾತ್ಮಕ ಸೋಂಕು ನಿವಾರಕ ವಸ್ತುಗಳನ್ನು ಒದಗಿಸುವ ಮೂಲಕ ಪೂರೈಸುತ್ತದೆ. ಕೆಲವು ಅನಿವಾರ್ಯ ಸಂದರ್ಭಗಳಿಂದಾಗಿ, ಆಸ್ಪತ್ರೆಗಳಲ್ಲಿ ದಾಖಲಾಗುವ ಅವಧಿಪೂರ್ವ, ಕಡಿಮೆ ತೂಕದ ಮತ್ತು ಅನಾರೋಗ್ಯದ ಶಿಶುಗಳು ತಾಯಿಯ ಹಾಲನ್ನು ಹೊಂದಿರುವುದಿಲ್ಲ. ಎಲ್ಲಾ ಶಿಶುಗಳಿಗೆ ಎದೆಹಾಲು ನಿರಂತರ ಪೂರೈಕೆಯನ್ನು ಒದಗಿಸುವ ಅವಶ್ಯಕತೆಯಿದೆ.

ಮಾನವ ಹಾಲಿನ ಬ್ಯಾಂಕ್ ತಾಯಂದಿರಿಂದ ನೈಸರ್ಗಿಕ ಹಾಲುಣಿಸುವಿಕೆಯನ್ನು ಉತ್ತೇಜಿಸುವುದರ ಜೊತೆಗೆ ಎಲ್ಲಾ ಶಿಶುಗಳಿಗೆ ಉಚಿತ, ಪಾಸ್ಟರೈಸ್ ಮಾಡಿದ ಎದೆಹಾಲನ್ನು ಒದಗಿಸುವ ಪ್ರಯತ್ನವಾಗಿದೆ. ಹ್ಯೂಮನ್ ಮಿಲ್ಕ್ ಬ್ಯಾಂಕ್ ಎನ್ನುವುದು ಕೆಲವು ಪಾಶ್ಚಿಮಾತ್ಯ ದೇಶಗಳಲ್ಲಿ ಈಗಾಗಲೇ ಯಶಸ್ಸಗಳಿಸಿದೆ. ಮಗುವಿನ ಬೌದ್ಧಿಕ ಅಂಶವನ್ನು ಹೆಚ್ಚಿಸುವಲ್ಲಿ ಹಾಲಿನ ಕೊಡುಗೆಯು ಮಹತ್ವದ್ದು.



ಉದಯವಾಹಿನಿ ಚಿತ್ರ

**ಬೆಂಗಳೂರಿನ ವಾಣಿವಿಲಾಸ ಆಸ್ಪತ್ರೆಯಲ್ಲಿ ಮಾರ್ಚ್ 8, 2022ರಲ್ಲಿ ರಾಜ್ಯದ ಮೊದಲ 'ಅಮೃತಧಾರೆ' ಬ್ಯಾಂಕ್ ಆರಂಭವಾಯಿತು. ಒಂದು ವರ್ಷದಲ್ಲಿ 186 ಲೀಟರ್ ಎದೆಹಾಲು ಸಂಗ್ರಹಣೆ ಮಾಡಲಾಯಿತು. ಇದರಲ್ಲಿ 123 ಲೀಟರ್ ಬಳಕೆ ಮಾಡಲಾಯಿತು. 886 ಮಕ್ಕಳಿಗೆ ಈ ಬ್ಯಾಂಕ್ ಹಾಲನ್ನು ಒದಗಿಸಿತು.**

**ಭಾರತದಲ್ಲಿ ಪ್ರತಿ ವರ್ಷ 27 ಮಿಲಿಯನ್ ಶಿಶುಗಳು ಜನನ**

**ಭಾರತದಲ್ಲಿ ಪ್ರತಿ ವರ್ಷ 27 ಮಿಲಿಯನ್ ಶಿಶುಗಳು ಜನಿಸುತ್ತವೆ ಅದರಲ್ಲಿ 3.5 ಮಿಲಿಯನ್ ಅವಧಿಪೂರ್ವ ಮತ್ತು 7.5 ಮಿಲಿಯನ್ ಕಡಿಮೆ ತೂಕದ ಜನನವಾಗಿದೆ. ಭಾರತದಲ್ಲಿ ಜನಿಸಿದ ಸುಮಾರು 47 ಪ್ರತಿಶತದಷ್ಟು ಶಿಶುಗಳು ಗರ್ಭಾವಸ್ಥೆಯ ವಯಸ್ಸಿಗೆ ಚಿಕ್ಕದಾಗಿದೆ. ಈ ಎಲ್ಲಾ ಶಿಶುಗಳು ಬದುಕುಳಿಯುವಿಕೆ ಮತ್ತು ಅರಿವಿನ ಬೆಳವಣಿಗೆಯ ವಿಷಯದಲ್ಲಿ ದುರ್ಬಲವಾಗಿರುತ್ತವೆ ಮತ್ತು ಸಾಮಾನ್ಯವಾಗಿ ಅವರ ವೈದ್ಯಕೀಯ ಪರಿಸ್ಥಿತಿಗಳಿಂದಾಗಿ ಆಹಾರ ಸಮಸ್ಯೆಗಳನ್ನು ಹೊಂದಿರುತ್ತಾರೆ.**

# ನನ್ನ ಥೈಲ್ಯಾಂಡ್ ಪ್ರವಾಸದ ಬಗ್ಗೆ ಅಮಿತ್ ಶಾಗೆ ಹೇಗೆ ಗೊತ್ತು?

## ನಾವು ಚುನಾವಣೆಯ ವೇಳೆ ಮಾತ್ರ ಕ್ಷೇತ್ರಕ್ಕೆ ಬರುವ ವ್ಯಕ್ತಿಗಳಲ್ಲ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ ವಾಧ್ರಾ ಪ್ರಶ್ನೆ



**ಜನತೆ ನಮಗೆ ಆಶೀರ್ವಾದ ಮಾಡುತ್ತಾರೆ**

**ಲಕ್ನೋ:** ಸಹೋದರ ರಾಹುಲ್ ಗಾಂಧಿ ಸ್ಪರ್ಧಿಸುತ್ತಿರುವ ರಾಯ್‌ಬರೇಲಿ ಮತ್ತು ಕುಟುಂಬದ ಆಪ್ತ ಕಿಶೋರಿ ಲಾಲ್ ಶರ್ಮಾ ಸ್ಪರ್ಧಿಸುತ್ತಿರುವ ಅಮೇಠಿ ಲೋಕಸಭಾ ಕ್ಷೇತ್ರದಲ್ಲಿ ಸತತ ಪ್ರಚಾರ ನಡೆಸುತ್ತಿರುವ ಪ್ರಿಯಾಂಕ ಗಾಂಧಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಗಂಭೀರ ಪ್ರಶ್ನೆಯನ್ನು ಕೇಳಿದ್ದಾರೆ. ಬಿಜೆಪಿಯವರ ಚುನಾವಣೆಯ ವೇಳೆ ಮಾತ್ರ ನಮ್ಮ ಕುಟುಂಬದವರು ಅಮೇಠಿ ಮತ್ತು ರಾಯ್‌ಬರೇಲಿ ಕ್ಷೇತ್ರಕ್ಕೆ ಆಗಮಿಸುತ್ತಾರೆ ಎನ್ನುವ ಆರೋಪವು ನಿರಾಧಾರ. ಸ್ಮೃತಿ ಇರಾನಿಗೆ ಹಲವು ವರ್ಷ ಇಲ್ಲಿನ ಜನರ ಜೊತೆಗೆ ಒಡನಾಟ ಮಾಡಲು ಸಮಯ ಬೇಕಾಯಿತು, ನಮಗೆ ಹಾಗಲ್ಲ ಎಂದು ಪ್ರಿಯಾಂಕ ಗಾಂಧಿ ಹೇಳಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಎಲ್ಲಾ ಮಾಹಿತಿ ಇರುತ್ತದೆ ಅಲ್ವಾ, ಅದರಲ್ಲೂ ಮಹಿಳೆಯರ ಬಗ್ಗೆ ವಿಶೇಷ ಗಮನವನ್ನು ಇಟ್ಟುಕೊಂಡಿರುತ್ತಾರೆ. ಯಾರು ಯಾರನ್ನು ಭೇಟಿಯಾಗುತ್ತಾರೆ ಎನ್ನುವ ಮಾಹಿತಿ ಅವರ ಬಳಿ ಇರುತ್ತದೆ. ನನ್ನ ವೈಯಕ್ತಿಕ ಪ್ರವಾಸದ ಮಾಹಿತಿಯೂ ಅವರಿಗಿದೆ ಎಂದು ಪ್ರಿಯಾಂಕ ಗಾಂಧಿ ಹೇಳಿದ್ದಾರೆ. ಕೆಲವು ದಿನಗಳ ಹಿಂದೆ ನನ್ನ ಮಗಳನ್ನು ಭೇಟಿಯಾಗಲು ನಾನು ಥೈಲ್ಯಾಂಡ್ ದೇಶಕ್ಕೆ ಹೋಗಿದ್ದೆ, ಇದನ್ನು ಅಮಿತ್ ಶಾ ತಮ್ಮ ಚುನಾವಣಾ ಪ್ರಚಾರದಲ್ಲಿ ಹೇಳಿದ್ದರು. ನಾನು ಅಲ್ಲಿಗೆ ಹೋಗಿದ್ದು ನಿಜ, ಆದರೆ, ಈ ಮಾಹಿತಿ ಅಮಿತ್ ಶಾ ಅವರಿಗೆ ಹೇಗೆ ಲಭ್ಯವಾಗುತ್ತದೆ ಎನ್ನುವುದು ಮುಖ್ಯ ಎಂದು ಪ್ರಿಯಾಂಕ ಗಾಂಧಿ ಹೇಳಿದ್ದಾರೆ.

**ಮಹಿಳೆಯರ ಬಗ್ಗೆ ಹೆಚ್ಚಿನ ಮಾಹಿತಿ**

**ಬಿಜೆಪಿ ನಾಯಕರು ನಮ್ಮ ಕುಟುಂಬದ ಬಗ್ಗೆ ಇಲ್ಲಸಲ್ಲದ ಆರೋಪವನ್ನು ಮಾಡುತ್ತಿದ್ದಾರೆ. ಮಹಿಳೆಯರ ಬಗ್ಗೆ ಅಮಿತ್ ಶಾಗೆ ಹೆಚ್ಚಿನ ಮಾಹಿತಿ ಇರುತ್ತದೆ. ನನ್ನ ಥೈಲ್ಯಾಂಡ್ ಪ್ರವಾಸದ ಬಗ್ಗೆ ಅಮಿತ್ ಶಾಗೆ ಹೇಗೆ ಗೊತ್ತು ಎಂದು ಪ್ರಿಯಾಂಕ ಗಾಂಧಿ ಪ್ರಶ್ನಿಸಿದ್ದಾರೆ.**

ನಮಗೆಲ್ಲಾ ಮಾಹಿತಿ ಸಿಗುತ್ತದೆ ಎಂದು ಅಮಿತ್ ಶಾ ಹೇಳುತ್ತಾರೆ, ಹಾಗಾದರೆ ಅವರು ಸುಳ್ಳು ಯಾಕೆ ನುಡಿಯುತ್ತಾರೆ? ನಾವು ಚುನಾವಣೆಯ ವೇಳೆ ಮಾತ್ರ ಕ್ಷೇತ್ರಕ್ಕೆ ಆಗಮಿಸುವ ನಾಯಕರಲ್ಲ. ಬಿಜೆಪಿ ಆರೋಪದಲ್ಲಿ ಸತ್ಯಾಂಶವಿಲ್ಲ ಎಂದು ಪ್ರಿಯಾಂಕ ತಿರುಗೇಟು ನೀಡಿದ್ದಾರೆ. ಜನಸಂಪರ್ಕ ಸಭೆಯ ಜೊತೆಗೆ ಬೂಟ್ ಮಟ್ಟದಲ್ಲೂ ಕಾರ್ಯಕರ್ತರ ಜೊತೆಗೆ ಮಾತುಕತೆ ನಡೆಸುತ್ತಿರುವ ಪ್ರಿಯಾಂಕ, ಇಲ್ಲಿನ ಜನರ ಜೊತೆಗೆ ಪ್ರೀತಿಯ ಒಡನಾಟ ಬೆಸೆಯಲು ನಲವತ್ತು ವರ್ಷ ಬೇಕಾಗಿದೆ. ಇಲ್ಲಿನ ಜನರು ನಮ್ಮ ಹೃದಯದಲ್ಲಿದ್ದಾರೆ, ಅವರು (ಸ್ಮೃತಿ ಇರಾನಿ ) ಕ್ಷೇತ್ರದ ಸೇವೆ ಮಾಡಲು ನಮ್ಮ ಹಾಗೇ ಬಂದವರಲ್ಲ ಎಂದು ಪ್ರಿಯಾಂಕ ಹೇಳಿದ್ದಾರೆ. ದೇಶದ ಬಡವರ ಬಗ್ಗೆ ನಮ್ಮ ಪ್ರಧಾನಿಗಳಿಗೆ ಕಳಕಳಿಯಿಲ್ಲ, ಅವರಿಗೆ ಕಳಕಳಿ ಇರುವುದು ಕೆಲವು ಉದ್ಯಮಿಗಳ ಮೇಲೆ ಮಾತ್ರ. ಈ ಬಾರಿ ಜನತೆ ನಮಗೆ ಆಶೀರ್ವಾದ ಮಾಡುತ್ತಾರೆ ಎನ್ನುವ ನಂಬಿಕೆ ನಮಗಿದೆ ಎಂದು ಪ್ರಿಯಾಂಕ ವಿಶ್ವಾಸ ವ್ಯಕ್ತ ಪಡಿಸಿದ್ದಾರೆ.

ರಾಯ್‌ಬರೇಲಿ ಕ್ಷೇತ್ರದ ಸಂಸದರ ನಿಧಿ ಯನ್ನು ಹಾಲೀ ಸಂಸದೆಯಾಗಿರುವ ಸೋನಿಯಾ ಗಾಂಧಿಯವರು ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಮಾತ್ರ ಬಳಸಿಕೊಂಡಿದ್ದಾರೆ. ಕ್ಷೇತ್ರಕ್ಕೆ ಅವರ ಅಭಿವೃದ್ದಿಯ ಕೊಡುಗೆ ಶೂನ್ಯ. ನಮ್ಮ ಅಭ್ಯರ್ಥಿ ದಿನೇಶ್ ಪ್ರತಾಪ್ ಸಿಂಗ್ ಅವರನ್ನು ಆಶೀರ್ವದಿಸಿ ಎಂದು ಎರಡು ದಿನಗಳ ಹಿಂದೆ ಅಮಿತ್ ಶಾ, ರಾಯ್‌ಬರೇಲಿ ಲೋಕಸಭಾ ವ್ಯಾಪ್ತಿಯಲ್ಲಿ ಹೇಳಿಕೆಯನ್ನು ನೀಡಿದ್ದರು.

## ಗಡಿ ಗ್ರಾಮದಲ್ಲಿ ಸೌರ ದೀಪ ಬೆಳಗಿಸಿದ ಭಾರತ ಸೇನೆ



**ಸದ್ಭವನವು ಗಡಿ ಗ್ರಾಮಗಳ ಜನರ ಜೀವನದ ಗುಣಮಟ್ಟವನ್ನು ಸುಧಾರಿಸಲು ಮತ್ತು ಆಕಾಂಕ್ಷೆಗಳನ್ನು ಪರಿಹರಿಸಲು ಸೇನೆಯ ಪ್ರಮುಖ ಕಾರ್ಯಕ್ರಮವಾಗಿದೆ ಎಂದು ಸೇನಾಧಿಕಾರಿ ಹೇಳಿದರು.**

**ಜಮ್ಮು:** ಗಡಿ ನಿಯಂತ್ರಣ ರೇಖೆಯಿಂದ ಕೇವಲ 600 ಮೀಟರ್ ದೂರದಲ್ಲಿರುವ ಜಮ್ಮು, ಕಾಶ್ಮೀರದ ಪೂಂಚ್ ಜಿಲ್ಲೆಯ ಡಬ್ಬಿ ಗ್ರಾಮವು ಮುಸ್ಸಂಜೆಯ ನಂತರ ಜೀವಂತವಾಗಿದೆ, ಸೌರ ಶಕ್ತಿ ಚಾಲಿತ ದೀಪಗಳನ್ನು ಅಳವಡಿಸಿದ ಸೇನೆಗೆ ಗ್ರಾಮಸ್ಥರು ಧನ್ಯವಾದ ಅರ್ಪಿಸಿದ್ದಾರೆ. ಈ ಯೋಜನೆಯನ್ನು ಕಾರ್ಯಾಚರಣೆಯ ಸದ್ಭಾವನಾ ಅಡಿಯಲ್ಲಿ ಕೈಗೆತ್ತಿಕೊಳ್ಳಲಾಗಿದೆ ಮತ್ತು ಕಡಿಮೆ ಅವಧಿಯಲ್ಲಿ ಪೂರ್ಣಗೊಳಿಸಲಾಗಿದೆ ಎಂದು ಸೇನಾ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಮೆಂಧಾರ್ ಉಪವಿಭಾಗದ ಬಾಲಾಕೋಟೆ ತಹಸಿಲ್‌ನಲ್ಲಿರುವ ಡಬ್ಬಿ ಗ್ರಾಮವು ಗಡಿಯಾಚೆಗಿನ ಶೆಲ್ ದಾಳಿಯಿಂದ ಹೆಚ್ಚು ಹಾನಿಗೊಳಗಾದ ಹಳ್ಳಿಗಳಲ್ಲಿ ಒಂದಾಗಿದೆ ಮತ್ತು ಬೀದಿ ದೀಪಗಳ ಕೊರತೆಯಿದೆ.

ಡಬ್ಬಿ ಗ್ರಾಮದ ಜೀವನ ಪರಿಸ್ಥಿತಿಯನ್ನು ಸುಧಾರಿಸಲು, ತಮ್ಮ ಗ್ರಾಮದ ವಿದ್ಯುದ್ದೀಕರಣ ಪ್ರಕ್ರಿಯೆಯನ್ನು ಇನ್ನಷ್ಟು ಹೆಚ್ಚಿಸಲು ಸ್ಥಳೀಯರು ಆಗಾಗ್ಗೆ ಬರುವ ಪ್ರದೇಶಗಳಲ್ಲಿ ಸೌರಶಕ್ತಿ ಚಾಲಿತ ದೀಪಗಳನ್ನು ಅಳವಡಿಸಲಾಗಿದೆ ಎಂದು ಅಧಿಕಾರಿ ಹೇಳಿದರು. ಜೀವನ ಪರಿಸ್ಥಿತಿಯನ್ನು ನಿವಾರಿಸಲು ಡಬ್ಬಿ ಗ್ರಾಮವನ್ನು ಸೋಲಾರ್ ದೀಪಗಳಿಂದ ಬೆಳಗಿಸಲು ಸೇನೆಯ ಉಪಕ್ರಮವು 19 ಮನೆಗಳು ಮತ್ತು 129 ಗ್ರಾಮಸ್ಥರಿಗೆ ವಿಶ್ವಾಸಾರ್ಹ ಕಾರಣವಾಗಿದೆ ಎಂದು ಅವರು ಹೇಳಿದರು.

ನಿವಾಸಿಗಳು ಈಗ ಸ್ಥಳೀಯ ಮಸೀದಿ, ದೇಗುಲ, ಶಾಲೆ ಮತ್ತು ಅವರ ಸಾಕು ಪ್ರಾಣಿ ಶೆಡ್‌ಗಳಿಗೆ ಹೋಗುವ ರಸ್ತೆ ಸೇರಿದಂತೆ ಹೆಚ್ಚಿನ ಪ್ರದೇಶದಲ್ಲಿ ಅಡೆತಡೆಯಿಲ್ಲದ ಬೆಳಕನ್ನು ಹೊಂದಿದ್ದಾರೆ. ಸೇನೆಯ ಪ್ರಯತ್ನದಿಂದ ಕುಟುಂಬಗಳು ರಾತ್ರಿಯಲ್ಲಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಅನುವು ಮಾಡಿಕೊಡುತ್ತದೆ ಮಿಲಿಟರಿ ನಾಗರಿಕ ಕ್ರಿಯೆಯ ಅಡಿಯಲ್ಲಿ ಈ ಯೋಜನೆಯು ಭರವಸೆಯನ್ನು ಬೆಳಗಿಸುವ ಜನರಿಗೆ ಲಾಭಾಂಶವನ್ನು ನೀಡಿದೆ, ಹಳ್ಳಿಗೆ ಉಜ್ವಲ ಮತ್ತು ಹೆಚ್ಚು ಸಮೃದ್ಧ ಭವಿಷ್ಯಕ್ಕಾಗಿ ದಾರಿ ಮಾಡಿಕೊಡುತ್ತದೆ. ಹಳ್ಳಿಗರು ಈ ಉಪಕ್ರಮಕ್ಕಾಗಿ ಸೇನೆಯನ್ನು ಶ್ಲಾಘಿಸಿದರು, ಸೋಲಾರ್ ದೀಪಗಳು ತಮ್ಮ ಗ್ರಾಮವನ್ನು ಬೆಳಗಿಸುವುದಲ್ಲದೆ ಅವರ ಜೀವನವನ್ನು ಬೆಳಗಿಸಿದೆ ಎಂದು ಹೇಳಿದರು.ರಾತ್ರಿಯ ಸಮಯದಲ್ಲಿ, ವಿಶೇಷವಾಗಿ ಮಳೆಯ ಸಮಯದಲ್ಲಿ ಜನರು ತಿರುಗಾಡಲು ತುಂಬಾ ಕಷ್ಟಕರವಾಗಿತ್ತು. ಜನರು ಯಾವುದೇ ತೊಂದರೆಯಿಲ್ಲದೆ ಪ್ರಾರ್ಥನೆಗೆ ಹಾಜರಾಗಲು ಸುಲಭವಾಗುವಂತೆ ಸೋಲಾರ್ ದೀಪಗಳನ್ನು ಅಳವಡಿಸಲು, ಗ್ರಾಮವನ್ನು ಬೆಳಗಿಸಲು ಸೇನೆಗೆ ನಾವು ತುಂಬಾ ಕೃತಜ್ಞರಾಗಿರುತ್ತೇವೆ ಎಂದು ಇಮಾಮ್ ಮೊಹಮ್ಮದ್ ಸರ್ಫರಾಜ್ ಪಿಟಿಐಗೆ ತಿಳಿಸಿದರು. ರೋಗಿಯನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಸ್ಥಳಾಂತರಿಸಲು ಕೆಲವೊಮ್ಮೆ ತುಂಬಾ ಕಷ್ಟವಾಗುವುದರಿಂದ ಗ್ರಾಮಕ್ಕೆ ಸರಿಯಾದ ರಸ್ತೆ ಸಂಪರ್ಕದ ಅಗತ್ಯವಿದೆ ಎಂದು ಅವರು ಹೇಳಿದರು.

ಡಬ್ಬಿಯ ಗ್ರಾಮದ ಲಂಬೇರ್ದಾರ್ ಕಾಜಿಮ್ ಇಕ್ಬಾಲ್ ಖಾನ್ ಮಾತನಾಡಿ, ತಮ್ಮ ಗ್ರಾಮವು ದೇಶದ ಕೊನೆಯ ಗ್ರಾಮಗಳಲ್ಲಿ ಒಂದಾಗಿದೆ. ಇವರಿಗೆ ವಿದ್ಯುತ್ ಅಭಿವೃದ್ಧಿ ಇಲಾಖೆಯಿಂದ ಬೀದಿ ದೀಪಗಳನ್ನು ಒದಗಿಸಿಲ್ಲ. ಸೈನ್ಯವು ಯಾವಾಗಲೂ ನಮಗೆ ಸಹಾಯಕವಾಗಿದೆ ಮತ್ತು ಸೌರ ದೀಪಗಳನ್ನು ಒದಗಿಸುವ ಮೂಲಕ, ರಾತ್ರಿ ಸಮಯದಲ್ಲಿ ಚಲನಶೀಲತೆ ಈಗ ಸುಲಭವಾಗಿದೆ ಎಂದು ಅವರು ಹೇಳಿದರು.

## ಗುಂಡಿನ ದಾಳಿ : ಗ್ಯಾಂಗ್‌ಸ್ಟರ್ ರೋಹಿತ್ ಗೋಡಾರಾ ವಿರುದ್ಧ ಎಫ್‌ಐಆರ್



**ಮುಂಬೈ:** ಕಳೆದ ತಿಂಗಳು ಬಾಲಿವುಡ್ ನಟ ಸಲ್ಮಾನ್ ಖಾನ್ ಅವರ ನಿವಾಸದ ಮೇಲೆ ನಡೆದ ಗುಂಡಿನ ದಾಳಿಗೆ ಸಂಬಂಧಿಸಿದಂತೆ ಮುಂಬೈ ಕ್ರೈಂ ಬ್ರಾಂಚ್ ಪೊಲೀಸರು ಗ್ಯಾಂಗ್‌ಸ್ಟರ್ ರೋಹಿತ್ ಗೋಡಾರಾ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಮುಂಬೈನ ಬಾಂದ್ರಾ ಪ್ರದೇಶದ ಗ್ಯಾಲಕ್ಸಿ ಅಪಾರ್ಟ್‌ಮೆಂಟ್‌ನಲ್ಲಿರುವ ಸಲ್ಮಾನ್ ಖಾನ್ ಅವರ ನಿವಾಸದ ಹೊರಗೆ ಏಪ್ರಿಲ್ 14 ರಂದು ಗುಂಡಿನ ಘಟನೆ ನಡೆದಿತ್ತು. ನಂತರದ ಬಂಧನಗಳು ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ಗೆ ಸಂಪರ್ಕವನ್ನು ಬಹಿರಂಗಪಡಿಸಿದವು, ಮುಂಬೈ ಪೊಲೀಸರು ಶೂಟಿಂಗ್‌ನಲ್ಲಿ ಭಾಗಿಯಾಗಿರುವ ಎಲ್ಲರ ವಿರುದ್ಧ ಮಹಾರಾಷ್ಟ್ರದ ಸಂಘಟಿತ ಅಪರಾಧಗಳ ನಿಯಂತ್ರಣ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಮುಂಬೈ ಕ್ರೈಂ ಬ್ರಾಂಚ್ ಸಲ್ಮಾನ್ ಖಾನ್ ಫೈರಿಂಗ್ ಪ್ರಕರಣದಲ್ಲಿ ಇದುವರೆಗೆ ಆರು ಆರೋಪಿಗಳನ್ನು ಬಂಧಿಸಿದೆ ಮತ್ತು ನಾಲ್ವರು ಆರೋಪಿಗಳು ಪರಾರಿಯಾಗಿದ್ದಾರೆ ಮತ್ತು ಹುಡುಕಾಟ ನಡೆಯುತ್ತಿದೆ ಎಂದು ತಿಳಿದುಬಂದಿದೆ. ಆರನೇ ಆರೋಪಿಯನ್ನು ಹರ್ಪಾಲ್ ಸಿಂಗ್ (37) ಎಂದು ಗುರುತಿಸಲಾಗಿದ್ದು, ಆತನನ್ನು ಹರಿಯಾಣದ ಫತೇಹಾಬಾದ್‌ನಲ್ಲಿ ಬಂಧಿಸಲಾಗಿದೆ. ಅವರನ್ನು ಮುಂಬೈನ ಎಂಸಿಒಸಿಎ (ಮಹಾರಾಷ್ಟ್ರ ಕಂಟ್ರೋಲ್ ಆಫ್ ಆರ್ಗನೈಸ್ಡ್ ಕ್ರೈಮ್ ಆಕ್ಟ್) ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು. ಪೊಲೀಸ್ ಅಧಿಕಾರಿಗಳ ಪ್ರಕಾರ, ಮತ್ತೊಬ್ಬ ಆರೋಪಿ ಮೊಹಮದ್ ರಫೀಕ್ ಚೌಧರಿ ವಿಚಾರಣೆ ವೇಳೆ ಹರ್ಪಾಲ್ ಸಿಂಗ್ ಮಾಹಿತಿ ಹೊರಬಿದ್ದಿದೆ. ಅವರು ಸಲಾನ್ ನಿವಾಸದ ಸುತ್ತ ವಿಹಾರ ನಡೆಸಲು ಚೌಧರಿಗೆ ಹಣಕಾಸು ಒದಗಿಸಿದ್ದರು. ಈ ಹಿಂದೆ, ದರೋಡೆಕೋರ ಲಾರೆನ್ಸ್ ಬಿಷ್ಣೋಯ್ ಅವರ ಸಹೋದರ ಅನೋಲ್ ವಿಷ್ಣೋಯ್ ಶೂಟರ್‌ಗಳನ್ನು ಪ್ರೇರೇಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಮಾರ್ಚ್ 15, 2024 ರಂದು ಪನ್ವೇಲ್‌ನಲ್ಲಿ ಶಸ್ತ್ರಾಸ್ತ್ರ ವಿತರಣೆಯನ್ನು ಸ್ವೀಕರಿಸಿದ ನಂತರ, ಅನೋಲ್ ಶೂಟರ್‌ಗಳಿಗೆ ಗುರಿಯ ಮಾಹಿತಿಯನ್ನು ಒದಗಿಸಿದರು, ನಟನ ನಿವಾಸದಲ್ಲಿ ಗುಂಡಿನ ದಾಳಿ ನಡೆಸಲು ಸೂಚಿಸಿದರು.

ಯೋಜಿತ ಗುಂಡಿನ ಘಟನೆಯನ್ನು ಸೂಚನೆಗಳ ಪ್ರಕಾರ ಕಾರ್ಯಗತಗೊಳಿಸಲಾಯಿತು, ಈ ಸಮಯದಲ್ಲಿ ಶೂಟರ್‌ಗಳು ಒಟ್ಟು 3 ಲಕ್ಷ ಪಡೆದಿದ್ದರು.

## ಟಿಎಂಸಿಯಿಂದ ಮುಲ್ಲಾ, ಮದರಸಾ, ಮಾಫಿಯಾ ಪೋಷಣೆ



**ಬೊಂಗಾವ್:** ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಮಾಮಾತಿ, ಮನುಷ್ ಭರವಸೆಯ ಮೇಲೆ ಅಧಿಕಾರಕ್ಕೆ ಬಂದು ಇದೀಗ ಮುಲ್ಲಾ, ಮದರಸಾ ಮತ್ತು ಮಾಫಿಯಾ ಗಳನ್ನು ಪೋಷಿಸುತ್ತಿದ್ದಾರೆ ಎಂದು ಕೇಂದ್ರ ಗೃಹಸಚಿವ ಅಮಿತ್ ಶಾ ವಾಗ್ದಾಳಿ ನಡೆಸಿದ್ದಾರೆ. ಬೊಂಗಾವ್‌ನಲ್ಲಿ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಗಹ ಸಚಿವರು, ಟಿಎಂಸಿ ಸರ್ಕಾರವು ಇಮಾಮ್‌ಗಳಿಗೆ ಮಾಸಿಕ ಗೌರವಧನವನ್ನು ನೀಡಿದೆ ಆದರೆ ಅರ್ಚಕರು ಮತ್ತು ದೇವಾಲಯಗಳ ಪಾಲಕರಿಗೆ ಒಂದು ಪೈಸೆಯನ್ನೂ ನೀಡಿಲ್ಲ ಎಂದು ಹೇಳಿದರು. ಮಾ, ಮತಿ, ಮಾನುಷ್ ಘೋಷಣೆಯ ಮೇಲೆ ಟಿಎಂಸಿ ಅಧಿಕಾರಕ್ಕೆ ಬಂದಿತು. ಆದರೆ, ಅವರ ಗಮನ ಈಗ ಮುಲ್ಲಾ, ಮದರಸ, ಮಾಫಿಯಾದತ್ತ ನೆಟ್ಟಿದೆ. ಇಲ್ಲಿನ ಇಮಾಮ್‌ಗಳಿಗೆ ಗೌರವಧನ ನೀಡಲಾಗುತ್ತದೆ ಆದರೆ ದೇವಾಲಯದ ಅರ್ಚಕರು ಮತ್ತು ಸೇವಕರುಗಳಿಗೆ ಏನೂ ಸಿಗುವುದಿಲ್ಲ. ತಾಜಿಯಾಸ್ ಗೆ ಯಾವುದೇ ಅಡೆತಡೆಗಳಿಲ್ಲದಿದ್ದರೂ, ದುರ್ಗಾ ಪೂಜೆ ಮತ್ತು ಕಾಳಿ ಪೂಜೆಯಂದು ನಿಮಜ್ಜನ ಮೆರವಣಿಗೆಗಳನ್ನು ಕೈಗೊಳ್ಳಲು ನಿಯಮಿತವಾದ ರಸ್ತೆ ತಡೆಗಳಿವೆ ಶಾ ಹೇಳಿದರು.

ಅಯೋಧ್ಯೆಯಲ್ಲಿ ರಾಮ್ ಲಲ್ಲಾ ಅವರ ಪ್ರಾಣ ಪ್ರತಿಷ್ಠಾಕ್ಕೆ ಆಹ್ವಾನವನ್ನು ತಿರಸ್ಕರಿಸಿದ್ದಕ್ಕಾಗಿ ಮಮತಾ ಬ್ಯಾನರ್ಜಿಯನ್ನು ಕಟುವಾಗಿ ಟೀಕಿಸಿದರು ಮತ್ತು ಔಪಚಾರಿಕ ಆಹ್ವಾನವನ್ನು ಸ್ವೀಕರಿಸಿದರೂ, ಅವರು ಒಂದು ನಿರ್ದಿಷ್ಟ ಮತ ಬ್ಯಾಂಕ್ ಅನ್ನು ಸಮಾಧಾನಪಡಿಸಲು ಉದ್ಘಾಟನಾ ಸಮಾರಂಭಕ್ಕೆ ಹಾಜರಾಗಲಿಲ್ಲ. ಜನರು ಆಕೆಯ ವೋಟ್ ಬ್ಯಾಂಕ್ ಅಲ್ಲ ಎನ್ನುವುದನ್ನು ಮರೆಯಬಾರದು ಎಂದು ಕರೆ ನೀಡಿದರು. ಪೌರತ್ವ ತಿದ್ದುಪಡಿ ಕಾಯ್ದೆ ಕುರಿತು ಮುಖ್ಯಮಂತ್ರಿ ಸುಳ್ಳು ಸುದ್ದಿಗಳನ್ನು ಹರಡುತ್ತಿದ್ದಾರೆ ಎಂದು ಆರೋಪಿಸಿರುವ ಅವರು, ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದಿಂದ ವಲಸೆ ಬಂದ ಅಲ್ಪಸಂಖ್ಯಾತ ವಸಾಹತುಗಾರರಿಗೆ ಆಶ್ರಯ ಮತ್ತು ಖಾಯಂ ನಿವಾಸವನ್ನು ನೀಡುವ ಕೇಂದ್ರೀಯ ಶಾಸನದ ಕುರಿತು ಅವರು ಜನರನ್ನು ದಾರಿತಪ್ಪಿಸುತ್ತಿದ್ದಾರೆ ಎಂದು ಹೇಳಿದರು. ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ ಬೊಂಗಾವ್ ಮತ್ತು ಉತ್ತರ 24 ಪರಗಣಗಳಲ್ಲಿ ವಾಸಿಸುವ ಮಾತುವಾ ಸಮುದಾಯವು ಸಿಎಎ ಅಡಿಯಲ್ಲಿ ಹಕ್ಕುಗಳನ್ನು ಪಡೆಯಲು ಸಾಧ್ಯವಾಗುತ್ತದೆ ಎಂದು ಅವರು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

## ನಾನು ಯಾವತ್ತೂ ಹಿಂದೂ-ಮುಸ್ಲಿಂ ಎಂಬ ಭೇದ ಮಾಡಲ್ಲ



**ಅಧಿಕಾರಕ್ಕೆ ಬಂದರೆ ಸಂಪತ್ತನ್ನು ಮರುಹಂಚಿಕೆ ಮಾಡುವ ಕಾಂಗ್ರೆಸ್‌ನ ಉದ್ದೇಶದ ಬಗ್ಗೆ ವರದಿಗಳನ್ನು ಉಲ್ಲೇಖಿಸಿದ ಪ್ರಧಾನಿ, ಪಕ್ಷವು ಸಮೀಕ್ಷೆಯನ್ನು ನಡೆಸುತ್ತದೆ ಮತ್ತು ಅವರು ಮಂಗಳಸೂತ್ರವನ್ನು ಮಹಿಳೆಯರೊಂದಿಗೆ ಇರಲು ಸಹ ಬಿಡುವುದಿಲ್ಲ ಅವರು ಈ ಮಟ್ಟಕ್ಕೆ ಹೋಗುತ್ತಾರೆ**

**- ನರೇಂದ್ರ ಮೋದಿ, ಪ್ರಧಾನಿ**

**ವಾರಣಾಸಿ:** ನುಸುಳುಕೋರರು, ಹೆಚ್ಚು ಮಕ್ಕಳಿರುವವರು ಎಂಬ ಹೇಳಿಕೆಯನ್ನು ಕೇವಲ ಮುಸಲ್ಮಾನರನ್ನು ಗಮನದಲ್ಲಿಟ್ಟುಕೊಂಡು ಹೇಳಿಲ್ಲ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಸ್ಪಷ್ಟನೆ ನೀಡಿದ್ದಾರೆ. ಮಾಧ್ಯಮವೊಂದಕ್ಕೆ ನೀಡಿದ ವಿಶೇಷ ಸಂದರ್ಶನದಲ್ಲಿ ಪ್ರಧಾನಿ ಮೋದಿ ಅವರು ಮುಸ್ಲಿಮರ ಮೇಲಿನ ಪ್ರೀತಿಯನ್ನು ಮಾರಾಟ ಮಾಡುವುದಿಲ್ಲ ಎಂದು ಹೇಳಿದರು, ನಾನು ವೋಟ್ ಬ್ಯಾಂಕ್‌ಗಾಗಿ ಕೆಲಸ ಮಾಡುವುದಿಲ್ಲ. ನಾನು ಸಬ್ಕಾ ಸಾಥ್, ಸಬ್ಕಾ ವಿಕಾಸ್ ಅನ್ನು ನಂಬುತ್ತೇನೆ ಎಂದಿದ್ದಾರೆ. ನನಗೆ ಆಘಾತವಾಗಿದೆ. ಹೆಚ್ಚು ಮಕ್ಕಳಿರುವವರ ಬಗ್ಗೆ ಮಾತನಾಡುವಾಗ, ಅವರು ಮುಸ್ಲಿಮರು ಎಂದು ಯಾರು ಹೇಳಿದರು ನೀವು ಮುಸ್ಲಿಮರಿಗೆ ಏಕೆ ಅನ್ಯಾಯ ಮಾಡುತ್ತಿದ್ದೀರಿ ಬಡ ಕುಟುಂಬಗಳಲ್ಲಿಯೂ ಇದೇ ಪರಿಸ್ಥಿತಿ ಇದೆ. ಬಡತನ ಇರುವಲ್ಲಿ, ಹೆಚ್ಚು ಮಕ್ಕಳು ಇರುತ್ತಾರೆ.

ಅದನ್ನು ನಾನು ಉಲ್ಲೇಖಿಸಿದ್ದೇನೆ ಎಂದು ಅವರು ಸಮಜಾಯಿಷಿ ನೀಡಿದ್ದಾರೆ. ತಾವು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಗುಜರಾತ್‌ನಲ್ಲಿ ನಡೆದ ಗೋಧ್ರಾ ನಂತರದ ಗಲಭೆಗಳನ್ನು ಉಲ್ಲೇಖಿಸಿದ ಪ್ರಧಾನಿ ಮೋದಿ, 2002 ನಂತರ ಅವರ ವಿರೋಧಿಗಳು ಮುಸ್ಲಿಮರಲ್ಲಿ ತಮ ಇಮೇಜ್‌ಗೆ ಕಳಂಕ ತಂದಿದ್ದಾರೆ ಎಂದು ಹೇಳಿದರು.

ಈ ವಿಷಯವು ಮುಸ್ಲಿಮರಿಗೆ ಸಂಬಂಧಿಸಿದ್ದಲ್ಲ, ಮೋದಿಯವರಿಗೆ ಮುಸ್ಲಿಮರು ಎಷ್ಟು ಬೆಂಬಲ ನೀಡಿದರೂ, ಅವರಿಗೆ ಇದನ್ನು ಮಾಡು, ಅದನ್ನು ಮಾಡು ಎಂದು ನಿರ್ದೇಶಿಸುವ ಚಿಂತನೆಯ ಅಲೆಯಿದೆ. ನನ್ನ ಮನೆಯಲ್ಲಿ, ನನ್ನ ಸುತ್ತಲೂ ಎಲ್ಲಾ ಮುಸ್ಲಿಂ ಕುಟುಂಬಗಳಿವೆ. ನಮ ಮನೆಯಲ್ಲಿ ಬೇರೆ ಬೇರೆ ಹಬ್ಬಗಳಿದ್ದವು, ಈದ್ ದಿನದಂದು ನಮ ಮನೆಯಲ್ಲಿ ಊಟ ಮಾಡುತ್ತಿರಲಿಲ್ಲಎಂದು ಅವರು ಹೇಳಿಕೊಂಡಿದ್ದಾರೆ.ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಮುಸ್ಲಿಮರು ತಮಗೆ ಮತ ಹಾಕುತ್ತಾರೆಯೇ ಎಂಬ ಪ್ರಶ್ನೆಗೆ, ದೇಶದ ಜನತೆ ನನಗೆ ಮತ ಹಾಕುತ್ತಾರೆ ಎಂದರು. ನಾನು ಹಿಂದೂ-ಮುಸ್ಲಿಮರನ್ನು ಬೇರೆ ಮಾಡಲು ಪ್ರಾರಂಭಿಸುವ ದಿನ, ನಾನು ಸಾರ್ವಜನಿಕ ಜೀವನದಲ್ಲಿ ಇರಲು ಅರ್ಹನಾಗುವುದಿಲ್ಲ. ನಾನು ಹಿಂದೂ-ಮುಸ್ಲಿಂ ಎಂದು ಭೇಡ ಮಾಡುವುದಿಲ್ಲ. ಇದು ನನ್ನ ಪ್ರತಿಜ್ಞೆ ಎಂದು ಪ್ರಧಾನಿ ಮೋದಿ ಹೇಳಿದರು.

## ನಿರ್ಬಂಧಗಳ ಬೆದರಿಕೆ ಹಾಕಿದ ಅಮೆರಿಕಕ್ಕೆ ಜೈಶಂಕರ್ ಪ್ರತಿಕ್ರಿಯೆ

**ಚಬಹಾರ್ ಬಂದರು ಡೀಲ್**



**ಕೋಲ್ಕತ್ತಾ:** ಇರಾನ್‌ನಲ್ಲಿನ ಚಬಹಾರ್ ಬಂದರಿನ ನಿರ್ವಹಣೆಗೆ ಭಾರತ 10 ವರ್ಷಗಳ ಒಪ್ಪಂದಕ್ಕೆ ಸಹಿ ಹಾಕಿದ ನಂತರ ಅಮೆರಿಕವು ನಿರ್ಬಂಧಗಳ ಸಂಭಾವ್ಯ ಅಪಾಯದ ಎಚ್ಚರಿಕೆ ನೀಡಿದ ಒಂದು ದಿನದ ನಂತರ, ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ಈ ಯೋಜನೆಯು ಇಡೀ ಪ್ರದೇಶಕ್ಕೆ ಪ್ರಯೋಜನವನ್ನು ನೀಡುತ್ತದೆ ಹೀಗಾಗಿ ನಾವು ಅಂತಹ ತೀರ್ಮಾನ ಕೈಗೊಂಡಿದ್ದೇವೆ ಎಂದು ಸಮಜಾಯಿಷಿ ನೀಡಿದ್ದಾರೆ. ಈ ಹಿಂದೆ ಚಬಹಾರ್‌ನ ದೊಡ್ಡ ಪ್ರಸ್ತುತತೆಯನ್ನು ಅಮೆರಿಕ ಕೂಡ ಮೆಚ್ಚಿಕೊಂಡಿತ್ತು ಎನ್ನುವುದನ್ನು ಆ ದೇಶದ ನಾಯಕರು ಮರೆಯಬಾರದು ಎಂದು ಸಲಹೆ ನೀಡಿದ್ದಾರೆ.

ಕೋಲ್ಕತ್ತಾದಲ್ಲಿ ಅವರ ಪುಸ್ತಕ ವೈ ಭಾರತ್ ವ್ಯಾಟರ್ಸ್ ಬಾಂಗ್ಲಾ ಆವೃತ್ತಿಯನ್ನು ಬಿಡುಗಡೆ ಮಾಡಿದ ನಂತರ ಸಂವಾದದಲ್ಲಿ ಜೈಶಂಕರ್ ಮಾತನಾಡುತ್ತಿದ್ದರು. ಅಮೇರಿಕಾದ ಟೀಕೆಗಳ ಬಗ್ಗೆ ಕೇಳಿದಾಗ, ಇದು ಸಂವಹನ, ಮನವರಿಕೆ ಮತ್ತು ಜನರನ್ನು ಅರ್ಥಮಾಡಿಕೊಳ್ಳುವ ಪ್ರಶ್ನೆ ಎಂದು ನಾನು ಭಾವಿಸುತ್ತೇನೆ, ಇದು ನಿಜವಾಗಿ ಪ್ರತಿಯೊಬ್ಬರ ಪ್ರಯೋಜನಕ್ಕಾಗಿ. ನಾನು ಜನರು ಅದನ್ನು ಸಂಕುಚಿತವಾಗಿ ನೋಡಬೇಕು ಎಂದು ಯೋಚಿಸಬೇಡಿ ಎಂದಿದ್ದಾರೆ. ಯುನೈಟೆಡ್ ಸ್ಟೇಟ್ಸ್ ಟೆಹ್ರಾನ್‌ನೊಂದಿಗೆ ವ್ಯಾಪಾರ ವ್ಯವಹಾರಗಳನ್ನು ಪರಿಗಣಿಸುವ ಯಾರಾದರೂ ನಿರ್ಬಂಧಗಳ ಸಂಭಾವ್ಯ ಅಪಾಯದ ಬಗ್ಗೆ ತಿಳಿದಿರಬೇಕು ಎಂದು ಎಚ್ಚರಿಸಿತ್ತು. ನಾನು ಹೇಳುತ್ತೇನೆ? ಇರಾನ್ ಮೇಲೆ ಅಮೆರಿಕ ನಿರ್ಬಂಧಗಳು ಜಾರಿಯಲ್ಲಿವೆ ಮತ್ತು ನಾವು ಅವುಗಳನ್ನು ಜಾರಿಗೊಳಿಸುವುದನ್ನು ಮುಂದುವರಿಸುತ್ತೇವೆ ಎಂದು ಯುಎಸ್ ಸ್ಟೇಟ್ ಡಿಪಾರ್ಟ್‌ಮೆಂಟ್ ಪ್ರಧಾನ ಉಪ ವಕ್ತಾರ ವೇದಾಂತ್ ಪಟೇಲ್ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದರು. ಈ ಯೋಜನೆಯೊಂದಿಗೆ ಭಾರತವು ಸುದೀರ್ಘ ಸಂಬಂಧವನ್ನು ಹೊಂದಿದೆ, ಆದರೆ ದೀರ್ಘಾವಧಿಯ ಒಪ್ಪಂದಕ್ಕೆ ಸಹಿ ಹಾಕಲು ಸಾಧ್ಯವಾಗಲಿಲ್ಲ, ಅದು ಮುಖ್ಯವಾಗಿದೆ ಎಂದು ಜೈ ಶಂಕರ್ ಹೇಳಿದರು. ಹೊಸದಿಲ್ಲಿಯು ಸಮಸ್ಯೆಗಳನ್ನು ಪರಿಹರಿಸಲು ಮತ್ತು ದೀರ್ಘಾವಧಿಯ ಒಪ್ಪಂದಕ್ಕೆ ಸಹಿ ಹಾಕಲು ಸಾಧ್ಯವಾಯಿತು, ಇದು ಇಡೀ ಪ್ರದೇಶಕ್ಕೆ ಪ್ರಯೋಜನವನ್ನು ನೀಡುತ್ತದೆ ಎಂದು ಅವರು ಹೇಳಿದರು.

## ಗಾಜಾದಲ್ಲಿ ಬಲಿಯಾದ ನಿವೃತ್ತ ಕರ್ನಲ್ ವೈಭವ್ ಕಾಳೆ

**ನವದೆಹಲಿ:** ಗಾಜಾದಲ್ಲಿ ನಡೆದ ದುರ್ಘಟನೆಯಲ್ಲಿ ಮೃತಪಟ್ಟ ಭಾರತೀಯನನ್ನು ವಿಶ್ವಸಂಸ್ಥೆಯ ಭದ್ರತಾ ಸೇವಾ ಸಂಯೋಜಕರಾಗಿ ಕಾರ್ಯನಿರ್ವಹಿಸುತ್ತಿದ್ದ ನಿವೃತ್ತ ಕರ್ನಲ್ ವೈಭವ್ ಅನಿಲ್ ಕಾಳೆ ಎಂದು ಗುರುತಿಸಲಾಗಿದೆ. ಭಾರತೀಯನ ಸಾವು ಕುರಿತಂತೆ ವಿಶ್ವಸಂಸ್ಥೆ ಹಾಗೂ ಇಸ್ರೇಲ್ 2022 ರಲ್ಲಿ ಭಾರತೀಯ ಸೇನೆಯಿಂದ ನಿವತ್ತರಾದ ಕರ್ನಲ್ ಕಾಳೆ ಅವರು ಪತ್ನಿ ಅಮತಾ, ಇಬ್ಬರು ಹದಿಹರೆಯದ ಮಕ್ಕಳು, ಪುತ್ರ ವೇದಾಂತ್ ಮತ್ತು ಮಗಳು ರಾಧಿಕಾ ಅವರನ್ನು ಅಗಲಿದ್ದಾರೆ. 46 ವರ್ಷದ ಕರ್ನಲ್ ವೈ ಭವ್ ಅನಿಲ್ ಕಾಳೆ ಅವರು ಸಶಸ್ತ್ರ ಪಡೆಗಳಲ್ಲಿ ಎರಡು ದಶಕಗಳ ಕಾಲ ಸೇವೆ ಸಲ್ಲಿಸಿದ್ದರು.

ಅವರು ಮಿಲಿಟರಿ ಸೇವೆಗೆ ಮೀಸಲಾದ ಕುಟುಂಬದಿಂದ ಬಂದವರು, ಅವರ ಸಹೋದರ, ಗ್ರೂಪ್ ಕ್ಯಾಪ್ಟನ್ ವಿಶಾಲ್ ಕಾಳೆ, ಭಾರತೀಯ ವಾಯುಪಡೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ, ಅವರ ಸೋದರಸಂಬಂಧಿ ಕರ್ನಲ್ ಅಮೆ ಕಾಳೆ ಸೈನ್ಯದಲ್ಲಿ, ಅವರ ಸೋದರ ಮಾವ ವಿಂಗ್ ಕಮಾಂಡರ್ ಪ್ರಶಾಂತ್ ಕಾರ್ಡೆ ನಿವೃತ್ತರಾಗಿದ್ದಾರೆ. ಕೋಲ್ ಕಾಳೆ ಅವರು ನಾಗ್ಪುರದವರು ಮತ್ತು ಅವರು ಸೋಮಲ್ವಾರ್ ಹೈಸ್ಕೂಲ್‌ನಲ್ಲಿ ಓದುತ್ತಿದ್ದರು. ನಂತರ ಅವರು ಜವಾಹರಲಾಲ್ ನೆಹರು ವಿಶ್ವವಿದ್ಯಾನಿಲಯದಿಂದ ಹ್ಯುಮಾನಿಟೀಸ್‌ನಲ್ಲಿ ಬಿಎ ಪದವಿಯನ್ನು ಪಡೆದರು, ಅವರ ಲಿಂಕ್‌ಡಇನ್ ಪ್ರಕಾರ ಇಂದೋರ್‌ನ ದೇವಿ ಅಹಲ್ಯಾ ವಿಶ್ವವಿದ್ಯಾಲಯದಿಂದ ಹಿರಿಯ ರಕ್ಷಣಾ ನಿರ್ವಹಣೆಯಲ್ಲಿ ಶಿಕ್ಷಣದ ಡಿಪ್ಲೊಮಾವನ್ನು ಪಡೆಯುವ ಮೊದಲು. 2009 ರಲ್ಲಿ, ಅವರು ಇಂಟರ್ನ್ಯಾಷನಲ್ ರೆಡ್‌ಕ್ರಾಸ್‌ನಿಂದ ಅಂತರರಾಷ್ಟ್ರೀಯ ಮಾನವೀಯ ಕಾನೂನಿನಲ್ಲಿ ಪ್ರಮಾಣಪತ್ರ ಕಾರ್ಯಕ್ರಮವನ್ನು ಪೂರ್ಣಗೊಳಿಸಿದರು.

2012 ರಲ್ಲಿ, ಅವರು ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ನ್ಯಾಷನಲ್ ಇಂಟಿಗ್ರೇಷನ್‌ನಿಂದ ವರ್ತನೆಯ ವಿಜ್ಞಾನದಲ್ಲಿ ಮತ್ತೊಂದು ಪ್ರಮಾಣಪತ್ರ ಕಾರ್ಯಕ್ರಮವನ್ನು ಪೂರ್ಣಗೊಳಿಸಿದರು.

# ನಮಗೂ ಮೋದಿಯಂಥಾ ನಾಯಕ ಬೇಕು

## ಪ್ರಧಾನಿ ಮೋದಿ ಅವರು ಅತಿ ಪ್ರಬಲ ನಾಯಕ, ಅವರು ಭಾರತವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುತ್ತಿದ್ದಾರೆ



**ಪಾಕ್ ಮೂಲದ ಅಮೆರಿಕ ಉದ್ಯಮಿ ಆಶಯ**

**ಭಾರತದಲ್ಲಿ ಲೋಕಸಭಾ ಚುನಾವಣೆ ನಡೆಯುತ್ತಿರುವ ಹೊತ್ತಲ್ಲೇ ಪ್ರಧಾನಿ ಮೋದಿ, ಭಾರತದ ಪ್ರಜಾಪ್ರಭುತ್ವ, ಭಾರತದ ಚುನಾವಣಾ ಪ್ರಕ್ರಿಯೆ ಕುರಿತಾಗಿ ವಿಶ್ವಾದ್ಯಂತ ಪರ ವಿರೋಧ ಚರ್ಚೆಗಳಾಗುತ್ತಿವೆ. ಅಮೆರಿಕದಲ್ಲಿ ನೆಲೆಸಿರುವ ಪಾಕಿಸ್ತಾನದ ಮೂಲದ ಉದ್ಯಮಿಯೊಬ್ಬರು ಪ್ರಧಾನಿ ಮೋದಿ ಅವರ ಕುರಿತಾಗಿ ಆಡಿರುವ ಮಾತುಗಳು ಇದೀಗ ಭಾರೀ ಸದ್ದು ಮಾಡುತ್ತಿದೆ. ಪಾಕಿಸ್ತಾನಕ್ಕೆ ಪ್ರಧಾನಿ ಮೋದಿ ಅವರಂಥಾ ನಾಯಕ ಬೇಕುಎಂದು ಉದ್ಯಮಿ ತಮ್ಮ ಮನದಾಳದ ಮಾತುಗಳನ್ನಾಡಿದ್ದಾರೆ.**

**ಅಮೆರಿಕ:** ಪ್ರಧಾನಿ ಮೋದಿ ಅವರು ಅತಿ ಪ್ರಬಲ ನಾಯಕ. ಅವರು ಭಾರತವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುತ್ತಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿರುವ ಪಾಕಿಸ್ತಾನ ಮೂಲದ ಅಮೆರಿಕ ಉದ್ಯಮಿ, ಇದೀಗ ಮೂರನೇ ಅವಧಿಗೆ ಮೋದಿ ಅವರೇ ಪ್ರಧಾನಿ ಆಗಲಿದ್ದಾರೆ ಎಂದು ಭವಿಷ್ಯ ನುಡಿದಿದ್ದಾರೆ.

ಅಮೆರಿಕದ ಬಾಲ್ಟಿಮೋರ್‌ನಲ್ಲಿ ನೆಲೆಸಿರುವ ಪಾಕಿಸ್ತಾನ ಮೂಲದ ಉದ್ಯಮಿ ಸಾಜಿದ್ ತಾರಾರ್ ಅವರು, ಪ್ರಧಾನಿ ಮೋದಿ ಭಾರತಕ್ಕೆ ಮಾತ್ರವಲ್ಲ ಇಡೀ ಪ್ರಾದೇಶಿಕ ಮಟ್ಟಕ್ಕೇ ಸಹಕಾರಿ ಎಂದಿದ್ದಾರೆ. ಜೊತೆಯಲ್ಲೇ ಇಡೀ ವಿಶ್ವಕ್ಕೇ ಬೇಕಾದ ವ್ಯಕ್ತಿ ಎಂದಿರುವ ಸಾಜಿದ್, ಪಾಕಿಸ್ತಾನ ದೇಶಕ್ಕೂ ಇಂಥದ್ದೇ ಒಬ್ಬ ನಾಯಕ ಬೇಕಿದೆ ಎಂದು ಹೇಳಿದ್ದಾರೆ.

ಪ್ರಧಾನಿ ಮೋದಿ ಅವರೊಬ್ಬ ಗಮನಾರ್ಹ ನಾಯಕ ಎಂದಿರುವ ಸಾಜಿದ್ ತಾರಾರ್, ಅತ್ಯಂತ ವ್ಯತಿರಿಕ್ತ ಸನ್ನಿವೇಶದಲ್ಲೂ ಪ್ರಧಾನಿ ಮೋದಿ ಅವರು ಪಾಕಿಸ್ತಾನಕ್ಕೆ ಭೇಟಿ ನೀಡಿದ್ದರು. ಮುಂದಿನ ದಿನಗಳಲ್ಲಿ ಪ್ರಧಾನಿ ಮೋದಿ ಅವರು ಪಾಕಿಸ್ತಾನದ ಜೊತೆ ಮಾತುಕತೆ ಹಾಗೂ ವ್ಯಾಪಾರ ವಹಿವಾಟು ನಡೆಸಲು ಮನಸ್ಸು ಮಾಡಬಹುದು ಎಂದು ಹೇಳಿದ್ದಾರೆ. ಪಿಟಿಐ ಸುದ್ದಿ ಸಂಸ್ಥೆ ಜೊತೆ ಮಾತನಾಡಿದ ಸಾಜಿದ್ ತಾರಾರ್, ಶಾಂತಿಯುತ ಪಾಕಿಸ್ತಾನವು ಭಾರತಕ್ಕೆ ಅತ್ಯಂತ ಒಳ್ಳೆಯದು ಎಂದು ಅಭಿಪ್ರಾಯಪಟ್ಟಿದ್ದಾರೆ. ಅಷ್ಟೇ ಅಲ್ಲ ಮೋದಿಯವರೇ ಮತ್ತೊಂದು ಅವಧಿಗೆ ಭಾರತದ ಪ್ರಧಾನಿ ಆಗೋದು ನಿಶ್ಚಿತ ಎಂದೂ ಸಾಜಿದ್ ಹೇಳಿದ್ದಾರೆ. 1990ರ ದಶಕದಲ್ಲೇ ಅಮೆರಿಕ ದೇಶಕ್ಕೆ ವಲಸೆ ಹೋಗಿದ್ದ ಸಾಜಿದ್ ತಾರಾರ್, ಇಂದಿಗೂ ಕೂಡಾ ಪಾಕಿಸ್ತಾನದ ಸರ್ಕಾರ ಹಾಗೂ ಆಯಕಟ್ಟಿನ ಸ್ಥಳಗಳಲ್ಲಿ ಉತ್ತಮ ಸಂಪರ್ಕ ಹೊಂದಿದ್ದಾರೆ.

ಭಾರತದ ಒಟ್ಟು 97 ಕೋಟಿ ಜನರು ಮತದಾನ ಮಾಡುತ್ತಿದ್ದಾರೆ, ತಮ್ಮ ಹಕ್ಕು ಚಲಾವಣೆ ಮಾಡುತ್ತಿದ್ದಾರೆ. ಇದು ಪವಾಡವಲ್ಲದೆ ಮತ್ತೇನು ಎಂದು ಕೇಳಿದ ಸಾಜಿದ್ ತಾರಾರ್, ಭಾರತವು ಇಡೀ ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ದೇಶವಾಗಿದ್ದು, ಮುಂದಿನ ದಿನಗಳಲ್ಲಿ ಇಡೀ ವಿಶ್ವವೇ ಭಾರತದಿಂದ ಪಾಠ ಕಲಿಯಲಿದೆ ಎಂದು ಹೊಗಳಿದ್ದಾರೆ. ಜೊತೆಯಲ್ಲೇ ಪ್ರಧಾನಿ ಮೋದಿ ಅವರ ಜನಪ್ರಿಯತೆ ಕೂಡಾ ದಿನೇ ದಿನೇ ವೃದ್ಧಿ ಆಗುತ್ತಿದೆ ಎಂದು ಸಾಜಿದ್ ತಾರಾರ್ ಹೇಳಿದ್ದಾರೆ.

ಪಾಕಿಸ್ತಾನದ ಆರ್ಥಿಕ ಕುಸಿತದ ಕುರಿತಾಗಿಯೂ ಮಾತನಾಡಿದ ಸಾಜಿದ್ ತಾರಾರ್, ಪಾಕಿಸ್ತಾನದಲ್ಲಿ ಬೆಲೆ ಏರಿಕೆ ಜನರನ್ನು ಕಾಡುತ್ತಿದೆ. ಪೆಟ್ರೋಲ್, ಡೀಸೆಲ್ ದರ ಗಗನಕ್ಕೇರಿದೆ. ಇಷ್ಟಾದರೂ ತೆರಿಗೆ ಏರಿಸಬೇಕಾದ ಅನಿವಾರ್ಯತೆಯಲ್ಲಿ ಸರ್ಕಾರ ಇದೆ. ವಿದ್ಯುತ್ ದರವೂ ಏರಿಕೆ ಆಗಿದೆ. ವಿದೇಶಗಳಿಗೆ ರಫ್ತು ಮಾಡಲು ಸಾಧ್ಯವಾಗ್ತಿಲ್ಲ. ಇದರ ಪರಿಣಾಮವಾಗಿ ಪಾಕ್ ಆಕ್ರಮಿತ ಕಾಶ್ಮೀರದಲ್ಲೂ ಪ್ರತಿಭಟನೆ ನಡೆಯುತ್ತಿದೆ ಎಂದು ಸಾಜಿದ್ ತಾರಾರ್ ಹೇಳಿದರು.

ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಉದ್ವಿಗ್ನ ಸ್ಥಿತಿ ಇದೆ, ರಾಜಕೀಯವಾಗಿಯೂ ಸ್ಥಿರತೆ ಇಲ್ಲ. ಹೀಗಾಗಿ, ನಮಗೆ ಅತ್ಯುತ್ತಮ ನಾಯಕ ಬೇಕು ಎಂದು ಹೇಳಿರುವ ಸಾಜಿದ್ ತಾರಾರ್, ಬೇರು ಮಟ್ಟದಲ್ಲಿ ದೇಶದ ಸಮಸ್ಯೆಗಳನ್ನು ಬಗೆಹರಿಸಬೇಕು, ಭಯೋತ್ಪಾದನೆ ನಿಗ್ರಹಿಸಬೇಕು ಹಾಗೂ ರಫ್ತು ಹೆಚ್ಚಿಸಬೇಕು ಎಂದು ಹೇಳಿದ್ದಾರೆ.


ಉದಯ ವಾಹಿನಿ

ದೇಶ/ವಿದೇಶ

ಗುರುವಾರ 16 ಮೇ 2024




## ಮಿನಿ ನ್ಯೂಸ್

### ಪಶ್ಚಿಮ ಅಫ್ಘಾನಿಸ್ತಾನದಲ್ಲಿ ಸೇನಾ ಹೆಲಿಕಾಪ್ಟರ್ ಪತನ

**ಇಸ್ಲಾಮಾಬಾದ್:** ಪಶ್ಚಿಮ ಅಫ್ಘಾನಿಸ್ತಾನದ ಘೋರ್ ಪ್ರಾಂತ್ಯದಲ್ಲಿ ಸೇನಾ ಹೆಲಿಕಾಪ್ಟರ್ ಪತನಗೊಂಡಿದೆ. ಈ ಘಟನೆಯಲ್ಲಿ ಒಬ್ಬ ಸಾವನ್ನಪ್ಪಿದ್ದಾನೆ ಎಂದು ತಾಲಿಬಾನ್ ರಕ್ಷಣಾ ಸಚಿವಾಲಯ ತಿಳಿಸಿದೆ. ತಾಂತ್ರಿಕ ಸಮಸ್ಯೆಯಿಂದ ಎಂಐ-17 ಅಪಘಾತ ಸಂಭವಿಸಿದೆ ಎಂದು ಹೇಳಿಕೆಯೊಂದು ತಿಳಿಸಿದೆ. ಘೋರ್ನ ಪ್ರಾಂತೀಯ ರಾಜಧಾನಿಯಾದ ಫಿರೋಜ್ ಕೊಹ್ ನಗರದ ಬಳಿ ಜನರನ್ನು ಹೊತ್ತೊಯ್ಯುತ್ತಿದ್ದ ವಾಹನವು ನದಿಗೆ ಬಿದ್ದ ನಂತರ ಹೆಲಿಕಾಪ್ಟರ್ ರಕ್ಷಣಾ ಕಾರ್ಯಾಚರಣೆಯಲ್ಲಿತ್ತು ಎಂದು ಸಚಿವಾಲಯವು ಎಕ್ಸ್ ನಲ್ಲಿ ಪೋಸ್ಟ್ ಮಾಡಿದೆ.ಈ ಅಪಘಾತದಲ್ಲಿ 12 ಪ್ರಯಾಣಿಕರು ಗಾಯಗೊಂಡಿದ್ದಾರೆ. ಸಿಬ್ಬಂದಿ ತುರ್ತು ಲ್ಯಾಂಡಿಂಗ್ ಮಾಡಲು ಪ್ರಯತ್ನಿಸಿದರು ಆದರೆ ಹೆಲಿಕಾಪ್ಟರ್ ಗೋಡೆಗೆ ಡಿಕ್ಕಿ ಹೊಡೆದು ಅಪ್ಪಳಿದೆ ಎನ್ನಲಾಗಿದೆ ಇದರಲ್ಲಿ ಎಷ್ಟು ಜನರು ವಿಮಾನದಲ್ಲಿದ್ದರು ಎಂಬುದು ಸ್ಪಷ್ಟವಾಗಿಲ್ಲ.

### ಇಂಡೋನೇಷ್ಯಾದಲ್ಲಿ ಭಾರಿ ಪ್ರವಾಹಕ್ಕೆ 58 ಮಂದಿ ಬಲಿ

**ಜಕಾರ್ತ:** ಇಂಡೋನೇಷ್ಯಾದ ಪಶ್ಚಿಮ ಸುಮಾತ್ರಾ ಪ್ರಾಂತ್ಯದಲ್ಲಿ ಹಠಾತ್ ಪ್ರವಾಹ, ಮಣ್ಣಿನ ಕುಸಿತದಿಂದ ಇನ್ನೂ ನಾಪತ್ತೆಯಾಗಿರುವ 35 ಜನರ ಹುಡುಕಾಟವು ಬುಧವಾರ ಮುಂದುವರೆದಿದ್ದು, ಘಟನೆಯಲ್ಲಿ ಮೃತಪಟ್ಟವರ ಸಂಖ್ಯೆ 58ಕ್ಕೆ ಏರಿಕೆಯಾಗಿದೆ. ಶನಿವಾರ ಸಂಜೆ ಭಾರೀ ಮಳೆಯು ಹಠಾತ್ ಪ್ರವಾಹಗಳು, ಭೂಕುಸಿತಗಳು ಮತ್ತು ಶೀತ ಲಾವಾ ಹರಿವನ್ನು ಪ್ರಚೋದಿಸಿತ್ತು. ಜ್ವಾಲಾಮುಖಿ ಬೂದಿ, ಕಲ್ಲಿನ ಅವಶೇಷಗಳು ಮತ್ತು ನೀರಿನ ಮಣ್ಣಿನಂತಹ ಮಿಶ್ರಣ ಪಶ್ಚಿಮ ಸುಮಾತ್ರಾ ಪ್ರಾಂತ್ಯದ ಮೂರು ಜಿಲ್ಲೆಗಳು ಮತ್ತು ಒಂದು ಪಟ್ಟಣದಲ್ಲಿ ಹರಿದ ಪರಿಣಾಮ ಈ ದುರ್ಘಟನೆ ಸಂಭವಿಸಿತ್ತು. ಇಂಡೋನೇಷಿಯನ್ ಪದ ಲಾಹಾರ್ ಎಂದು ಕರೆಯಲ್ಪಡುವ ಶೀತ ಲಾವಾ ಹರಿವು ಸುಮಾತ್ರದ ಅತ್ಯಂತ ಸಕ್ರಿಯ ಜ್ವಾಲಾಮುಖಿಗಳಲ್ಲಿ ಒಂದಾದ ಮರಾಪಿ ಪರ್ವತದಿಂದ ಬಂದಿದೆ. ಡಿಸೆಂಬರ್‌ನಲ್ಲಿ ಮರಾಪಿ ಸ್ಫೋಟಗೊಂಡಾಗ 20 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದರು. ಅಂದಿನಿಂದ ಸರಣಿ ಸ್ಫೋಟಗಳು ನಡೆಯುತ್ತಿವೆ.

ಸ್ಥಳೀಯ ರಕ್ಷಕರು, ಪೊಲೀಸರು ಮತ್ತು ಮಿಲಿಟರಿಯಿಂದ ಸಹಾಯ ಮಾಡಿದ ನಿವಾಸಿಗಳು ಮನೆಗಳು ಮತ್ತು ಮಸೀದಿಗಳನ್ನು ಮಣ್ಣಿನಿಂದ ಸ್ವಚ್ಛಗೊಳಿಸುತ್ತಿದ್ದರು. ಕೆಲವು ವಸಾಹತುಗಳಲ್ಲಿ, ದೊಡ್ಡ ಬಂಡೆಗಳು ಮತ್ತು ಮರಗಳನ್ನು ತೆಗೆದುಹಾಕಲು ಅಗೆಯುವ ಯಂತ್ರಗಳನ್ನು ನಿಯೋಜಿಸಲಾಗಿದೆ. ಇಂಡೋನೇಷ್ಯಾದಲ್ಲಿ ವ್ಯಾಪಕವಾಗಿ ಬಳಸಲಾಗುವ ಕ್ಲೌಡ್ ಸೀಡಿಂಗ್ ಶುಷ್ಕ ಪ್ರದೇಶಗಳಲ್ಲಿ ಮಳೆಯನ್ನು ಪ್ರಚೋದಿಸಲು ಉಪ್ಪು ಜ್ವಾಲೆಗಳನ್ನು ಮೋಡಗಳಾಗಿ ಹಾರಿಸುವುದನ್ನು ಒಳಗೊಂಡಿರುತ್ತದೆ.

### ನಕ್ಸಲೀಯರಿಂದ ಐಇಡಿ ಸ್ಫೋಟ ಇಬ್ಬರು ಪೊಲೀಸರು ಪಾರು

**ಬಿಜಾಪುರ:** ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ಬುಧವಾರ ನಕ್ಸಲೀಯರು ಸುಧಾರಿತ ಸ್ಫೋಟಕ ಸಾಧನವನ್ನು ಸ್ಫೋಟಿಸಿದಾಗ ಇಬ್ಬರು ಪೊಲೀಸ್ ಸಿಬ್ಬಂದಿ ಸ್ವಲ್ಪದರಲ್ಲೇ ಪಾರಾಗಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಫರ್ಸೆಗಢ ಪೊಲೀಸ್ ಠಾಣೆಯ ಎಸ್‌ಎಚ್‌ಒ ಆಕಾಶ್ ಮಸಿಹ್, ಕಾನ್ಸ್‌ಟೇಬಲ್ ಸಂಜಯ್ ಸರ್ಕಾರಿ ಕೆಲಸದ ನಿಮಿತ್ತ ಬಿಜಾಪುರ ಪಟ್ಟಣಕ್ಕೆ ಕಾರಿನಲ್ಲಿ ತೆರಳುತ್ತಿದ್ದಾಗ ಕುಟ್ರು-ಫರ್ಸೆಗಢ ರಸ್ತೆಯ ಸೋಮನಪಲ್ಲಿ ಗ್ರಾಮದ ಬಳಿ ಈ ಘಟನೆ ನಡೆದಿದೆ ಎಂದು ಅವರು ಹೇಳಿದರು. ವಾಹನವು ಸೋಮನಪಲ್ಲಿ ಬಳಿ ಇದ್ದಾಗ, ನಕ್ಸಲೀಯರು ಬಂಬ್ ಸ್ಫೋಟಗೊಂಡಿದೆ, ಕಾರಿನ ಬಾನೆಟ್ಗೆ ಹಾನಿಯಾಯಿತು. ಸ್ಫೋಟದಲ್ಲಿ ಪ್ರಯಾಣಿಕರಿಗೆ ಯಾವುದೇ ಹಾನಿಯಾಗಿಲ್ಲ ಎಂದು ಅವರು ಹೇಳಿದರು. ಛತ್ತೀಸ್‌ಗಢ ಸಶಸ್ತ್ರ ಪಡೆ ಮತ್ತು ಫರ್ಸೆಗಢ ಪೊಲೀಸರ ಜಂಟಿ ತಂಡವು ಪ್ರದೇಶದಲ್ಲಿ ಪ್ರಾಬಲ್ಯ ಕಾರ್ಯಾಚರಣೆ ನಡೆಸುತ್ತಿದೆ, ಭದ್ರತಾ ಸಿಬ್ಬಂದಿ ಸ್ಥಳಕ್ಕೆ ಧಾವಿಸಿದ್ದು, ಪ್ರದೇಶದಲ್ಲಿ ಕೂಂಬಿಂಗ್ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ ಎಂದು ಅವರು ಹೇಳಿದರು.

### ಗಣಿಯೊಳಗೆ ಸಿಲುಕಿದ್ದ 14 ಜನರ ರಕ್ಷಣೆ

**ಜೈಪುರ:** ಕೋಲಿಹಾನ್ನ ಹಿಂದೂಸ್ಥಾನ್ ಕಾಪರ್ ಲಿಮಿಟೆಡ್ ಗಣಿಯಲ್ಲಿ ಲಿಫ್ಟ್ ಹಗ್ಗ ಮುರಿದು ಗಣಿಯೊಳಗೆ ಸಿಲುಕಿಗೊಂಡಿದ್ದ 14 ಜನರನ್ನು ರಕ್ಷಿಸಲಾಗಿದೆ. ವಿಜಿಲೆನ್ಸ್ ತಂಡದ ಕನಿಷ್ಠ 14 ಜನರು ಗಣಿಯಲ್ಲಿ ಸಿಲುಕಿಕೊಂಡಿದ್ದರು. ಪಿಎಸ್ಯು ಹಿಂದೂಸ್ತಾನ್ ಕಾಪರ್ ಲಿಮಿಟೆಡ್‌ನ 14 ಅಧಿಕಾರಿಗಳು ವಿಜಿ ಲೆನ್ಸ್ ತಂಡದ ಸದಸ್ಯರಾಗಿದ್ದಾರೆ. ರಕ್ಷಣಾ ಕಾರ್ಯಾಚರಣೆ ನಡೆಸಿ ರಕ್ಷಣೆ ಮಾಡಿದ್ದಾರೆ. ಗಣಿ ಲಿಫ್ಟ್ ಕುಸಿತದಿಂದ ಯಾವುದೇ ಸಾವು ನೋವು ಸಂಭವಿಸಿಲ್ಲ, ಆದರೆ ಕೆಲವರ ಕೈ, ಇನ್ನು ಕೆಲವರ ಕಾಲು ಮುರಿದಿದೆ.

ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಎಲ್ಲರೂ ಸುರಕ್ಷಿತವಾಗಿ ಹೊರಬಂದಿದ್ದಾರೆ ಎಂದು ಜುಂಜುನು ಜಿಲ್ಲಾ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಪ್ರವೀಣ್ ಶರ್ಮಾ ಅವರು ಸುದ್ದಿಸಂಸ್ಥೆ ಎಎನ್‌ಐಗೆ ಮಾಹಿತಿ ನೀಡಿದ್ದಾರೆ. ಕಂಪನಿಯ ಹಿರಿಯ ಅಧಿಕಾರಿಗಳು ಮತ್ತು ಕಾರ್ಮಿಕರೊಂದಿಗೆ ವಿಜಿಲೆನ್ಸ್ ತಂಡವು ಪರಿಶೀಲನೆಗಾಗಿ ಗಣಿ ಒಳಗೆ ಹೋದ ಸಂದರ್ಭ ಘಟನೆ ನಡೆದಿದೆ. ಲಿಫ್ಟ್ ಮೂಲಕ ಗಣಿಯಿಂದ ಹೊರಬರುತ್ತಿರುವ ವೇಳೆ ಲಿಫ್ಟ್‌ನ ಶಾಫ್ಟ್ (ಹಗ್ಗ) ಮುರಿದು ಅಧಿಕಾರಿಗಳು, ಸಿಬ್ಬಂದಿ ಸಿಲುಕಿಕೊಂಡಿದ್ದರು. ಘಟನೆ ತಿಳಿಯುತ್ತಿದ್ದಂತೆ ತಡರಾತ್ರಿಯಿಂದಲೇ ರಕ್ಷಣಾ ಕಾರ್ಯಾಚರಣೆ ಪ್ರಾರಂಭಿಸಲಾಗಿತ್ತು. 12 ಗಂಟೆಗಳ ಸುದೀರ್ಘ ಕಾರ್ಯಾಚರಣೆ ನಂತರ ಎಲ್ಲರನ್ನೂ ರಕ್ಷಿಸಲಾಗಿದೆ. ಗಾಯಗೊಂಡವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ

### ಅಮರಾವತಿ : ಬಸ್‌ಗೆ ಬೆಂಕಿ ತಗುಲಿ ಆರು ಮಂದಿ ಸಾವು

**ಅಮರಾವತಿ:** ಮಧ್ಯರಾತ್ರಿ ಪಲ್ನಾ ಅಡು ಜಿಲ್ಲೆಯ ಚಿಲಕಲೂರಿಪೇಟೆ ಬಳಿ ಟಿಪ್ಪರ್‌ಲಾರಿ ಡಿಕ್ಕಿ ಹೊಡೆದ ರಭಸಕ್ಕೆ ಖಾಸಗಿ ಬಸ್‌ಗೆ ಬೆಂಕಿ ಹೊತ್ತಿಕೊಂಡು ಆರು ಮಂದಿ ಸಜೀವ ದಹನಗೊಂಡಿದ್ದಾರೆ. ಮಧ್ಯ ರಾತ್ರಿಯಲ್ಲಿ ಸುಮಾರು 1 ಗಂಟೆ ಸಂದರ್ಭದಲ್ಲಿ ಈ ದುರ್ಘಟನೆ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನಾವು ಸ್ಥಳಕ್ಕೆ ತಲುಪಿದಾಗ ಬಸ್‌ಗೆ ಬೆಂಕಿ ಹೊತ್ತಿಕೊಂಡಿತ್ತು ಆರು ಜನರು ಸಾವನ್ನಪ್ಪಿದ್ದಾರೆ ಎಂದು ಖಚಿತಗೊಂಡಿದೆ ಎಂದು ಸುದ್ದಿಗಾರರಿಗೆ ಮಾಹಿತಿ ನೀಡಿದಾರೆ. ಎರಡೂ ವಾಹನದ ಚಾಲಕರು ಮೃತಪಟ್ಟಿದ್ದರೆ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಮೂವರು ಹೊರಗೆ ಬರಲಾರದೆ ಕೊನೆಯುಸಿರೆಳೆದಿದ್ದಾರೆ. ಸುಮಾರು 19 ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬಸ್‌ನಲ್ಲಿ ಸುಮಾರು 40 ಪ್ರಯಾಣಿಕರು ಇದ್ದರು ಬಸ್‌ನಲ್ಲಿ ಸುಮಾರು 40 ಪ್ರಯಾಣಿಕರು ಇದ್ದರು. ಇವರು ಸೋಮವಾರ ಬಾಪಟ್ಲಾ ಜಿಲ್ಲೆಯಲ್ಲಿ ನಡೆದ ಮತದಾನದಲ್ಲಿ ಪಾಲ್ಗೊಂಡು ನಂತರ ನಿನ್ನೆ ರಾತ್ರಿ ಹೈದರಾಬಾದ್‌ಗೆ ಹಿಂತಿರುಗುತ್ತಿದ್ದರು ಎಂದು ತಿಳಿದುಬಂದಿದೆ.



# ರಾಜಸ್ಥಾನ್‌ಗೆ ಸತತ 4ನೇ ಸೋಲು, ಪಂಜಾಬ್‌ಗೆ ಗೆಲುವು

## ಆಟಕ್ಕುಂಟು ಲೆಕ್ಕಕ್ಕಿಲ್ಲದ ಪಂದ್ಯದಲ್ಲಿ ಗೆದ್ದು ಬೀಗಿದ ಪಂಜಾಬ್ - ಕಿಂಗ್ಸ್‌ಗೆ 5 ವಿಕೆಟ್‌ಗಳ ಜಯ

ಸಣ್ಣ ಮೊತ್ತದ ಐಪಿಎಲ್ ಮೇಲಾಟದಲ್ಲಿ ಪಂಜಾಬ್ ಕಿಂಗ್ಸ್ ತಂಡ ರಾಜಸ್ಥಾನ್ ರಾಯಲ್ಸ್ ವಿರುದ್ಧ 5 ವಿಕೆಟ್ ಅಂತರದ ಗೆಲುವು ಸಾಧಿಸಿದೆ. ಲಕ್ನೋ ಸೋಲಿನಿಂದ ಪ್ಲೇ ಆಫ್ ಪ್ರವೇಶಿಸಿದ ಕಾರಣ ಸಂಜು ಪಡೆಗೆ ಈ ಸೋಲು ಯಾವುದೇ ಪರಿಣಾಮ ಬೀರಲಿಲ್ಲ. ಒಂದೊಮ್ಮೆ ಡೆಲ್ಲಿ ವಿರುದ್ಧ ಲಕ್ನೋ ಮಂಗಳವಾರದ ಪಂದ್ಯದಲ್ಲಿ ಗೆಲುವು ಸಾಧಿಸುತ್ತಿದ್ದರೆ, ಈ ಸೋಲು ರಾಜಸ್ಥಾನ್‌ಗೆ ಬಿಸಿ ತುಪ್ಪವಾಗಿ ಪರಿಣಮಿಸುತ್ತಿತ್ತು. ರಾಜಸ್ಥಾನ್ ತಂಡಕ್ಕೆ 2ನೇ ತವರಾದ ಗುವಾಹಟಿಯ ಬರ್ಸಾಪರಾ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಐಪಿಎಲ್‌ನ 65ನೇ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ರಾಜಸ್ಥಾನ್ ರಾಯಲ್ಸ್ ಬ್ಯಾಟಿಂಗ್ ವೈಫಲ್ಯ ಕಂಡು ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್

**ಇದಕ್ಕೂ ಮುನ್ನ ಬ್ಯಾಟಿಂಗ್ ನಡೆಸಿದ ರಾಜಸ್ಥಾನ್ ಪರ ಯಶಸ್ವಿ ಜೈಸ್ವಾಲ್(4) ಜಾಸ್ ಬಟ್ಲರ್ ಅನುಪಸ್ಥಿತಿಯಲ್ಲಿ ಆಡಲಿಳಿದ ಕೊಹ್ಲರ್-ಕಾಡ್ಮೋರ್(18), ನಾಯಕ ಸಂಜು ಸ್ಯಾಮ್ಸನ್(18), ಧ್ರುವ್ ಜುರೇಲ್(0), ರೋಮನ್ ಪೋವೆಲ್ (4) ಬ್ಯಾಟಿಂಗ್ ವೈಫಲ್ಯ ಕಂಡು ಪೆವಿಲಿಯನ್ ಪರೇಡ್ ನಡೆಸಿದರು. ರಿಯಾನ್ ಪರಾಗ್ (48) ಮತ್ತು ಆರ್.ಅಶ್ವಿನ್(28) ಅವರ ಅಸಾಮಾನ್ಯ ಬ್ಯಾಟಿಂಗ್‌ನಿಂದಾಗಿ ತಂಡ 100 ಗಡಿ ದಾಟಿ ಸ್ಪರ್ಧಾತ್ಮಕ ಮೊತ್ತ ಗಳಿಸುವಲ್ಲಿ ಯಶಸ್ಸು ಕಂಡಿತು. ಪಂಜಾಬ್ ಪರ 2 ವಿಕೆಟ್ ಪಡೆದ ಹರ್ಷಲ್ ಪಟೇಲ್ ಪರ್ಪಲ್ ಕ್ಯಾಪ್ ರೇಸ್‌ನಲ್ಲಿ ಅಗ್ರಸ್ಥಾನ ಪಡೆದರು. ಉಳಿದಂತೆ ಕರನ್, ಮತ್ತು ರಾಹುಲ್ ಚಹರ್ ತಲಾ 2 ವಿಕೆಟ್ ಉರುಳಿಸಿದರು.**

**ರಾಜಸ್ಥಾನ್‌ಗೆ ಆಸರೆಯಾದ ಪರಾಗ್-ಅಶ್ವಿನ್**

ಕಳೆದುಕೊಂಡು ಕೇವಲ 144 ರನ್ ಗಳಿಸಿತು. ಪಂಜಾಬ್ ಕೂಡ ಒಂದು ಹಂತದಲ್ಲಿ ಆಘಾತ ಎದುರಿಸಿ ಬಳಿಕ ಚೇತರಿಕೆ ಹಾದಿ ಹಿಡಿದು 18.5 ಓವರ್‌ನಲ್ಲಿ 5 ವಿಕೆಟ್ ನಷ್ಟಕ್ಕೆ 145 ರನ್ ಬಾರಿಸಿ ಗೆಲುವಿನ ನಗೆ ಬೀರಿತು. ಪ್ಲೇ ಆಫ್ ರೇಸ್‌ನಿಂದ ಹೊರಬಿದ್ದಿರುವ




**ಸಂಕಷ್ಟಕ್ಕೆ ಸಿಲುಕಿದ ತಂಡಕ್ಕೆ ನೆರವಾದದ್ದು ನಾಯಕ ಸ್ಯಾಮ್ ಕರನ್ ಮತ್ತು ಜಿತೇಶ್ ಶರ್ಮ. ಉಭಯ ಆಟಗಾರರು ತಾಳ್ಮೆಯುತ ಬ್ಯಾಟಿಂಗ್ ನಡೆಸಿ ಉತ್ತಮ ಜತೆಯಾಟವೊಂದನ್ನು ಸಂಘಟಿಸಿದರು. 5ನೇ ವಿಕೆಟ್‌ಗೆ 63 ರನ್ ಒಟ್ಟುಗೂಡಿಸಿದರು. ಈ ಉಪಯುಕ್ತ ಜತೆಯಾಟದ ಸಹಾಯದಿಂದ ಪಂಜಾಬ್ ಗೆಲುವುವಿನ ದಡ ಸೇರಿತು. ಜಿತೇಶ್ ಶರ್ಮ 20 ಎಸೆತಗಳಿಂದ 22 ರನ್ ಬಾರಿಸಿ ಪರಾಗ್‌ಗೆ ವಿಕೆಟ್ ಒಪ್ಪಿಸಿದರು. ಕರನ್ ಅಜೇಯರಾಗಿ ಉಳಿದು ಅರ್ಧಶತಕ ಬಾರಿಸಿದರು. ಇದು ಅವರ ಈ ಆವೃತ್ತಿಯ 2ನೇ ಅರ್ಧಶತಕವಾಗಿದೆ. ಒಟ್ಟು 41 ಎಸೆತ ಎದುರಿಸಿದ ಅವರು 63★ ರನ್ ಬಾರಿಸಿದರು. ಈ ವೇಳೆ ಇವರ ಬ್ಯಾಟ್‌ನಿಂದ 5 ಬೌಂಡರಿ ಮತ್ತು 3 ಸಿಕ್ಸರ್ ಸಿಡಿಯಿತು.**

**ಅರ್ಧಶತಕ ಬಾರಿಸಿದ ಕರನ್**

ಕಾರಣ ಪಂಜಾಬ್‌ಗೆ ಈ ಗೆಲುವು ಕೇವಲ ಅಂಕಪಟ್ಟಿಯಲ್ಲಿ ಕೊನೆಯ ಸ್ಥಾನದಿಂದ ಮೇಲೇರುವಲ್ಲಿ ಮಾತ್ರ ಸಹಾಯ ಮಾಡಿತು. ಹಾಲಿ ಚಾಂಪಿಯನ್ ಕೊನೆಯ ಸ್ಥಾನಕ್ಕೆ ಕುಸಿಯಿತು. ಸದ್ಯ ಪಂಜಾಬ್ 9ನೇ ಸ್ಥಾನಿಯಾಗಿ ಕಾಣಿಸಿಕೊಂಡಿದೆ. ತನ್ನ ಅಂತಿಮ ಲೀಗ್ ಪಂದ್ಯವನ್ನು ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಆಡಲಿದೆ. ಈ ಪಂದ್ಯ ಮೇ 19ರಂದು ನಡೆಯಲಿದೆ. ಚೇಸಿಂಗ್ ವೇಳೆ ಪಂಜಾಬ್ ಕೂಡ ಅಗ್ರ ಕ್ರಮಾಂಕದ ಆಟಗಾರರನ್ನು ಅಗ್ಗಕ್ಕೆ ಕಳೆದುಕೊಂಡು ರಾಜಸ್ಥಾನ್ ತಂಡದ ಹಾಗೆ ಆರಂಭಿಕ ಆಘಾತಕ್ಕೆ ಸಿಲುಕಿತು. ಪ್ರಭಾಸಿಮ್ರಾನ್ ಸಿಂಗ್(6) ಮತ್ತು ಜಾನಿ ಬೇರ್‌ಸ್ಟೋ(14) ರನ್ ಗಳಿಸಿ ಪೆವಿಲಿಯನ್ ಸೇರಿದರು. ಈ ವಿಕೆಟ್ ಪತನದ ಬಳಿಕ ಆಡಲಿಳಿದ, ಸ್ಫೋಟಕ ಬ್ಯಾಟಿಂಗ್ ನಡೆಸಿ ಸಂಚಲನ ಸೃಷ್ಟಿಸಿದ್ದ ಶಶಾಂಕ್ ಸಿಂಗ್ ಶೂನ್ಯಕ್ಕೆ ವಿಕೆಟ್ ಕಳೆದುಕೊಂಡರು. 36 ರನ್‌ಗೆ 3 ವಿಕೆಟ್ ಕಳೆದುಕೊಂಡ ಪಂಜಾಬ್ ಉತ್ತಮವಾಗಿ ಆಡುತ್ತಿದ್ದ ರೀಲಿ ರೋಸೊ(22) ವಿಕೆಟ್ ಕೂಡ ಕಳೆದುಕೊಂಡಿತು. ತಂಡದ ಮೊತ್ತ 50 ಗಡಿ ದಾಟುವ ಮುನ್ನ 4 ವಿಕೆಟ್ ಕಳೆದುಕೊಂಡು ಮತ್ತಷ್ಟು ತೀವ್ರ ಸಂಕಟಕ್ಕೆ ಒಳಗಾಯಿತು.

# ನಾನು ಆರ್‌ಸಿಬಿ ವಿರುದ್ಧ ಆಡಿದ್ದರೆ...

ನಿಯಮ ಉಲ್ಲಂಘನೆಯ ಕಾರಣದಿಂದ ರಿಷಭ್ ಪಂತ್ ಕಳೆದ ಆರ್‌ಸಿಬಿ ವಿರುದ್ಧದ ಪಂದ್ಯದಿಂದ ಹೊರಗಿದ್ದರು. ಈ ಬಗ್ಗೆ ಲಕ್ನೋ ವಿರುದ್ಧದ ಪಂದ್ಯ ಮುಗಿದ ಬಳಿಕ ಮಾತನಾಡಿರುವ ಅವರು ಅಚ್ಚರಿಯ ಹೇಳಿಕೆ ನೀಡಿದ್ದಾರೆ. ಪಂತ್ ಪೋಸ್ಟ್ ಮ್ಯಾಚ್ ಪ್ರೆಸೆಂಟೇಷನ್‌ನಲ್ಲಿ ಏನು ಹೇಳಿದ್ರು, ಇಲ್ಲಿದೆ ಮಾಹಿತಿ.

ಐಪಿಎಲ್ 2024 ರಲ್ಲಿ ಮಂಗಳವಾರ ಡೆಲ್ಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ಲಕ್ನೋ ಸೂಪರ್ ಜೇಂಟ್ಸ್ ವಿರುದ್ಧದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಭರ್ಜರಿ ಜಯ ಸಾಧಿಸಿದೆ. ಅಭಿಷೇಕ್ ಪೊರೆಲ್ (58) ಮತ್ತು ಟ್ರಿಸ್ಟಾನ್ ಸ್ಟಬ್ಸ್ (ಔಟಾಗದೆ 57) ಅರ್ಧಶತಕಗಳ ನೆರವಿನಿಂದ ಎಲ್‌ಎಸ್‌ಜಿಯನ್ನು 19 ರನ್‌ಗಳಿಂದ ಸೋಲಿಸಿತು. ಈ ಜಯದ ಮೂಲಕ ಪಂತ್ ಪಡೆಯ ಪ್ಲೇಆಫ್ ತಲುಪುವ ಮಸುಕಾದ ಭರವಸೆಗಳು ಹಾಗೇ ಉಳಿದಿವೆ. ಸದ್ಯ ಡೆಲ್ಲಿ 14 ಪಂದ್ಯಗಳಲ್ಲಿ ಏಳು ಗೆಲುವು ಕಂಡಿದೆ. ನಿಯಮ ಉಲ್ಲಂಘನೆಯ ಕಾರಣದಿಂದ ರಿಷಭ್ ಪಂತ್ ಕಳೆದ ಆರ್‌ಸಿಬಿ ವಿರುದ್ಧದ ಪಂದ್ಯದಿಂದ ಹೊರಗಿದ್ದರು. ಈ ಬಗ್ಗೆ ಮಾತನಾಡಿರುವ ಅವರು ಅಚ್ಚರಿಯ ಹೇಳಿಕೆ ನೀಡಿದ್ದಾರೆ.

ಲಕ್ನೋ ವಿರುದ್ಧ ಗೆಲುವು ಸಾಧಿಸಿದ ಬಳಿಕ ಪೋಸ್ಟ್ ಮ್ಯಾಚ್ ಪ್ರೆಸೆಂಟೇಷನ್‌ನಲ್ಲಿ ಮಾತನಾಡಿದ ರಿಷಭ್ ಪಂತ್, ಕಳೆದ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ ನನಗೆ ಆಡಲು ಸಾಧ್ಯವಾಗಿದ್ದರೆ ನಾವು ಗೆಲ್ಲುವ ಸಾಧ್ಯತೆ ಹೆಚ್ಚಿರುತ್ತಿತ್ತು ಎಂದು ಹೇಳಿದ್ದಾರೆ. ನಾನು ಆಡಿದ್ದರೆ ನಾವು ಖಂಡಿತವಾಗಿಯೂ ಪಂದ್ಯವನ್ನು ಗೆಲ್ಲುತ್ತಿದ್ದೆವು ಎಂದು ನಾನು ಹೇಳುತ್ತಿಲ್ಲ. ಆದರೆ, ಕೊನೆಯ ಪಂದ್ಯದಲ್ಲಿ ನನಗೆ ಆಡಲು ಅವಕಾಶವಿದ್ದರೆ ನಮಗೆ ಪ್ಲೇ ಆಫ್‌ಗೆ ಅರ್ಹತೆ ಪಡೆಯುವ ಉತ್ತಮ ಅವಕಾಶವಿತ್ತು ಎಂದು ಪಂತ್ ಹೇಳಿದ್ದಾರೆ.

**ರಿಷಭ್ ಪಂತ್ ಶಾಕಿಂಗ್ ಸ್ಟೇಟ್ಮೆಂಟ್**

ಲಕ್ನೋ ವಿರುದ್ಧದ ಪಂದ್ಯದ ಕುರಿತು ಮಾತನಾಡಿದ ಪಂತ್, ''ನಿಕೋಲಸ್ ಪೂರನ್ ನಮಗೆ ತುಂಬಾ ತೊಂದರೆ ಕೊಟ್ಟರು. ನಾವು ಕೆಲವು ಯೋಜನೆಗಳನ್ನು ಹೊಂದಿದ್ದೇವೆ. ಉತ್ತಮ ಸವಾಲು ನೀಡಿದ್ದೆವು. ನಮ್ಮ ಬೌಲಿಂಗ್ ಕೂಡ ಚೆನ್ನಾಗಿ ಸಾಗುತ್ತಿತ್ತು. ಈ ಋತುವಿನಲ್ಲಿ ನಾವು ಬಹಳಷ್ಟು ನಿರೀಕ್ಷೆಗಳೊಂದಿಗೆ ಕಣಕ್ಕಿಳಿದೆವು. ಆದರೆ, ಕೆಲವು ಆಟಗಾರರು ಗಾಯಗೊಂಡಿದ್ದಾರೆ. ಕೊನೆಯ ಪಂದ್ಯದಲ್ಲಿ ಸೋತ ನಂತರವೂ ನಾವು ಪ್ಲೇ ಆಫ್ ರೇಸ್‌ನಲ್ಲಿಯೇ ಇದ್ದೇವೆ. ಈ ಜಯದ ಮೂಲಕ ಕಮ್‌ಬ್ಯಾಕ್ ಮಾಡಿರುವುದು ಉತ್ತಮವಾಗಿದೆ. ಭಾರತದೆಲ್ಲೆಡೆಯಿಂದ ಬಂದ ಬೆಂಬಲ ನೋಡಿ ಖುಷಿಯಾಯಿತು. ನನಗೆ ಒಂದೂವರೆ ವರ್ಷದ ನಂತರ ಹಿಂತಿರುಗಲು ಬಹಳ ಸಮಯ ಕಾಯಬೇಕಾಯಿತು. ನಾನು ಸದಾ ಮೈದಾನದಲ್ಲಿ ಇರಲು ಬಯಸುತ್ತೇನೆ,'' ಎಂಬುದು ರಿಷಭ್ ಪಂತ್ ಮಾತು.

ಲಕ್ನೋ ವಿರುದ್ಧದ ಜಯದ ಮೂಲಕ ಡೆಲ್ಲಿ ಅಂಕಪಟ್ಟಿಯಲ್ಲಿ ಐದನೇ ಸ್ಥಾನದಲ್ಲಿದೆ ಮತ್ತು -0.377 ರ ನಿವ್ವಳ ರನ್ ರೇಟ್ ಹೊಂದಿದೆ. ಅಂಕಪಟ್ಟಿಯಲ್ಲಿ ಮೂರು ಮತ್ತು ನಾಲ್ಕನೇ ಸ್ಥಾನದಲ್ಲಿರುವ ಚೆನ್ನೈ ಸೂಪರ್ ಕಿಂಗ್ಸ್ (0.528) ಮತ್ತು ಸನ್ ರೈಸರ್ಸ್ ಹೈದರಾಬಾದ್ (0.406) ಉತ್ತಮ ಸ್ಥಿತಿಯಲ್ಲಿವೆ.




# ಎಲ್‌ಎಸ್‌ಜಿ ಮಾಲೀಕನಿಂದ ಮತ್ತೊಂದು ಅವಾಂತರ

ಐಪಿಎಲ್ 2024ರಲ್ಲಿ ಮಂಗಳವಾರ ರಾತ್ರಿ ನಡೆದ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 19 ರನ್‌ಗಳಿಂದ ಸೋಲು ಕಾಣುವ ಮೂಲಕ ಲಕ್ನೋ ಸೂಪರ್ ಜೇಂಟ್ಸ್ ತಂಡ ತನ್ನ ಪ್ಲೇಆಫ್ ಆಸೆಯನ್ನು ಬಹುತೇಕ ಕಳೆದುಕೊಂಡಿದೆ. ಕಳೆದ ಎರಡು ಸೀಸನ್‌ಗಳಲ್ಲಿ ಸತತವಾಗಿ ಪ್ಲೇಆಫ್ ಆಡಿದ ಲಕ್ನೋ ತಂಡಕ್ಕೆ ಇದು 13 ಪಂದ್ಯಗಳಲ್ಲಿ ಏಳನೇ ಸೋಲು. ಸ್ವತಃ ನಾಯಕ ಕೆಎಲ್ ರಾಹುಲ್ ಸೇರಿದಂತೆ ತಂಡದ ಹೆಚ್ಚಿನ ಆಟಗಾರರು ಕಳಪೆ ಫಾರ್ಮ್‌ನಿಂದ ಕಂಗೆಟ್ಟಿದ್ದಾರೆ ಮತ್ತು ಮೂರು ಬ್ಯಾಕ್-ಟು-ಬ್ಯಾಕ್ ಪಂದ್ಯವನ್ನು ಕಳೆದುಕೊಂಡರು. ಇದರ ನಡುವೆ ಎಲ್‌ಎಸ್‌ಜಿ ತಂಡದಲ್ಲಿ ವಿವಾದ ಕೂಡ ಹುಟ್ಟುಕೊಂಡಿದೆ. ಹಿಂದಿನ ಪಂದ್ಯದಲ್ಲಿ ನಾಯಕ ಕೆಎಲ್ ರಾಹುಲ್ ಮತ್ತು ತಂಡದ ಮಾಲೀಕ ಸಂಜೀವ್ ಗೋಯೆಂಕಾ ಅವರ ವಿಡಿಯೋ ಭರ್ಜರಿ ವೈರಲ್ ಆಗಿತ್ತು. ಇದೀಗ ಮತ್ತೊಮ್ಮೆ ಇವರಿಬ್ಬರ ವಿಡಿಯೋ ಹರಿದಾಡುತ್ತಿದೆ.

ಲಕ್ನೋ ತಂಡವು ಉತ್ತಮ ಆರಂಭವನ್ನು ಪಡೆಯುವಲ್ಲಿ




ಕೆಎಲ್ ರಾಹುಲ್ ಮೇಲೆ ಹೆಚ್ಚು ಅವಲಂಬಿತವಾಗಿದೆ. ಆದಾಗ್ಯೂ, ರಾಹುಲ್ ಡೆಲ್ಲಿ ವಿರುದ್ಧ ಕೂಡ ದೊಡ್ಡ ರನ್ ಗಳಿಸಲು ವಿಫಲರಾದರು. ನಿರ್ಣಾಯಕ ಪಂದ್ಯದಲ್ಲಿ ಕೇವಲ ಐದು ರನ್‌ಗಳಿಗೆ ಔಟಾದರು. ರಾಹುಲ್ ಔಟಾದ ಸಂದರ್ಭ ಸಂಜೀವ್ ಗೋಯೆಂಕಾ ಕೊಟ್ಟ ರಿಯಾಕ್ಷನ್ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ. ಗೋಯೆಂಕಾ ಅವರು ಕೆಎಲ್ ರಾಹುಲ್ ವಿರುದ್ಧ ವಾಗ್ದಾಳಿ ನಡೆಸಿದ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ನಂತರ ಗೋಯೆಂಕಾ ವಿರುದ್ಧ ಟೀಕೆಗೆ ಗುರಿಯಾಗಿದ್ದರು. ಇದೀಗ ರಾಹುಲ್ ಔಟಾದಾಗ ನಗುತ್ತಿರುವುದು ಕಂಡುಬಂದಿದೆ.

**ರಾಹುಲ್ ಔಟಾದಾಗ ಗೋಯೆಂಕಾ ಏನು ಮಾಡಿದ್ರು**

ಆದರೆ, ಸೋಲಿನ ನಂತರ ಸಂಜೀವ್ ಗೋಯೆಂಕಾ ಮತ್ತೊಮ್ಮೆ ಮೈದಾನಕ್ಕೆ ಬಂದರು. ಅಲ್ಲದೆ ನಾಯಕ ಕೆಎಲ್ ರಾಹುಲ್ ಜೊತೆ ಮಾತನಾಡಿದ್ದು, ಈ ವೇಳೆ ಅವರು ಶಾಂತ ರೂಪದಲ್ಲಿದ್ದರು. ಇದನ್ನು ಕಂಡ ನೆಟ್ಟಿಗರು ಬಹುಶಃ ಸಂಜೀವ್ ಗೋಯೆಂಕಾ ಅವನು ತನ್ನ ಕೋಪವನ್ನು ಹಿಡಿದಿಟ್ಟುಕೊಂಡಿದ್ದರು ಎಂದು ಹೇಳುತ್ತಿದ್ದಾರೆ. ಅಲ್ಲದೆ ರಾಹುಲ್ ಅವರು ಶಾಯ್ ಹೋಪ್ ಅವರ ಅದ್ಭುತ ಕ್ಯಾಚ್ ಹಿಡಿದ ಸಂದರ್ಭ ಲಕ್ನೋ ಮಾಲೀಕ ಎದ್ದು ನಿಂತು ಚಪ್ಪಾಳೆ ತಟ್ಟಿದರು.

**ಹೈದರಾಬಾದ್ ವಿರುದ್ಧದ ಪಂದ್ಯದಲ್ಲಿ ಏನಾಗಿತ್ತು:** ಹಿಂದಿನ ಪಂದ್ಯದಲ್ಲಿ ಲಕ್ನೋ ಸೂಪರ್ ಜೇಂಟ್ಸ್ ತಂಡವು ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ 10 ವಿಕೆಟ್‌ಗಳಿಂದ ಸೋಲನ್ನು ಎದುರಿಸಬೇಕಾಯಿತು. ಈ ಪಂದ್ಯದ ನಂತರ ತಂಡದ ಮಾಲೀಕ ಗೋಯೆಂಕಾ ಅವರು ನಾಯಕ ರಾಹುಲ್‌ಗೆ ಕೈಬೆರಳು ತೋರಿಸಿ ಬೈಯುತ್ತಿರುವ ದೃಶ್ಯ ಕ್ಯಾಮೆರಾದಲ್ಲಿ ಕಂಡು ಬಂದಿತ್ತು. ಈ ಘಟನೆಯನ್ನು ಎಲ್ಲಾರೂ ಖಂಡಿಸಿದ್ದರು. ರಾಹುಲ್ ವಿರುದ್ಧ ಗೋಯೆಂಕಾ ಕೋಪಗೊಂಡ ವಿಡಿಯೋ ಎಲ್ಲೆಡೆ ವೈರಲ್ ಆಗಿತ್ತು. ರಾಹುಲ್ ಎಲ್‌ಎಸ್‌ಜಿ ತಂಡ ತೊರೆಯಲಿದ್ದಾರೆ ಎಂದು ಕೂಡ ಹೇಳಲಾಗಿತ್ತು. ಈ ಘಟನೆ ಬಳಿಕ ಡೆಲ್ಲಿ ವಿರುದ್ಧದ ಪಂದ್ಯಕ್ಕೆ ಒಂದು ದಿನ ಇರುವಾಗ ಇಬ್ಬರೂ ದೆಹಲಿಯ ಗೋಯೆಂಕಾ ಅವರ ಮನೆಯಲ್ಲಿ ಭೇಟಿಯಾಗಿ ಒಬ್ಬರನ್ನೊಬ್ಬರು ತಬ್ಬಿಕೊಂಡು ಎಲ್ಲಾ ವಿವಾದಗಳಿಗೆ ಅಂತ್ಯ ಹಾಡಿದ್ದರು.

# ಸ್ವಪ್ನ ಮಂಟಪ ಚಿತ್ರೀಕರಣ ಮುಕ್ತಾಯ

'ಸ್ವಪ್ನ ಮಂಟಪ' ಚಿತ್ರವು ಈಗಾಗಲೇ ಚಿತ್ರೀಕರಣ ಮತ್ತು ಡಬ್ಬಿಂಗ್ ಕೆಲಸಗಳನ್ನು ಮುಗಿಸಿದೆ. ಕನಕಪುರ ರಸ್ತೆಯ ಒಂದು ಹಳ್ಳಿಯಲ್ಲಿ ಚಿತ್ರೀಕರಣವನ್ನು ಮಾಡಲಾಗಿದೆ. ಹೊಸಮನೆ ಮೂರ್ತಿಯವರು ಈ ಸೆಟ್ ನಿರ್ಮಾಣ ಮಾಡಿದ್ದಾರೆ.ಬರಗೂರು ರಾಮಚಂದ್ರಪ್ಪನವರೇ ಚಿತ್ರಕತೆ, ಸಂಭಾಷಣೆ, ಗೀತರಚನೆ ಮಾಡಿ ನಿರ್ದೇಶನ ಮಾಡಿದ್ದಾರೆ.

'ಸ್ವಪ್ನ ಮಂಟಪ' ಚಿತ್ರವು ಈಗಾಗಲೇ ಚಿತ್ರೀಕರಣ ಮತ್ತು ಡಬ್ಬಿಂಗ್ ಕೆಲಸಗಳನ್ನು ಮುಗಿಸಿದೆ. ಕನಕಪುರ ರಸ್ತೆಯ ಒಂದು ಹಳ್ಳಿಯಲ್ಲಿ ಚಿತ್ರೀಕರಣವನ್ನು ಮಾಡಲಾಗಿದೆ. ಹೊಸಮನೆ ಮೂರ್ತಿಯವರು ಈ ಸೆಟ್ ನಿರ್ಮಾಣ ಮಾಡಿದ್ದಾರೆ.

'ಸ್ವಪ್ನ ಮಂಟಪ' ಚಿತ್ರವು ಪಾರಂಪರಿಕ ಸ್ಥಳಗಳ ರಕ್ಷಣೆಯನ್ನು ಪ್ರತಿಪಾದಿಸುವ ಕಥಾವಸ್ತುವನ್ನು ಒಳಗೊಂಡಿದೆ. ಒಂದು ಹಳ್ಳಿಯಲ್ಲಿ ರಾಜನೊಬ್ಬ ನಿರ್ಮಿಸಿದ ಸ್ವಪ್ನ ಮಂಟಪವನ್ನು ಕೆಡವಿ ಹಾಕುವ ಪ್ರಯತ್ನವನ್ನು ಕೆಲವರು ಮಾಡಿದಾಗ, ಕಥಾನಾಯಕ ಮತ್ತು ನಾಯಕಿ ಜನರನ್ನು ಸಂಘಟಿಸಿ ಸ್ವಪ್ನಮಂಟಪವನ್ನು ಉಳಿಸಿ ಸರ್ಕಾರದ ಅಧಿಕೃತ ಸ್ಮಾರಕದ ಪಟ್ಟಿಗೆ ಸೇರಿಸುವ ಮೂಲಕ ಚಾರಿತ್ರಿಕ ಸ್ಮಾರಕಗಳ ಪರಂಪರೆಯನ್ನು ಎತ್ತಿ ಹಿಡಿಯುತ್ತಾರೆ. ಈ ಸಾಮಾಜಿಕ ಚಿತ್ರದಲ್ಲಿ ಸ್ವಪ್ನ ಮಂಟಪವನ್ನು ನಿರ್ಮಾಣ ಮಾಡಿದ ರಾಜ-ರಾಣಿ ಯರ ಕಥನವನ್ನೂ ಹಿನ್ನೋಟ ತಂತ್ರದಲ್ಲಿ ಸೇರಿಸಿರುವುದು ಒಂದು ವಿಶೇಷ.

**ಮೃಣಾಲ್‌ಗೆ ಉತ್ತಮ ಕಾಲ**

ನಾಯಕ ಮತ್ತು ನಾಯಕಿಯ ಪಾತ್ರದಲ್ಲಿ ಕ್ರಮವಾಗಿ ವಿಜಯ ರಾಘವೇಂದ್ರ ಮತ್ತು ರಂಜನಿ ರಾಘವನ್ ಅಭಿನಯಿಸಿದ್ದಾರೆ. ಇವರಿಬ್ಬರೂ ದ್ವಿಪಾತ್ರಗಳಲ್ಲಿ ಅಭಿನಯಿಸಿರುವುದು ಸಿನಿಮಾದ ಒಂದು ವಿಶೇಷ. ಜತೆಗೆ ಸುಂದರರಾಜ್, ಶೋಭಾರಾಘವೇಂದ್ರ, ರಜನಿ, ಮಹಾಲಕ್ಷ್ಮೀ, ಸುಂದರರಾಜ ಅರಸು, ರಾಜಪ್ಪದಳವಾಯಿ, ಅಂಬರೀಶ ಸಾರಂಗಿ, ಮೈಸೂರು ಮಂಜುಳ, ಉಮ್ಮತ್ತೂರು ಬಸವರಾಜು, ವೆಂಕಟರಾಜು, ಶಿವಲಿಂಗಪ್ರಸಾದ್, ಭಾರತಿರಮೇಶ್, ಗುಂಡಿ ರಮೇಶ್ ಮುಂತಾದವರು ತಾರಾಗಣದಲ್ಲಿ ಇದ್ದಾರೆ.

ಬಾಬುನಾಯ್ಕ್ ನಿರ್ಮಾಣ ಮತ್ತು ಬರಗೂರರ ನಿರ್ದೇಶನದ ಈ ಚಿತ್ರವು ನಾಗರಾಜ ಆದವಾನಿ ಛಾಯಗ್ರಹಣ, ಸುರೇಶ್ ಅರಸು ಸಂಕಲನ, ಶಮಿತಾ ಮಲ್ನಾಡ್ ಸಂಗೀತ ನಿರ್ದೇಶನ ಮತ್ತು ತ್ರಿಭುವನ್ ನೃತ್ಯ ಸಂಯೋಜನೆಯನ್ನು ಒಳಗೊಂಡಿದೆ. ನಟರಾಜ್ ಶಿವು ಮತ್ತು ಪ್ರವೀಣ್ ಸಹನಿರ್ದೇಶಕರಾಗಿದ್ದಾರೆ.





# ಸಲ್ಮಾನ್ ಚಿತ್ರದಲ್ಲಿ ನಟಿಸಲು ರಶ್ಮಿಕಾ ದುಬಾರಿ ಸಂಭಾವನೆ ಚಾರ್ಜ್

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣಗೆ ಅದೃಷ್ಟ ಖುಲಾಯಿಸಿದೆ. ಪುಷ್ಪ, ಅನಿಮಲ್ ಚಿತ್ರದ ಸಕ್ಸಸ್ ನಂತರ ರಶ್ಮಿಕಾಗೆ ಬಾಲಿವುಡ್ ಬಾಗಿಲು ತೆರೆದಿದೆ. 'ಸಿಖಂದರ್' ಚಿತ್ರದಲ್ಲಿ ಸಲ್ಮಾನ್ ಖಾನ್ ಜೊತೆ ಡ್ಯುಯೆಟ್ ಹಾಡಲು ದುಬಾರಿಯನ್ನು ನಟಿ ಕೇಳಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ.

'ಸಿಖಂದರ್' ಸಿನಿಮಾ ಘೋಷಣೆಯ ನಂತರ ಸಲ್ಮಾನ್ ಖಾನ್‌ಗೆ 58 ವರ್ಷ, ರಶ್ಮಿಕಾಗೆ 28 ವರ್ಷ ಎಂದು ವಯಸ್ಸಿನ ಅಂತರದ ಬಗ್ಗೆ ಸಿಕ್ಕಾಪಟ್ಟೆ ಟ್ರೋಲ್ ಆಗಿತ್ತು.

ಈಗ ರಶ್ಮಿಕಾ ಸಂಭಾವನೆ ಕುರಿತು ಭಾರೀ ಚರ್ಚೆ ಶುರುವಾಗಿದೆ. ಬೇಡಿಕೆಯ ನಟಿಯಾಗಿರುವ ರಶ್ಮಿಕಾ ಈಗ 'ಸಿಖಂದರ್' ಚಿತ್ರಕ್ಕೆ 4 ಕೋಟಿ ರೂ. ಸಂಭಾವನೆ ಚಾರ್ಜ್ ಮಾಡಿದ್ದಾರೆ ಎನ್ನಲಾಗಿದೆ.

ತಮಿಳಿನ ಸೂಪರ್ ಹಿಟ್ ನಿರ್ದೇಶಕ ಮುರುಗದಾಸ್ ಜೊತೆ ಸಲ್ಮಾನ್ ಸಿನಿಮಾ ಮಾಡುವ ಬಗ್ಗೆ ಇತ್ತೀಚೆಗೆ ಅನೌನ್ಸ್ ಆಗಿತ್ತು. 'ಸಿಖಂದರ್' ಎಂಬ ಆಕ್ಷನ್ ಕಥೆಗೆ ಸಲ್ಮಾನ್ ಖಾನ್ ಕೈಜೋಡಿಸಿದ್ದಾರೆ. ನಮ್ಮ ಸಿನಿಮಾಗೆ ರಶ್ಮಿಕಾನೇ ಸೂಕ್ತ ನಾಯಕಿ ಅಂತ ಶ್ರೀವಲ್ಲಿಗೆ ಮಣೆ ಹಾಕಿದ್ದಾರೆ. ಅಂದಹಾಗೆ, ಸಿನಿಮಾದ ಕಥೆ, ತಮ್ಮ ಪಾತ್ರಕ್ಕೆ ಕೊಟ್ಟಿರುವ ಪ್ರಾಮುಖ್ಯತೆ ನೋಡಿ ರಶ್ಮಿಕಾಗೂ ಇಷ್ಟವಾಗಿ ಚಿತ್ರತಂಡಕ್ಕೆ ಸಾಥ್ ನೀಡಿದ್ದಾರೆ. ನೀವೆಲ್ಲರೂ ನನ್ನ ಮುಂದಿನ ಚಿತ್ರದ ಬಗ್ಗೆ ಅಪ್‌ಡೇಟ್ ಅನ್ನು ಕೇಳುತ್ತಿದ್ರಿ. ಇದೀಗ ಸಿಖಂದರ್ ಚಿತ್ರತಂಡವನ್ನು ಸೇರಿಕೊಳ್ಳುತ್ತಿರುವ ಬಗ್ಗೆ ಖುಷಿಯಿದೆ ಎಂದು ಸೋಷಿಯಲ್ ಮೀಡಿಯಾದಲ್ಲಿ ನಟಿ ಸಂತಸ ವ್ಯಕ್ತಪಡಿಸಿದ್ದರು.

# ದುನಿಯಾ ಸೂರಿ ಕೊನೆಗೂ ಕಾಗೆ ಬಂಗಾರ

'ಕಾಗೆ ಬಂಗಾರ' ಸಿನಿಮಾ ಮಾಡುವುದಾಗಿ ಘೋಷಿಸಿ ಒಂಬತ್ತು ವರ್ಷವಾಗಿತ್ತು. ಈಗ ಸಿನಿಮಾ ಸೆಟ್ಟೇರಲು ಮುಹೂರ್ತ ನಿಗದಿಯಾಗಿದೆ.

ದುನಿಯಾ ಸೂರಿ 'ಕಾಗೆ ಬಂಗಾರ' ಸಿನಿಮಾ ಘೋಷಿಸಿ ಒಂಬತ್ತು ವರ್ಷಗಳಾಗುತ್ತಾ ಬಂತು. 'ಕೆಂಡಸಂಪಿಗೆ' ಸಿನಿಮಾದಲ್ಲಿ 'ಕಾಗೆ ಬಂಗಾರ'ದ ಸುಳಿವು ನೀಡಲಾಗಿತ್ತು. ಆಗಿನಿಂದಲೂ ಸಹ 'ಕಾಗೆ ಬಂಗಾರ' ಸಿನಿಮಾ ಈಗ ಬರುತ್ತೆ, ಆಗ ಬರುತ್ತೆ ಎಂದು ನಿರೀಕ್ಷಿಸಲಾಗಿತ್ತು. 'ಪಾಪ್ ಕಾರ್ನ್ ಮಂಕಿ ಟೈಗರ್'ನಲ್ಲಿ 'ಕಾಗೆ ಬಂಗಾರ'ದ ಸಣ್ಣ ಝಲಕ್ ನೀಡಲಾಗಿತ್ತು. ಇದೀಗ ಕೊನೆಗೂ 'ಕಾಗೆ ಬಂಗಾರ' ಸಿನಿಮಾಕ್ಕೆ ಮುಹೂರ್ತ ನಿಗದಿಯಾಗಿದೆ. ದುನಿಯಾ ಸೂರಿ ಕೊನೆಗೂ 'ಕಾಗೆ ಬಂಗಾರ'ವನ್ನು ಕೈಗೆತ್ತಿಕೊಂಡಿದ್ದಾರೆ.

ಈ ಹಿಂದೆ 'ಬ್ಯಾಡ್ ಮ್ಯಾನರ್ಸ್' ಸಿನಿಮಾವನ್ನು ಸೂರಿ ನಿರ್ದೇಶಿಸಿದ್ದರು, ಅಭಿಷೇಕ್ ಅಂಬರೀಶ್ ನಾಯಕ ನಟನಾಗಿ ನಟಿಸಿದ್ದ ಈ ಸಿನಿಮಾ ಹಿಟ್ ಆಗಲಿಲ್ಲ. ಇದೀಗ ಸೂರಿ 'ಕಾಗೆ ಬಂಗಾರ'ವನ್ನು ಕೈಗೆತ್ತಿಕೊಂಡಿದ್ದಾರೆ. ಜಯಣ್ಣ ಕಂಬೈನ್ಸ್ ಮೂಲಕ ಸಿನಿಮಾ ನಿರ್ಮಾಣಗೊಳ್ಳಲಿದೆ. ಈ ಸಿನಿಮಾದಲ್ಲಿ ದುನಿಯಾ ವಿಜಯ್ ಪುತ್ರಿ ರಿತನ್ಯ ನಾಯಕಿಯಾಗಿ ನಟಿಸಲಿದ್ದು, ವಿರಾಟ್ ನಾಯಕ ನಟನಾಗಿ ನಟಿಸಲಿದ್ದಾರೆ. 'ಕೆಂಡ ಸಂಪಿಗೆ' ಸಿನಿಮಾ ಬಿಡುಗಡೆ ಆದಾಗಲೇ ಈ ಸಿನಿಮಾದ ಪ್ರೀಕ್ವೆಲ್ ಹಾಗೂ ಸೀಕ್ವೆಲ್ ಅನ್ನು ನಿರ್ದೇಶನ ಮಾಡುವುದಾಗಿ ದುನಿಯಾ ಸೂರಿ ಹೇಳಿದ್ದರು. 'ಕಾಗೆ ಬಂಗಾರ' ಹಾಗೂ 'ಬ್ಲಾಕ್ ಮ್ಯಾಜಿಕ್' ಹೆಸರಿನಲ್ಲಿ ಬಿಡುಗಡೆ ಆಗುವುದಾಗಿ ಘೋಷಿಸಿದ್ದರು.



# 'ಕೋಟಿ' ಮೊದಲ ಹಾಡು ಬಿಡುಗಡೆ, ದಿಗ್ಗಜರ ಸಮಾಗಮ

ಡಾಲಿ ಧನಂಜಯ್ ನಟಿಸಿರುವ 'ಕೋಟಿ' ಸಿನಿಮಾದ ಮೊದಲ ಹಾಡು ಬಿಡುಗಡೆ ಆಗಿದೆ. ಮೊದಲ ಹಾಡಿಗೆ ಯೋಗರಾಜ್ ಭಟ್, ಅರ್ಮಾನ್ ಮಲ್ಲಿಕ್ ಅಂಥಹಾ ದಿಗ್ಗಜರು ಜೊತೆಯಾಗಿದ್ದಾರೆ. ಹಾಡಿಗೆ ವಾಸುಕಿ ವೈಭವ್ ಸಂಗೀತ ನೀಡಿದ್ದಾರೆ.

ಡಾಲಿ ಧನಂಜಯ್ ನಟಿಸಿರುವ 'ಕೋಟಿ' ಸಿನಿಮಾದ ಟೀಸರ್ ಕೆಲ ದಿನಗಳ ಹಿಂದಷ್ಟೆ ಬಿಡುಗಡೆ ಆಗಿ ಸದ್ದು ಮಾಡಿತ್ತು. ಇದೀಗ ಸಿನಿಮಾದ ಮೊದಲ ಹಾಡು ಯೂಟ್ಯೂಬ್‌ನಲ್ಲಿ ಬಿಡುಗಡೆ ಆಗಿದೆ. ಮಧುರ ಗಾಯಕ ಅರ್ಮಾನ್ ಮಲ್ಲಿಕ್ ಹಾಡು ಹಾಡಿದ್ದಾರೆ. ಸಾಹಿತ್ಯ ಬರೆದಿರುವುದು ಯೋಗರಾಜ್ ಭಟ್. ಹಾಡಿಗೆ ಸಂಗೀತವನ್ನು ವಾಸುಕಿ ವೈಭವ್ ಒದಗಿಸಿದ್ದಾರೆ. ವಾಸುಕಿ ವೈಭವ್ ಹಾಗೂ ಅರ್ಮಾಣ್ ಮಲ್ಲಿಕ್ ಜೋಡಿಯ ಮೊಟ್ಟ ಮೊದಲ ಹಾಡು ಇದಾಗಿದೆ. ಹಾಡಿನ ಲಿರಿಕಲ್ ವಿಡಿಯೋ ಇದೀಗ ಬಿಡುಗಡೆ ಆಗಿದ್ದು, ಮಧುರವಾದ ಹಾಡು ಮನಮುಟ್ಟುವ ಜೊತೆಗೆ ದೃಶ್ಯಗಳು ಸಹ ಮನ ಸೆಳೆಯುವಂತೆ ಹಾಡನ್ನು ಚಿತ್ರೀಕರಣ ಮಾಡಿರುವುದು ತಿಳಿಯುತ್ತಿದೆ.

'ಮಾತು ಸೋತು' ಎಂದು ಆರಂಭವಾಗುವ ಹಾಡಿನಲ್ಲಿ ಪ್ರೇಯಸಿ ಎದುರು ಬಂದಾಗ ಪ್ರೇಮಿಯ ಮನದೊಳಗೆ ಆಗುವ ಒದ್ದಾಟಗಳನ್ನು ಭಟ್ಟರು ಸಾಹಿತ್ಯದಲ್ಲಿ ಹಿಡಿದಿಟ್ಟಿದ್ದಾರೆ. ಹಾಡನ್ನು ಚಿತ್ರೀಕರಿಸಿರುವ ರೀತಿಯೂ ಸಹ ಮುದ್ದಾಗಿದೆ. ಸಂತೆಯಲ್ಲಿಯೋ ಜಾತ್ರೆಯಲ್ಲಿಯೋ ಪ್ರೇಮಿ, ತನ್ನ ಪ್ರೇಯಸಿಯ ಹಿಂದೆ ಹಿಂದೆ ಸುತ್ತುತ್ತಾ, ಆಕೆಯ ನಗು ನೋಡಿ ಖುಷಿ ಪಡುತ್ತಿರುವ ಸನ್ನಿವೇಶವನ್ನು ಹಾಡಿಗಾಗಿ ನಿರ್ದೇಶಕ ಪರಮೇಶ್ವರ್ ಗುಂಡ್ಕಲ್ ಸೃಷ್ಟಿಸಿದಂತಿದೆ.

ಹಾಡು ಬಿಡುಗಡೆಗೆ ಮುನ್ನ ಮಾತನಾಡಿದ್ದ ನಿರ್ದೇಶಕ ಪರಮೇಶ್ವರ್ ಗುಂಡ್ಕಲ್, ''ವಾಸುಕಿ ಭವನ್ ಹೊಸ ತಲೆಮಾರಿನ ಪ್ರತಿಭಾವಂತ ಮ್ಯೂಸಿಕ್ ಡೈರೆಕ್ಟರ್. ಇನ್ನು, ಯೋಗರಾಜ್ ಭಟ್ ಅವರ ಸಾಹಿತ್ಯದ ದೊಡ್ಡ ಫ್ಯಾನ್ ನಾನು. ಯೋಗರಾಜ್ ಭಟ್ ಮತ್ತು ವಾಸುಕಿ ವೈಭವ್ ಕಾಂಬಿನೇಷನ್‌ನ ಈ ಗೀತೆಯನ್ನು ಅರ್ಮಾನ್ ಮಲಿಕ್ ಬಹಳ ಚೆನ್ನಾಗಿ ಹಾಡಿದ್ದಾರೆ.

ಕನ್ನಡಿಗರಿಗೆ ಈ ಹಾಡು ಇಷ್ಟ ಆಗುವುದರಲ್ಲಿ ಅನುಮಾನವಿಲ್ಲ' ಎಂದಿದ್ದರು. ಇನ್ನು ಸಂಗೀತ ನಿರ್ದೇಶಕ ವಾಸುಕಿ ವೈಭವ್ ಮಾತನಾಡಿ, 'ನನ್ನ ಹಾಗೂ ಅರ್ಮಾನ್ ಮಲ್ಲಿಕ್ ನಡುವೆ ಬರುತ್ತಿರುವ ಮೊದಲ ಹಾಡಿದು, ಭಟ್ಟರು ಅದ್ಭುತವಾದ ಸಾಹಿತ್ಯ ಬರೆದಿದ್ದಾರೆ.





# 12 ವರ್ಷಗಳ ನಂತರ ಹಾಲಿವುಡ್‌ನತ್ತ ಟಬು

ಬಾಲಿವುಡ್ ಬ್ಯೂಟಿ ಟಬುಗೆ 52 ವರ್ಷವಾದ್ರೂ ಫಿಟ್ ಬ್ಯೂಟಿಫುಲ್ ಆಗಿದ್ದಾರೆ. ಇಂದಿಗೂ ಟಬು ಚಾರ್ಮ್ ಮಾಸಿಲ್ಲ. ಬಾಲಿವುಡ್‌ನ ಹಲವು ಬ್ಯುಸಿಯಿರುವಾಗಲೇ ಹಾಲಿವುಡ್‌ನಿಂದ ಮತ್ತೆ ಕರೆ ಬಂದಿದೆ. 12 ವರ್ಷಗಳ ನಂತರ ಮತ್ತೆ ಹಾಲಿವುಡ್‌ನತ್ತ ನಟಿ ಮುಖ ಮಾಡಿದ್ದಾರೆ. 'ಡ್ಯೂನ್' ಹೆಸರಿನ ದೀರ್ಘ ಕಾದಂಬರಿಯನ್ನು ಆಧರಿಸಿದ ವೆಬ್ ಸರಣಿ ಇದಾಗಿರಲಿದೆ. ವೆಬ್ ಸಡಣಿಯಲ್ಲಿ ಸಿಸ್ಟರ್ ಫ್ರಾಂಕೆಸ್ಕಾ ಹೆಸರಿನ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಈ ಪಾತ್ರ ಬಹಳ ಗಟ್ಟಿ ಪಾತ್ರವಾಗಿದ್ದು, ಕಥೆಯ ಅತ್ಯಂತ ಪ್ರಮುಖ ಪಾತ್ರಗಳಲ್ಲಿ ಒಂದು ಎನ್ನಲಾಗುತ್ತಿದೆ. 'ಡ್ಯೂನ್' ವೆಬ್ ಸರಣಿಯಲ್ಲಿ ತಮ್ಮ ಪಾತ್ರ ಮತ್ತು ಕಥೆ ಇಷ್ಟವಾಗಿ ನಟಿ ಓಕೆ ಎಂದಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಸದ್ಯದಲ್ಲೇ ಚಿತ್ರದ ಶೂಟಿಂಗ್‌ನಲ್ಲಿ ಭಾಗವಹಿಸಲಿದ್ದಾರೆ ಎನ್ನಲಾಗಿದೆ. ಸಿನಿಮಾಗಳಲ್ಲಿ ಟಬು ಹಲವು ವರ್ಷಗಳ ಹಿಂದೆ ನಟಿಸಿದ್ದರು. ಈಗ ಮತ್ತೆ ಹಾಲಿವುಡ್‌ಗೆ ನಟಿ ಹೊರಟಿದ್ದಾರೆ. ಈ ವರ್ಷ 'ಕ್ರೀವ್' ಎಂಬ ಸಿನಿಮಾದಲ್ಲಿ ಕೃತಿ ಸನೋನ್, ಕರೀನಾ ಕಪೂರ್ ಜೊತೆ ಟಬು ನಟಿಸಿದ್ದರು. ಈ ಸಿನಿಮಾ ಪ್ರೇಕ್ಷಕರಿಂದ ಮೆಚ್ಚುಗೆ ಗಳಿಸಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966